ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 31 ಬುಧವಾರ 2023

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 44 | ಸಂಚಿಕೆ: 45 | ಪುಟಗಳು: 12

ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com

₹4

ಬಿಜೆಪಿ ಆಡಳಿತದಿಂದ ಸಂಕಷ್ಟದಲ್ಲಿದ್ದ ಜನರಿಗೆ ನಾವು ಆಕ್ಸಿಜನ್ ನೀಡುತ್ತೇವೆ

ಮೈಸೂರಿನ ವಿವಿಧೆಡೆ ರಾಷ್ಟ್ರನಾಯಕರಿಗೆ ಗೌರವ ಸಮರ್ಪಣೆ ಮಾಡಿದ ನೂತನ ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ







ಮೈಸೂರು,ಮೇ 30(ಎಂಟಿವೈ)– ಬಿಜೆಪಿಯವರು ತಮ್ಮ ವೈಫಲ್ಯ ಮುಚ್ಚಿಕೊಳ್ಳಲು ಕಾಂಗ್ರೆಸ್ ಸರ್ಕಾರದ ಮೇಲೆ ಗೂಬೆ ಕೂರಿಸಲು ಮುಂದಾಗಿದ್ದಾರೆ ಎಂದು ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹಾದೇವಪ್ಪ ಆರೋಪಿಸಿದ್ದಾರೆ.

ಸಮಾಜ ಕಲ್ಯಾಣ ಸಚಿವರಾದ ನಂತರ ಮೊದಲ ಬಾರಿಗೆ ನಗರದ ಪುರಭವನದ ಆವರಣದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಮಂಗಳವಾರ ಮಾಲಾರ್ಪಣೆ ಹಾಗೂ ಪುಷ್ಪಾರ್ಚನೆ ಮಾಡಿ ನಂತರ ಪತ್ರಕರ್ತರೊಂದಿಗೆ ಮಾತನಾಡಿದರು.

ಬಿಜೆಪಿಯವರ ವಿರುದ್ಧ ಜನ ತಿರುಗಿಬಿದ್ದದ್ದನ್ನು ಮರೆಮಾಚಲು ನಮ್ಮ ಸರ್ಕಾರದ ವಿರುದ್ಧ ಸುಳ್ಳು ಆರೋಪ ಮಾಡುತ್ತಿದ್ದಾರೆ. ಮಿತಿ ಮೀರಿದ ಭ್ರಷ್ಟಾಚಾರದಿಂದ ಬಿಜೆಪಿ ಕೆಂಗಣ್ಣಿಗೆ ಗುರಿಯಾಗಿತ್ತು. ಜನರ ವಿಶ್ವಾಸ ಗೆದ್ದಿರುವ ಕಾಂಗ್ರೆಸ್ ಮೇಲೆ ಗೂಬೆ ಕೂರಿಸಲು ಇಷ್ಟೊಂದು ಆತುರವಾಗಿ ಕಾಂಗ್ರೆಸ್ ಗ್ಯಾರಂಟಿ ಬಗ್ಗೆ ಮಾತನಾಡುತ್ತಿದ್ದಾರೆ. ಬಿಜೆಪಿ ಅಥವಾ ಜೆಡಿಎಸ್ ಪಕ್ಷಕ್ಕೆ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿ ಎಂದು ಗಡುವು ನೀಡುವ ನೈತಿಕತೆಯೂ ಇಲ್ಲ ಅಧಿಕಾರವೂ ಇಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಒಂದು ವಿರೋಧ ಪಕ್ಷವಾಗಿ ಪ್ರಶ್ನೆಯನ್ನಷ್ಟೆ ಮಾಡಬಹುದು. ಗ್ಯಾರಂಟಿ ಯೋಜನೆ ಜಾರಿ ಬಗ್ಗೆ ಆತುರವಾಗಿ ಹೇಳಿಕೆ ನೀಡುತ್ತಿದ್ದಾರೆ. ಅವರ ಮುಖಕ್ಕೆ ಜನ ಬಳಿದಿರುವ ಮಸಿ ಮರೆಮಾಚಲು ಕಾಂಗ್ರೆಸ್ ಸರ್ಕಾರದ ವಿರುದ್ಧ ಮಾತನಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಸರ್ಕಾರ ಇನ್ನೂ ರಚನೆಯಾಗಿ ಸರಿಯಾಗಿ ಕೆಲಸ ಆರಂಭಿಸಿಲ್ಲ. ಆದರೆ ವಿರೋಧ ಪಕ್ಷಗಳು ಇಷ್ಟು ಶರವೇಗದಲ್ಲಿ ಗಡುವು ನೀಡುತ್ತಿವೆ. ಇವರ ಆಡಳಿತ ವೈಫಲ್ಯ ಮಿತಿಮೀರಿದ ಭ್ರಷ್ಟಾಚಾರ ಅಭಿವೃದ್ಧಿಗೆ ಮಾರಕವಾಗಿತ್ತು. ಅಭಿವೃದ್ಧಿ ಮಾಡದಿದ್ದಾಗ ಜನ ಹೇಗೆ ಮತ ನೀಡುತ್ತಾರೆ. ಹಾಗಾಗಿ ಜನ ಸೋಲಿಸಿದರು. ಸೋತು ಹತಾಶರಾಗಿ ಮಾತನಾಡುತ್ತಿದ್ದಾರೆ ಎಂದು ಲೇವಡಿ ಮಾಡಿದರು.

ನಾವು ಬಂದರೆ ಸಂಕಷ್ಟದ ಬದುಕಿಗೆ ಏನು ಮಾಡುತ್ತೇವೆ ಎಂದು ಚುನಾವಣಾ ಪ್ರಣಾಳಿಕೆಯಲ್ಲಿ ತಿಳಿಸಿದ್ದೆವು. ಜೊತೆಗೆ ಐದು ಗ್ಯಾರಂಟಿ ಕೊಟ್ಟಿದ್ದೇವೆ. ಮೊದಲು ಬದುಕಲು ಕಷ್ಟ ಇರುವ ಜನರಿಗೆ ಬದುಕುವ ವಾತಾವರಣ ನಿರ್ಮಾಣ ಮಾಡುವುದು ಕಾಂಗ್ರೆಸ್ ಉದ್ದೇಶ. ಆಕ್ಸಿಜನ್ ಇದ್ದರೆ ಬದುಕು ಎನ್ನುವ ಮಟ್ಟಕ್ಕೆ ಬಿಜೆಪಿಯವರು ತಳ್ಳಿಬಿಟ್ಟಿದ್ದರು. ನಾವು ಆಕ್ಸಿಜನ್ ನೀಡಿ ಬದುಕಿಸಲು ಮುಂದಾಗಿದ್ದೇವೆ ಎಂದು ಹೇಳಿದರು.

ರಾಷ್ಟ್ರನಾಯಕರಿಗೆ ಗೌರವ ಸಮರ್ಪಣೆ: ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ರಾಷ್ಟ್ರ ನಾಯಕರಿಗೆ ಗೌರವ ನಮನ ಸಲ್ಲಿಸಿದರು. ಪುರಭವನದ ಆವರಣದಲ್ಲಿರುವ ಡಾ.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ಬಳಿಕ ಗನ್‌ಹೌಸ್ ವೃತ್ತದಲ್ಲಿರುವ ಬಸವಣ್ಣ ಪ್ರತಿಮೆಗೆ ನಮಿಸಿದರು. ಬುದ್ಧ ವಿಹಾರದಲ್ಲಿ ಬುದ್ಧ ಗುರುವಿಗೆ ನಮಿಸಿದರು. ಕೆ.ಆರ್.ವೃತ್ತದಲ್ಲಿರುವ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ರೈಲ್ವೆ ನಿಲ್ದಾಣ ವೃತ್ತದಲ್ಲಿರುವ ಮಾಜಿ ಉಪಪ್ರಧಾನಿ ಡಾ.ಬಾಬೂ ಜಗಜೀವನ್‌ರಾಮ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಸಮರ್ಪಿಸಿದರು. ನಂತರ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಸುತ್ತೂರು ಶಾಖಾ ಮಠದಲ್ಲಿ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರಿಂದ ಆಶೀರ್ವಾದ ಪಡೆದರು.

ರಾಜ್ಯದಲ್ಲಿ ಬಿಜೆಪಿಯವರಿಗೆ ನಾಯಕತ್ವವೇ ಇರಲಿಲ್ಲ, ಅದಕ್ಕಾಗಿ ನರೇಂದ್ರ ಮೋದಿ, ಅಮಿತ್ ಶಾ ಮುಖ ತೋರಿಸಿ ಮತ ಕೇಳಿದರು. ಮೋದಿ, ಅಮಿತ್ ಶಾ ಎಲ್ಲಿ ಬಂದು ಹೋಗಿದ್ದರೋ ಅಲ್ಲೆಲ್ಲಾ ಕಾಂಗ್ರೆಸ್ ಅಭ್ಯರ್ಥಿಗಳು 25, 30 ಸಾವಿರ ಅಂತರದಲ್ಲಿ ಗೆಲುವನ್ನು ಸಾಧಿಸಿದ್ದಾರೆ. ಅಂದರೆ ಇವರ ಆಡಳಿತ ವಿರೋಧಿ ಅಲೆ ಮಿತಿ ಮೀರಿದ ಭ್ರಷ್ಟಾಚಾರ ಎಷ್ಟು ಇತ್ತು. 40% ಕಮೀಷನ್ ಬಗ್ಗೆ ದೂರು ಕೊಟ್ಟರೂ ಪ್ರಧಾನಿ ಮೋದಿ ಏನೂ ಕೇಳಲಿಲ್ಲ. ಹೀಗಿದ್ದ ಮೇಲೆ ಜನ ಸುಮ್ಮನೆ ಬಿಡಲಿದ್ದಾರೆಯೇ ಎಂದು ಪ್ರಶ್ನಿಸಿದರು.

15 ಲಕ್ಷ ರೂ. ಖಾತೆಗೆ ಹಾಕಿಸಲು ಹೋರಾಡಿ: ಈ ಹಿಂದೆ ಬಿಜೆಪಿ ನಾಯಕರು ದೇಶದ ಜನರಿಗೆ 15 ಲಕ್ಷ ರೂ. ಕೊಡುತ್ತೇವೆ ಎಂದಿದ್ದರು. ಮಾಜಿ ಶಾಸಕ ಸಿ.ಟಿ.ರವಿ ಹೇಳಿಕೆ ನೀಡಿ ನಾವು 15 ಲಕ್ಷ ಹಣ ಕೊಡುತ್ತೇವೆ ಎಂದು ಹೇಳಿರಲಿಲ್ಲ ಎಂದಿದ್ದಾರೆ. ಅವರಿಗೆ ಎಷ್ಟು ನಾಲಿಗೆ ಇದೆ. ಈಗಲಾದರೂ ದೇಶದ ಜನರ ಮುಂದೆ 15 ಲಕ್ಷ ರೂ. ಕೊಡುವುದಿಲ್ಲ ಎಂದು ಹೇಳಬೇಕು. ಇವರ ಚುನಾವಣಾ ಪ್ರಣಾಳಿಕೆಯಲ್ಲಿ ವಿದೇಶದಿಂದ ಕಪ್ಪು ಹಣ ತಂದು ಜನರ ಖಾತೆಗೆ 15 ಲಕ್ಷ ಕೊಡುತ್ತೇವೆ ಎಂದು ಹೇಳಿರಲಿಲ್ಲ? ಬಿಜೆಪಿ ನಾಯಕರು ಟಿ.ವಿ ಮಾಧ್ಯಮ, ಪತ್ರಿಕೆಗಳ ಹೇಳಿಕೆಯನ್ನು ತೆಗೆದು ನೋಡಲಿ. ನಾವು 15 ಲಕ್ಷ ರೂ. ಕೊಡುತ್ತೇವೆ ಎಂದು ಹೇಳಿರಲಿಲ್ಲ ಎಂದು ಯಾವ ಬಾಯಲ್ಲಿ ಹೇಳುತ್ತೀರಿ ಎಂದು ಪ್ರಶ್ನಿಸಿದರು. ಪಠ್ಯಪುಸ್ತಕ ಪರಿಷ್ಕರಣೆ ವೇಳೆ ಬಿಜೆಪಿಯವರು ಚರಿತ್ರೆಯನ್ನೇ ತಿರುಚಿದ್ದರು. ನಾವು ವಿರೋಧ ಪಕ್ಷದಲ್ಲಿ ಇದ್ದಾಗಲೂ ಇದಕ್ಕೆ ವಿರೋಧ ಮಾಡಿದ್ದೆವು. ಈಗ ಯಾವುದನ್ನು ತಿರುಚಿದ್ದಾರೆ ಅದನ್ನು ಸರಿ ಮಾಡುವ ಕೆಲಸವನ್ನು ಮಾಡುತ್ತೇವೆ ಎಂದರು.

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ನಾವು ಯಾವುದೇ ಟಾರ್ಗೆಟ್ ಇಟ್ಟುಕೊಂಡಿಲ್ಲ, ನಮ್ಮ ಗುರಿ ರಾಜ್ಯದ 28 ಲೋಕಸಭಾ ಕ್ಷೇತ್ರವನ್ನು ಗೆಲ್ಲುವುದೆ ಆಗಿದೆ ಎಂದು ಹೇಳಿದರು.



ಜಯದೇವ ಹೃದ್ರೋಗ ಸಂಸ್ಥೆಯ ನಿರ್ದೇಶಕ ಪದ್ಮಶ್ರೀ ಪುರಸ್ಕೃತ ಡಾ.ಸಿ.ಎನ್.ಮಂಜುನಾಥ್ ಅವರು ನೂತನ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್ ಅವರನ್ನು ಬೆಂಗಳೂರಲ್ಲಿ ಆತ್ಮೀಯವಾಗಿ ಅಭಿನಂದಿಸಿದರು.

ಮಹಿಳೆ ನಾಪತ್ತೆ



ಮೈಸೂರು, ಮೇ 30– ಮಹಿಳೆಯೋರ್ವರು ನಾಪತ್ತೆಯಾಗಿರುವ ಬಗ್ಗೆ ಜಯಲಕ್ಷ್ಮಿಪುರಂ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಮೈಸೂರಿನ ರಾಜೇಶ್ವರನಗರ ನಿವಾಸಿ ಎನ್.ಪುಟ್ಟಸ್ವಾಮಿ ಅವರ ಪತ್ನಿ ಲತಾ ಕಾಣೆಯಾದವರು. ಇವರು ಮೇ 17ರಂದು ಮನೆಯಿಂದ ಹೊರ ಹೋದವರು ಇದುವರೆಗೂ ವಾಪಸ್ ಬಂದಿಲ್ಲ ಎಂದು ಆಕೆಯ ಪತಿ ದೂರು ದಾಖಲಿಸಿದ್ದಾರೆ. ಇವರ ಬಗ್ಗೆ ಮಾಹಿತಿ ತಿಳಿದಲ್ಲಿ ದೂ. 0821–2418 339, 2418340 ಸಂಪರ್ಕಿಸಲು ಕೋರಲಾಗಿದೆ.

ನೂತನ ಪದಾಧಿಕಾರಿಗಳು

ಮೈಸೂರು, ಮೇ 30–ಜಿಲ್ಲಾ ಚಿನ್ನ, ಬೆಳ್ಳಿ ಕೆಲಸಗಾರರ ಅಭಿವೃದ್ಧಿ ಸಂಘದ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಬಿ.ರವಿಪ್ರಕಾಶ್ –ಗೌರವಾಧ್ಯಕ್ಷ, ಟಿ.ಸುರೇಶ್–ಅಧ್ಯಕ್ಷ, ರಾಘವೇಂದ್ರ ಶೇಟ್–ಕಾರ್ಯಾಧ್ಯಕ್ಷ, ಎನ್.ಸೋಮಶೇಖರ್, ಹೆಚ್.ಎಸ್.ವೆಂಕಟೇಶ್, ಹೆಚ್.ಎಸ್.ರಮೇಶ್–ಉಪಾಧ್ಯಕ್ಷರು, ಎಂ.ಎಸ್.ಶಶಿಧರಚಾರ್ಯ–ಕಾರ್ಯದರ್ಶಿ, ರಾಜಣ್ಣ–ಜಂಟಿ ಕಾರ್ಯದರ್ಶಿ, ಬಿ.ಸಿ.ಅಣ್ಣಯ್ಯಚಾರ್–ಸಂಚಲನಕಾರರು, ಕೆ.ಮಹದೇವ್–ಖಜಾಂಚಿ, ವಿ.ನಾಗರಾಜ್, ಗುರುಪ್ರಸಾದ್, ಕೆ.ಎಸ್.ಬಸವರಾಜ್, ಪಿ.ಶಶಿ, ಆರ್.ಮಂಜುನಾಥ್, ಮೋಹನ್, ನವೀನ್‌ರಾಜ್, ಎಸ್.ಅಜಯ್, ಎಂ.ಸುರೇಶ್‌ಬಾಬು, ಎಂ.ಸಿ.ಮಹೇಶ್‌ಕುಮಾರ್ ಆಚಾರ್–ನಿರ್ದೇಶಕರು.



ಭವಿಷ್ಯ ನಿಧಿ ನಿಮ್ಮ ಹತ್ತಿರ 2.0 ಅಡಿಯಲ್ಲಿ ಕಾರ್ಮಿಕರ ಭವಿಷ್ಯ ನಿಧಿ ಸಂಘಟನೆಯ ಪ್ರಾದೇಶಿಕ ಕಚೇರಿ ವತಿಯಿಂದ ಸೋಮವಾರ ಹೆಚ್.ಡಿ.ಕೋಟೆ ಟಿಎಪಿಸಿಎಂಎಸ್ ಸಭಾಂಗಣದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಹೆಚ್.ಡಿ.ಕೋಟೆ ಟಿಎಪಿಸಿಎಂಎಸ್ ಉಪಾಧ್ಯಕ್ಷ ನೂರ್ ಮಹಮದ್, ಮೈಸೂರು ಇಪಿಎಫ್‌ಓ ಪ್ರಾದೇಶಿಕ ಕಚೇರಿಯ ಜಾರಿ ಅಧಿಕಾರಿ ನಾರಾಯಣ ರಾವ್, ಸೆಕ್ಷನ್ ಸೂಪರ್‌ವೈಸರ್ ಬಿ.ಸಿಸಂದೀಪ್, ಜೆಟಿಟಿಓ ಸುಭಾಷ್‌ಕುಮಾರ್ ಸಮಂತೋ, ಡಿ.ಮನೋಜ್‌ಕುಮಾರ್ ಉಪಸ್ಥಿತರಿದ್ದಾರೆ. ಇದೇ ವೇಳೆ ಇಪಿಎಫ್‌ಓ ಭಾಗೀದಾರರ ಕುಂದುಕೊರತೆಗಳನ್ನು ಆಲಿಸಿ, ಸ್ಥಳದಲ್ಲೇ ನಿವಾರಿಸಲಾಯಿತು.

ಅರ್ಜಿ ಆಹ್ವಾನ

ಮೈಸೂರು, ಮೇ 30– ತಿ.ನರಸೀಪುರ ತಾಲೂಕಿನಲ್ಲಿರುವ ತಲಕಾಡಿನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2023–24ನೇ ಸಾಲಿನ ಪ್ರವೇಶಾತಿಗಾಗಿ www.cite.karnataka.gov.in ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಸಿಟಿಎಸ್, ಟಾಟಾ (ಉದ್ಯೋಗ) ಯೋಜನೆ ಅಡಿಯಲ್ಲಿ ತಾಂತ್ರಿಕ ವೃತ್ತಿಗಳಿಗೆ ಆನ್‌ಲೈನ್ ಅಥವಾ ಸಂಸ್ಥೆಯಲ್ಲಿ ಬಂದು ಅರ್ಜಿ ಸಲ್ಲಿಸಲು ಜೂ.9ರವರೆಗೆ ಅವಕಾಶವಿದೆ. ಸಂಸ್ಥೆಯಲ್ಲಿ ಎಲೆಕ್ಟ್ರಿಷಿಯನ್–2 ವರ್ಷ, ಫಿಟ್ಟರ್–2 ವರ್ಷ, ಮೆಕ್ಯಾನಿಕ್ ಎಲೆಕ್ಟ್ರಿಕ್ ವೆಹಿಕಲ್–2 ವರ್ಷ ಮತ್ತು ಅಡ್ವಾನ್ಸ್ಡ್ ಮಷೀನ್ ಟೆಕ್ನೀಷಿಯನ್ –2 ವರ್ಷದ ವೃತ್ತಿಪರ ಕೋರ್ಸ್‌ಗಳು ಲಭ್ಯವಿರುತ್ತವೆ. ಮಾಹಿತಿಗೆ ಸಂಸ್ಥೆ ಪ್ರಾಚಾರ್ಯರ ಮೊ. 9449326500 ಸಂಪರ್ಕಿಸಬಹುದು.

ಯೋಗ ತರಗತಿ

ಮೈಸೂರು, ಮೇ 30– ಮೈಸೂರಿನ ಲಲಿತಾದ್ರಿಪುರ ರಸ್ತೆಯಲ್ಲಿರುವ ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆಯಲ್ಲಿ ಜೂ.1ರಿಂದ ಪ್ರತಿದಿನ ಬೆಳಗ್ಗೆ 7ರಿಂದ 8ರವರೆಗೆ ಯೋಗ ತರಬೇತಿ ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿ ಹಾಗೂ ಹೆಸರು ನೋಂದಾಯಿಸಿಕೊಳ್ಳಲು ಮೊ. 9916483919, 9632000697 ಸಂಪರ್ಕಿಸಬಹುದು.

ರಾಜ್ಯದಲ್ಲಿ ಶೈಕ್ಷಣಿಕ ಸಮಸ್ಯೆ ಬಗೆಹರಿಸಿ

ವಿದ್ಯಾರ್ಥಿ ಸಂಘಟನೆ ಪ್ರತಿಭಟನೆ



ಮೈಸೂರು,ಮೇ 30 (ಎಂಟಿವೈ)– ರಾಜ್ಯದಲ್ಲಿ ಶೈಕ್ಷಣಿಕ ಸಮಸ್ಯೆಗಳನ್ನು ಬಗೆಹರಿಸಿ, ಶಿಕ್ಷಣ ವ್ಯವಸ್ಥೆ ಬಲಪಡಿಸುವಂತೆ ಆಗ್ರಹಿಸಿ ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆಯ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮೈಸೂರಿನ ಡಿಸಿ ಕಚೇರಿ ಬಳಿ ಸೇರಿದ ಎಐಡಿಎಸ್‌ಓ ಕಾರ್ಯಕರ್ತರು, ರಾಜ್ಯದಲ್ಲಿ ಕಳೆದ ಐದು ವರ್ಷಗಳಿಂದಲೂ ಸಾಕಷ್ಟು ಶೈಕ್ಷಣಿಕ ಸಮಸ್ಯೆಗಳು ಇವೆ. ಇವುಗಳ ವಿರುದ್ಧ ವಿದ್ಯಾರ್ಥಿಗಳು ಹಾಗೂ ಜನತೆ ವ್ಯಾಪಕ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಎನ್‌ಇಪಿ ಶಿಕ್ಷಣ ನೀತಿಯ ಧಿಡೀರ್ ಹೇರಿಕೆಯಿಂದ ಉಂಟಾದ ಗೊಂದಲ ಹಾಗೂ ಹಲವು ಸಮಸ್ಯೆಗಳಿಂದ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಕಿಡಿಕಾರಿದರು.

ಶಿಕ್ಷಣವನ್ನು ಸಂಪೂರ್ಣವಾಗಿ ವ್ಯಾಪಾರೀಕರಣ ಮಾಡಲು ಹೊರಟಿದ್ದ ಸರ್ಕಾರದ ವಿರುದ್ಧ, ಸರ್ಕಾರಿ ಶಿಕ್ಷಣ ಸಂಸ್ಥೆಗಳನ್ನು ಬಲಪಡಿಸಿ, ಸಾರ್ವಜನಿಕ ಶಿಕ್ಷಣ ಉಳಿಸಿ ಎಂಬ ಘೋಷಣೆಯೊಂದಿಗೆ 35 ಲಕ್ಷಕ್ಕೂ ಹೆಚ್ಚು ಸಹಿ ಸಂಗ್ರಹಿಸಲಾಗಿತ್ತು. ಇದರಲ್ಲಿ ರಾಜ್ಯಾದ್ಯಂತ 30 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಜನವಿರೋಧಿ ನೀತಿಗಳಿಂದ ಸಾರ್ವಜನಿಕರು ರೋಸಿ ಹೋಗಿದ್ದು, ನೂತನ ಸರ್ಕಾರದ ಆಡಳಿತದಿಂದ ಸುಧಾರಣೆ ಬಯಸುತ್ತಿದ್ದಾರೆ. ಹಾಗೆಯೇ ವಿದ್ಯಾರ್ಥಿ ಸಮುದಾಯ ಎದುರಿಸುತ್ತಿರುವ ಹಲವು ಸಮಸ್ಯೆಗಳನ್ನು ಬಗೆಹರಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ಪಠ್ಯಪುಸ್ತಕಗಳಲ್ಲಿ ವೈಜ್ಞಾನಿಕ ಮತ್ತು ಧರ್ಮನಿರಪೇಕ್ಷ ಮನೋಭಾವ ಬೆಳೆಸುವ ನಿಟ್ಟಿನಲ್ಲಿ ಪಠ್ಯಕ್ರಮ ರೂಪಿಸಬೇಕು ಎಂದು ಒತ್ತಾಯಿಸಿದರು.

ಬೇಡಿಕೆಗಳು: ಎಲ್ಲಾ ವಿದ್ಯಾರ್ಥಿಗಳಿಗೂ ಉಚಿತ ಬಸ್ ಪಾಸ್ ನೀಡಬೇಕು, ಸರ್ಕಾರಿ ಶಿಕ್ಷಣ ಸಂಸ್ಥೆಗಳನ್ನು ಬಲಪಡಿಸಬೇಕು, ಪಠ್ಯಕ್ರಮದ ಮೂಲಕ ಶಿಕ್ಷಣ ಸಂಸ್ಥೆಗಳಲ್ಲಿ ಧರ್ಮನಿರಪೇಕ್ಷ ವಾತಾವರಣ ಸೃಷ್ಟಿಸಬೇಕು, ವಿದ್ಯಾರ್ಥಿವೇತನ ಮತ್ತು ಹಾಸ್ಟೆಲ್ ಸೌಲಭ್ಯಗಳನ್ನು ಖಾತ್ರಿಪಡಿಸಬೇಕು, ಎನ್‌ಇಪಿ ಹೇರಿಕೆ ಕೈಬಿಡಬೇಕು, ತಾರತಮ್ಯವಿಲ್ಲದೆ ಎಲ್ಲಾ ಸರ್ಕಾರಿ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ನೀಡಬೇಕು, ಖಾಲಿ ಇರುವ ಶಿಕ್ಷಕರ ಹುದ್ದೆ ಭರ್ತಿ ಮಾಡಬೇಕು, ಅತಿಥಿ ಶಿಕ್ಷಕರ ಹಕ್ಕುಗಳನ್ನು ರಕ್ಷಿಸುವುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಸಬೇಕೆಂದು ಆಗ್ರಹಿಸಿದರು. ಬಳಿಕ ಡಿಸಿ ಮೂಲಕ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಎಐಡಿಎಸ್‌ಓ ಜಿಲ್ಲಾಧ್ಯಕ್ಷ ಸುಭಾಷ್, ವಿದ್ಯಾರ್ಥಿ ಸಂಘಟನೆಯ ಜಿಲ್ಲಾ ಕಾರ್ಯದರ್ಶಿ ಚಂದ್ರಕಲಾ, ಪುಷ್ಪ, ನಿತಿನ್, ಸ್ವಾತಿ, ಚೈತ್ರ, ಹೇಮಾ ಚಂದ್ರಿಕಾ, ಚುದಾ, ಅಂಜಲಿ, ದಿಶಾ, ಜಟ್ಟಪ್ಪ ಪಾಲ್ಗೊಂಡಿದ್ದರು.

ಪಿಎಚ್.ಡಿ ಪದವಿ



ಮೈಸೂರು, ಮೇ 30– ಡಾ.ವಿಜಯಲಕ್ಷ್ಮಿ ಅವರ ಮಾರ್ಗದರ್ಶನದಲ್ಲಿ ವೈ.ಎಸ್.ಗಿರೀಶ ಅವರು ಸಂಶೋಧನೆ ನಡೆಸಿ ಸಾದರಪಡಿಸಿದ ಕಪ್ಪಡಿ ರಾಚಪ್ಪಾಜಿ ಪರಂಪರೆ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಮಕ್ಕಳ ಮನಸ್ಸು ಕದಡುವ ಪಠ್ಯ ಬದಲಾವಣೆ



ಬೆಂಗಳೂರು, ಮೇ 30(ಕೆಎಂಶಿ)– ಮಕ್ಕಳ ಮನಸ್ಸಿನ ಮೇಲೆ ನಕಾರಾತ್ಮಕ ಪರಿಣಾಮ ಬೀರುವ ಹಾಗೂ ಕಲ್ಮಷಯುಕ್ತ ಪಠ್ಯಗಳನ್ನು ಬದಲಾಯಿಸುವುದಾಗಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಶಾಲಾ ಪಠ್ಯ ಪುಸ್ತಕಗಳಲ್ಲಿ ಸೇರಿಸಿದ ವಿಷಯಗಳನ್ನು ತೆಗೆದು ಹಾಕಬೇಕೆಂಬ ಒತ್ತಾಯ ಕೇಳಿ ಬರುತ್ತಿದೆ. ಈ ಬಗ್ಗೆ ಶಿಕ್ಷಣ ತಜ್ಞರು, ಇಲಾಖೆ ಪ್ರಮುಖರ ಜೊತೆ ಸಭೆ ನಡೆಸಿ ಕ್ರಮ ಜರುಗಿಸಲಾಗುವುದು ಎಂದರು.

ಯಾವುದೇ ಶೈಕ್ಷಣಿಕ ವಿಚಾರಗಳು ಗುಣಮಟ್ಟದಿಂದ ಕೂಡಿರಬೇಕು. ಹೀಗಾಗಿ ನಕಾರಾತ್ಮಕ ಅಂಶ ಹೊಂದಿರುವ ಪಠ್ಯಗಳನ್ನು ಬದಲಾವಣೆ ಮಾಡುತ್ತೇವೆ. ಹಂತ ಹಂತವಾಗಿ ಈ ಪರಿಷ್ಕರಣೆ ನಡೆಯಲಿದೆ. ಪಠ್ಯ ಪರಿಷ್ಕರಣೆ ಬಗ್ಗೆ ಈಗಾಗಲೇ ಪ್ರಣಾಳಿಕೆಯಲ್ಲಿ ಹೇಳಿದ್ದೇವೆ. ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಅವರ ಮಾರ್ಗದರ್ಶನ ಪಡೆದು ಮುಂದಿನ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು.


ಹಿಜಾಬ್ ವಿಚಾರ ಕುರಿತು ಪ್ರತಿಕ್ರಿಯಿಸಿದ ಅವರು, ಹಿಜಾಬ್ ವಿಚಾರವಾಗಿ ಕೆಲವೊಂದು ಕಾನೂನು ತೊಡಕುಗಳಿವೆ. ಅವುಗಳನ್ನು ನೋಡಿಕೊಂಡು ಮುಂದುವರೆಯಬೇಕು. ಎಲ್ಲ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ರೀತಿಯಲ್ಲೇ ಈ ಬಗ್ಗೆ ಕ್ರಮ ಕೈಗೊಳ್ಳುತ್ತೇವೆ. ಹಾಗೂ ಎಲ್ಲ ವಿದ್ಯಾರ್ಥಿಗಳಿಗೂ ಅನುಕೂಲವಾಗುವಂತೆ ಕಾನೂನು ಹೋರಾಟ ನಡೆಸುತ್ತೇವೆ ಎಂದರು. ಶೈಕ್ಷಣಿಕ ವರ್ಷದ ಆರಂಭವಾಗುತ್ತಿರುವ ಬೆನ್ನಲ್ಲೇ ಇಲಾಖೆ ಇದಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳುತ್ತಿದೆ. ಪಠ್ಯ ಪುಸ್ತಕ, ಸಮವಸ್ತ್ರ ವಿತರಣೆಯಲ್ಲಿ ಯಾವುದೇ ಗೊಂದಲವಿಲ್ಲದೆ ಸಮರ್ಪಕ ಕಾರ್ಯಾರಂಭ ಮಾಡಲಾಗುತ್ತದೆ ಎಂದು ಮಧು ಬಂಗಾರಪ್ಪ ತಿಳಿಸಿದರು.





ಚಾಮುಂಡೇಶ್ವರಿ ಕ್ಷೇತ್ರದ ನೂತನ ಶಾಸಕ ಜಿ.ಟಿ.ದೇವೇಗೌಡರು ಹಾಗೂ ಹುಣಸೂರು ಕ್ಷೇತ್ರದ ನೂತನ ಶಾಸಕ ಜಿ.ಡಿ.ಹರೀಶ್‌ಗೌಡ ಅವರಿಗೆ ವಕೀಲರೂ ಆದ ಗ್ರಾಪಂ ಸದಸ್ಯರಾದ ಕೆ.ಜಿ.ಮಾದೇಶ್ ನೇತೃತ್ವದಲ್ಲಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಹಿರಿಯ ಮುಖಂಡ, ಫ್ಯಾಕ್ಸ್ ಅಧ್ಯಕ್ಷ ನಾರಾಯಣಪ್ಪ, ಗ್ರಾ.ಪಂ. ಸದಸ್ಯೆ ಸಿದ್ದಮ್ಮ, ಶಿವರಾಜ್ ಮತ್ತು ಸ್ನೇಹಿತರು, ಹಳೇಕೆಸರೆ ಪರಮೇಶ್, ಪುರುಷೋತ್ತಮ್, ಸುಮಂತ್ ಹಾಗೂ ಕಾಮನಕೆರೆ ಹುಂಡಿ ಗ್ರಾಮದ ಜೆಡಿಎಸ್ ಪಕ್ಷದ ಎಲ್ಲಾ ಮುಖಂಡರು ಉಪಸ್ಥಿತರಿದ್ದರು. ಉದ್ಯಮಿ ಹಾಗೂ ಸಮಾಜ ಸೇವಕ ಎಸ್.ಶ್ರೀಕಾಂತ್ ಸಹ ಜಿಟಿಡಿ ಹಾಗೂ ಹರೀಶ್‌ಗೌಡರನ್ನು ಸನ್ಮಾನಿಸಿದರು. (ಬಲಚಿತ್ರ)

ಉಚಿತ ಕಣ್ಣಿನ ಪೊರೆ ತಪಾಸಣಾ ಶಿಬಿರ



ಮೈಸೂರು, ಮೇ 30–ಮೈಸೂರು ರೇಸ್ ಕ್ಲಬ್ ಕಣ್ಣಿನ ಆಸ್ಪತ್ರೆ ಮತ್ತು ಜಿಲ್ಲಾ ಅಂಧತ್ವ ನಿಯಂತ್ರಣ ವಿಭಾಗ, ಮೈಸೂರು ಲಯನ್ಸ್ ಕ್ಲಬ್, ಟಿ.ನರಸೀಪುರ ರೋಟರಿ ಕ್ಲಬ್, ಕೆ.ಆರ್.ನಗರ, ಪ್ರಾಥಮಿಕ ಪತ್ತಿನ ಕೃಷಿ ಸಹಕಾರ ಸಂಘ, ಬೆಟ್ಟದತುಂಗ, ಪಿರಿಯಾಪಟ್ಟಣ ತಾಲೂಕು ಸಹಯೋಗದೊಂದಿಗೆ ಕಣ್ಣಿನ ಪೊರೆ ತಪಾಸಣಾ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದೆ. ಜೂ.5ರಂದು ತಿ.ನರಸೀಪುರದ ವಾಸವಿ ವಿದ್ಯಾನಿಕೇತನ ಶಾಲೆ, ಜೂ.12 ರಂದು ಕೆ.ಆರ್.ನಗರದ ರೋಟರಿ ಭವನ, ಜೂ.19 ರಂದು ಪಿರಿಯಾಪಟ್ಟಣ ತಾಲೂಕಿನ ಬೆಟ್ಟದತುಂಗ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಮತ್ತು ಜೂ.26ರಂದು ಜೆ.ಪಿ.ನಗರದ ಶ್ರೀನಿಧಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಅವಶ್ಯಕವಿರುವವರು ದಾಖಲಾತಿ ಸಂದರ್ಭದಲ್ಲಿ ಬಿಪಿಎಲ್ ಕಾರ್ಡ್, ಆಧಾರ್ ಕಾರ್ಡ್ ಹೊಂದಿರಬೇಕು. ಹೆಚ್ಚಿನ ಮಾಹಿತಿಗೆ ಮೊ. 9880352321, 9741240793, 9900145279, 9945393536 ಸಂಪರ್ಕಿಸಬಹುದು.



ಚಾಮರಾಜನಗರ ವಿಧಾನಸಭಾ ಕ್ಷೇತ್ರದಿಂದ ಸತತ ನಾಲ್ಕನೇ ಬಾರಿಗೆ ಶಾಸಕರಾಗಿ ಆಯ್ಕೆಯಾಗಿರುವ ಸಿ.ಪುಟ್ಟರಂಗಶೆಟ್ಟಿ, ಶ್ರೀ ಸುತ್ತೂರು ಕ್ಷೇತ್ರಕ್ಕೆ ಭೇಟಿ ನೀಡಿ, ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರಿಂದ ಆಶೀರ್ವಾದ ಪಡೆದರು.

ಜೂ.4ರಂದು ಮೈಸೂರು ರೈಲು ವಸ್ತು ಸಂಗ್ರಹಾಲಯದಲ್ಲಿ ಚಿತ್ರಕಲೆ ಸ್ಪರ್ಧೆ

ಮೈಸೂರು, ಮೇ 30–ಜೂನ್ 5 ವಿಶ್ವ ಪರಿಸರ ದಿನ. ಇದರ ಅಂಗವಾಗಿ ಜೂನ್ 4ರಂದು ಮೈಸೂರು ರೈಲು ವಸ್ತು ಸಂಗ್ರಹಾಲಯದ ವತಿಯಿಂದ ಶಾಲಾ ಮಕ್ಕಳಿಗೆ ಚಿತ್ರಕಲಾ ಸ್ಪರ್ಧೆ ಆಯೋಜಿಸಲಾಗಿದೆ.

ದುರ್ಬಲ ಪರಿಸರ ವ್ಯವಸ್ಥೆಗೆ ಪ್ಲಾಸ್ಟಿಕ್‌ನಿಂದಾಗುವ ಅಪಾಯಗಳ ಬಗ್ಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಈ ಚಿತ್ರಕಲಾ ಸ್ಪರ್ಧೆ ಆಯೋಜಿಸಲಾಗಿದೆ. ಚಿತ್ರಕಲೆ ಸ್ಪರ್ಧೆಯ ವಿಷಯ #BeatPlastic Pollution.

ಸ್ಪರ್ಧೆಯಲ್ಲಿ 5–18 ವರ್ಷ ವಯಸ್ಸಿನ ವಿದ್ಯಾರ್ಥಿಗಳು ಭಾಗವಹಿಸಬಹುದು. ಮೈಸೂರು ರೈಲು ವಸ್ತು ಸಂಗ್ರಹಾಲಯದ ಆವರಣದಲ್ಲಿ ಜೂ.4ರಂದು 10:30ರಿಂದ 12:30ರವರೆಗೆ ಸ್ಪರ್ಧೆ ನಡೆಯಲಿದೆ. ಯಾವುದೇ ಪ್ರವೇಶ ಶುಲ್ಕವಿರುವುದಿಲ್ಲ. ಆಯ್ಕೆಯಾದ ಅತ್ಯುತ್ತಮ ಮೂರು ಚಿತ್ರಗಳಿಗೆ ಜೂ.5ರಂದು ನಡೆಯಲಿರುವ ಸಮಾರಂಭದಲ್ಲಿ ಬಹುಮಾನ ವಿತರಣೆ ಮಾಡಲಾಗುವುದು. ಭಾಗವಹಿಸಿದ ಎಲ್ಲರಿಗೂ ಪ್ರಮಾಣಪತ್ರವನ್ನು ನೀಡಲಾಗುತ್ತದೆ. ಭಾಗವಹಿಸುವವರಿಗೆ ಚಿತ್ರ ಬಿಡಿಸಲು ಬಿಳಿ ಹಾಳೆ, ಕ್ರಯಾನ್ಸ್, ಪೆನ್ಸಿಲ್‌ಗಳು, ಎರೇಸರ್‌ಗಳು ಮುಂತಾದ ಬರವಣಿಗೆ ಸಾಮಗ್ರಿಗಳನ್ನು ಸಂಘಟಕರು ಉಚಿತವಾಗಿ ನೀಡಲಿದ್ದಾರೆ. ಅದಾಗಿಯೂ, ವಿದ್ಯಾರ್ಥಿಗಳು ತಮ್ಮ ಸ್ವಂತ ಬರವಣಿಗೆ ಸಾಮಗ್ರಿಗಳನ್ನೇ (ಚಿತ್ರ ಬಿಡಿಸುವ ಹಾಳೆ ಗಳನ್ನು ಹೊರತುಪಡಿಸಿ) ಬಳಸಬಹುದಾಗಿದೆ.

ಸ್ಪರ್ಧೆಯ ನಮೂದು ಅರ್ಜಿಗಳನ್ನು ಜೂ.3 ಸಂಜೆ 5ರವರೆಗೆ ಸ್ವೀಕರಿಸಲಾಗುತ್ತದೆ. ಸ್ಪರ್ಧೆಯಲ್ಲಿ ಭಾಗವಹಿಸಲು ಬಯಸುವ ವಿದ್ಯಾರ್ಥಿಗಳು ತಮ್ಮ ಹೆಸರು, ವಯಸ್ಸು, ಶಾಲೆಯ ಹೆಸರು ಮತ್ತು ಸಂಪರ್ಕ ಸಂಖ್ಯೆ ಅಥವಾ ಇತರ ಸಂಬಂಧಿತ ವಿವರಗಳೊಂದಿಗೆ sserailmuseum@gmail.comಗೆ ಮೇಲ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು. ನಮೂದುಗಳನ್ನು ವಾಟ್ಸಾಪ್ ಸಂಖ್ಯೆ 9164872586ಗೂ ಕಳುಹಿಸಬಹುದು. ನಿಗದಿತ ದಿನಾಂಕ ಮತ್ತು ಸಮಯದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲ್ಲ ಎಂದು ಪ್ರಕಟಣೆ ತಿಳಿಸಲಾಗಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

31.5.2023 ಬುಧವಾರ, ಮಳೆ ನಕ್ಷತ್ರ: ರೋಹಿಣಿ, 25.05.2023 ರಿಂದ 07.06.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಶುಕ್ಲ ಪಕ್ಷ, ತಿಥಿ: ಏಕಾದಶಿ, ನಕ್ಷತ್ರ: ಚಿತ್ತ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಜಿ.ಎಸ್.ಎಸ್. ಯೋಗದಮಾತು, ಪ್ರಸ್ತುತಿ– ಡಿ. ಶ್ರೀಹರಿ, 6.40 ಪದಸಂಸ್ಕೃತಿ–ಕನ್ನಡ ಪದಗಳ ಬಳಕೆ–ಕಲಿಕೆಯ ವಿಶಿಷ್ಟ ಬಾನುಲಿ ಸರಣಿ, ಪ್ರಸ್ತುತಿ–ಪ್ರೊ. ಲಕ್ಷ್ಮೀನಾರಾಯಣ ಅರೋರಾ, 9.00 ವೃತ್ತಿ ಮಾರ್ಗದರ್ಶನ –ಮೆಡಿಕಲ್ ಸ್ಟ್ಯಾಟಿಸ್ಟಿಕ್ಸ್ ವಿಷಯಗಳಲ್ಲಿಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಡಾ.ಕೆ.ಎಸ್. ಭಕ್ತವತ್ಸಲ ಅವರೊಂದಿಗೆ ಮಾತುಕತೆ, 10.00 ಹಿಂದೂಸ್ಥಾನಿ ಸಂಗೀತ – ಉಸ್ತಾದ್ ಬಡೇ ಗುಲಾಂ ಆಲಿಕಾನ್– ಗಾಯನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ

ಮಧ್ಯಾಹ್ನ: 12.30 ದೇವರನಾಮ, 1.20 ಭಾವಗೀತೆ–ಅರ್ಚನಾ ಉಡುಪ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.00 ಲಯ ಸಂಭ್ರಮ– "ಪಾಶ್ಚಾತ್ಯ ಲಯ ವಾದ್ಯಗಳ ಪರಿಚಯ", ಪ್ರಸ್ತುತಿ– ಹೆಚ್.ಎಲ್.ಶಿವಶಂಕರಸ್ವಾಮಿ, 4.00 ಮಹಿಳಾರಂಗ–ಸ್ತ್ರೀ ಚೇತನ, 4.45 ಹಿಂದಿ ಪಾಠ–ಮಧುಬಾಲಾ ಅಗರ್‌ವಾಲ್, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಕಿಸಾನ್‌ವಾಣಿ–ಹೈನುಗಾರಿಕೆ ಯಲ್ಲಿ ಕಂಡ ಯಶಸ್ಸು ಕುರಿತು ಎ ಪ್ರಭಾಕರ್ ಮತ್ತು ಮಹಾಲಕ್ಷ್ಮಿ ಅವರೊಂದಿಗೆ ಮಾತುಕತೆ, 9.30 ಹಿಂದೂಸ್ಥಾನಿ ಸಂಗೀತ, 10.00 ಜನಪದ ಸಂಗೀತ–ಶಿವಮ್ಮ ಮತ್ತು ತಂಡ, 10.30 ಸವಿನೆನಪು

- **ಅಭಿವೃದ್ಧಿ :** ಸಿಲ್ಕ್ ಇಂಡಿಯಾ–2023, ಸಿಲ್ಕ್, ಕಾಟನ್ ಮತ್ತು ಇತರ ಸೀರೆಗಳ ಮಾರಾಟ ಮತ್ತು ಪ್ರದರ್ಶನ, ಸ್ಥಳ: ಸದರನ್ ಸ್ಟಾರ್, ವಿನೋಬಾ ರಸ್ತೆ, ಬೆಳಗ್ಗೆ 10.30ರಿಂದ ರಾತ್ರಿ 8.30 ರವರೆಗೆ
- **ಅಕ್ಕನ ಬಳಗ ಶಾಲೆ ಹಾಗೂ ಕೆಎಂಪಿಕೆ ಚಾರಿಟೆಬಲ್ ಟ್ರಸ್ಟ್, ಮೈಸೂರು :** ಶೈಕ್ಷಣಿಕ ಶಾಲಾ ಆರಂಭದ ಹಿನ್ನೆಲೆಯಲ್ಲಿ ಸಿಹಿ ಹಾಗೂ ಹೂವು ನೀಡಿ ವಿದ್ಯಾರ್ಥಿಗಳಿಗೆ ಸ್ವಾಗತ ಕಾರ್ಯಕ್ರಮ, ಮುಖ್ಯ ಅತಿಥಿಗಳು: ಶಾಸಕ ಟಿ.ಎಸ್.ಶ್ರೀವತ್ಸ, ಹಿರಿಯ ಸಮಾಜ ಸೇವಕ ಡಾ.ಕೆ.ರಘುರಾಂ ವಾಜಪೇಯಿ, ಡಾ. ರೇಖಾ ಮನಶಾಂತಿ, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಸ್ಥಳ: ಅಕ್ಕನ ಬಳಗ, ಬೆಳಗ್ಗೆ 10ಕ್ಕೆ.
- **ಸಮತಾ ಅಧ್ಯಯನ ಕೇಂದ್ರ, ಮೈಸೂರು :** ಕಾವ್ಯ ಮತ್ತು ಕಥಾಕಮ್ಮಟ, ಆಶಯ ನುಡಿ : ಸಮತಾ ಅಧ್ಯಯನ ಕೇಂದ್ರದ ಉಪಾಧ್ಯಕ್ಷರಾದ ಬಿ.ಸಿ. ಮಂಜುಳ, ಉದ್ಘಾಟನೆ : ಸಂಸ್ಕೃತಿ ಚಿಂತಕ ಡಾ. ಕಾಳೇಗೌಡ ನಾಗವಾರ, ಅಧ್ಯಕ್ಷತೆ : ಕೇಂದ್ರದ ಅಧ್ಯಕ್ಷರಾದ ಡಾ. ಸಬಿಹಾ ಭೂಮಿಗೌಡ, ಸ್ಥಳ: ಯೂತ್ ಹಾಸ್ಟೆಲ್ ಸಭಾಂಗಣ, ಗಂಗೋತ್ರಿ ಬಡಾವಣೆ, ಬೆಳಗ್ಗೆ 10ಕ್ಕೆ.
- **ಸುಯೋಗ್ ಆಸ್ಪತ್ರೆ, ಸುಯೋಗ್ ಕಾಲೇಜ್ ಆಫ್ ನರ್ಸಿಂಗ್:** ವಿಶ್ವ ತಂಬಾಕು ದಿನಾಚರಣೆ, ಉದ್ಘಾಟನೆ : ಶಾಸಕ ಹರೀಶ್‌ಗೌಡ, ಅಧ್ಯಕ್ಷತೆ: ಸುಯೋಗ್ ಆಸ್ಪತ್ರೆ ಅಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ, ಡಾ. ಮಂಜುನಾಥ್ ಅವರಿಂದ ತಂಬಾಕಿನ ದುಷ್ಪರಿಣಾಮಗಳು ಕುರಿತು ಉಪನ್ಯಾಸ, ಸ್ಥಳ: ಸುಯೋಗ ಆಸ್ಪತ್ರೆ ಸಭಾಂಗಣ, ರಾಮಕೃಷ್ಣನಗರ, ಸಂಜೆ 4.30ಕ್ಕೆ.
- **ಶ್ರೀ ತ್ಯಾಗರಾಜ ಸಂಗೀತ ಸಭಾ ಚಾರಿಟಬಲ್ ಟ್ರಸ್ಟ್:** ಟಿ.ಆರ್.ಮಹಾಲಿಂಗಂ ಸಂಸ್ಮರಣೆ ಅಂಗವಾಗಿ ವಿದ್ವಾನ್ ಬಿ.ಕೆ. ಅನಂತರಾಮ್ ಅವರಿಗೆ 'ವೇಣು ಬ್ರಹ್ಮ' ಪದವಿ ಪ್ರದಾನ, ವಿದ್ವಾನ್ ಬಿ.ಕೆ. ಅನಂತರಾಮ್ ಅವರಿಂದ ಕರ್ನಾಟಕ ಶಾಸ್ತ್ರೀಯ ಕೊಳಲು ವಾದನ, ವಿದ್ವಾನ್ ಮೈಸೂರು ಎಂ.ಸುಮಂತ್–ಪಿಟೀಲು, ವಿದ್ವಾನ್ ಹೆಚ್.ಎಲ್. ಶಿವಶಂಕರಸ್ವಾಮಿ–ಮೃದಂಗ, ವಿದ್ವಾನ್ ಸಿ.ಎ. ರಘುನಂದನ್–ಘಟಂ, ಸ್ಥಳ: ಸಂಗೀತ ಕಲಾನಿಧಿ ಕೆ. ವಾಸುದೇವಚಾರ್ಯ ಭವನ, ಜೆಎಲ್‌ಬಿ ರಸ್ತೆ, ಸಂಜೆ 6 ಗಂಟೆಗೆ.
- **ಶ್ರೀ ರಾಘವೇಂದ್ರಸ್ವಾಮಿಗಳ ಬೃಂದಾವನ ಸನ್ನಿಧಾನ :** ಶ್ರೀ ರಾಘವೇಂದ್ರ ಸ್ವಾಮಿಗಳ 76ನೇ ಬೃಂದಾವನ ಪ್ರತಿಷ್ಠಾಪನಾ ವರ್ಧಂತ್ಯುತ್ಸವ ಜ್ಞಾನಸತ್ರ, ಪಂಡಿತ್ ಶ್ರೀ ರಘೋತ್ತಮಾಚಾರ್ಯ ನಾಗಸಂಪಿಗೆ, ಬಾಗಲಕೋಟೆ ಅವರಿಂದ ಶ್ರೀಮದ್ ರಾಮಾಯಣ ಪ್ರವಚನ (ಬಾಲಕಾಂಡ), ಸ್ಥಳ: ತತ್ವಜ್ಞಾನ ಮಂದಿರ, ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಆವರಣ, ಕೃಷ್ಣಮೂರ್ತಿಪುರಂ, ಸಂಜೆ 6ಕ್ಕೆ.
- **ನ್ಯಾಷನಲ್ ರಿಯಲ್ ಎಸ್ಟೇಟ್ ಡೆವಲಪ್‌ಮೆಂಟ್ ಕೌನ್ಸಿಲ್ (ನರೇಡ್ಕೋ) ಮೈಸೂರು:** ನರೇಡ್ಕೋ ಅಧ್ಯಕ್ಷ ಆದಿಶೇಷನ್‌ಗೌಡರೊಂದಿಗೆ ಸಂವಾದ, ಸ್ಥಳ: ಸದರನ್ ಸ್ಟಾರ್ ಹೋಟೆಲ್, ಸಂಜೆ 6.30ಕ್ಕೆ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 31 ಬುಧವಾರ 2023

ಸಂಪುಟ: 44 | ಸಂಚಿಕೆ: 45 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ನಾಳೆಯಿಂದ ಗ್ಯಾರಂಟಿಗಳ ಜಾರಿ ಗ್ಯಾರಂಟಿ

● ಹಣಕಾಸು ಇಲಾಖೆ ಅಪಸ್ವರ ಎತ್ತಿದ್ದರೂ ಕಟೀಬದ್ಧರಾಗಿರುವ ಮುಖ್ಯಮಂತ್ರಿ ● ಇಂದು ಈ ಸಂಬಂಧ ಅನೌಪಚಾರಿಕ ಮಂತ್ರಿ ಪರಿಷತ್ ಸಭೆ ● ನಾಳೆ ಅಧಿಕೃತ ಸಂಪುಟ ಸಭೆ ● ಇಲಾಖಾವಾರು ಅಧಿಕಾರಿಗಳಿಂದ ಸಿಎಂ ಮಾಹಿತಿ ಸಂಗ್ರಹ

ಬೆಂಗಳೂರು, ಮೇ 30(ಕೆಎಂಶಿ)– ಹಣಕಾಸು ಇಲಾಖೆಯ ವಿರೋಧದ ನಡುವೆಯೂ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ದಿನಗಣನೆ ಆರಂಭವಾಗಿದೆ.

ತಮ್ಮ ಅಡಿಯಲ್ಲಿ ಬರುವ ಇಲಾಖೆಯಿಂದಲೇ ಅಪಸ್ವರ ಬಂದಿರುವುದರಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಅನೌಪಚಾರಿಕ ಮಂತ್ರಿ ಪರಿಷತ್ ಸಭೆ ಕರೆದಿದ್ದಾರೆ. ಮಂತ್ರಿ ಪರಿಷತ್ ಸಭೆಯಲ್ಲಿ ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದಂತೆ ಸಾಧಕ–ಬಾಧಕಗಳ ಚರ್ಚೆ ನಡೆಸಿ ಗುರುವಾರ ಜರುಗಲಿರುವ ಸಂಪುಟ ಸಭೆಯಲ್ಲಿ ನಿರ್ಣಯ ಕೈಗೊಳ್ಳುತ್ತಾರೆ. ಜೂನ್ ಒಂದರಿಂದಲೇ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಉದ್ದೇಶದಿಂದ ಐದು ಯೋಜನೆಗಳ ವ್ಯಾಪ್ತಿಗೆ ಬರುವ ಸಚಿವರು, ಇಡೀ ದಿನ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ, ಮಂತ್ರಿ ಪರಿಷತ್ ಮತ್ತು ಮಂತ್ರಿ ಮಂಡಲ ಸಭೆಗೆ ಕರಡು ಸಿದ್ಧಪಡಿಸಿದ್ದಾರೆ.

ಯೋಜನೆಗೆ 600 ಕೋಟಿ ರೂ. ವೆಚ್ಚವಾಗಲಿದ್ದು, ಈ ಹಣವನ್ನು ಭರಿಸುವಂತೆ ಕೇಂದ್ರ ಸರ್ಕಾರವನ್ನು ಕೋರುವುದಾಗಿ ತಿಳಿಸಿದರು. ಗ್ಯಾರಂಟಿ ಯೋಜನೆಗಳ ಬಗ್ಗೆ ಸಾರ್ವಜನಿಕವಾಗಿ ಅಪ



ನಂಬಿಕೆಗಳು ಬಂದಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳು ಜೂನ್ ಒಂದರಿಂದ ಜಾರಿಗೊಳಿಸಲೇಬೇಕು ಎಂದು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ತಾಕೀತು ಮಾಡಿದ್ದಾರೆ. ಹಣಕಾಸು ಇಲಾಖೆ ಏನೇ ಸಬೂಬು ಹೇಳಿದರೂ ಅದನ್ನು ಬದಿಗಿರಿಸಿ ಯೋಜನೆ ಮೊದಲು ಅನುಷ್ಠಾನಗೊಳಿಸಿ ನಂತರ ಸಂಪನ್ಮೂಲ ಕ್ರೋಢೀಕರಣದ ಬಗ್ಗೆ ತೀರ್ಮಾನಕ್ಕೆ ಬಂದಿದ್ದಾರೆ. ಆಯಾ ಇಲಾಖೆಯ ಸಚಿವರು ಇಂದು ಅಧಿಕಾರಿಗಳ ಸಭೆ ನಡೆಸಿದ ಬಳಿಕ ಯೋಜನೆ ಅನುಷ್ಠಾನಗೊಳಿಸಲು ಎಷ್ಟು ಹಣ ಬೇಕು. ಇದರಿಂದ ಇಲಾಖೆಗೆ ಯಾವ ರೀತಿ ಹೊರೆಯಾಗುತ್ತದೆ. ನಷ್ಟವಾಗುವ ಹಣವನ್ನು ● 9ನೇ ಪುಟಕ್ಕೆ

ರಾಜ್ಯದಲ್ಲಿ ಜೂ.1ರಿಂದ ಸರ್ಕಾರಿ ಬಸ್ಸುಗಳಲ್ಲಿ ಎಲ್ಲಾ ಮಹಿಳೆಯರಿಗೆ ಉಚಿತ ಪ್ರಯಾಣ





ಬೆಂಗಳೂರು: ರಾಜ್ಯದ ಎಲ್ಲಾ ಮಹಿಳೆಯರಿಗೂ ಸರ್ಕಾರಿ ಬಸ್ಸುಗಳಲ್ಲಿ ಪ್ರಯಾಣ ಸಂಪೂರ್ಣ ಉಚಿತವಾಗಿದ್ದು, ಈ ಯೋಜನೆ ಜೂನ್ 1ರಿಂದಲೇ ಜಾರಿಗೆ ಬರಲಿದೆ ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಮಂಗಳವಾರ ಬೆಂಗಳೂರಿನಲ್ಲಿ ತಿಳಿಸಿದ್ದಾರೆ. ರಾಜ್ಯ ಸಾರಿಗೆ ಸಂಸ್ಥೆಯ ನಾಲ್ಕು ನಿಗಮಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಕಾಂಗ್ರೆಸ್ ಸರ್ಕಾರ ಚುನಾವಣಾ ಪೂರ್ವ ರಾಜ್ಯದ ಜನತೆಗೆ ನೀಡಿದ್ದ 5 ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಮಹಿಳೆಯರಿಗೆ ಸರ್ಕಾರಿ ಬಸ್ಸುಗಳಲ್ಲಿ ಉಚಿತ ಪ್ರಯಾಣದ ಭರವಸೆಯನ್ನು ಯಾವುದೇ ಷರತ್ತುಗಳಿಲ್ಲದೆ ಜಾರಿಗೆ ತರಲಾಗುವುದು ಎಂದು ಹೇಳಿದ್ದಾರೆ.

ಸರ್ಕಾರಿ ಬಸ್ಸುಗಳಲ್ಲಿ ಬಿಪಿಎಲ್ ಕಾರ್ಡು ಇದ್ದ ಮಹಿಳೆಯರಿಗೆ ಮಾತ್ರ ಉಚಿತ ಪ್ರಯಾಣಿಸಬಹುದು ಎಂಬ ಷರತ್ತು ವಿಧಿಸಿಲ್ಲ. ಬಿಪಿಎಲ್–ಎಪಿಎಲ್ ಕಾರ್ಡು ಹೊಂದಿರುವ ಎಲ್ಲಾ ಮಹಿಳೆಯರಿಗೂ ಉಚಿತ ಪ್ರಯಾಣ ಎಂದರು. ಸಾರಿಗೆ ಅಧಿಕಾರಿಗಳು ಮೂರ್ನಾಲ್ಕು ಆಯ್ಕೆಗಳನ್ನು ಕೊಟ್ಟಿದ್ದಾರೆ. ಕಂಡಿಷನ್ ● 9ನೇ ಪುಟಕ್ಕೆ

ಮನೆಗೆ ಅತ್ತೆಯೇ ಸೀನಿಯರ್, ಅತ್ತೆ ಒಪ್ಪಿದ್ರಷ್ಟೇ ಸೊಸೆಗೆ 2000



ಬೆಳಗಾವಿ: ಗೃಹಲಕ್ಷ್ಮಿ ಯೋಜನೆಗೆ ಷರತ್ತು ಅನ್ವಯಿಸುತ್ತೆ. ಮನೆಗೆ ಅತ್ತೆಯೇ ಸೀನಿಯರ್, ಆದ್ದರಿಂದ ಗೃಹಲಕ್ಷ್ಮಿ ಯೋಜನೆ ಯಾರಿಗೆ ಬೇಕೆಂದು ಅತ್ತೆಯನ್ನು ಕೇಳುತ್ತೇವೆ. ಅತ್ತೆ ನನ್ನ ಬದಲು ಸೊಸೆಗೆ ಯೋಜನೆ ಕೊಡಿ ಅಂದ್ರೆ 'ಗೃಹಲಕ್ಷ್ಮಿ' ಯೋಜನೆ ಸೊಸೆಗೆ ಸಿಗುತ್ತದೆ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ. ಗೃಹಲಕ್ಷ್ಮಿ ಗ್ಯಾರಂಟಿ ಯೋಜನೆ ಜಾರಿ ಸಂಬಂಧ ನಗರದ ಸುವರ್ಣಸೌಧದಲ್ಲಿ ಮಾತನಾಡಿದ ಅವರು, ಬಹಳಷ್ಟು ಸರಳವಾಗಿ ಯೋಜನೆ ಜಾರಿಗೆ ತರುವ ಚಿಂತನೆ ಇದೆ. ಇಲಾಖೆ ಮಂತ್ರಿಗಳು ಮತ್ತು ಅಧಿಕಾರಿಗಳ ಸಭೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆದಿದ್ದಾರೆ. ನಮ್ಮ ಇಲಾಖೆಯ ಜೊತೆ ಆರ್‌ಡಿಪಿಆರ್, ಕಂದಾಯ ಇಲಾಖೆ ಅಧಿಕಾರಿಗಳ ಸಭೆಯೂ ನಡೆಯಲಿದೆ ಎಂದು ● 9ನೇ ಪುಟಕ್ಕೆ

ಬೆಂಗಳೂರು ಪೊಲೀಸ್ ಆಯುಕ್ತರಾಗಿ ಹಿರಿಯ ಐಪಿಎಸ್ ಅಧಿಕಾರಿ ದಯಾನಂದ ನೇಮಕ



ಪೊಲೀಸ್ ಅಧಿಕಾರಿಗಳಿಗೆ ಪದೋನ್ನತಿ; ವರ್ಗಾವಣೆ

ಬೆಂಗಳೂರು, ಮೇ 30(ಕೆಎಂಶಿ)–ಬೆಂಗಳೂರು ಪೊಲೀಸ್ ಆಯುಕ್ತರನ್ನಾಗಿ ಹಿರಿಯ ಐಪಿಎಸ್ ಅಧಿಕಾರಿ ಬಿ. ದಯಾನಂದ ಅವರನ್ನು ರಾಜ್ಯ ಸರ್ಕಾರ ನೇಮಿಸಿದೆ. ಇದರೊಂದಿಗೆ ಹಿರಿಯ ಪೊಲೀಸ್ ಅಧಿಕಾರಿಗಳನ್ನು ನೂತನ ಸರ್ಕಾರ ವರ್ಗಾವಣೆ ಮಾಡಿದೆ. 1994ನೇ ಬ್ಯಾಚ್‌ನ ಐಪಿಎಸ್ ಅಧಿಕಾರಿಯಾದ ದಯಾನಂದ ಅವರು ಸದ್ಯ ಗುಪ್ತಚರ ಇಲಾಖೆಯ ಮುಖ್ಯಸ್ಥರಾಗಿದ್ದಾರೆ. ಬೆಂಗಳೂರು ಪೊಲೀಸ್ ಆಯುಕ್ತರಾಗಿದ್ದ ಸಿ.ಎಚ್. ಪ್ರತಾಪ್ ರೆಡ್ಡಿ ಅವರನ್ನು ಆಂತರಿಕ ಭದ್ರತಾ ವಿಭಾಗದ ಡಿಜಿಪಿಯನ್ನಾಗಿ ನಿಯೋಜಿಸಲಾಗಿದೆ. ಬೆಂಗಳೂರು ಸಂಚಾರ ● 9ನೇ ಪುಟಕ್ಕೆ

ರಾಜ್ಯ ಸರ್ಕಾರಿ ನೌಕರರಿಗೆ ಶೇ.4 ತುಟ್ಟಿಭತ್ಯೆ ಹೆಚ್ಚಳ

ಜನವರಿಯಿಂದ ಪೂರ್ವಾನ್ವಯ

ಬೆಂಗಳೂರು: ರಾಜ್ಯದಲ್ಲಿ ಇತ್ತೀಚೆಗೆ ಅಧಿಕಾರಕ್ಕೆ ಬಂದ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಸರ್ಕಾರಿ ನೌಕರರಿಗೆ ಶೇ.4 ತುಟ್ಟಿಭತ್ಯೆಯನ್ನು ಹೆಚ್ಚಳ ಮಾಡುವ ಮೂಲಕ ಭರ್ಜರಿ ಕೊಡುಗೆಯನ್ನು ನೀಡಿದೆ. ಇನ್ನು ಈ ತುಟ್ಟಿಭತ್ಯೆ ಹೆಚ್ಚಳವು 2023 ಜನವರಿ 1 ರಿಂದ ಪೂರ್ವಾನ್ವಯ ಆಗುವಂತೆ ಜಾರಿಗೆ ಬರಲಿದೆ. ರಾಜ್ಯದಲ್ಲಿ ಕೆಲಸ ಮಾಡುವ ಸರ್ಕಾರಿ ನೌಕರರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರ ವಹಿಸಿಕೊಂಡ ಕೆಲವೇ ದಿನಗಳಲ್ಲಿ ಭರ್ಜರಿ ಗಿಫ್ಟ್ ಕೊಟ್ಟಿದ್ದಾರೆ. ● 9ನೇ ಪುಟಕ್ಕೆ

ಜೂ.1ರಿಂದ 16ರವರೆಗೆ ಸರ್ಕಾರಿ ನೌಕರರ ವರ್ಗಾವರ್ಗಿ

ಮಾರ್ಗಸೂಚಿ ಪ್ರಕಟಿಸಿದ ಸರ್ಕಾರ

ಬೆಂಗಳೂರು: ಗ್ರೂಪ್ ಎ,ಬಿ,ಸಿ,ಡಿ ನೌಕರರ ಸಾರ್ವತ್ರಿಕ ವರ್ಗಾವಣೆಗೆ ಅವಕಾಶ ನೀಡಲಾಗಿದ್ದು, ಇದಕ್ಕಾಗಿ ಕರ್ನಾಟಕ ಸರ್ಕಾರ ಮಾರ್ಗಸೂಚಿಯನ್ನು ಕೂಡ ಪ್ರಕಟಿಸಿದೆ. ಜೇಷ್ಠತಾ ಪಟ್ಟಿಯಲ್ಲಿ ಶೇ.6ರಷ್ಟು ಮೀರದಂತೆ ಜೂನ್ 1ರಿಂದ ಜೂ.16ರವರೆಗೆ ನೌಕರರನ್ನು ವರ್ಗಾವಣೆ ಮಾಡಲು ವಿವಿಧ ಇಲಾಖೆ ಸಚಿವರಿಗೆ ಅವಕಾಶ ನೀಡಿ ಆದೇಶಿಸಲಾಗಿದೆ. ಮಾರ್ಗಸೂಚಿ ಪ್ರಕಾರ, ಸರ್ಕಾರಿ ನೌಕರರ ವರ್ಗಾವಣೆಗಳನ್ನು ಪ್ರತಿ ವರ್ಷ ಮೇ ಮತ್ತು ಜೂನ್ ತಿಂಗಳುಗಳಲ್ಲಿ ಮಾತ್ರ ಸದರಿ ಮಾರ್ಗಸೂಚಿಗಳಲ್ಲಿರುವ ಷರತ್ತುಗೊಳಪಟ್ಟು ಮಾಡಬಹುದಾಗಿದೆ. 2023–24ನೇ ಸಾಲಿಗೆ ● 9ನೇ ಪುಟಕ್ಕೆ

ಬಿರುಗಾಳಿಯಿಂದ ಉರುಳಿ ಬಿದ್ದ ಮರ ತೆರವು ಕಾರ್ಯಾಚರಣೆ ಹಿನ್ನೆಲೆ

ಕೆಆರ್‌ಎಸ್: ಪ್ರವಾಸಿಗರಿಗೆ ಇಂದು ಪ್ರವೇಶ ನಿರ್ಬಂಧ

ಮೈಸೂರು, ಮೇ 30(ಆರ್‌ಕೆ)– ಬಿರುಗಾಳಿ, ಮಳೆಯಿಂದಾಗಿ ನೆಲಕ್ಕುರುಳಿದ ಮರಗಳ ತೆರವು ಕಾರ್ಯಾಚರಣೆ ಮುಂದುವರೆದಿರುವುದರಿಂದ ಕೃಷ್ಣರಾಜ ಸಾಗರ (ಕೆಆರ್‌ಎಸ್)ದ ಬೃಂದಾವನ ಗಾರ್ಡನ್‌ಗೆ ಬುಧವಾರವೂ ಪ್ರವಾಸಿಗರ ಪ್ರವೇಶ ನಿರ್ಬಂಧಿಸಲಾಗಿದೆ ಎಂದು ಕಾವೇರಿ ನೀರಾವರಿ ನಿಗಮ ನಿಯಮಿತದ ಅಧಿಕಾರಿಗಳು ತಿಳಿಸಿದ್ದಾರೆ. ಸೋಮವಾರ ಸಂಜೆ 4 ಗಂಟೆಯಿಂದ ಸುರಿದ ಮಳೆ ಹಾಗೂ ಗಾಳಿಗೆ ಕೆಆರ್‌ಎಸ್ ಸುತ್ತ ಮರಗಳು ಮತ್ತು ರೆಂಬೆಗಳು ನೆಲಕ್ಕುರುಳಿ ಭಾರೀ ಅವಾಂತರ ಉಂಟಾಗಿತ್ತು. ಬೃಂದಾವನ ಗಾರ್ಡನ್ ನಲ್ಲೂ ನಾಲ್ಕೈದು ಭಾರೀ ಮರಗಳು ಬುಡಸಮೇತ ಉರುಳಿ ಬಿದ್ದಿದ್ದು, ಹಲವು ಮರಗಳ ರೆಂಬೆಗಳು ಮುರಿದು



ಬಿದ್ದಿವೆ. ಅದೇ ರೀತಿ ವಿದ್ಯುತ್ ಮಾರ್ಗಗಳ ಮೇಲೂ ಮರಗಳು ಬಿದ್ದಿರುವುದರಿಂದ ವಿದ್ಯುತ್ ಸಂಪರ್ಕ ಕಡಿತಗೊಂಡಿದ್ದರಿಂದ ಸೋಮವಾರ 4 ಗಂಟೆ ಯಿಂದಲೇ ಕೆಆರ್‌ಎಸ್‌ಗೆ ಪ್ರವಾಸಿಗರ ಪ್ರವೇಶ ನಿರ್ಬಂಧಿಸಲಾಯಿತು. ಅರಣ್ಯ ಇಲಾಖೆ ಅಧಿಕಾರಿಗಳು ಬಂದು ಮಹಜರು ಮಾಡಿ ● 9ನೇ ಪುಟಕ್ಕೆ

ಮೈಸೂರು–ಕುಶಾಲನಗರ ನಾಲ್ಕು ಪಥ ಹೆದ್ದಾರಿ ಕಾಮಗಾರಿ ತಿಂಗಳಲ್ಲಿ ಆರಂಭ

● ದಿಶಾ ಸಭೆಯಲ್ಲಿ ಸಂಸದ ಪ್ರತಾಪ್‌ಸಿಂಹ ಮಾಹಿತಿ ● ಈಗಾಗಲೇ 4130 ಕೋಟಿ ರೂ. ವೆಚ್ಚದ 93 ಕಿಮೀ ಹೆದ್ದಾರಿ ನಿರ್ಮಾಣಕ್ಕೆ ಪ್ರಧಾನಿ ನರೇಂದ್ರ ಮೋದಿ ಶಂಕುಸ್ಥಾಪನೆ

ಮಡಿಕೇರಿ, ಮೇ 30–ಮೈಸೂರು–ಕುಶಾಲನಗರ ನಾಲ್ಕು ಪಥದ ಹೆದ್ದಾರಿ ಕಾಮಗಾರಿ ತಿಂಗಳಲ್ಲಿ ಆರಂಭವಾಗಲಿದೆ ಎಂದು ಸಂಸದ ಪ್ರತಾಪ್ ಸಿಂಹ ತಿಳಿಸಿದ್ದಾರೆ.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ಅಭಿವೃದ್ಧಿ ಮತ್ತು ಉಸ್ತುವಾರಿ ಸಮಿತಿ(ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಈಗಾಗಲೇ ಮೈಸೂರು–ಕುಶಾಲನಗರ ನಾಲ್ಕು ಪಥದ ಹೆದ್ದಾರಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಚಾಲನೆ ನೀಡಿದ್ದು, 4,130 ಕೋಟಿ ರೂ. ವೆಚ್ಚದಲ್ಲಿ 93 ಕಿ.ಮೀ. ಉದ್ದದ ಹೆದ್ದಾರಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ ಎಂದರು.

ಕುಶಾಲನಗರ–ಸಂಪಾಜೆ ಮಾರ್ಗದಲ್ಲಿ ಅಪಘಾತ ಸ್ಥಳಗಳನ್ನು ಗುರುತಿಸಿ ವರದಿ ನೀಡಬೇಕು. ಇಂತಹ ಸ್ಥಳಗಳಲ್ಲಿ ಅಪಘಾತ ತಪ್ಪಿಸಲು ಅಗತ್ಯ ಕ್ರಮ ವಹಿಸುವಂತೆ ಹೆದ್ದಾರಿ ಇಲಾಖೆಯ ಎಂಜಿನಿಯರ್‌ಗಳಿಗೆ ಸಂಸದರು ಸೂಚಿಸಿದರು.

ಮದೆನಾಡು ಬಳಿಯ ಕರ್ತೋಜಿ ಗುಡ್ಡ ಮೇಲ್ಭಾಗದಲ್ಲಿ ಬಿರುಕು ಬಿಟ್ಟಿದ್ದು, ಮಳೆಗಾಲದಲ್ಲಿ ಮಣ್ಣು ರಸ್ತೆಗೆ ಕುಸಿಯುವ ಸಾಧ್ಯತೆ ಇದೆ. ಆದ್ದರಿಂದ ತಡೆಗೋಡೆ ನಿರ್ಮಿಸಬೇಕಿದೆ. ಈ ಸಂಬಂಧ ಎಂಜಿನಿಯರ್‌ಗಳು ಸೂಕ್ತ ಕ್ರಮವಹಿಸಬೇಕು. ಹೆದ್ದಾರಿಯಲ್ಲಿ ಸಾರಿಗೆ ಸಂಚಾರಕ್ಕೆ ಯಾವುದೇ ರೀತಿಯ ವ್ಯತ್ಯಯ ಉಂಟಾಗದಂತೆ ಗಮನಹರಿಸಬೇಕು ಎಂದು ಅವರು ನಿರ್ದೇಶನ ನೀಡಿದರು.

ಸದ್ಯದಲ್ಲೇ ಮುಂಗಾರು ಆರಂಭವಾಗಲಿದ್ದು,



2018 ರಿಂದ ಇತ್ತೀಚೆಗೆ ಹೆಚ್ಚಿನ ಮಳೆಯಿಂದಾಗಿ ಹಾನಿಗಳು ಸಂಭವಿಸುತ್ತಿವೆ. ಪ್ರವಾಹ ಮತ್ತಿತರ ಅನಾಹುತವನ್ನು ತಪ್ಪಿಸುವ ನಿಟ್ಟಿನಲ್ಲಿ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅವರು ತಿಳಿಸಿದರು. ಶಾಸಕ ಎ.ಎಸ್. ಪೊನ್ನಣ್ಣ ಮಾತನಾಡಿ, ಮಳೆಗಾಲದಲ್ಲಿ ಹೆದ್ದಾರಿಯಲ್ಲಿ ಅಡಚಣೆ ಉಂಟಾಗದಂತೆ ಗಮನಹರಿಸಬೇಕು. ಕರ್ತೋಜಿ ಬಳಿ ಗುಡ್ಡ ಕುಸಿತ ಹಾಗೂ ಕೊಯನಾಡು ಬಳಿ ಪ್ರವಾಹ ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಜಿಲ್ಲಾಧಿಕಾರಿ ಡಾ.ಬಿ.ಸಿ.ಸತೀಶ ಮಾತನಾಡಿ, ಮುಂಗಾರು ಪರಿಸ್ಥಿತಿ ನಿರ್ವಹಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತ ಅಗತ್ಯ ಸಿದ್ಧತೆಗಳನ್ನು ಮಾಡಿಕೊಂಡಿದೆ. ಈಗಾಗಲೇ ಜಿಲ್ಲಾ ಮಟ್ಟದ ಅಧಿಕಾರಿಗಳ ಜೊತೆ ಸಭೆ ನಡೆಸಲಾಗಿದೆ. ವಿವಿಧ ಇಲಾಖಾ ಹಂತದಲ್ಲಿ ಹಾಗೆಯೇ ತಾಲೂಕು ಮಟ್ಟದಲ್ಲಿಯೂ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಅವರು ಹೇಳಿದರು.

ವಿಧಾನಪರಿಷತ್ ಸದಸ್ಯ ಭೋಜೇಗೌಡ ಜಿಲ್ಲಾಡಳಿತ ಭವನ ಬಳಿಯ ತಡೆಗೋಡೆಯನ್ನು ಪ್ರಸ್ತಾಪಿಸಿ ಮಾತನಾಡಿ, ತಡೆಗೋಡೆ ನಿರ್ಮಾಣ ಮಾಡಿದ ಟೆಂಡರ್‌ದಾರರನ್ನು ಕಪ್ಪುಪಟ್ಟಿಗೆ ಸೇರಿಸುವಂತೆ ಸೂಚಿಸಿದರು. ಭಾಗಮಂಡಲ ಮೇಲುಸೇತುವೆ ನಿರ್ಮಾಣ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ ಸಾರ್ವಜನಿಕರ ಸಂಚಾರಕ್ಕೆ ಅವಕಾಶ ಮಾಡಿಕೊಡುವಂತೆ ಸಂಸದ ಪ್ರತಾಪ್ ಸಿಂಹ ಸೂಚನೆ ನೀಡಿದರು.

ಮಾದಾಪುರ ಬಳಿಯ ಜಂಬೂರಿನಲ್ಲಿ ಈಗಾಗಲೇ ಪ್ರಾಕೃತಿಕ ವಿಕೋಪದಡಿ ನೀಡಲಾಗಿರುವ ಬಡಾವಣೆಯಲ್ಲಿ ಕುಡಿಯುವ ನೀರಿಗೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಗಮನಹರಿಸಬೇಕಿದೆ ಎಂದು ಶಾಸಕ ಮಂಥರ್‌ಗೌಡ ಹೇಳಿದರು.

ವಿಧಾನಪರಿಷತ್ ಸದಸ್ಯರಾದ ಸುಜಾ ಕುಶಾಲಪ್ಪ ಮಾತನಾಡಿ, ಹೆದ್ದಾರಿಯಲ್ಲಿ ಟಿಂಬರ್ ಲಾರಿಗಳನ್ನು ನಿಯಂತ್ರಿಸಬೇಕು. ಮನೆ ನಿರ್ಮಾಣಕ್ಕೆ ಕೇರಳದಿಂದ ಜಲ್ಲಿ ಬರುತ್ತಿಲ್ಲ. ವಸತಿ ಯೋಜನೆಗಳಿಗೆ ಯಾವುದೇ ತೊಂದರೆಯಾಗದಂತೆ ಗಮನಹರಿಸಬೇಕು ಎಂದರು. ಶಾಸಕ ಎ.ಎಸ್.ಪೊನ್ನಣ್ಣ, ನಾಗರಹೊಳೆ ವ್ಯಾಪ್ತಿಯಲ್ಲಿ ಸದ್ಯಕ್ಕೆ ತಾತ್ಕಾಲಿಕ ಅಂಗನವಾಡಿ ಕೇಂದ್ರ ನಿರ್ಮಾಣ ಮಾಡಿ ಮಕ್ಕಳಿಗೆ ಸರಿಯಾದ ಶಿಕ್ಷಣ ಕೊಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಜಿಪಂ ಸಿಇಓ ಡಾ.ಎಸ್.ಆಕಾಶ್, ಹೆಚ್ಚುವರಿ ಜಿಲ್ಲಾಧಿಕಾರಿ ಡಾ.ನಂಜುಂಡೇಗೌಡ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಸುಂದರ ರಾಜ್, ಡಿಎಫ್‌ಓ ಶಿವರಾಮ್ ಬಾಬು, ಉಪ ವಿಭಾಗಾಧಿಕಾರಿ ಯತೀಶ್ ಉಲ್ಲಾಳ್, ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

ನಕ್ಕರೆ ಅದೇ ಸ್ವರ್ಗ

ತಂದೆ : "ಏ ಪುಟ್ಟಿ, ಈಗ ಗಂಟೆ ಎಷ್ಟಾಯ್ತು?"
ಪುಟ್ಟಿ : "ನಂಗೆ ಗೊತ್ತಿಲ್ಲಪ್ಪ"
ತಂದೆ : "ಮನೆಗೆ ಹೋಗಿ ಚಿಕ್ಕ ಮುಳ್ಳು, ದೊಡ್ಡ ಮುಳ್ಳು ಎಲ್ಲಿದೇಂತ ನೋಡ್ಕೊಂಡು ಬಾ"
ಪುಟ್ಟಿ : (ಒಳಗೆ ಹೋಗಿ ನಂತರ ಬಂದು) "ಎರಡೂ ಮುಳ್ಳು ಗಡಿಯಾರದಲ್ಲೇ ಇದೆಯಪ್ಪಾ"

ಮೈಸೂರು ಮಿತ್ರ

ಬುಧವಾರ, 31 ಮೇ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಕೃತಿ ಕೆಟ್ಟದಿದ್ದು, ಮನಸ್ಸು ಸದಾ ಕೆಡುಕು ಬಯಸುತ್ತಿದ್ದು, ಸಜ್ಜನರಂತೆ ಮುಖವಾಡ ಧರಿಸುತ್ತಿರುವವರ ಜನರ ಬಗ್ಗೆ ಎಚ್ಚರದಿಂದಿರಬೇಕು. –ದ.ರಾ. ಬೇಂದ್ರೆ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹತ್ತೋಕೆ ಮೊದಲು ಕುದುರೆ ನೋಡು, ಬಿತ್ತೋಕೆ ಮೊದಲು ಹೊಲ ನೋಡು

ನಿಮ್ಮ ಪತ್ರಗಳು

ಪಾದಚಾರಿ ರಸ್ತೆಯಲ್ಲಿರುವ ಮಣ್ಣು ತೆರವುಗೊಳಿಸಿ



ಮಾನ್ಯರೆ,

ಮೈಸೂರಿನ ಕನ್ನೇಗೌಡನಕೊಪ್ಪಲಿನ ಚಾಮರಾಜಪುರಂ ರೈಲ್ವೇ ಗೇಟ್ ಬಳಿ ಕಾಮಗಾರಿಯ ಸಲುವಾಗಿ ವರ್ಷಗಳ ಹಿಂದೆ ಅಗೆದು ತೆಗೆದ ಮಣ್ಣನ್ನೆಲ್ಲಾ ಪಾದಚಾರಿ ಮಾರ್ಗದಲ್ಲಿ ಹಾಕಿ; ಕಾಮಗಾರಿಯ ನಂತರವೂ ಅದನ್ನು ವಿಲೇವಾರಿ ಮಾಡದೆ ಹಾಗೆಯೇ ಬಿಟ್ಟಿದ್ದಾರೆ. ಇದರಿಂದ ಪಾದಚಾರಿಗಳು ರಸ್ತೆಯಲ್ಲಿಯೇ ಓಡಾಡಬೇಕಾದ ಪರಿಸ್ಥಿತಿ ಉಂಟಾಗಿ ಬಹಳ ತೊಂದರೆಯಾಗುತ್ತಿದೆ. ಹೀಗಾಗಿ, ಸಂಬಂಧಪಟ್ಟವರು ಇನ್ನಾದರೂ ಎಚ್ಚೆತ್ತು ತ್ವರಿತವಾಗಿ ಮಣ್ಣನ್ನು ತೆಗೆಸಿ, ಪಾದಚಾರಿಗಳಿಗೆ ಆಗುತ್ತಿರುವ ತೊಂದರೆಯನ್ನು ತಪ್ಪಿಸಬೇಕಿದೆ.

– ಬಿಗಣೇಶ, ಕೆ.ಜಿ.ಕೊಪ್ಪಲು, ಮೈಸೂರು.

ಕೆಎಸ್‌ಆರ್‌ಟಿಸಿ ಅಧಿಕಾರಿಗಳ ಗಮನಕ್ಕೆ

ಮಾನ್ಯರೆ,

ಮೈಸೂರಿನ ಮಾನಸೀನಗರದ ಮಾದೇಗೌಡ ಬಸ್ ನಿಲ್ದಾಣ ಹಾಗೂ ರಿಂಗ್ ರಸ್ತೆಗೆ ಸಂಬಂಧಿಸಿದಂತೆ ಮಾನಸೀನಗರ ಎಂಟ್ರೆನ್ಸ್‌ವರೆಗೆ ಹಲವು ಅನುಸೂಚಿ ಸಿಟಿ ಬಸ್‌ಗಳು ಕಾರ್ಯಾಚರಣೆಯಾಗುತ್ತಿರುವುದು ಸರಿಯಷ್ಟೆ. ಮಾನಸೀನಗರ ಲೇಔಟ್‌ನ ಪ್ರಯಾಣಿಕರಿಗೆ ಸಿಟಿ ಬಸ್‌ಗಳ ವೇಳಾಪಟ್ಟಿಯಾಗಲೀ, ಅನುಸೂಚಿಗಳ ನಂಬರ್ ಆಗಲಿ ತಿಳಿಯದೆ ತುಂಬಾ ತೊಂದರೆಯಾಗುತ್ತಿದೆ. ಮಾನಸೀನಗರ ಎಂಟ್ರೆನ್ಸ್‌ನಲ್ಲಿ ಸುಸಜ್ಜಿತ ಮಾದೇಗೌಡ ಬಸ್ ಸ್ಟಾಪ್ ಕಟ್ಟಡವಿದ್ದು, ಅನುಸೂಚಿ ನಂ. ಹಾಗೂ ಬಸ್‌ನ ವೇಳಾಪಟ್ಟಿಯನ್ನು ಅಳವಡಿಸಲು ಅನುಕೂಲಕರವಾದ ಸ್ಥಳವು ಇರುವುದರಿಂದ ಸದರಿ ನಿಲ್ದಾಣದಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ಅನುಸೂಚಿ ಸಂಖ್ಯೆ ಹಾಗೂ ವೇಳಾಪಟ್ಟಿಯನ್ನು ಪ್ರಕಟಿಸಬೇಕಾಗಿ ಈ ಮೂಲಕ ಮನವಿ.

–ಎನ್.ಆರ್. ವಿಜಯಕುಮಾರ್, ಸಾತಗಳ್ಳಿ, ಮಾನಸೀನಗರ, ಮೈಸೂರು.

ದಲಿತರಿಗೇಕೆ ಸಿಎಂ ಸ್ಥಾನ ಕೊಡುತ್ತಿಲ್ಲ...?

ಮಾನ್ಯರೆ,

ಕರ್ನಾಟಕದಲ್ಲಿ ದಲಿತ ಸಮುದಾಯದವರು ಮುಖ್ಯಮಂತ್ರಿಯಾಗಬಾರದೆ? ದಲಿತರಿಗೂ ಸಿಎಂ ಆಗುವ ಆಸೆ, ಅಭಿಮಾನವಿದೆ. ಎಲ್ಲಾ ರಾಜಕೀಯ ಪಕ್ಷಗಳು ಆಳ್ವಿಕೆ ಮಾಡಲು ಬಿಡುತ್ತಿಲ್ಲವೇಕೆ. ದಲಿತರು ಮುಖ್ಯಮಂತ್ರಿ ಆಗುವ ಎಲ್ಲಾ ಅರ್ಹತೆ, ಗುಣಗಳು ಇವೆ. ಆದರೆ ಶಾಸಕಾಂಗದಲ್ಲಿ ಒಪ್ಪಿಗೆ ಇಲ್ಲದಿರುವುದು ಹಾಗೂ ಬೆಂಬಲ ಸೂಚಿಸದಿರುವುದನ್ನು ನೋಡಿದರೆ ಜಾತಿ ವ್ಯವಸ್ಥೆ ಇನ್ನೂ ಇದೆಯಾ ಎಂಬ ಅನುಮಾನ ಬರುತ್ತದೆ. ಅದರಲ್ಲೂ ರಾಜ್ಯದಲ್ಲಿ ಅತೀ ಹೆಚ್ಚು ಆಳ್ವಿಕೆ ಮಾಡಿರುವ ಕಾಂಗ್ರೆಸ್ ಪಕ್ಷವು ಹಲವಾರು ವರ್ಷಗಳಿಂದ ದಲಿತರಿಗೆ ಸಿಎಂ ಹುದ್ದೆಯನ್ನು ನೀಡದೆ ವಂಚಿಸುತ್ತಾ ಬರುತ್ತಿದೆ. ಚುನಾವಣೆಗಳು ಬಂದಾಗ ದಲಿತರಲ್ಲಿ ವೋಟು ಕೇಳಿ, ಗೆದ್ದ ನಂತರ ಮೋಸ ಮಾಡುತ್ತಾ ಬಂದಿದೆ. ಕರ್ನಾಟಕದಲ್ಲಿ ದಲಿತರು ಸಿಎಂ ಆಗದಿರುವುದೇ ದುರದೃಷ್ಟಕರ ಸಂಗತಿ. ದಲಿತ ಸಮುದಾಯಕ್ಕೆ ಜೆಡಿಎಸ್ ಮತ್ತು ಬಿಜೆಪಿ ಪಕ್ಷಗಳಿಗೆ ಇಲ್ಲದ ವ್ಯಾಮೋಹ ಕಾಂಗ್ರೆಸ್ ಪಕ್ಷಕ್ಕೆ ಜಾಸ್ತಿ. ಹಿರಿಯರು ಹೇಳಿರುವ ಗಾದೆ ಮಾತಿನಂತೆ ಅಪ್ಪ ಹಾಕಿದ ಆಲದ ಮರ, ಅವ್ವ ಹಾಕಿದ ಬೇವಿನ ಮರ ಎಂಬ ಗಾದೆ ಮಾತಿನಂತೆ ದಲಿತರು ತಾತ, ಮುತ್ತಾತಂದಿರ ಕಾಲದಿಂದ ಕಾಂಗ್ರೆಸ್ ಎಂದು ಪೇಚಾಡಿಕೊಂಡು, ಮತ ಚಲಾಯಿಸುತ್ತಾ, ಬೆಂಬಲಿಸುತ್ತಾ ಬರುತ್ತಿದ್ದಾರೆ. ಆದರೆ ದಲಿತರಿಗೆ ಸಿಎಂ ಹುದ್ದೆಯನ್ನು ನೀಡದೆ ವಂಚಿಸುತ್ತಾ ಬರಲಾಗುತ್ತಿದೆ. ಸಿಎಂ ಹುದ್ದೆಯಿಂದ ವಂಚಿತರಾದ ಎಷ್ಟೋ ಜನರು ಇದ್ದಾರೆ. ಡಿ. ದೇವರಾಜ ಅರಸು ಮುಖ್ಯಮಂತ್ರಿ ಆಗಿದ್ದ ಅವಧಿಯಲ್ಲಿ ಮಾಜಿ ಸಚಿವರಾದ ರಾಚಯ್ಯ, ಬಸವಲಿಂಗಪ್ಪ ಅವರು ಸಿಎಂ ಹುದ್ದೆಯಿಂದ ವಂಚಿತರಾಗಿದ್ದಾರೆ. 2004ರಲ್ಲಿ ಧರಂಸಿಂಗ್ ಅವರು ಸಿಎಂ ಆಗಿದ್ದ ಅವಧಿಯಲ್ಲಿ ಮಲ್ಲಿಕಾರ್ಜುನ ಖರ್ಗೆ, ಕೆ.ಎಚ್. ಮುನಿಯಪ್ಪ ಸಿಎಂ ಹುದ್ದೆಯಿಂದ ವಂಚಿತರಾಗಿದ್ದಾರೆ. 2013 ರಲ್ಲಿ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬಂದಾಗ 5 ವರ್ಷ ಸಿದ್ದರಾಮಯ್ಯ ಸಿಎಂ ಆಗಿದ್ದರು. ಅವರ ಅವಧಿಯಲ್ಲೂ ಕೂಡ ಸಚಿವ ಸಂಪುಟ ಸಚಿವರಾದ ವಿ. ಶ್ರೀನಿವಾಸ ಪ್ರಸಾದ್, ಡಾ. ಹೆಚ್.ಸಿ. ಮಹದೇವಪ್ಪ, ಎಚ್. ಆಂಜನೇಯ, ಡಾ. ಜಿ. ಪರಮೇಶ್ವರ್ ಅವರು ಕೂಡ ಸಿಎಂ ಹುದ್ದೆಯಿಂದ ವಂಚಿತರಾಗಿದ್ದಾರೆ.

2018ರಲ್ಲಿ ಜೆಡಿಎಸ್ ಮತ್ತು ಕಾಂಗ್ರೆಸ್ ಮೈತ್ರಿ ಸರ್ಕಾರ ರಚನೆಯಾಗಿ ಅಧಿಕಾರಕ್ಕೆ ಬಂದಾಗ ಹೆಚ್.ಡಿ. ಕುಮಾರಸ್ವಾಮಿ ಅವರು ಸಿಎಂ ಆಗಿ, ಡಿಸಿಎಂ ಸ್ಥಾನವನ್ನು ಡಾ. ಜಿ. ಪರಮೇಶ್ವರ್ ಅವರಿಗೆ ನೀಡಿದ್ದರು. ಅದಾದ ನಂತರ, ಮೈತ್ರಿ ಸರ್ಕಾರ ಪತನವಾಗಿ 2019ರಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದಾಗ ಬಿ.ಎಸ್. ಯಡಿಯೂರಪ್ಪ ಸಿಎಂ ಆಗಿ, ಡಿಸಿಎಂ ಸ್ಥಾನವನ್ನು ಗೋವಿಂದ ಕಾರಜೋಳ ಅವರಿಗೆ ನೀಡಿದ್ದರು. ದಲಿತ ಸಮುದಾಯ ಉಪಮುಖ್ಯಮಂತ್ರಿ ಸ್ಥಾನವನ್ನು ಬಿಟ್ಟರೆ ಮುಖ್ಯಮಂತ್ರಿ ಸ್ಥಾನ ಅಲಂಕರಿಸಿಲ್ಲ. ಆದ್ದರಿಂದ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಬಹುಮತದಿಂದ ಅಧಿಕಾರಕ್ಕೆ ಬಂದಿದೆ. ಐದು ವರ್ಷದೊಳಗೆ ದಲಿತರನ್ನು ಸಿಎಂ ಮಾಡಿ ಸಾಮಾಜಿಕ ನ್ಯಾಯ ಎತ್ತಿ ಹಿಡಿಯಬೇಕೆಂದು ಬಯಸುತ್ತೇನೆ.

–ಹೆಚ್. ಮಣಿಕಂಠ, ಚೆಟ್ಟಿಹುಂಡಿ, ಮೈಸೂರು ತಾ.

ಉಚಿತ! ಉಚಿತ! ಉಚಿತ!

ಮಾನ್ಯರೆ,

ಚುನಾವಣೆಗೂ ಮುನ್ನ ಎಲ್ಲಾ ಭರವಸೆಗಳು ಉಚಿತ, ಉಚಿತ. ಅಧಿಕಾರಕ್ಕೆ ಬಂದೊಡನೆ ಷರತ್ತುಗಳು ಖಚಿತ, ಖಚಿತ. ಗ್ಯಾರಂಟಿಯಿಂದ ಕಾಂಗ್ರೆಸ್ ಅಧಿಕಾರಕ್ಕೆ ಬಂದದ್ದು ಖಂಡಿತಾ, ಖಂಡಿತಾ. ಬೇರೆ ಪಕ್ಷದ ನಾಯಕರು ಷರತ್ತುಗಳ ವಿರುದ್ಧ ಹೋರಾಟಗಳು ನಿಶ್ಚಿತ ನಿಶ್ಚಿತ. ವಿದ್ಯುಚ್ಛಕ್ತಿ ನೌಕರರ ಸಾರಿಗೆ ನೌಕರರ ಮೇಲೆ ಜನ ನಿತ್ಯ ಮಾತಿನ ಘರ್ಷಣೆ ಪ್ರಸ್ತುತ, ಪ್ರಸ್ತುತ. ಉಚಿತ ಭರವಸೆಗಳ ನಿರೀಕ್ಷೆಯಲ್ಲಿ ಕೆಲವು ಜನತೆಯ ಮನಸಿನ ಮನ, ಮನ.

–ಪಿ.ಸಿ.ಕಂಗಾಣಿಸೋಮು, ಕ್ಯಾತಮಾರನಹಳ್ಳಿ, ಮೈಸೂರು

ಸಂಸ್ಕೃತಿ ಚಿಂತನಾ




ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು

ಸ್ಮರಣೀಯರು

ಸ್ಮರಣೀಯರು ಎಂದರೆ ಸ್ಮರಣೆಗೆ ಅರ್ಹರು. ಯಾರನ್ನು ನೆನಪಿಸಿಕೊಂಡರೆ ನಮ್ಮ ದುಷ್ಟತ್ವವು ತೊಲಗಿ ಶಿಷ್ಟತ್ವವು ಉದಿಸಬಹುದೋ ಅಂತಹ ಮಹನೀಯ ಮಹಾನುಭಾವರು. ಅಂತಹವರನ್ನು ನೋಡಿರುತ್ತೇವೆ, ನೋಡುತ್ತಿರುತ್ತೇವೆ. ಆದರೆ ಅವರನ್ನು ಸ್ಮರಿಸದೆ ಮರೆತು ಬಿಡುತ್ತೇವೆ. ನನ್ನ ಆತ್ಮೀಯರಾದ ಶ್ರೀ ನಗರ್ಲೆ ಶಿವಕುಮಾರರು ಅವರ ಜೀವನದಲ್ಲಿ ಕಂಡ, ವಿಶೇಷ ಗುಣಗಳಿಂದ ಶೋಭಿಸಿ ಮರೆಯಾಗಿರುವ ಆರು ಜನ ಸ್ಮರಣೀಯರ ಬದುಕನ್ನೂ ಸಿದ್ಧಿ ಸಾಧನೆಗಳನ್ನೂ 'ಸ್ಮರಣೀಯರು' ಎಂಬ ಹೊತ್ತಿಗೆಯಲ್ಲಿ ಚಿತ್ರಿಸಿದ್ದಾರೆ. ಶರಣ ಸಾಹಿತ್ಯ ಪರಿಷತ್ತು ಅದನ್ನು ಪ್ರಕಟಿಸಿದೆ (2023). ಶ್ರೀ ಸಿದ್ಧೇಶ್ವರ ಸ್ವಾಮಿಗಳು, ಶ್ರೀ ಕುಮಾರ ನಿಜಗುಣ ಸ್ವಾಮಿಗಳು, ಶ್ರೀ ಹೆಚ್. ಗಂಗಾಧರನ್, ಡಾ.ಎಂ.ಮಹದೇವಪ್ಪ, ಪ್ರೊ. ಎಸ್. ನಂಜುಂಡಯ್ಯ, ಪ್ರೊ.ಮ.ಗುಂ. ರೇಣುಕಪ್ರಸನ್ನ ಎಂಬ ಆರು ಜನರ ಸ್ಮರಣೆ ಇಲ್ಲಿದೆ. ಇವರಲ್ಲಿ ಡಾ. ಎಂ. ಮಹದೇವಪ್ಪ ಅವರೊಬ್ಬರು ನನಗೆ ಅಪರಿಚಿತರು. ಮಿಕ್ಕ ಐವರನ್ನೂ ನಾನು ಕಂಡಿದ್ದೆ, ಅವರೆಲ್ಲರೂ ನನ್ನ ಗೌರವಕ್ಕೆ ಪಾತ್ರರಾಗಿದ್ದರು.

ಶ್ರೀ ಸಿದ್ಧೇಶ್ವರ ಸ್ವಾಮಿಗಳು

ಬಿಜಾಪುರ (ವಿಜಯಪುರ)ದ ಜ್ಞಾನ ಯೋಗಾಶ್ರಮದ ಶ್ರೀ ಸಿದ್ಧೇಶ್ವರ ಸ್ವಾಮಿಗಳನ್ನು ಕಾಣದ, ಅವರ ಅಮೃತಧಾರೆಯಂತಹ ಮಾತುಗಳನ್ನು ಕೇಳದ ಕನ್ನಡಿಗನಾರು? ವೈರಾಗ್ಯ ಎಂದರೇನು, ನಿಃಸ್ಪೃಹತ್ವ ಎಂದರೆ ಹೇಗಿರುತ್ತದೆ ಎಂಬ ಪ್ರಶ್ನೆಗಳಿಗೆ ಜೀವಂತ ಉತ್ತರವಾಗಿದ್ದವರು ಶ್ರೀ ಸಿದ್ಧೇಶ್ವರಸ್ವಾಮಿಗಳು. ಸರಳ ಜೀವನ ಎಂಬುದು, ಸಾಕಾರವಾಗಿ ನಮ್ಮ ಮುಂದೆ ಇರುತ್ತಿತ್ತು. ಅವರಿಲ್ಲಿ ಬದುಕಿದ್ದಾಗ, ಕೀರ್ತಿಗಾಗಿ, ಪ್ರಶಸ್ತಿಗಾಗಿ ಲಾಬಿ ಮಾಡಿ ಹೋರಾಡುವವರಿಂದ ತುಂಬಿರುವ ನಾಡಿನಲ್ಲಿ ತಾನಾಗಿ ಬಂದ ಪ್ರಶಸ್ತಿಯನ್ನೂ ಬೇಡವೆಂದ ಸಂನ್ಯಾಸಿ ಇವರು. ಇವರ ಪೂರ್ವಾಶ್ರಮದ ಹೆಸರು ಸಿದ್ಧಗೊಂಡಪ್ಪ. ಕನ್ನಡ, ಮರಾಠಿ ಮತ್ತು ಇಂಗ್ಲೀಷಿನಲ್ಲಿ ಇವರದು ಅಸ್ಖಲಿತವಾಣಿ. ಇವರು ಮೈಸೂರಿಗೆ ಬಂದು ನಕ್ಷತ್ರ ಫಾರಂನಲ್ಲಿ ತಂಗಿದ್ದಾಗ ಬೆಳಗಿನ ಜಾವದಲ್ಲಿ ಶಾಂತಿಮಯ ವಾತಾವರಣದಲ್ಲಿ ನಡೆದಾಡುವಾಗ ಅವರ ನುಡಿಗಳನ್ನು ಕೇಳಲು ನೂರಾರು ಜನರು ಬರುತ್ತಿದ್ದುದನ್ನು ನಾನು ಕಂಡಿದ್ದೇನೆ. ಜ್ಞಾನದಲ್ಲಿ, ಅಧ್ಯಾತ್ಮದಲ್ಲಿ ಈ ಕಾಲದ ಜನರು ನಿರಾಸಕ್ತರು ಎಂಬ ಲೋಕವಾದವನ್ನು ಶ್ರೀ ಸಿದ್ಧೇಶ್ವರ ಸ್ವಾಮಿಗಳು ಸುಳ್ಳು ಮಾಡಿದ್ದರು. ಯೋಗ ಶಾಸ್ತ್ರದ ಬಗೆಗೆ, ಪತಂಜಲಿಯ ಯೋಗ ಸೂತ್ರಗಳ ಬಗೆಗೆ ಅವರಿಗಿದ್ದ ಖಚಿತ ಜ್ಞಾನ ಅಸಾಧಾರಣವಾಗಿತ್ತು. ಯೋಗ ಸೂತ್ರ, ನಾರದ ಭಕ್ತಿ ಸೂತ್ರ ಮತ್ತು ಶಿವಸೂತ್ರ ಎಂಬ ಗ್ರಂಥಗಳನ್ನು ಆಂಗ್ಲ ಭಾಷೆಯಲ್ಲಿ ಅವರು ವಿವರಿಸಿರುವ ರೀತಿ ಅಮೋಘವಾಗಿದೆ. ಅದು ಕೇವಲ ಪಾಂಡಿತ್ಯದ ಪ್ರದರ್ಶನವಲ್ಲ, ಸ್ವಾನುಭವವಾಗಿ ಹಣ್ಣಾಗಿರುವುದರ ಪ್ರತ್ಯಕ್ಷದರ್ಶನ. ನಗರ್ಲೆ ಶಿವಕುಮಾರರು ತಮ್ಮ ಪುಟ್ಟ ಲೇಖನದಲ್ಲಿ ವಿಶ್ವತೋಮುಖ ವ್ಯಕ್ತಿತ್ವದ ಪರಿಚಯವನ್ನು ಚೆನ್ನಾಗಿ ಮಾಡಿಕೊಟ್ಟಿದ್ದಾರೆ.



ಶ್ರೀ ಸಿದ್ಧೇಶ್ವರಸ್ವಾಮಿ

ಶ್ರೀ ಕುಮಾರ ನಿಜಗುಣ ಸ್ವಾಮಿಗಳು

ಇವರು ಪೂರ್ವಾಶ್ರಮದಲ್ಲಿ ಲಾಯರ್ ಪಿ.ಬಸವಣ್ಣ. ಆ ಕಾಲದಲ್ಲಿ ಅವರು ಸೂಟು ಬೂಟುಗಳಿಂದ ಶೋಭಿಸುತ್ತಿದ್ದಾಗಲೂ ನಾನು ಅವರನ್ನು ಕಂಡಿದ್ದೆ. ಆ ಕಾಲದಲ್ಲೇ ಅವರಿಗೆ ಕನ್ನಡ ಸಾಹಿತ್ಯದಲ್ಲಿ, ವಿಶೇಷವಾಗಿ ಛಂದಶ್ಶಾಸ್ತ್ರದಲ್ಲಿ ಗಾಢವಾದ ಆಸಕ್ತಿ. ಭಾಮಿನೀ ಷಟ್ಪದಿಯ ಪದ್ಯಗಳನ್ನು ಕೇಳಿದ್ದೀರಿ. ಪ್ರತಿ ಭಾಮಿನಿಯ ಲಕ್ಷಣ ಗೊತ್ತೆ ಎನ್ನುತ್ತಿದ್ದರು. ಛಂಧೋಬದ್ಧವಾಗಿ ಪದ್ಯಗಳನ್ನು ರಚಿಸಬೇಕು, ದ್ವಿತೀಯಾಕ್ಷರ ಪ್ರಾಸವನ್ನು ರಕ್ಷಿಸಬೇಕು ಎಂದು ಒತ್ತಾಯಪೂರ್ವಕವಾಗಿ ಹೇಳುತ್ತಿದ್ದರು. ಈ ವಿಷಯದಲ್ಲಿ ನನ್ನ ಅಭಿಪ್ರಾಯ ಭೇದವಿತ್ತು. ಶರಣರು ಛಂದೋನು ಗುಣವಾಗಿ ಬರೆಯಲಿಲ್ಲ. ಅವರ ವಚನಗಳು ಲೋಕಪೂಜ್ಯವಲ್ಲವೆ? ಎಂದು ನಾನು ಕೇಳುತ್ತಿದ್ದೆ. ಆದರೆ ಛಂದಸ್ಸನ್ನು ಬಿಡಲು ಅವರು ಸಿದ್ಧರಾಗಿರಲಿಲ್ಲ. ಕವಿಗೋಷ್ಠಿಗಳಲ್ಲೂ ಛಂದೋಬದ್ಧವಾದ ಕವಿತೆಗೆ ಆದ್ಯತೆ ದೊರಕಬೇಕು ಎಂದು ಅವರ ಸಿದ್ಧಾಂತವಾಗಿತ್ತು.




ಶ್ರೀ ನಿಜಗುಣ ಸ್ವಾಮಿಗಳು

ಕುಮಾರ ನಿಜಗುಣ ಸ್ವಾಮಿಗಳು ಕುಮಾರ ವ್ಯಾಸ, ಲಕ್ಷ್ಮೀಶ ಮುಂತಾದ ಕವಿಗಳನ್ನು ಮೀರಿಸಿ, ನಾನಾ ಛಂದಸ್ಸುಗಳಲ್ಲಿ ಕಾವ್ಯ ರಚನೆಯನ್ನು ಮಾಡುತ್ತಿದ್ದರು. ಪ್ರಾಚೀನ ಲಾಕ್ಷಣಿಕರು ವಿವರಿಸಿದ್ದ ಛಂದಸ್ಸುಗಳ ಜೊತೆಗೆ ತಾವೇ ಹೊಸ ಛಂದಸ್ಸುಗಳನ್ನು ಆವಿಷ್ಕರಿಸಿದ್ದರು. ಅಷ್ಟಾವಧಾನ ಕಲೆಯಲ್ಲಿ ಹೆಚ್ಚು ಆದರವಿತ್ತು. ನಿಷೇಧಾಕ್ಷರಿ, ದತ್ತಪದೀ ಮುಂತಾದ ಪೃಚ್ಛಕ ಸ್ಥಾನಗಳಲ್ಲಿ ತಾವೇ ಕುಳಿತು ಭಾಗವಹಿಸುತ್ತಿದ್ದರು. ನಿಜಗುಣರ ಸಾಹಿತ್ಯದ ಪ್ರಸಾರಕ್ಕಾಗಿ ಅವರು ಸಲ್ಲಿಸಿದ ಸೇವೆ ಚಿರಸ್ಮರಣೀಯ. ನಗರ್ಲೆ ಶಿವಕುಮಾರರು ಕುಮಾರ ನಿಜಗುಣರ ಸಮಗ್ರ ಜೀವನದ ಚಿತ್ರವನ್ನು ಕಟ್ಟಿಕೊಟ್ಟಿದ್ದಾರೆ.

ಶ್ರೀ ಹೆಚ್.ಗಂಗಾಧರನ್

ಇವರು ಬಹು ಮುಖ ಪ್ರತಿಭೆಯ ನ್ಯಾಯವಾದಿ. ಅವರ ವೃತ್ತಿಗೆ ಅಗತ್ಯವಾಗಿದ್ದ ವಾಕ್‌ಪಟುತ್ವ ಅವರಲ್ಲಿತ್ತು. ರಾಜಕಾರಣಿಯಾಗಿಯೂ ಅವರು ಹೆಸರನ್ನು ಗಳಿಸಿದ್ದರು. ಭಾರತದ ಇತಿಹಾಸದಲ್ಲಿ ಒಂದು ಕಪ್ಪುಚುಕ್ಕೆಯಾಗಿರುವ ತುರ್ತು ಪರಿಸ್ಥಿತಿಯಲ್ಲಿ ಅವರು ಸೆರೆಮನೆವಾಸವನ್ನು ಅನುಭವಿಸಬೇಕಾಯಿತು. ಎರಡು ಬಾರಿ ವಿಧಾನಸಭಾ ಸದಸ್ಯರಾಗಿ ಸೇವೆಯನ್ನು ಸಲ್ಲಿಸಿದರು. ಸುತ್ತೂರು ಮಠಕ್ಕೂ ಹೆಚ್.ಗಂಗಾಧರನ್ ಅವರಿಗೂ ಅವಿನಾಭಾವ ಸಂಬಂಧ. ಅವರ ಬದುಕಿನ ವಿವಿಧ ಆಯಾಮಗಳನ್ನು, ನಗರ್ಲೆ ಶಿವಕುಮಾರರು ಸವಿಸ್ತಾರವಾಗಿ ಬರೆದಿದ್ದಾರೆ.



ಹೆಚ್.ಗಂಗಾಧರನ್

ಡಾ.ಎಂ.ಮಹದೇವಪ್ಪನವರು

ಕೃಷಿ ವಿಜ್ಞಾನಿಗಳು, ಇಂಗ್ಲಿಷ್ ಮತ್ತು ಕನ್ನಡ ಭಾಷೆಗಳಲ್ಲಿ ಇಪ್ಪತ್ತು ಕೃತಿಗಳನ್ನು ರಚಿಸಿದ್ದಾರೆ. ಅನೇಕ ಪ್ರಶಸ್ತಿಗಳ ಭಾಜನರು. ಅವರ ಅಭಿಮಾನಿಗಳು ಅವರಿಗಾಗಿ ಅಭಿನಂದನಾ ಗ್ರಂಥಗಳನ್ನು ರಚಿಸಿ ಅರ್ಪಿಸಿದ್ದಾರೆ. ಇವರು ಹೊಸ ಕನ್ನಡದ ಆದಿ ಕೃಷಿ ಕವಿ ಎಂಬ ವಿಶೇಷ ಮಾಹಿತಿಯನ್ನೂ ಕೊಟ್ಟಿದ್ದಾರೆ.



ಡಾ.ಎಂ.ಮಹದೇವಪ್ಪ

ಪ್ರೊ.ಎಸ್.ನಂಜುಂಡಯ್ಯನವರು

ಪ್ರವಚನ ಕಲಾ ಪ್ರವೀಣರೆಂದು ಪ್ರಸಿದ್ಧರಾದವರು. ಶಿವಪದ ರತ್ನಕೋಶದ ಕಾರ್ಯವು ನಡೆಯುತ್ತಿದ್ದಾಗ ಅವರ ಪಾಂಡಿತ್ಯದ ಪರಿಚಯ ನನಗಾಯಿತು. ಜ್ಞಾನವೈರಾಗ್ಯನಿಧಿ ಗೌರೀಶಂಕರ ಸ್ವಾಮಿಗಳ ಬಗೆಗೆ ಅವರು ಬರೆದಿರುವ ಅನೇಕ ಕೃತಿಯನ್ನು ನಾನೂ ಓದಿದ್ದೆ. ಅನೇಕ ಕಾಲೇಜುಗಳಲ್ಲಿ ಅವರು ಕನ್ನಡ ಬೋಧನೆಯನ್ನು ಮಾಡಿ ಶಿಷ್ಯ ಕೋಟಿಯನ್ನು ಸಂಪಾದಿಸಿದ್ದಾರೆ. ನಗರ್ಲೆ ಶಿವಕುಮಾರರು ಅವರ ಜೀವನವನ್ನು ಸಂಪೂರ್ಣವಾಗಿ ಚಿತ್ರಿಸಿದ್ದಾರೆ.



ಪ್ರೊ.ಎಸ್.ನಂಜುಂಡಯ್ಯ

ಪ್ರೊ. ಮ.ಗು.ರೇಣುಕಪ್ರಸನ್ನ

ನಮ್ಮ ಸಮಾನ ಕಾಲಿಕರಾಗಿದ್ದವರು (1944–2014). ದುರ್ದೈವದಿಂದ ಬೇಗ ಬಿಟ್ಟು ಹೋದರು. ಅವರೂ ನಾನೂ ವಿದ್ಯಾರ್ಥಿಗಳಾಗಿದ್ದಾಗ ಅನೇಕ ಚರ್ಚಾ ಸ್ಪರ್ಧೆಗಳಲ್ಲಿ ಭಾಗವಹಿಸಿದ್ದೆವು. ಅವರ ವಾದವೈಖರಿ, ಪ್ರತಿಪಾದನ ಶೈಲಿ ಶ್ರೇಷ್ಠವಾಗಿದ್ದುವು. ಅವರು ಅತ್ಯುತ್ತಮ ಬೋಧಕರೆಂದು ಖ್ಯಾತಿಯನ್ನು ಪಡೆದುದರಲ್ಲಿ ಯಾವ ಆಶ್ಚರ್ಯವೂ ಇಲ್ಲ. ನಗರ್ಲೆ ಶಿವಕುಮಾರರು ರೇಣುಕಪ್ರಸನ್ನರ ಎಲ್ಲ ವಿಶೇಷಗಳನ್ನು ವರ್ಣಿಸಿದ್ದಾರೆ. ಕಾಲೇಜಿನ ವಿದ್ಯಾರ್ಥಿನಿಯರ ಬಗೆಗೆ ರೇಣುಕಪ್ರಸನ್ನರು ಹೇಳುತ್ತಿದ್ದುದು–

ನನ್ನ ಈ ವಿದ್ಯಾರ್ಥಿನಿಯರು
ನನಗೆ ಪ್ರತ್ಯಕ್ಷ ಸರಸ್ವತಿಯರು
ನಾನು ಮಾಡುವುದಿಲ್ಲ ಈ ಪೂಜೆ ಆ ಪೂಜೆ
ಇವರಿಗಕ್ಕರ ಕಲಿಸುತ
ನಿತ್ಯ ಕಲಿವುತಲಿರುವುದೆ
ನನ್ನ ಬದುಕಿನ ಪೂಜೆ ಓಜೆ....


ಈ ದೃಷ್ಟಿ ಎಲ್ಲ ಶಿಕ್ಷಕರಲ್ಲಿದ್ದರೆ ಎಷ್ಟು ಚೆನ್ನ!

ನಗರ್ಲೆ ಶಿವಕುಮಾರರು ಸಮೃದ್ಧವಾದ, ಸಂಪನ್ನವಾದ, ಸುಂದರನಾದ ಸಾಹಿತ್ಯವನ್ನು ಸೃಷ್ಟಿಸಲು ಸಮರ್ಥರು. ಅವರು ಮಾಡಿರುವುದು ಸಾರ್ಥಕ ಕೆಲಸ. ಒಂದು ತಲೆಮಾರಿನ ಹಿರಿಯ ಚೇತನಗಳನ್ನು ಕಿರಿಯರಿಗೆ ಪರಿಚಯಿಸುವುದು ಅತ್ಯಂತ ಆವಶ್ಯಕ. ಅವರ ಬದುಕಿನ ಬೆಳಕಿನಲ್ಲಿ ಇತರರು ತಮ್ಮ ಬಾಳಿನ ದಾರಿಯನ್ನು ಕಂಡುಕೊಳ್ಳಬಹುದು.

ಲೇಖನ ಶಕ್ತಿಯನ್ನುಳ್ಳವರು ತಮಗೆ ತಿಳಿದ ವಿಶಿಷ್ಟ ವ್ಯಕ್ತಿಗಳ ಪರಿಚಾಯಕ ಲೇಖನಗಳನ್ನೋ ಗ್ರಂಥಗಳನ್ನೋ ಬರೆಯಲು ಸ್ಫೂರ್ತಿಯನ್ನು ಪಡೆಯಬಹುದು. ವಿಶೇಷವಿಲ್ಲದ ವ್ಯಕ್ತಿಯಿಲ್ಲ. ಆ ವಿಶೇಷವನ್ನು ಕಾಣುವ ಕಣ್ಣು ನೋಡುಗನಿಗೆ ಇರಬೇಕು ಅಷ್ಟೆ.

ಬೇಡಾ... ವಿನಾಶಕಾರಿ ತಂಬಾಕು ಸಹವಾಸ...

ಇಂದು (ಮೇ 31), ವಿಶ್ವ ತಂಬಾಕುರಹಿತ ದಿನ ತನ್ನಿಮಿತ್ತ ಈ ಲೇಖನ.





ಬನ್ನೂರು ಕೆ. ರಾಜು
ಸಾಹಿತಿ, ಪತ್ರಕರ್ತ
ಮೊ: 94815 33167

ಜೀವ ಹಿಂಡುವ ವಿಷವೆಂದು ಗೊತ್ತಿದ್ದರೂ, ಅಕಾಲಿಕ ಸಾವಿಗೆ ಹತ್ತಿರವಾಗುತ್ತೇವೆಂಬ ಅರಿವಿದ್ದರೂ, ತಮ್ಮನ್ನು ಆಶ್ರಯಿಸಿರುವ ಇಡೀ ಕುಟುಂಬವನ್ನೇ ಸರ್ವನಾಶ ಮಾಡುತ್ತದೆಂಬ ನಿಜ ಸಂಗತಿ ತಿಳಿದಿದ್ದರೂ ತಂಬಾಕಿನ ಮೋಹಕ್ಕೆ ಜನ ಸಿಲುಕುತ್ತಿದ್ದಾರೆ. ಇತ್ತೀಚಿನ ದಿನಗಳಲ್ಲಂತೂ ಇದು ಹೆಚ್ಚೇ ಆಗುತ್ತಿದೆ ತಂಬಾಕಿನ ವಿವಿಧ ಉತ್ಪನ್ನಗಳನ್ನು ಸೇವಿಸುವ ಕೆಟ್ಟ ಚಟಕ್ಕೆ ಸಿಕ್ಕಿ ಕೆಟ್ಟು ಹೋಗುತ್ತಿದ್ದಾರೆ. ನೋಡ ನೋಡುತ್ತಿದ್ದಂತೆಯೇ ಸತ್ತೂ ಹೋಗುತ್ತಿದ್ದಾರೆ. ತಂಬಾಕು ಒಂದು ರೀತಿ ಆಕ್ಟೋಪಸ್ ಇದ್ದಂತೆ. ಅದು ಒಮ್ಮೆ ಹಿಡಿದುಕೊಂಡರೆ ಮುಗಿಯಿತು. ಪ್ರಾಣ ಪಕ್ಷಿಯೇ ಅದರ ಆಹಾರ. ಅದನ್ನು ತೆಗೆದಲ್ಲದೆ ಬಿಡಲೊಲ್ಲದು. ಸಾಮಾನ್ಯವಾಗಿ ಇದು ಬಹುತೇಕ ಮಂದಿಗೆ ಗೊತ್ತಿರುವ ವಿಚಾರವೇ ಆಗಿದೆ. ಆದರೂ ಗೊತ್ತಿದ್ದೂ ಗೊತ್ತಿದ್ದೂ ಘೋರ ಪ್ರಪಾತಕ್ಕೆ ಬೀಳುತ್ತಾರೆ. ದುರಂತವೆಂದರೆ ಪುರುಷರಷ್ಟೇ ಅಲ್ಲದೆ ಮಹಿಳೆಯರೂ ಸಹ ತಂಬಾಕಿನ ಮೃತ್ಯು ಪಾಶಕ್ಕೆ ಬಲಿಯಾಗುತ್ತಿದ್ದಾರೆಂದರೆ ನಮ್ಮ ಸಮಾಜ ಎತ್ತ ಸಾಗುತ್ತಿದೆ ಎಂದು ನೆನೆಸಿಕೊಂಡರೆ ಸಾಕು ಭಯವಾಗುತ್ತದೆ. ಅಚ್ಚರಿ ಎಂದರೆ ಇನ್ನೂ ಮೂಗಿನ ಕೆಳಗೆ ಮೀಸೆ ಮೂಡದಿರುವ ಅಪ್ರಾಪ್ತ ಬಾಲಕರ ಬೆರಳ ಸಂಧಿಯಲ್ಲಿ ಬೀಡಿ–ಸಿಗರೇಟುಗಳು ಉರಿಯುತ್ತಿರುತ್ತವೆ.

ನಾವು ಮೋಜು ಮಸ್ತಿಗಾಗಿ ಮೊದಲು ಸಿಗರೇಟು ಸುಡುತ್ತೇವೆ; ಆಮೇಲಾಮೇಲೆ ಅದು ನಮ್ಮನ್ನು ಸುಡಲಾರಂಭಿಸುತ್ತದೆ. ಕೊನೆ ಕೊನೆಗೆ ಚೆಂದದ ಬದುಕಿಗೆ ಕೊಳ್ಳಿಯಿಡುತ್ತದೆ!

ಇದು ತೊಂಬತ್ತರ ದಶಕದಲ್ಲಿ 'ಬಲಿ' ಶೀರ್ಷಿಕೆಯಲ್ಲಿ ತಂಬಾಕಿನ ದುಷ್ಪರಿಣಾಮದ ಬಗ್ಗೆ ನಾನು ಬರೆದಿದ್ದ ಕವಿತೆಯೊಂದರ ಕೆಲವು ಸಾಲುಗಳು. ತಂಬಾಕು ಮತ್ತು ಅದರ ಅಪಾಯಕಾರಿ ಉತ್ಪನ್ನಗಳ ಹಾವಳಿ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು ಇದರ ಸೇವನೆಯಿಂದ ಮನುಷ್ಯನ ಜೀವ– ಜೀವನದ ಬಲಿ ನಡೆಯುತ್ತಲೇ ಇದೆ.

ಘಟನೆ ಒಂದು: ಆತ ಒಂದು ಖಾಸಗಿ ಕಾರ್ಖಾನೆಯ ಕಾರ್ಮಿಕ. ಕಟ್ಟು ಮಸ್ತಾದ ದೇಹ. ಸ್ಫುರದ್ರೂಪಿ, ದಣಿವರಿಯದ ದುಡಿಮೆ, ವಯಸ್ಸು ಕೇವಲ ಮೂವತ್ತು. ವೃದ್ಧ ತಂದೆ–ತಾಯಿ, ಚೆಂದುಳ್ಳಿ ಚೆಲುವೆಯಂಥಾ ಹೆಂಡತಿ. ಎರಡು ಮುತ್ತಿನಂಥ ಮಕ್ಕಳು. ಎಲ್ಲರೂ 'ಹಾಸಿಗೆ ಇದ್ದಷ್ಟು ಕಾಲು ಚಾಚಬೇಕು' ಎನ್ನುವ ಇತಿಮಿತಿಯ ಜಾಯಮಾನದವರು. ಸರಳ ಜೀವನಕ್ಕೆ ಕಿಂಚಿತ್ತೂ ಕೊರತೆ ಇಲ್ಲ. ಇಂಥಾ ಸುಖೀ ಕುಟುಂಬಕ್ಕೆ ಆತನೇ ಆಧಾರಸ್ತಂಭ. ಹಾಗೆಯೇ ಆತ ಎಲ್ಲರ ಭಾರ ಹೊತ್ತು ನಿರಾತಂಕವಾಗಿ ನಿರುಮ್ಮಳವಾಗಿ ಸಂತಸದಿಂದ ಸಾಗುತ್ತಿದ್ದ. ಬದುಕಿನ ಬಂಡಿ ದೂಡುತ್ತಿದ್ದ.

ಇಂತಹ ಸುಂದರ ಸುಖೀ ಸಂಸಾರದ ಮೇಲೆ ತಂಬಾಕಿನ ಕ್ರೂರ ದೃಷ್ಟಿ ಬಿತ್ತು. ಆತ ತಾನು ಕೆಲಸ ಮಾಡುತ್ತಿದ್ದ ಕಾರ್ಖಾನೆಯಲ್ಲಿನ ಕೆಲ ಸ್ನೇಹಿತರ ಸಹವಾಸದಿಂದ ಸಿಗರೇಟು ಸೇದುವುದನ್ನು ಕಲಿತ. ಇದು ಬರಬರುತ್ತಾ ಚಟವಾಯಿತು. ಹೊಟ್ಟೆಗೆ ಊಟ ವಿಲ್ಲದಿದ್ದರೂ ಚಿಂತೆಯಿಲ್ಲ. ಆದರೆ ಸಿಗರೇಟ್ ಮಾತ್ರ ಬೇಕೆಬೇಕು ಎಂಬಷ್ಟರ ಮಟ್ಟಿಗೆ ಅದಕ್ಕೆ ದಾಸನಾದ. ತಂಬಾಕಿನ ಕಪಿಮುಷ್ಠಿಯಲ್ಲಿ ಸಿಲುಕಿಕೊಂಡ. ಸಂಸಾರವನ್ನು ಮರೆತ. ಸರಿಯಾಗಿ ಮನೆಗೆ ಹೋಗುವುದನ್ನೇ ಬಿಟ್ಟ ಹೋದರೂ ಕೂಡ ವೃದ್ಧ ತಂದೆ ತಾಯಿ, ಹೆಂಡತಿಯೊಡನೆ ಬುದ್ಧಿ ಸ್ಥಿಮಿತವಿಲ್ಲದೆ ಜಗಳ, ವಿನಾ ಕಾರಣ ಎಲ್ಲರಿಗೂ ಬೈಯ್ಯುವುದು. ಮಕ್ಕಳೆಂಬುದನ್ನೂ ನೋಡದೆ ಕೈಗೆ ಸಿಕ್ಕಿದ್ದರಲ್ಲಿ ಬಾರಿಸುವುದು. ಹೆಂಡತಿಯ ಪಾಲಿಗಂತೂ ರಾಕ್ಷಸನೇ ಆಗಿಬಿಟ್ಟ.

"ಹೇಗಿದ್ದವನು ಹೇಗಾಗಿ ಬಿಟ್ಟ..." ಎಂದು ಊರಿಗೆ ಊರೇ ಆತನ ಬಗ್ಗೆ ಮಾತನಾಡತೊಡಗಿತು. ಮರುಗಿತು, ಅನುಕಂಪ ವ್ಯಕ್ತಪಡಿಸಿತು. ಆರಂಭದಲ್ಲಿ ಒಂದು ಎರಡು ನಾಲ್ಕೈದು ಎನ್ನುತ್ತಿದ್ದವನು ಈಗ ಪ್ಯಾಕುಗಳ ಲೆಕ್ಕದಲ್ಲಿ ಸಿಗರೇಟು ಸೇದುತ್ತಲೇ ಹೊಗೆಯೊಡನೆ ಮೈಮರೆತ. ಕಾರ್ಖಾನೆಗೆ ಕೆಲಸಕ್ಕೂ ಹೋಗದೆ ಸಂಬಳವಿಲ್ಲದೆ ಕೈನಲ್ಲಿ ಕಾಸಿಲ್ಲದೆ ಬರಿಗೈ ದಾಸನಾದ. ಚಟ ಬಿಡಲಾಗದೆ ಸಾಲಗಾರನಾದ. ಮನೆಯಲ್ಲಿದ್ದ ಪದಾರ್ಥಗಳನ್ನು ಕದ್ದೊಯ್ದು ಮಾರಿ ಸಿಗರೇಟ್ ಚಟ ತೀರಿಸಿಕೊಳ್ಳುತ್ತಿದ್ದ. ಕ್ರಮೇಣ ಕಡಿಮೆ ಕಾಸಿನ ಬೀಡಿಗೆ ಬಂದ. ದಿನ ಕಳೆದಂತೆ ಆರೋಗ್ಯ ಕೆಟ್ಟಿತು. ಸ್ಫುರದ್ರೂಪಿಯಾಗಿದ್ದವನು ಸುಡುಗಾಡಿನ ಹೆಣದಂತಾದ ಈಗ ಆತ ಬೀಡಿ, ಸಿಗರೇಟನ್ನು ಬಿಡಲು ಸಿದ್ಧನಿದ್ದ. ಆದರೆ ಅವನನ್ನು ಬಿಡಲಾರದಷ್ಟು ಬಹುದೂರಕ್ಕೆ ತಂಬಾಕಿನ ಚಟ ಎಳೆದುಕೊಂಡು ಹೋಗಿತ್ತು.

ಒಂದು ದಿನ ಬರಿದಾದ ಆತನ ಮನೆಯಿಂದ ಬಾಯಿ ಬಡಿದುಕೊಂಡು ಗೋಳಾಡುವ ಜೋರು ದನಿ ಕೇಳಿ ಬಂತು. ಆತ ಎದೆ ನೋವೆಂದು ವಿಲವಿಲನೆ ಒದ್ದಾಡುತ್ತಿದ್ದ. ಏನೂ ತೋಚದಂತಾಗಿ ವೃದ್ಧ ತಂದೆ–ತಾಯಿಗಳು ಗರಬಡಿದಂತೆ ನಿಂತಿದ್ದರು. ಹೆಂಡತಿ ಗಾಬರಿಯಿಂದ "ಬೇಗ ಬನ್ನಿ ಡಾಕ್ಟ್ರೇ...." ಎಂದು ಫೋನಿನಲ್ಲಿ ಆರ್ತನಾದ ಮಾಡುತ್ತಿದ್ದಳು. ಮಕ್ಕಳು ಭಯದಿಂದ ಅಳುತ್ತಿದ್ದವು. ಡಾಕ್ಟ್ರೇನೋ ಬಂದರು. ಆದರೇನು ಪ್ರಯೋಜನ? ಆಗಲೇ ಆತ ಸತ್ತು ಹೋಗಿದ್ದ. ಮನೆಯವರೆಲ್ಲರ ದುಃಖದ ಕಟ್ಟೆ ಒಡೆದಿತ್ತು. "ಸಿಗರೇಟ್ ಬಿಟ್ಬುಬಿಡಿ ಅಂತ ನಾವು ಎಷ್ಟು ಹೇಳಿದರೂ ನೀವು ಕೇಳದೆ, ನಿಮ್ಮನ್ನು ಬೇಕಾದರೂ ಬಿಟ್ಟೇನು ಆದ್ರೆ ಸಿಗರೇಟನ್ನು ಮಾತ್ರ ಬಿಡಲ್ಲ ಅಂತಿದ್ದ ನೀವು ಕೊನೆಗೂ ನಮ್ಮನ್ನೆಲ್ಲಾ ಬಿಟ್ಟು ಹೊರಟು ಬಿಟ್ರಲ್ಲಾ..." ಎಂದು ಒಮ್ಮೆಲೇ ಎಲ್ಲರೂ ಗಂಟಲು ಬಿರಿಯುವಂತೆ ರೋದಿಸಿದರು. ಆದರೆ ಅದು ಬರೀ ರಣ್ಯರೋದನವಾಗಿತ್ತು.

ಘಟನೆ ಎರಡು: ರಾಮು ಎಂಬ ಎಂಟ್ಹತ್ತು ವರ್ಷದ ಹುಡುಗ. ರೈತ ಕುಟುಂಬದ ಅವಿದ್ಯಾವಂತ ತಂದೆ– ತಾಯಿಗೆ ಒಬ್ಬನೇ ಮಗ. ದುರಂತವೆಂದರೆ ಈ ಎಳೆ ವಯಸ್ಸಿನಲ್ಲೇ ಬೀಡಿ ಸೇದುವುದನ್ನು ಅಭ್ಯಾಸ ಮಾಡಿಕೊಂಡಿದ್ದ. ಈ ದುರಭ್ಯಾಸಕ್ಕೆ ಕಾರಣ ಅವನ ತಂದೆಯೇ ಆಗಿದ್ದ. ಬೀಡಿಯನ್ನು ತಿನ್ನುವ ಆಹಾರದಂತೆಯೇ ತನ್ನ ಬದುಕಿನ ಅವಿಭಾಜ್ಯ ಅಂಗ ಮಾಡಿಕೊಂಡಿದ್ದ. ಅವನು ಪುಟ್ಟ ಬಾಲಕ ಎಂಬುದನ್ನು ಅರಿಯದೆ ಮಗನ ಮುಂದೆಯೇ ಬೀಡಿ ಸೇದುತ್ತಿದ್ದ. ಇದನ್ನು ಸದಾ ಕುತೂಹಲದ ಕಂಗಳಿಂದ ರಾಮು ನೋಡುತ್ತಿದ್ದ. ಒಮ್ಮೆ ಅವನಿಗೆ ಕುತೂಹಲ ತಡೆಯಲಾಗಲಿಲ್ಲ. ತಂದೆ ಸೇದಿ ಬಿಸಾಡಿ ಹೋಗಿದ್ದ ಮೋಟು ಬೀಡಿಯನ್ನೆತ್ತಿಕೊಂಡು ಯಾರಿಗೂ ಕಾಣದಂತೆ ಬಾಯಿಗಿಟ್ಟುಕೊಂಡು ತಂದೆಯಂತೆಯೇ ಜೋರಾಗಿ ದಂ ಎಳೆದ. ಒಂದು ರೀತಿ ಮತ್ತು ಬಂದಂತೆ ಖುಷಿಯ ಆಹ್ಲಾದ ಸಿಕ್ಕಿತು. ಅವತ್ತಿನಿಂದ ರಾಮು, ತಂದೆಯ ಮೋಟು ಬೀಡಿಗಳ ಜೊತೆಗೆ ಇತರರು ಸೇದಿ ಬಿಸಾಡಿದ್ದ ಮೋಟು ಬೀಡಿಗಳನ್ನು ಬೀದಿಯಲ್ಲಿ ಆಯ್ದುಕೊಂಡು ಸೇದತೊಡಗಿದ. ದಿನಗಳೆದಂತೆ ಮೋಟು ಬೀಡಿಗಳನ್ನು ಬಿಟ್ಟು ನೇರವಾಗಿ ತಂದೆಯ ಜೇಬಿನಲ್ಲಿದ್ದ ಬೀಡಿಯ ಕಟ್ಟನ್ನೇ ಕದ್ದು ಸೇದತೊಡಗಿದ.

ಹೀಗೆ ಬೀಡಿಯ ಚಟಕ್ಕೆ ಬಿದ್ದ ಮಗನನ್ನು ಸರಿದಾರಿಗೆ ತರಲು ತಂದೆ ತಾಯಿಗಳಿಬ್ಬರೂ ಬೇಕಾದಷ್ಟು ಸರ್ಕಸ್ ಮಾಡಿದರು. ಆದರೆ ಪ್ರಯೋಜನವಾಗಲಿಲ್ಲ. ಹಿಂದೆ ಬರಲಾಗದಷ್ಟು ದೂರ ಮಗ ರಾಮು ದುರ್ಮಾರ್ಗದಲ್ಲಿ ಹೊರಟು ಬಿಟ್ಟಿದ್ದ. 'ದರಿದ್ರಕ್ಕೆ ಅಧಿಕ ಮಾಸ' ಎಂಬ ಹಾಗೆ ಇದೇ ಸಮಯಕ್ಕೆ ಸರಿಯಾಗಿ ರಾಮುವಿನ ತಂದೆಗೆ ಬೀಡಿಯ ಚಟದಿಂದಾಗಿ ಶ್ವಾಸಕೋಶದ ಕ್ಯಾನ್ಸರ್ ಬಂತು. ಬಂದಷ್ಟೇ ವೇಗದಲ್ಲಿ ಅದು, ರಾಮುವಿನ ತಂದೆಯನ್ನು ಬಲಿ ತೆಗೆದುಕೊಂಡು ಸಾವಿನ ಮನೆಗೆ ಕರೆದುಕೊಂಡು ಹೋಯಿತು. ಬೀಡಿಯಿಂದಲೇ ತಂದೆ ಸತ್ತದ್ದೆಂದು ತಿಳಿದಿದ್ದರೂ ಅದನ್ನು ಇವನು ಬಿಡಲಾರದೆ ಹೋದ. ಕೊನೆಗೆ ರಾಮು ರಕ್ತದ ಕ್ಯಾನ್ಸರ್‌ಗೆ ತುತ್ತಾದ. ಮಗನನ್ನು ಉಳಿಸಿಕೊಳ್ಳಲು ತಾಯಿ ಎಷ್ಟು ಹೆಣಗಾಡಿದರೂ, ಪ್ರಯತ್ನ ವ್ಯರ್ಥವಾಯಿತು. ಒಂದೇ ವರ್ಷದಲ್ಲಿ ಅವನು ನರಳಿ ನರಳಿ ಸತ್ತ. ಆ ತಾಯಿ ದುಃಖದಲ್ಲಿ ಕೊರಗಿ ಕೊರಗಿ ಕೊನೆಗೊಂದು ದಿನ ಅವಳೂ ಕೂಡ ಸಾವಿಗೀಡಾದಳು!

ಕರುಳು ಹಿಂಡುವಂತಹ ಇವೆರಡು ಘಟನೆಗಳು ಬೀಡಿ, ಸಿಗರೇಟಿನ ಅರ್ಥಾತ್ ತಂಬಾಕಿನ ದುಷ್ಪರಿಣಾಮವನ್ನು ಸಾರಿ ಹೇಳುತ್ತವೆ. ಅಷ್ಟೇ ಅಲ್ಲ ತಂಬಾಕಿನಲ್ಲಿರುವ ಜೀವ ತೆಗೆಯುವ ಅಪಾಯಕಾರಿ ವಸ್ತುಗಳ ಬಗ್ಗೆ ತಿಳಿಸಿಕೊಡುತ್ತವೆ. ಇಂಥಾ ನೂರಾರು, ಸಹಸ್ರಾರು ಘಟನೆಗಳು ಇವತ್ತು ಒಂದಲ್ಲಾ ಒಂದು ರೀತಿಯಲ್ಲಿ ಜಗತ್ತಿನಲ್ಲಿ ಪ್ರತಿನಿತ್ಯ ಜರುಗುತ್ತಿವೆ. ಅಷ್ಟರ ಮಟ್ಟಿಗೆ ತಂಬಾಕು ಎಂಬ ಹೆಮ್ಮಾರಿ ವಿಶ್ವವ್ಯಾಪಿಯಾಗಿದ್ದು ಆರೋಗ್ಯವಂತ ನಾಗರಿಕ ಸಮಾಜಕ್ಕೆ ಕಂಟಕಪ್ರಾಯವಾಗಿದೆ. 'ನಿಕೋಟಿನ್' ಸೇರಿದಂತೆ ಪಾಲಿನೊಕ್ಲಿಯರ್ ಅರೋಮ್ಯಾಟಿಕ್, ಹೈಡ್ರೋಕಾರ್ಬನ್ಸ್, ಬೀಟಾ ನ್ಯಾಫ್ಥಲಮೀನ್, ಬೆಂಬೋಫೈರಿನ್, ನಿಕೆಲ್, ಅರ್ಸೆನಿಕ್ ಲೋಹಗಳು ಫೀನೊಲ್, ಕ್ರೆಸೊಲ್, ಕ್ಯಾಟಿಕೋಲ್, ಇಂಡೋಲ್ ಹಾಗೂ ಕಾರ್ಬಜಾಲ್ ಮುಂತಾದ 300ಕ್ಕೂ ಅಧಿಕ ಕ್ಯಾನ್ಸರ್ ಉಂಟು ಮಾಡುವ ವಿಷಕಾರಿ ದ್ರವ್ಯಗಳನ್ನು ತನ್ನೊಡಲಲ್ಲಿ ಒಳಗೊಂಡಿರುವ ತಂಬಾಕು ಮನುಕುಲವನ್ನು ನಲುಗಿಸುತ್ತಿದೆ. ಸಿಗರೇಟ್, ಬೀಡಿ, ಚುಟ್ಟಾ, ಗುಟ್ಕಾ, ಹುಕ್ಕಾ ಮುಂತಾದ ತಂಬಾಕಿನ ಉತ್ಪನ್ನಗಳನ್ನು ನಾವು ಸೇದುವ ಅಥವಾ ಸೇವಿಸುವ ಮೂಲಕ ನಮಗರಿವಿಲ್ಲದಂತೆ ನಾವೇ ಹಚ್ಚಿ ಸುಟ್ಟ ಬೆಂಕಿಯ ಹೊಗೆಯಲ್ಲಿ ನಿಕೋಟಿನ್ ಒಳಗೊಂಡಂತೆ ನಾಲ್ಕು ಸಾವಿರಕ್ಕೂ ಹೆಚ್ಚು ಅಪಾಯಕಾರಿ ಪದಾರ್ಥಗಳನ್ನು ನಮ್ಮ ಶ್ವಾಸನಾಳಗಳು ಹೀರಿ ದೇಹದೊಳಕ್ಕೆ ಬಿಟ್ಟುಕೊಳ್ಳುತ್ತವೆ. ಇವೆಲ್ಲವೂ ಕ್ಯಾನ್ಸರ್ ಬರಿಸುವ, ಹೃದಯಾಘಾತ ಉಂಟು ಮಾಡುವ ತನ್ಮೂಲಕ ಜೀವ ತೆಗೆಯುವ ವಿಷಕಾರಕ ವಿಚ್ಛಿದ್ರ ಶಕ್ತಿಗಳಾಗಿವೆ ಆದ್ದರಿಂದ ತಂಬಾಕು ಸೇವನೆ ನಾವೇ ಸಾವಿಗೆ ಆಹ್ವಾನ ಕೊಟ್ಟಂತೆ.

ನಮ್ಮ ಭಾರತದ ಬಗ್ಗೆ ಹೇಳುವುದಾದರೆ ಪ್ರತಿವರ್ಷ ತಂಬಾಕು ಸೇವನೆಯಿಂದ 10 ಲಕ್ಷಕ್ಕೂ ಹೆಚ್ಚು ಮಂದಿ ಸಾವಿಗೀಡಾಗುತ್ತಿದ್ದಾರೆ. ಪ್ರತಿನಿತ್ಯ 2200ಕ್ಕೂ ಅಧಿಕ ಭಾರತೀಯರು ಇದರಿಂದ ಸಾಯುತ್ತಿದ್ದಾರೆ. ಪ್ರತಿ ನೂರು ಕ್ಯಾನ್ಸರ್ ಪ್ರಕರಣಗಳಲ್ಲಿ 40 ತಂಬಾಕು ಸೇವನೆಗೆ ಸಂಬಂಧಿಸಿದ್ದಾಗಿರುತ್ತದೆ. ಬಾಯಿ ಕ್ಯಾನ್ಸರ್‌ಗಂತೂ ಶೇಕಡ 95 ತಂಬಾಕು ಸೇವನೆಯೇ ಕಾರಣವಾಗಿದೆ. ಈಗ ಹೇಳಿ ಇಂತಹ ತಂಬಾಕು ಸೇವನೆ ನಮಗೆ ಬೇಕೆ? ಹಾಗಾಗಿ ಇಂಥಾ ಅಪಾಯಕಾರಿ ದುಷ್ಟ ತಂಬಾಕನ್ನು ಹಿಮ್ಮೆಟ್ಟಿಸಲು ಜಾಗೃತಿಯ ಅಸ್ತ್ರವಾಗಿ ಇಡೀ ಜಗತ್ತು ಮೇ 31ನ್ನು ವಿಶ್ವ ತಂಬಾಕು ರಹಿತ ದಿನವಾಗಿ ಆಚರಿಸುತ್ತಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಚಾಮುಂಡೇಶ್ವರಿ ಕ್ಷೇತ್ರದ ಅಭಿವೃದ್ಧಿ, ಜನತೆಯ ಶ್ರೇಯೋಭಿವೃದ್ಧಿಗೆ ಎಂದೆಂದಿಗೂ ಶ್ರಮಿಸುತ್ತೇನೆ; ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ

ಕ್ಷೇತ್ರದ ಮತದಾರರಿಗೆ ಧನ್ಯತಾ ಸಮಾಗಮ ಬೃಹತ್ ಸಮಾರಂಭ



ಮೈಸೂರಿನ ಕುವೆಂಪುನಗರದ ಶ್ರೀಮತಿ ಜಯಮ್ಮ ಗೋವಿಂದೇಗೌಡ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಧನ್ಯತಾ ಸಮಾಗಮ ಸಮಾರಂಭದಲ್ಲಿ ಶಾಸಕರಾದ ಜಿ.ಟಿ.ದೇವೇಗೌಡ ಹಾಗೂ ಜಿ.ಡಿ.ಹರೀಶ್‌ಗೌಡ ಅವರನ್ನು ಬೃಹತ್ ಹಾರದೊಂದಿಗೆ ಅಭಿನಂದಿಸಲಾಯಿತು.

ಮೈಸೂರು,ಮೇ 30(ಪಿಎಂ)– ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದಲ್ಲಿ ಗ್ರಾಮ ಪಂಚಾಯಿತಿ ಮಾಡುವ ಕೆಲಸವನ್ನೂ ನಾನೇ ಜವಾಬ್ದಾರಿ ತೆಗೆದುಕೊಂಡು ಮಾಡಿದ್ದೇನೆ. ಕ್ಷೇತ್ರದ ಅಭಿವೃದ್ಧಿ ಹಾಗೂ ಜನತೆ ಶ್ರೇಯೋಭಿವೃದ್ಧಿಗೆ ಪೂರಕವಾಗಿ ಕೆಲಸ ಮಾಡಿದ್ದು, ಅದನ್ನು ಮುಂದುವರೆಸುತ್ತೇನೆ. ತಾಯಿ ಚಾಮುಂಡೇಶ್ವರಿಗೆ ನನ್ನ ಗೆಲುವನ್ನು ಅರ್ಪಿಸುತ್ತೇನೆ ಎಂದು ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಹೇಳಿದರು.

ಮೈಸೂರಿನ ಕುವೆಂಪುನಗರದ ಶ್ರೀಮತಿ ಜಯಮ್ಮ ಗೋವಿಂದೇಗೌಡ ಕಲ್ಯಾಣ ಮಂಟಪದಲ್ಲಿ ಈ ಬಾರಿಯ ಚುನಾವಣೆಯಲ್ಲಿ ಚಾಮುಂಡೇಶ್ವರಿ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾದ ಪ್ರಯುಕ್ತ ಕ್ಷೇತ್ರದ ಮತದಾರರಿಗೆ ಮಂಗಳವಾರ ಹಮ್ಮಿಕೊಂಡಿದ್ದ ಧನ್ಯತಾ ಸಮಾಗಮ ಬೃಹತ್ ಸಮಾರಂಭದಲ್ಲಿ ಅವರು ಮಾತನಾಡಿದರು.

ಚಾಮುಂಡೇಶ್ವರಿ ಕ್ಷೇತ್ರದಲ್ಲಿ ವಾಸ ಮಾಡುತ್ತಿರುವ ನಮ್ಮ ನಿಮ್ಮೆಲ್ಲರಿಗೂ ಚಾಮುಂಡೇಶ್ವರಿ ತಾಯಿ ಸಂಪೂರ್ಣ ಆಶೀರ್ವಾದವಿದೆ. ಈ ಬಾರಿಯ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ನಾನು ಹೋಗುತ್ತೇನೆ ಎಂದೇ ಹೇಳಲಾಗಿತ್ತು. ಹಾಗಾಗಿ ಸಿದ್ದರಾಮಯ್ಯ ಮತ್ತು ಜಿ.ಟಿ.ದೇವೇಗೌಡ ಇಬ್ಬರು ಈ ಬಾರಿ ಒಟ್ಟಾಗಿ ಹೋಗುತ್ತಾರೆ ಎಂದು ಜನತೆ ಬಯಸಿದ್ದರು. ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್, ಸುರ್ಜೇವಾಲ ಅವರೂ ಮಾತನಾಡಿದ್ದರು. ಜಿ.ಡಿ.ಹರೀಶ್‌ಗೌಡರನ್ನು ಎಂಪಿ ಮಾಡೋಣ, ನೀವು ಕಾಂಗ್ರೆಸ್ ಅಭ್ಯರ್ಥಿಯಾಗಿ ಚಾಮುಂಡೇಶ್ವರಿಯಲ್ಲಿ ಸ್ಪರ್ಧಿಸಿ, ಮಂತ್ರಿಯಾಗುವ ಅವಕಾಶ ನಿಮಗಿದೆ ಎಂದು ಅವರು ಹೇಳಿದ್ದರು.

ನನ್ನ ಪುತ್ರ ಜಿ.ಡಿ.ಹರೀಶ್‌ಗೌಡ ಹುಣಸೂರಿನಲ್ಲಿ 10 ವರ್ಷಗಳ ಹಿಂದೆಯೇ ಶಾಸಕನಾಗಬೇಕಿತ್ತು. ಯಾರು ತಪ್ಪಿಸಿದರು ಎಂಬುದು ನಿಮಗೆ ಚೆನ್ನಾಗಿಯೇ ಗೊತ್ತಿದೆ. ಜಿ.ಡಿ.ಹರೀಶ್‌ಗೌಡ ಚಾಮುಂಡೇಶ್ವರಿಯಲ್ಲಿ 2013ರಿಂದಲೂ ಎಲ್ಲಾ ಯುವಕರೊಂದಿಗೆ ಉತ್ತಮ ಸಂಪರ್ಕ ಹೊಂದಿದ್ದು, ಕ್ಷೇತ್ರದಲ್ಲಿ ದುಡಿದಿದ್ದಾನೆ. ಅವನಿಗೆ ಈ ಸಂದರ್ಭದಲ್ಲಿ ಶಾಸಕನಾಗಿ ಮಾಡದೇ ಇದ್ದರೆ ಜನತೆ ಒಪ್ಪಲ್ಲ. ಯುವಕರ ಶಕ್ತಿಯಾಗಿ ಎರಡೂ ಕ್ಷೇತ್ರಗಳಲ್ಲಿ ಹರೀಶ್‌ಗೌಡ ಕೆಲಸ ಮಾಡಲಿದ್ದಾನೆ ಎಂದರು.

ಒಂದು ರೂಪಾಯಿ ಖರ್ಚು ಇಲ್ಲದೇ ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಹಾಗೂ ಅಪೆಕ್ಸ್ ಬ್ಯಾಂಕ್ ಉಪಾಧ್ಯಕ್ಷನಾಗಿದ್ದಾನೆ. ಉತ್ತಮ ವ್ಯಕ್ತಿತ್ವ ಬೆಳೆಸಿಕೊಂಡಿರುವ ಜಿ.ಡಿ.ಹರೀಶ್‌ಗೌಡನನ್ನು ಶಾಸಕನಾಗಲು ಅವಕಾಶ ನೀಡದೇ ಇದ್ದರೆ ಸರಿಯಲ್ಲ ಎಂದು ಯೋಚನೆ ಮಾಡಿ ಹುಣಸೂರಲ್ಲಿ ಕಣಕ್ಕಿಳಿಸಿದೆ ಎಂದು ಹೇಳಿದರು.

> “ಧನ್ಯತಾ ಸಮಾಗಮ ಸಮಾರಂಭ ನಡೆಯಲು ಚಾಮುಂಡೇಶ್ವರಿ ಕ್ಷೇತ್ರದ ನಮ್ಮ ಕಾರ್ಯಕರ್ತರು ಹಾಗೂ ಮತದಾರರು ಕಾರಣ. ಕ್ಷೇತ್ರದಲ್ಲಿ ಕಳೆದ ಮೂರು ಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿಯಾಗಿದ್ದ ಜಿ.ಟಿ.ದೇವೇಗೌಡರನ್ನು ಆಶೀರ್ವದಿಸಿದ್ದೀರಿ. ಇಡೀ ರಾಜ್ಯದಲ್ಲಿ ಕಾಂಗ್ರೆಸ್ ಪರವಾದ ಅಲೆ ಇದ್ದರೂ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಜೆಡಿಎಸ್‌ಗೆ ಹೆಚ್ಚಿನ ಬೆಂಬಲ ಸಿಕ್ಕಿದೆ. ಮೈತ್ರಿ ಸರ್ಕಾರದಲ್ಲಿ ಕೇವಲ ಒಂದು ವರ್ಷದ ಅವಧಿಗೆ ಶಾಸಕರು, ಸಚಿವರಾಗಿ ಜಿ.ಟಿ.ದೇವೇಗೌಡರು ಮಾಡಿರುವ ಕೆಲಸವನ್ನು ಬೇರೆ ಯಾವುದೇ ಶಾಸಕರು ಮಾಡಲು ಸಾಧ್ಯವಾಗಿಲ್ಲ. **–ಜಿ.ಡಿ.ಹರೀಶ್‌ಗೌಡ, ಹುಣಸೂರು ಕ್ಷೇತ್ರದ ಶಾಸಕರು.**


ಯಾವತ್ತೂ ತೆಗೆಯುತ್ತೇವೆ ಎನ್ನುವುದಲ್ಲ, ಉಳಿದುಕೊಳ್ಳುವುದನ್ನು ನೋಡಬೇಕು

ಪ್ರಧಾನಿ ಮೋದಿ, ಅಮಿತ್ ಶಾ ಬಂದು ಬಿಜೆಪಿ ಮುಳುಗಿಸಿದರು; ಜೆಡಿಎಸ್‌ಗೂ ಹಿನ್ನಡೆ ತಂದರು

ಮೈಸೂರು,ಮೇ 30(ಪಿಎಂ)– ಕಾಂಗ್ರೆಸ್ ಅನ್ನು ದೇಶದಲ್ಲೇ ಸರ್ವನಾಶ ಮಾಡುತ್ತೇವೆ ಎಂದು ಹೊರಟರು. ಆದರೆ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ನಾಯಕತ್ವದಲ್ಲಿ ಕರ್ನಾಟಕದಿಂದ ಕಾಂಗ್ರೆಸ್ ಮತ್ತೆ ಉದಯವಾಗಿದೆ. ಯಾವತ್ತೂ ತೆಗೆಯುವುದಲ್ಲ. ಉಳಿದುಕೊಳ್ಳುವುದನ್ನು ನೋಡಬೇಕು ಎಂದು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಅಭಿಪ್ರಾಯಪಟ್ಟರು.

ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಜೆಡಿಎಸ್‌ನವರು ನಮ್ಮ ಜೊತೆಗೆ ಸೇರಲ್ಲ ಎಂದು ಬಿಜೆಪಿಯವರು ತಮ್ಮ ಅಭ್ಯರ್ಥಿಗಳನ್ನು ಕಣಕ್ಕಿಳಿಸಿ ಕೇವಲ 10ರಿಂದ 20 ಸಾವಿರ ಓಟು ಪಡೆಯುತ್ತಿದ್ದರು. ಆದರೆ ಇಂದು 50 ಸಾವಿರ ಓಟು ಪಡೆದಿದ್ದಾರೆ. ಆದರೂ ಇಡೀ ಮೈಸೂರು ಜಿಲ್ಲೆಯ 11 ಕ್ಷೇತ್ರಗಳಲ್ಲಿ ಕೇವಲ ಒಂದು ಕ್ಷೇತ್ರಕ್ಕೆ ಅವರು ತೃಪ್ತಿಪಟ್ಟುಕೊಂಡಿದ್ದಾರೆ ಎಂದರು. ಪ್ರಧಾನಿ ಮೋದಿ, ಗೃಹ ಮಂತ್ರಿ ಅಮಿತ್ ಶಾ ಬಂದರೂ ಪ್ರಯೋಜನವಾಗಲಿಲ್ಲ. ಬಂದು ತಮ್ಮ ಪಕ್ಷ ಮುಳುಗಿಸಿದ್ದಲ್ಲದೇ ಜೆಡಿಎಸ್‌ಗೂ ಹಿನ್ನಡೆ ಉಂಟು ಮಾಡಿದರು. ಬಿಜೆಪಿ ಕಟ್ಟಿದ ಯಡಿಯೂರಪ್ಪ ಅವರೇ ಈಗ ಮೂಲೆಗುಂಪು. ಈಗ ಬಿಜೆಪಿ ಕಟ್ಟಲು ಯಾರಿದ್ದಾರೆ. ಅಲ್ಪಸಂಖ್ಯಾತರನ್ನು ನಿರಂತರವಾಗಿ ಗುರಿ ಮಾಡಿದರು. ಹೆಚ್.ಡಿ.ದೇವೇಗೌಡರು ಅಲ್ಪಸಂಖ್ಯಾತರಿಗೆ ನೀಡಿದ್ದ ಶೇ.4ರಷ್ಟು ಮೀಸಲಾತಿಯನ್ನು ರದ್ದುಪಡಿಸಿದರು. ಆದರೆ ಕಾಂಗ್ರೆಸ್‌ನವರನ್ನು ಈ ಸಮುದಾಯ ಅಪ್ಪಿಕೊಂಡು ಮತ ನೀಡಿತು ಎಂದು ಹೇಳಿದರು.

ಪ್ರಧಾನಿ ಮೋದಿ ಬುದ್ಧಿವಂತರು. ಸಾಕಷ್ಟು ಒಳ್ಳೆಯ ಕೆಲಸ ಕಾರ್ಯ ಮಾಡಿದ್ದಾರೆ. ಆ ಬಗ್ಗೆ ಅಲ್ಲಗಳೆಯಲು ಸಾಧ್ಯವಿಲ್ಲ. ರಾಮಮಂದಿರ ನಿರ್ಮಾಣ, ನೂತನ ಸಂಸತ್ ಭವನ ನಿರ್ಮಾಣ ಸೇರಿದಂತೆ ಒಳ್ಳೆಯ ಕೆಲಸಗಳು ಆಗಿವೆ. ಆದರೆ ಈ ಹಿಂದೆ ಕುಡಿಯುವ ನೀರಿನ ಯೋಜನೆಗೆ ಕೇಂದ್ರ ಸರ್ಕಾರ ಶೇ.90ರಷ್ಟು ಅನುದಾನ ಕೊಡುತ್ತಿತ್ತು. ಆದರೆ ಈಗ ಅದನ್ನು ಕಡಿತಗೊಳಿಸಲಾಗಿದೆ. ಇಂದಿರಾ ಗಾಂಧಿ 25 ಕಾರ್ಯಕ್ರಮ ಮಾಡಿದ್ದರು. ಇವರು ಈ ಎಲ್ಲದಕ್ಕೂ ಹೆಸರು ಬದಲಿಸಿದರು ಎಂದರು.



ಮೈಸೂರು ತಾಲೂಕು ಹುಯಿಲಾಳು ಗ್ರಾಮದ ಶ್ರೀ ಮನೆ ಮಂಚಮ್ಮ ದೇವಸ್ಥಾನದ ಸೇವಾ ಟ್ರಸ್ಟ್ ವತಿಯಿಂದ ಮಾಜಿ ಸಚಿವ, ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಅವರನ್ನು ಟ್ರಸ್ಟ್ ಅಧ್ಯಕ್ಷ ಹುಯಿಲಾಳು ರಾಮಸ್ವಾಮಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಹುಣಸೂರು ಕ್ಷೇತ್ರದ ಶಾಸಕ ಜಿ.ಡಿ.ಹರೀಶ್‌ಗೌಡ ಇನ್ನಿತರರಿದ್ದಾರೆ.

ಜಿಪಂ, ತಾಪಂ ಚುನಾವಣೆಗೆ ಕಾರ್ಯಕರ್ತರು ಸಜ್ಜಾಗಿ

ಚುನಾವಣೆಗೆ ಹಣ ಖರ್ಚು ಮಾಡುವ ಬದಲು ಜನ ಸೇವೆ ಮಾಡಿ, ಅವರ ಮನ ಗೆಲ್ಲಿ; ಗ್ರಾಪಂ ಚುನಾವಣೆಯಲ್ಲಿ ಹೊಂದಾಣಿಕೆ ಮಾಡಿಕೊಂಡು ಅಧಿಕಾರ ನಡೆಸಿ: ಜಿಟಿಡಿ

ಮೈಸೂರು,ಮೇ 30(ಪಿಎಂ)– ಜಿಪಂ ಮತ್ತು ತಾಪಂ ಚುನಾವಣೆ ಶೀಘ್ರದಲ್ಲಿ ಘೋಷಣೆಯಾಗಲಿದ್ದು, ನಮ್ಮ ಕಾರ್ಯಕರ್ತರು ಸಜ್ಜಾಗಬೇಕೆಂದು ಜಿ.ಟಿ.ದೇವೇಗೌಡ ಕರೆ ನೀಡಿದರು.

ಈ ಚುನಾವಣೆಯಲ್ಲಿ ಯಾವುದೇ ಪಕ್ಷದ ರಾಜ್ಯ ಇಲ್ಲವೇ ರಾಷ್ಟ್ರ ಮಟ್ಟದ ನಾಯಕರ ಪ್ರಭಾವದಲ್ಲಿ ಮತದಾರರು ಮತದಾನ ಮಾಡುವುದಿಲ್ಲ. ಹಾಗಾಗಿ ಎಲ್ಲಾ ಸಮುದಾಯದವರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು. ಈ ಚುನಾವಣೆಗೆ ಹಣ ಸುರಿಯುವ ಪ್ರವೃತ್ತಿ ಬೇಡ. ಜನತೆ ಸಮಸ್ಯೆಗೆ ಸ್ಪಂದಿಸಿ, ಗೆಲುವು ಸಾಧಿಸಲು ಆದ್ಯತೆ ನೀಡಿ, ಜನತೆ ವಿಶ್ವಾಸ ಗಳಿಸಬೇಕು ಎಂದು ಕಾರ್ಯಕರ್ತರಿಗೆ ಸಲಹೆ ನೀಡಿದರು. ಇನ್ನು ಗ್ರಾಪಂ ಚುನಾವಣೆಗಳನ್ನು ನಡೆಸುವ ಬದಲು ಯಾವುದೇ ಪಕ್ಷದ ಬೆಂಬಲಿತರು ಹೊಂದಾಣಿಕೆ ಮೂಲಕ ಅಧಿಕಾರ ಹಂಚಿಕೆ ಮಾಡಿಕೊಳ್ಳಿ. ಅವಿರೋಧ ಆಯ್ಕೆಯೊಂದಿಗೆ ದುಂದುವೆಚ್ಚಕ್ಕೆ ಕಡಿವಾಣ ಹಾಕಿ ಎಂದು ಜಿಟಿಡಿ ತಿಳಿ ಹೇಳಿದರು.

ಹೌಸಿಂಗ್ ಬೋರ್ಡ್ ಬಗ್ಗೆ ಪ್ರಸ್ತಾಪಿಸಿಲ್ಲ: ಸಿದ್ದರಾಮಯ್ಯನವರು ಮುಖ್ಯಮಂತ್ರಿ ಆಗಿದ್ದ ಈ ಹಿಂದಿನ ಅವಧಿಯಲ್ಲಿ ಜಿಪಂ ಚುನಾವಣೆಯಲ್ಲಿ ಕಾಂಗ್ರೆಸ್ 2 ಕ್ಷೇತ್ರ ಗೆದ್ದರೆ, ನಾವು 8 ಕ್ಷೇತ್ರಗಳನ್ನು ಗೆದ್ದೆವು. ಅಲ್ಲದೆ, ತಾಪಂ ಗೆದ್ದೆವು. ಬಳಿಕ ತಾಪಂ ಅಧ್ಯಕ್ಷೆಯಾಗಿ ದಲಿತ ಮಹಿಳೆ ಮಾಡಿದ್ದೆ. ಎಪಿಎಂಸಿ ಅಧ್ಯಕ್ಷರಾಗಿ ಯಾರನ್ನು ಮಾಡಿದ್ದೆ ಎಂದು ನಿಮಗೆ ಗೊತ್ತಿದೆ. ಡೈರಿಗೂ ಅಧ್ಯಕ್ಷರನ್ನಾಗಿ ಮಾಡಿದ್ದೆ. ಆದರೆ ಅವರು ಸೇರಿದಂತೆ ಕೆಲವರು ಹೌಸಿಂಗ್ ಬೋರ್ಡ್ ವಿಚಾರದಲ್ಲಿ ಈ ಹಿಂದೆ ಸಿದ್ದರಾಮಯ್ಯನವರು ಮುಖ್ಯಮಂತ್ರಿ ಆಗಿದ್ದಾಗ ಅಪ್ಪ–ಮಗ ಅವರ ಕಾಲುಕಟ್ಟಿಕೊಂಡಿದ್ದರು ಎಂದು ಅಪಪ್ರಚಾರ ಮಾಡಿದರು. ಈಗಲೂ ಸಿದ್ದರಾಮಯ್ಯನವರು ಮುಖ್ಯಮಂತ್ರಿ ಇದ್ದೂ ಒಂದೇ ಒಂದು ದಿನವೂ ಹೌಸಿಂಗ್ ಬೋರ್ಡ್ ವಿಚಾರವಾಗಿ ಅವರೊಂದಿಗೆ ಪ್ರಸ್ತಾಪ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು.

ಹೌಸಿಂಗ್ ಬೋರ್ಡ್ ವಿಚಾರದಲ್ಲಿ ಮುಖ್ಯಮಂತ್ರಿಗಳಾಗಿದ್ದ ಸಿದ್ದರಾಮಯ್ಯ, ಬಸವರಾಜ ಬೊಮ್ಮಾಯಿ, ಹೆಚ್.ಡಿ.ಕುಮಾರಸ್ವಾಮಿ ಬಳಿ ನಾನು ಹೋಗಿ ಏನನ್ನೂ ಕೇಳಿಕೊಂಡಿಲ್ಲ. ಜಿ.ಟಿ.ದೇವೇಗೌಡರನ್ನು ಜೈಲಿಗೆ ಕಳುಹಿಸಿ ಎಂದು ಮೂವರು ಸಿದ್ದರಾಮಯ್ಯರ ಬಳಿ ಹೋಗಿದ್ದರು. ಲೋಕಾಯುಕ್ತಕ್ಕೂ ನೀಡಿದ್ದರು ಎಂದರು.

ಗ್ರಾಮಗಳ ಅಭಿವೃದ್ಧಿ ಕಾರ್ಯವನ್ನು ಆಯಾಯ ಗ್ರಾಪಂಗಳು ಮಾಡಬೇಕು. ಶಾಸಕನ ಕೆಲಸ ಲೋಕೋಪಯೋಗಿ, ಕುಡಿಯುವ ನೀರು, ಶಾಲಾ ಕಾಲೇಜು ಇನ್ನಿತರೆ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಆದರೆ ನಮ್ಮಲ್ಲಿ ಹಾಗಿಲ್ಲ. ಪಂಚಾಯಿತಿ ಕೆಲಸವನ್ನೂ ನಾನೇ ಮಾಡಿದ್ದೇನೆ. ಜಿಪಂ ಸದಸ್ಯರಾಗಿದ್ದ ನಮ್ಮವರೊಬ್ಬರು ನಮ್ಮ ಮನೆಯಲ್ಲಿ ತಿಂದು ಉಂಡು ನಮ್ಮ ಬಗ್ಗೆ ಏಕವಚನದಲ್ಲಿ ಮಾತನಾಡಿದರು. ಅಪ್ಪ ಮಗನನ್ನು ಸೋಲಿಸುವುದೇ ನಮ್ಮ ಗುರಿ ಎಂದಿದ್ದರು ಎಂದು ಕಿಡಿಕಾರಿದರು.

ಬಿಜೆಪಿ ಪಾಲಿಕೆ ಸದಸ್ಯರೊಬ್ಬರ ವಿರುದ್ಧ ಕಿಡಿ: ಹೆಚ್.ಡಿ.ಕುಮಾರಸ್ವಾಮಿಯವರು ಮುಖ್ಯಮಂತ್ರಿ ಇದ್ದಾಗ ಮೈಸೂರು ನಗರಕ್ಕೆ 107 ಕೋಟಿ ಅನುದಾನ ಬಿಡುಗಡೆ ಮಾಡಿಸಿದ್ದೆ. ಅದರಲ್ಲಿ ಹಂಚಿಕೆ ಮಾಡಲಾಗದೇ 60 ಕೋಟಿ ವಾಪಸ್ಸು ಹೋಯಿತು. ಈ ಅನುದಾನದಲ್ಲಿ ಆಗಿರುವ ಅಭಿವೃದ್ಧಿ ಕಾರ್ಯಗಳನ್ನು ಬಿಜೆಪಿ ಪಾಲಿಕೆ ಸದಸ್ಯನೊಬ್ಬ ತಾನು ಮಾಡಿರುವುದಾಗಿ ಹೇಳಿಕೊಂಡಿದ್ದಾನೆ. ಹೀಗೆ ಹೇಳುವಾಗ ನಮ್ಮ ಪಕ್ಷದ ಮುಖಂಡರು, ಕಾರ್ಯಕರ್ತರು ಏನು ಮಾಡುತ್ತಿದ್ದರು. ಶ್ರಮ ವಹಿಸಿ ಅನುದಾನ ತಂದು ವಿಜಯನಗರ 3 ಮತ್ತು 4ನೇ ಹಂತ, ರಾಜೇಶ್ವರಿನಗರ, ಶಾರದಾದೇವಿನಗರ, ರೂಪನಗರ ಅಭಿವೃದ್ಧಿ ಮಾಡಿದೆ. ನಮ್ಮ ಪಕ್ಷದ ಇಲ್ಲಿನ ಸ್ಥಳೀಯ ಮುಖಂಡರು, ಕಾರ್ಯಕರ್ತರು ನಮ್ಮ ಶಾಸಕರು ಮಾಡಿದ್ದು ಎಂದು ಎಲ್ಲಿ ಹೇಳಿದ್ದೀರಿ. ಚಾಮುಂಡೇಶ್ವರಿ ಕ್ಷೇತ್ರಕ್ಕೆ ಒಳಪಡುವ ಪಾಲಿಕೆ ವ್ಯಾಪ್ತಿಯಲ್ಲಿ ಜೆಡಿಎಸ್‌ಗೆ ಕಡಿಮೆ ಪ್ರಮಾಣದಲ್ಲಿ ಮತಗಳು ಬಂದಿರುವುದಕ್ಕೆ ಏನು ಕಾರಣ ಎಂದು ಪ್ರಶ್ನಿಸಿದರು.

ಹುಣಸೂರು ಶಾಸಕರೂ ಆದ ಜಿ.ಟಿ.ದೇವೇಗೌಡರ ಪುತ್ರ ಜಿ.ಡಿ.ಹರೀಶ್‌ಗೌಡ, ಮಾಜಿ ಮೇಯರ್ ಆರ್.ಲಿಂಗಪ್ಪ ಜೆಡಿಎಸ್ ಎಸ್‌ಸಿ ಘಟಕದ ರಾಜ್ಯಾಧ್ಯಕ್ಷ ಶಿವಕುಮಾರಸ್ವಾಮಿ, ಜಿಲ್ಲಾಧ್ಯಕ್ಷ ನರಸಿಂಹಸ್ವಾಮಿ, ಮಾಜಿ ಜಿಲ್ಲಾಧ್ಯಕ್ಷ ಶಿವಮೂರ್ತಿ ಸೇರಿದಂತೆ ಗ್ರಾಪಂ, ತಾಪಂ, ಜಿಪಂ, ನಗರ ಪಾಲಿಕೆ ಜೆಡಿಎಸ್ ಸದಸ್ಯರು ಹಾಜರಿದ್ದರು.

ಸಿಎಂ ಸಿದ್ದರಾಮಯ್ಯರಿಗೆ ಚಾಮುಂಡೇಶ್ವರಿ ಕ್ಷೇತ್ರದ ಬಗ್ಗೆ ಅತೀವ ಕಾಳಜಿ ಇದೆ

ಚಾಮುಂಡೇಶ್ವರಿ ದಯೆಯಿಂದ ಗ್ಯಾರಂಟಿಗಳು ಈಡೇರಲಿ

ಮೈಸೂರು,ಮೇ 30(ಪಿಎಂ)–ಚಾಮುಂಡೇಶ್ವರಿ ಕ್ಷೇತ್ರದ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಕಾಳಜಿ ಇದ್ದು, ಈಗ ಅವರು ಮುತ್ಸದ್ದಿಯಾಗಿದ್ದಾರೆ. ನನ್ನ ಕ್ಷೇತ್ರಕ್ಕೆ ಅನುದಾನ ಕೊಡುತ್ತಾರೆ. ಅವರು, ನಾನು ಸೇರಿ ಕ್ಷೇತ್ರದ ಅಭಿವೃದ್ಧಿ ಮಾಡುತ್ತೇವೆ ಎಂದು ಶಾಸಕ ಜಿ.ಟಿ.ದೇವೇಗೌಡ ವಿಶ್ವಾಸ ವ್ಯಕ್ತಪಡಿಸಿದರು.

2013ರಲ್ಲೂ ಸಂಪೂರ್ಣ ಬಹುಮತದಿಂದ ಅಸ್ತಿತ್ವಕ್ಕೆ ಬಂದ ಕಾಂಗ್ರೆಸ್ ಸರ್ಕಾರದಲ್ಲಿ ಸಿದ್ದರಾಮಯ್ಯ ಐದು ವರ್ಷ ಮುಖ್ಯಮಂತ್ರಿ ಆಗಿದ್ದರು. ಈಗ ಮತ್ತೊಮ್ಮೆ ಮುಖ್ಯಮಂತ್ರಿ ಆಗಿದ್ದಾರೆ. ಡಿ.ಕೆ.ಶಿವಕುಮಾರ್ ಉಪಮುಖ್ಯಮಂತ್ರಿ ಆಗಿದ್ದಾರೆ. ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಜನತೆ ಕೊಟ್ಟ ತೀರ್ಪು ಒಪ್ಪಿಕೊಳ್ಳಲೇಬೇಕು. ಪ್ರಜಾಪ್ರಭುತ್ವದ ತಳಹದಿಯ ಮೇಲೆ ಚುನಾಯಿತ ಸರ್ಕಾರ ಬಂದಿದೆ. ನೂತನ ಸರ್ಕಾರಕ್ಕೆ ತುಂಬುಹೃದಯದಿಂದ ಅಭಿನಂದಿಸೋಣ ಎಂದರು.

ಕಾಂಗ್ರೆಸ್ ಬಡವರ ಪರವಾಗಿ ಗ್ಯಾರಂಟಿ ಕಾರ್ಯಕ್ರಮಗಳನ್ನು ಕೊಟ್ಟಿದ್ದು, ಆಗ್ರಹಪೂರಕವಾಗಿ ಅದೆಲ್ಲವನ್ನೂ ಈಡೇರಿಸಲು ಮನವಿ ಮಾಡುತ್ತೇನೆ. ತಾಯಿ ಚಾಮುಂಡೇಶ್ವರಿ ಆಶೀರ್ವಾದದಿಂದ ಎಲ್ಲಾ ಗ್ಯಾರಂಟಿಗಳು ಈಡೇರಲಿ ಎಂದರು.

ಚಾಮುಂಡೇಶ್ವರಿ ಉಪಚುನಾವಣೆಯಲ್ಲಿ ಸಿದ್ದರಾಮಯ್ಯ ವಿರುದ್ಧವಾಗಲಿ, ನಮ್ಮ ಪಕ್ಷದ ಪರವಾಗಿಯಾಗಲೀ ನಾನು ಪ್ರಚಾರ ಮಾಡಿಲ್ಲ. ಈ ಚುನಾವಣೆಯಲ್ಲಿ 257 ಮತಗಳ ಅಂತರದಿಂದ ಸಿದ್ದರಾಮಯ್ಯ ಗೆದ್ದರು. 2018ರ ಚುನಾವಣೆ ಬಂದಾಗ ಸಿದ್ದರಾಮಯ್ಯ ವರುಣದಲ್ಲೇ ನಿಲ್ಲುತ್ತಾರೆ. ಚಾಮುಂಡೇಶ್ವರಿಗೆ ಬರುವುದಿಲ್ಲ ಎಂದುಕೊಂಡಿದ್ದೆ. ಮಾಜಿ ಶಾಸಕ ಸತ್ಯನಾರಾಯಣ ಸೇರಿದಂತೆ ಮೊದಲಾದವರು ಜಿ.ಟಿ.ದೇವೇಗೌಡರನ್ನು ಸೋಲಿಸಲು ನಿಮ್ಮನ್ನು ಬಿಟ್ಟರೆ ಯಾರಿಂದಲೂ ಸಾಧ್ಯವಿಲ್ಲವೆಂದು ದುಂಬಾಲು ಬಿದ್ದು ಕರೆತಂದು ಕಣಕ್ಕಿಳಿಸಿದರು. ಅಂದು ಚಾಮುಂಡೇಶ್ವರಿಗೆ ಬಾರದೇ ವರುಣದಲ್ಲೇ ನಿಂತಿದ್ದರೆ ಅಂದಿನಿಂದ ಇಂದಿನವರೆಗೆ ಅವರೇ ಮುಖ್ಯಮಂತ್ರಿ ಆಗಿರುತ್ತಿದ್ದರು. ಅವರಿಗೆ ಎಲ್ಲೋ ಒಂದು ಕಡೆ ಹಾಲಿ ಮುಖ್ಯಮಂತ್ರಿ ಆಗಿದ್ದೂ ಸೋತ ಬಗ್ಗೆ ಬೇಸರವಿದೆ ಎಂದರು.

ಕಾಂಗ್ರೆಸ್–ಜೆಡಿಎಸ್ ಮೈತ್ರಿ ಸರ್ಕಾರದಲ್ಲಿ ನನಗೆ ಉನ್ನತ ಶಿಕ್ಷಣ ಖಾತೆ ನೀಡಿದರು. ಒಂದು ತಿಂಗಳು ತಡವಾಗಿ ಖಾತೆಯ ಜವಾಬ್ದಾರಿ ವಹಿಸಿಕೊಂಡೆ. ನಾನು ಉನ್ನತ ಶಿಕ್ಷಣ ಪಡೆದವನಲ್ಲ ಎಂಬ ಭಯ ನನ್ನಲ್ಲಿತ್ತು. ಈ ಬಾರಿ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಚುನಾವಣಾ ಪ್ರಚಾರದಲ್ಲಿ ನನ್ನ ಶಿಕ್ಷಣದ ಬಗ್ಗೆ ಲಘುವಾಗಿ ಮಾತನಾಡಿದ್ದಾರೆ. ಜಿ.ಟಿ.ದೇವೇಗೌಡರು ಏನೂ ಓದಿಲ್ಲ. ನಾನು ಎರಡು ಮೂರು ಪದವಿ ಹೊಂದಿದ್ದೇನೆ. ನನಗೆ ಓಟು ಕೊಡಿ ಎಂದು ಹೇಳಿದ್ದಾರೆ. ಎರಡು ಮೂರು ಪದವಿ ಪಡೆದು ಉನ್ನತ ಶಿಕ್ಷಣ ಸಚಿವರಾಗಿದ್ದವರನ್ನು ಮೀರಿಸಿ 12 ತಿಂಗಳ ಕಾಲ ಉನ್ನತ ಶಿಕ್ಷಣ ಸಚಿವನಾಗಿ ರಾಜ್ಯದಲ್ಲಿ ಹೆಸರು ಮಾಡಿದ್ದೇನೆ ಎಂದು ಹೇಳಿದರು.

ಬಳಿಕ ಬಿಜೆಪಿ ಸರ್ಕಾರ ರಚನೆಯಾಯಿತು. ಬಿಜೆಪಿಗೆ ಜಿ.ಟಿ.ದೇವೇಗೌಡರು ಹೋಗುತ್ತಾರೆ ಎಂದು ಮಾಧ್ಯಮಗಳಲ್ಲಿ ಸುದ್ದಿ ಹರಡಿತ್ತು. ಗೆದ್ದ ಪಕ್ಷ ಬಿಟ್ಟು ಮತದಾರರ ತೀರ್ಪಿಗೆ ವಿರುದ್ಧವಾಗಿ ಹೋಗುವುದು ಸರಿಯಲ್ಲ ಎಂದು ಹಿಂದೆ ಸರಿದೆ. ಹಾಗೆ ಮಾಡಿದ್ದರೆ ಅಂದೇ ಅಧಿಕಾರ ಅನುಭವಿಸುತ್ತಿದ್ದೆ ಎಂದರು.

ಇದಾದ ಮೇಲೆ ನಾನು ಮತ್ತು ಸಿದ್ದರಾಮಯ್ಯ ಒಟ್ಟಿಗೆ ಮಾತುಕತೆ ನಡೆಸಿ ಪರಿಷತ್‌ನಲ್ಲಿ ಡಾ.ತಿಮ್ಮಯ್ಯರನ್ನು ಗೆಲ್ಲಿಸಲಾಯಿತು. ಇಲ್ಲಿ ಯಾವುದೇ ಮುಚ್ಚುಮರೆ ಇಲ್ಲ. ಬಳಿಕ ನಮ್ಮವರೇ ವಿಧಾನ ಪರಿಷತ್ ಸದಸ್ಯರಾದರು. ಅವರು ನನ್ನನ್ನು ಕತ್ತೆಗೆ ಹೋಲಿಕೆ ಮಾಡಿದರು. ಕತ್ತೆಯನ್ನು ದೇವರು ಎಂದು ಪೂಜೆ ಮಾಡುತ್ತಾರೆ. ಕತ್ತೆ ಎಲ್ಲರ ಬಟ್ಟೆಗಳನ್ನು ಹೊತ್ತು ಸಾಗುತ್ತದೆ. ಅಂತೆಯೇ ಈ ಜಿ.ಟಿ.ದೇವೇಗೌಡ ಎಲ್ಲರನ್ನು ಹೊತ್ತಿದ್ದವನು. ಯಾವುದೇ ಜಾತಿ ನೋಡದೇ ಹೊತ್ತಿದ್ದೀನಿ, ಉತ್ತಿದ್ದೀನಿ, ಬೆಳೆದಿದ್ದೀನಿ ಎಂದರು.

ನಾನು ಪಾರ್ಟಿ ನೋಡಲ್ಲ, ಉಪಕಾರ ಮರೆಯೋಲ್ಲ; ಶಾಸಕ ಜಿಟಿಡಿ

ಮೈಸೂರು,ಮೇ 30(ಪಿಎಂ)– ಮಾಜಿ ಸಿಎಂ ಬಸವರಾಜ ಬೊಮ್ಮಾಯಿ, ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಅವರನ್ನು ಅಭಿನಂದಿಸುತ್ತೇನೆ. ಅವರು ತಮ್ಮ ಆಡಳಿತಾವಧಿಯಲ್ಲಿ ಚಾಮುಂಡೇಶ್ವರಿ ಕ್ಷೇತ್ರಕ್ಕೆ 55 ಕೋಟಿ ರೂ. ಅನುದಾನ ಕಲ್ಪಿಸಿದರು. ಕ್ಷೇತ್ರದ ನಗರ ಪ್ರದೇಶದಲ್ಲಿ 24 ಗಂಟೆ ಕುಡಿಯುವ ನೀರು ಪೂರೈಕೆಗೆ ಅನುಕೂಲ ಮಾಡಿಕೊಟ್ಟರು. ನಾನು ಪಾರ್ಟಿ ನೋಡಲ್ಲ. ಉಪಕಾರ ಮಾಡಿದವರನ್ನು ಮರೆಯುವುದಿಲ್ಲ ಎಂದು ಜಿ.ಟಿ.ದೇವೇಗೌಡ ಹೇಳಿದರು.

ಕ್ಷೇತ್ರದಲ್ಲಿ ನಾಲ್ಕು ಪಟ್ಟಣ ಪಂಚಾಯಿತಿ, ಒಂದು ನಗರಸಭೆ ರಚನೆ ಮಾಡಿಸಿದ್ದೇನೆ. ಸಂಸದ ಪ್ರತಾಪ್ ಸಿಂಹ, ಅಂದಿನ ಜಿಲ್ಲಾ ಉಸ್ತುವಾರಿ ಸಚಿವರ ಸಹಕಾರದಿಂದ ಅಂದಿನ ಸಿಎಂಗೆ ಮನವಿ ಮಾಡಿದ ಹಿನ್ನೆಲೆಯಲ್ಲಿ ಇದು ಕಾರ್ಯಗತಗೊಂಡಿತು. ಇದರಿಂದ ಈ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರು ಸಮರ್ಪಕವಾಗಿ ಪೂರೈಕೆಯಾಗುತ್ತಿದೆ. ಅಮೃತ ಯೋಜನೆಯಡಿ ಹೂಟಗಳ್ಳಿ ನಗರಸಭೆಗೆ ಮತ್ತೆ 50 ಕೋಟಿ ಅನುದಾನ ಕೊಡಿಸಿದ್ದೇನೆ. ಶ್ರೀರಾಂಪುರ ಪಪಂಗೆ 60 ಕೋಟಿ, ರಮ್ಮನಹಳ್ಳಿ ಪಪಂಗೆ 39 ಕೋಟಿ ಅನುದಾನ ಕೊಡಿಸಿದ್ದೇನೆ ಎಂದು ತಿಳಿಸಿದರು.

ಚಾಮುಂಡಿ ಸುಡುತ್ತಾಳೆ: ಒಂದು ವೇಳೆ ನಾನು ಸೋತಿದ್ದರೂ ನನಗೇನು ಆಗುತ್ತಿರಲಿಲ್ಲ. ಕಳೆದ 10 ವರ್ಷಗಳಲ್ಲಿ ನಾನು ಹಣ ಮಾಡಿಲ್ಲ. ಬದಲಿಗೆ ಜನರ ಸೇವೆ ಮಾಡಿದ್ದೇನೆ. ಅಪ್ಪ–ಮಗ ಸಂಪಾದನೆ ಮಾಡಿದ್ದು ಸಾಕು, ಈ ಬಾರಿ ಅವರನ್ನು ಸೋಲಿಸುತ್ತೇವೆ ಎಂದಿದ್ದರು. ಚಾಮುಂಡೇಶ್ವರಿ ಇವರನ್ನು ಸುಟ್ಟು ಹಾಕಲಿದ್ದಾಳೆ ಎಂದು ಕಿಡಿಕಾರಿದರು.

ಮೈಸೂರು ಸುತ್ತಮುತ್ತ ಎಷ್ಟೊಂದು ಲೇಔಟ್‌ಗಳಿದ್ದು, ಅದರ ಮಾಲೀಕರಿಂದ ನಾನು ಹಣ ಪಡೆದ ಬಗ್ಗೆ ಯಾವುದೇ ದೂರುಗಳಿದ್ದರೆ ತೋರಿಸಿ, ಬೇರೆ ಕ್ಷೇತ್ರಗಳಲ್ಲಿ ಸ್ಥಳೀಯ ಶಾಸಕರ ಅನುಮತಿ ಇಲ್ಲದೇ ಲೇಔಟ್ ಮಾಡಲು ಅವಕಾಶವಿಲ್ಲ. ಕೆಆರ್ ನಗರದಲ್ಲಿ ಶಾಸಕರಿಲ್ಲದೇ ಆಶ್ರಯ ಮನೆ ಹಂಚಲು ಅವಕಾಶವಿಲ್ಲ. ಆದರೆ ನಾನು ಪಂಚಾಯಿತಿ ಪ್ರಕ್ರಿಯೆಯಲ್ಲಿ ಯಾವುದೇ ಹಸ್ತಕ್ಷೇಪ ಮಾಡಿಲ್ಲ ಎಂದರು.

ಈ ಹಿಂದಿನ ಸಿಎಂ ಬೊಮ್ಮಾಯಿ ಹಾಗೂ ವಸತಿ ಸಚಿವ ವಿ.ಸೋಮಣ್ಣ ಅವರೊಂದಿಗೆ ಮಾತುಕತೆ ನಡೆಸಿ, 2,700 ಮಂದಿ ಬಡ ಕುಟುಂಬಗಳಿಗೆ ಮಂಡಕಳ್ಳಿಯಲ್ಲಿ ಮನೆ ಕಟ್ಟಿಸುತ್ತಿದ್ದೇನೆ. ಹಳೇ ಉಂಡವಾಡಿ ಕುಡಿಯುವ ನೀರಿನ ಯೋಜನೆ ಮುಕ್ತಾಯದ ಹಂತಕ್ಕೆ ಬಂದಿದೆ. ಇನ್ನು ಕ್ಷೇತ್ರದ ಗ್ರಾಪಂನವರು ಸ್ಮಶಾನ ಗುರುತಿಸಿದ್ದೀರಾ? ಒತ್ತುವರಿ ತಡೆಗೆ ಪಂಚಾಯಿತಿ ಮತ್ತು ಊರಿನವರು ಏನು ಮಾಡುತ್ತಿದ್ದೀರಿ ಎಂದು ಪ್ರಶ್ನಿಸಿದರು.

3 ಸಾವಿರ ಮಂದಿಗೆ ಹೋಳಿಗೆ ಊಟ

ಜೆಡಿಎಸ್ ವರಿಷ್ಠರೂ ಆದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ, ಶಾಸಕರಾದ ಜಿ.ಟಿ.ದೇವೇಗೌಡ ಹಾಗೂ ಜಿ.ಡಿ.ಹರೀಶ್‌ಗೌಡ ಅವರ ಕಟೌಟ್‌ಗಳು ಧನ್ಯತಾ ಸಮಾಗಮದಲ್ಲಿ ರಾರಾಜಿಸಿದವು. ಜಿ.ಟಿ.ದೇವೇಗೌಡರು ಹಾಗೂ ಅವರ ಪುತ್ರ ಹರೀಶ್‌ಗೌಡ ಅವರಿಗೆ ಬೃಹತ್ ಹಾರ ಸಮರ್ಪಿಸಿ ಅಭಿನಂದಿಸಲಾಯಿತಲ್ಲದೆ, ಕ್ಷೇತ್ರದ ಮತದಾರರರು, ಹಿತೈಷಿಗಳು, ಅವರ ಅಭಿಮಾನಿಗಳು ಅಪಾರ ಸಂಖ್ಯೆಯಲ್ಲಿ ನೆರೆದು, ಪ್ರತ್ಯೇಕವಾಗಿಯೂ ಅಭಿನಂದಿಸಿದರು. 3 ಸಾವಿರ ಮಂದಿಗೆ ಹೋಳಿಗೆ ಊಟದ ವ್ಯವಸ್ಥೆ ಮಾಡಲಾಗಿತ್ತು.

ಹಾಡಹಗಲೇ ವಿಜಯನಗರ 3ನೇ ಹಂತದಲ್ಲಿ ಮನೆ ಕಳವಿಗೆ ಯತ್ನ

ಸಿಸಿ ಕ್ಯಾಮರಾದಲ್ಲಿ ದೃಶ್ಯ ಸೆರೆ; ಪೊಲೀಸರ ಬಗ್ಗೆ ನಿವಾಸಿಗಳ ಬೇಸರ

ಮೈಸೂರು, ಮೇ 30(ಎಂಕೆ)– ಹಾಡಹಗಲೇ ಮನೆ ಕಳ್ಳತನಕ್ಕೆ ಯತ್ನಿಸಿದ ಘಟನೆ ಮೈಸೂರಿನ ವಿಜಯನಗರ 3ನೇ ಹಂತದಲ್ಲಿ ಕಳೆದ 2 ದಿನದ ಹಿಂದೆ ನಡೆದಿದ್ದು, ಕಳ್ಳತನಕ್ಕೆ ಖದೀಮ ಹೊಂಚು ಹಾಕುತ್ತಿದ್ದ ದೃಶ್ಯ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ.

ಇಲ್ಲಿನ ಮನೆಯೊಂದಕ್ಕೆ ಮಧ್ಯಾಹ್ನ 1 ಗಂಟೆ 13 ನಿಮಿಷಕ್ಕೆ ಬೆನ್ನಿಗೆ ಕಪ್ಪು ಬ್ಯಾಗ್ ಹಾಕಿಕೊಂಡು ಬಂದ ಖದೀಮನೋರ್ವ ಸುತ್ತಮುತ್ತ ನೋಡಿ, ಕಾಲಿಂಗ್ ಬೆಲ್ ಮಾಡಿ ಮನೆಯಲ್ಲಿ ಯಾರೂ ಇಲ್ಲದಿರುವುದನ್ನು ಖಾತರಿಪಡಿಸಿಕೊಂಡಿದ್ದಾನೆ. ಬಳಿಕ ಕಬ್ಬಿಣದ ರಾಡ್‌ನಿಂದ ಸುರಕ್ಷತೆಗಾಗಿ ಅಳವಡಿಸಿದ್ದ ಕಬ್ಬಿಣದ ಬಾಗಿಲನ್ನು ಮೀಟಿ ತೆರೆದು, ನಕಲಿ ಕೀಗಳನ್ನು ಬಳಸಿ ಮರದ ಬಾಗಿಲನ್ನು ತೆರೆಯಲು ಯತ್ನಿಸಿ, ವಿಫಲನಾಗಿದ್ದಾನೆ.

ಅಷ್ಟಕ್ಕೆ ಸುಮ್ಮನಾಗದ ಆತ, ಮನೆಯ ಮೊದಲ ಮಹಡಿಗೆ ತೆರಳಿ ಅಲ್ಲಿನ ಬಾಗಿಲನ್ನು ತೆರೆಯಲು ಯತ್ನಿಸಿ ಸಾಧ್ಯವಾಗದೆ ಕಡೆಗೆ ಬಂದ ದಾರಿಗೆ ಸುಂಕವಿಲ್ಲವೆಂಬಂತೆ ವಾಪಸ್ಸಾಗಿರುವ ದೃಶ್ಯ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಮನೆ ಮಾಲೀಕರು ವಾಪಸ್ ಬಂದು ಸಿಸಿ ಕ್ಯಾಮರಾ ಪರಿಶೀಲಿಸಿದಾಗ ಕಳ್ಳನೋರ್ವ ಹೊಂಚು ಹಾಕಿದ ದೃಶ್ಯ ಬಹಿರಂಗವಾಗಿದೆ.



ಕ್ರಮ ಕೈಗೊಳ್ಳದ ಪೊಲೀಸರು: ವಿಜಯನಗರ 3ನೇ ಹಂತದಲ್ಲಿ ಕಳವು ಪ್ರಕರಣಗಳು ಹೆಚ್ಚಾಗಿ ನಡೆಯುತ್ತಿದ್ದು, ಕಳ್ಳತನಕ್ಕೆ ಯತ್ನಿಸಿದ್ದ ಈ ಮನೆಯ ಮುಂದಿನ ಮನೆಯೊಂದರಲ್ಲಿ ಶುಕ್ರವಾರ(ಮೇ 26) ರಾತ್ರಿ ಲಕ್ಷಾಂತರ ರೂ. ಮೌಲ್ಯದ ಚಿನ್ನಾಭರಣ ದೋಚಲಾಗಿದೆ. ಆದರೆ ಇದುವರೆಗೂ ಸಂಬಂಧಪಟ್ಟ ಠಾಣೆ ಪೊಲೀಸರು ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಸ್ಥಳಿಯ ನಿವಾಸಿಗಳು 'ಮೈಸೂರು ಮಿತ್ರ'ನಲ್ಲಿ ದೂರಿದ್ದಾರೆ. ಯಾರೂ ಇಲ್ಲದ ಮನೆಗಳನ್ನೇ ಟಾರ್ಗೆಟ್ ಮಾಡುತ್ತಿರುವ ಖದೀಮರು, ಬಾಗಿಲು ಮೀಟಿ ಚಿನ್ನಾಭರಣ ದೋಚುತ್ತಿದ್ದಾರೆ. ದಿನೇ ದಿನೇ ಕಳವು ಪ್ರಕರಣಗಳು ಹೆಚ್ಚಾಗಿದ್ದು, ನಗರ ಪೊಲೀಸ್ ಆಯುಕ್ತರು ಸೂಕ್ತ ಗಮನ ಹರಿಸಬೇಕು ಎಂದು ಆಗ್ರಹಿಸಿದ್ದಾರೆ.

ಉಕ್ರೇನ್–ರಷ್ಯಾ ಪರಸ್ಪರ ಡ್ರೋನ್ ದಾಳಿ; ಕಟ್ಟಡಗಳಿಗೆ ಭಾರೀ ಹಾನಿ



ಕೀವ್: ಉಕ್ರೇನ್ ರಾಜಧಾನಿ ಕೀವ್ ಮೇಲೆ ರಷ್ಯಾ ವಾಯುದಾಳಿ ಮುಂದುವರಿಸಿದ್ದು, ಪ್ರತಿಯಾಗಿ ಉಕ್ರೇನ್ ಕೂಡಾ ಸೋಮವಾರ ರಷ್ಯಾದ ರಾಜಧಾನಿಯ ಮೇಲೆ ಡ್ರೋನ್ ದಾಳಿ ನಡೆಸಿದೆ. ಮಾಸ್ಕೊ ನಗರ ಗುರಿಯಾಗಿಸಿ ಉಕ್ರೇನ್ ಸುಮಾರು 8 ಡ್ರೋನ್ ದಾಳಿ ನಡೆಸಿದೆ. ದಾಳಿಯನ್ನು ಕೀವ್ ಆಡಳಿತದ ಭಯೋತ್ಪಾದನಾ ಕೃತ್ಯ ಎಂದು ರಷ್ಯಾ ಬಣ್ಣಿಸಿದೆ. ದಾಳಿ ಕುರಿತಂತೆ ಉಕ್ರೇನ್ ಯಾವುದೇ ಪ್ರತಿಕ್ರಿಯೆಯನ್ನು ನೀಡಿಲ್ಲ. 5 ಡ್ರೋನ್‌ಗಳನ್ನು ಹೊಡೆದುರುಳಿಸಲಾಗಿದೆ. ದಾಳಿಯಿಂದ ಹಲವು ಕಟ್ಟಡಗಳಿಗೆ ತೀವ್ರ ಸ್ವರೂಪದ ಹಾನಿಯಾಗಿದೆ. ಹಲವರಿಗೆ ಗಾಯಗಳಾಗಿದ್ದು, ಇಬ್ಬರು ಆಸ್ಪತ್ರೆಗೆ ದಾಖಲಾಗಿದ್ದಾರೆ ಎಂದು ರಷ್ಯಾದ ಸೇನೆಯು ತಿಳಿಸಿದೆ. ತೀವ್ರ ಜಖಂಗೊಂಡಿದ್ದ ಎರಡು ಕಟ್ಟಡಗಳಿಂದ ನಿವಾಸಿಗಳನ್ನು ಸ್ಥಳಾಂತರಿಸಲಾಗಿದೆ. ಮಾಸ್ಕೊ ಗುರಿಯಾಗಿ ಪ್ರಯೋಗಿಸಿದ್ದ ಹಲವು ಡ್ರೋನ್‌ಗಳನ್ನು ಹೊಡೆದುರುಳಿಸಲಾಗಿದೆ ಎಂದು ಮಾಸ್ಕೊ ವಲಯದ ಗವರ್ನರ್ ಆಂಡ್ರೆ ವೊರೊಬ್ಯೊ ತಿಳಿಸಿದ್ದಾರೆ.

ಕೀವ್ ಮೇಲೆ ಮುಂದುವರಿದ ದಾಳಿ: ಇತ್ತ ಕೀವ್ ಗುರಿಯಾಗಿ ರಷ್ಯಾದ ಡ್ರೋನ್ ದಾಳಿ ಮುಂದುವರಿದಿದ್ದು, ಕೀವ್‌ನಲ್ಲಿ ಒಬ್ಬರು ಮೃತಪಟ್ಟಿದ್ದು, ಭೀತಿಗೊಳಗಾಗಿರುವ ಕೀವ್ ಜನರು ಸುರಕ್ಷಿತ ಅಡಗುತಾಣಗಳಲ್ಲಿ ರಕ್ಷಣೆ ಪಡೆದಿದ್ದಾರೆ.

ಬಿತ್ತನೆ ಬೀಜ, ರಸಗೊಬ್ಬರ ವ್ಯತ್ಯಯವಾಗದಂತೆ ಎಚ್ಚರ ವಹಿಸಿ

ಅಧಿಕಾರಿಗಳಿಗೆ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಸೂಚನೆ



ಬೆಂಗಳೂರು, ಮೇ 30– ಮುಂಗಾರು ಆರಂಭವಾಗುತ್ತಿದ್ದು, ಬಿತ್ತನೆ ಬೀಜ, ರಸಗೊಬ್ಬರ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಎಚ್ಚರ ವಹಿಸಿ ಎಂದು ಕೃಷಿ ಸಚಿವ ಎನ್.ಚಲುವರಾಯ ಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದರು.

ಕೃಷಿ ಇಲಾಖೆ ಜವಾಬ್ದಾರಿ ವಹಿಸಿಕೊಂಡ ಬಳಿಕ ಮಂಗಳವಾರ ವಿಧಾನಸೌಧದಲ್ಲಿ ಮೊದಲ ಬಾರಿಗೆ ಇಲಾಖೆ ಹಿರಿಯ ಅಧಿಕಾರಿಗಳ ಜೊತೆ ಪರಿಚಯಾತ್ಮಕ ಹಾಗೂ ಪ್ರಗತಿ ಪರಿಶೀಲನೆ ಸಭೆ ನಡೆಸಿದರು. ಈ ವೇಳೆ ಇಲಾಖೆ ಯೋಜನೆಗಳು, ಬಿತ್ತನೆ ಬೀಜ, ರಸಗೊಬ್ಬರ ದಾಸ್ತಾನು ಬಗ್ಗೆ ಸಂಪೂರ್ಣ ಮಾಹಿತಿ ಪಡೆದರು.

ಪ್ರಸಕ್ತ ಸಾಲಿನಲ್ಲಿ 108 ಮಿಮೀ ಮಳೆಯಾಗಿದ್ದು, ಯಾವುದೇ ಕೊರತೆ ಆಗಿಲ್ಲ. 2022–23ನೇ ಸಾಲಿನ 3ನೇ ಮುಂಗಡ ಅಂದಾಜಿನಂತೆ 139.28 ಲಕ್ಷ ಟನ್ ಆಹಾರ ಧಾನ್ಯಗಳ ಉತ್ಪಾದನೆ ಅಂದಾಜಿಸಲಾಗಿದೆ. 2023ರ ಮುಂಗಾರು ಹಂಗಾಮಿನಲ್ಲಿ 82.35 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ. ಪೂರ್ವ ಮುಂಗಾರು ಬೆಳೆಗಳ 2.95 ಲಕ್ಷ ಹೆಕ್ಟೇರ್ ಬಿತ್ತನೆ ಗುರಿ ಇದ್ದು, ಇದುವರೆಗೆ 2.48 ಲಕ್ಷ ಹೆಕ್ಟೇರ್ (84%) ಪ್ರದೇಶದಲ್ಲಿ ಬಿತ್ತನೆ ಕೈಗೊಳ್ಳಲಾಗಿದೆ. 5.54 ಲಕ್ಷ ಕ್ವಿಂಟಾಲ್ ಬಿತ್ತನೆ ಬೀಜಗಳ ಬೇಡಿಕೆಯಿದ್ದು, 7.85 ಲಕ್ಷ ಕ್ವಿಂಟಾಲ್ ಬಿತ್ತನೆ ಬೀಜಗಳು ಲಭ್ಯವಿದೆ. ಬಿತ್ತನೆ ಬೀಜದಲ್ಲಿ ಯಾವುದೇ ಕೊರತೆ ಇಲ್ಲ ಎಂದು ಅಧಿಕಾರಿಗಳು ಸಚಿವರಿಗೆ ಮಾಹಿತಿ ನೀಡಿದರು.

2023–24 ಸಾಲಿನ ಮುಂಗಾರು ಹಂಗಾಮಿಗೆ 25.47 ಲಕ್ಷ ಮೆ.ಟನ್ ರಸಗೊಬ್ಬರ ಬೇಡಿಕೆ ಇದೆ. 7.30 ಮೆಟ್ರಿಕ್ ಟನ್ ರಸಗೊಬ್ಬರ ಸರಬರಾಜಾಗಿದೆ. ಪ್ರಸ್ತುತ ಖಾಸಗಿ ಹಾಗೂ ಸಹಕಾರ ಸಂಘಗಳಲ್ಲಿ 13.90 ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನಿದೆ. 1.68 ಲಕ್ಷ ಮೆ.ಟನ್ ರಸಗೊಬ್ಬರ ಕಾಪು ದಾಸ್ತಾನು (Buffer Stock) ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಲ್ಲಿ ಲಭ್ಯವಿದ್ದು, ಪ್ರಸ್ತುತ ರಸಗೊಬ್ಬರದ ಯಾವುದೇ ಕೊರತೆ ಇಲ್ಲ ಎಂದು ಮಾಹಿತಿ ನೀಡಿದರು.

ಅಗತ್ಯವಾದ ಬಿತ್ತನೆ ಬೀಜ, ರಸಗೊಬ್ಬರ ದಾಸ್ತಾನು ಇದ್ದು, ರೈತರಿಗೆ ಪೂರೈಕೆಯಲ್ಲಿ ಯಾವುದೇ ವ್ಯತ್ಯಯ ಆಗಬಾರದು. ಪರೀಕ್ಷೆ ಮಾಡಿ ಗುಣಮಟ್ಟದ ಬಿತ್ತನೆ ಬೀಜಗಳನ್ನು ರೈತರಿಗೆ ಪೂರೈಕೆ ಮಾಡಬೇಕು. ರೈತರಿಗೆ ಅಗತ್ಯವಿರುವ ರಸಗೊಬ್ಬರ ಹಾಗೂ ಕೀಟನಾಶಕಗಳನ್ನು ಪೂರೈಸಬೇಕು. ಮುಂಗಾರಿನಲ್ಲಿ ರೈತರಿಗೆ ಯಾವುದೇ ರೀತಿ ತೊಂದರೆಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಸಚಿವ ಚಲುವರಾಯಸ್ವಾಮಿ ತಿಳಿಸಿದರು. ಇದರ ಜೊತೆಗೆ ರೈತ ಸಂಪರ್ಕ ಕೇಂದ್ರಗಳಲ್ಲಿ ಕಡ್ಡಾಯವಾಗಿ AO ಗಳು ಹಾಜರಿರಬೇಕು. Soil Test ರಿಪೋರ್ಟ್‌ಗಳನ್ನು ಸೂಕ್ತ ಸಮಯದಲ್ಲಿ ನೀಡಬೇಕು. ಬೆಳೆ ವಿಮೆ ನೀಡುವಲ್ಲಿ ರೈತರಿಗೆ ಸಮಸ್ಯೆ ಆಗಬಾರದು. ಜಿಲ್ಲಾ ಮಟ್ಟದಲ್ಲಿ ಯಾವುದೇ ಸಮಸ್ಯೆಯಾದರೂ ಜಂಟಿ ನಿರ್ದೇಶಕರೆ ನೇರ ಹೊಣೆ ಆಗುತ್ತೀರಾ ಎಂದು ಎಚ್ಚರಿಕೆ ನೀಡಿದರು.

ಶೀಘ್ರ ಪರಿಹಾರ ಬಿಡುಗಡೆ: 2022–23ನೇ ಸಾಲಿನಲ್ಲಿ ನೆಟೆ ರೋಗದಿಂದ ಕಲಬುರಗಿಯಲ್ಲಿ 198488 ಹೆಕ್ಟೇರ್, ಬೀದರ್‌ನಲ್ಲಿ 14495 ಹೆಕ್ಟೇರ್, ವಿಜಯಪುರದಲ್ಲಿ 20401 ಹೆಕ್ಟೇರ್, ಯಾದಗಿರಿಯಲ್ಲಿ 10259 ಹೆಕ್ಟೇರ್ ಪ್ರದೇಶದಲ್ಲಿ ತೊಗರಿ ಬೆಳೆ ಹಾನಿಯಾಗಿರುತ್ತದೆ. ಹಾನಿಗೊಳಗಾದ ರೈತರಿಗೆ ಪ್ರತಿ ಹೆಕ್ಟೇರ್‌ಗೆ 10 ಸಾವಿರದಂತೆ ಗರಿಷ್ಠ 2 ಹೆಕ್ಟೇರ್‌ಗೆ ಸೀಮಿತಗೊಳಿಸಿ ಸರ್ಕಾರದಿಂದ 223 ಕೋಟಿ ಅನುದಾನ ಘೋಷಿಸಲಾಗಿದ್ದು, ಶೀಘ್ರ ಪರಿಹಾರ ವಿತರಣೆಗೆ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ, ಇಲಾಖೆ ಕಾರ್ಯದರ್ಶಿ ಶಿವಯೋಗಿ ಕಳಸದ್ ಸೇರಿದಂತೆ ಇಲಾಖೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಖಾಲಿ ಹುದ್ದೆಗಳ ಭರ್ತಿಗೆ ಅಗತ್ಯ ಕ್ರಮ

ಕೃಷಿ ಇಲಾಖೆಗೆ ಒಟ್ಟು 8982 ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 3787 ಹುದ್ದೆಗಳು ಭರ್ತಿಯಾಗಿವೆ. ಇನ್ನೂ 5195 (ಶೇ.58%) ಹುದ್ದೆಗಳು ಖಾಲಿ ಇದೆ. ಇದರಿಂದ ಯೋಜನೆಗಳನ್ನು ಪರಿಣಾಮಕಾರಿಯಾಗಿ ರೈತರಿಗೆ ತಲುಪಿಸಲು ವಿಳಂಬವಾಗಲಿದೆ. ಆ ನಿಟ್ಟಿನಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ ಅವಶ್ಯವಿದೆ. ಹಾಗಾಗಿ ವರದಿ ನೀಡುವಂತೆ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು.

ಭಾರೀ ಗಾಳಿ ಮಳೆಗೆ ಧರೆಗುರುಳಿದ ಮರಗಳು

ಕೆಆರ್‌ಎಸ್‌ನ ಬೃಂದಾವನಕ್ಕೆ ಶಾಸಕ ರಮೇಶ್‌ಬಾಬು ಭೇಟಿ, ಪರಿಶೀಲನೆ



ಕೆಆರ್‌ಎಸ್, ಮೇ 30– ಸೋಮವಾರ ಸಂಜೆ ಸುರಿದ ಭಾರೀ ಗಾಳಿ ಮಳೆಗೆ ಕೆ.ಆರ್. ಸಾಗರದ ಬೃಂದಾವನದಲ್ಲಿ ಹತ್ತಕ್ಕೂ ಹೆಚ್ಚು ಮರಗಳು ಧರೆಗುರುಳಿದ ಹಿನ್ನೆಲೆಯಲ್ಲಿ ಶಾಸಕ ರಮೇಶ್‌ಬಾಬು ಬಂಡಿಸಿದ್ದೇಗೌಡ ಮಂಗಳವಾರ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಈ ವೇಳೆ ಕಾವೇರಿ ನೀರಾವರಿ ನಿಗಮ, ಅರಣ್ಯ ಇಲಾಖೆ ಅಧಿಕಾರಿಗಳ ಜೊತೆ ಸಭೆ ನಡೆಸಿ ಮಾಹಿತಿ ಪಡೆದ ಶಾಸಕರು, ಶೀಘ್ರ ಪೊಳ್ಳು ಮರಗಳನ್ನು ತೆರವುಗೊಳಿಸಿ, ಬೃಂದಾವನಕ್ಕೆ ಯಾವುದೇ ಧಕ್ಕೆಯಾಗದಂತೆ ಮುಂಜಾಗ್ರತೆ ವಹಿಸಿ ಎಂದು ಸೂಚಿಸಿದರು.

5 ವರ್ಷಗಳ ಹಿಂದೆ ಮಳೆಯಿಂದ ಸಂಭವಿಸಿದ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಿದ ಶಾಸಕರು, ಇಲ್ಲಿವರೆಗೆ ಅಪಾಯಕ್ಕೆ ಆಹ್ವಾನ ನೀಡುವ ಮರಗಳನ್ನು ತೆರವುಗೊಳಿಸಿಲ್ಲ. ಈ ಕೆಲಸ ವಿಳಂಬವಾಗಲು ಕಾರಣವೇನು ಎಂದು ಅರಣ್ಯ ಇಲಾಖೆ ಎಸಿಎಫ್ ಮಹದೇವ ಸ್ವಾಮಿ ಮತ್ತು ಆರ್‌ಎಫ್‌ಓ ಅನಿತಾರನ್ನು ತರಾಟೆಗೆ ತೆಗೆದುಕೊಂಡರು.

ಕಾವೇರಿ ನೀರಾವರಿ ನಿಗಮದ ಕಾರ್ಯಪಾಲಕ ಅಭಿಯಂತರ ಜೊತೆ ಚರ್ಚಿಸಿದ ಶಾಸಕರು, ಅರಣ್ಯ ಇಲಾಖೆಗೆ ಸಹಕರಿಸಿ ಪ್ರವಾಸಿಗರಿಗೆ ತೊಂದರೆಯಾಗದಂತೆ ಸಮಸ್ಯೆ ಬಗೆಹರಿಸಿ, ಪ್ರವಾಸಿಗರಿಗೆ ಬೃಂದಾ ವನ ವೀಕ್ಷಣೆಗೆ ಅನುವು ಮಾಡಿಕೊಡಿ ಎಂದ ಅವರು, ಬಳಿಕ ದಕ್ಷಿಣ ಬೃಂದಾವನದ ದೋಣಿ ವಿಹಾರ ಕೇಂದ್ರ, ಉದ್ಯಾನವನಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಂತರ ಮಳೆಯಿಂದ ಹಾನಿಗೊಳಗಾಗಿ ರುವ ಹೊಂಗಳ್ಳಿ ಗ್ರಾಮ ವ್ಯಾಪ್ತಿಯ ಗದ್ದೆಗಳನ್ನು ರೈತರ ಜೊತೆ ವೀಕ್ಷಿಸಿ ಸೂಕ್ತ ಪರಿಹಾರ ನೀಡುವಂತೆ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಈ ವೇಳೆ ಕಾವೇರಿ ನೀರಾವರಿ ನಿಗಮದ ಕಾರ್ಯಪಾಲಕ ಅಭಿಯಂತರ ರಾಮಮೂರ್ತಿ, ತಹಸೀಲ್ದಾರ್ ಅಶ್ವಿನಿ, ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಫಾರೂಕ್ ಅಬು, ಕಿಶೋರ್ ಕುಮಾರ್, ಸಿಪಿಐ ಪುನೀತ್ ಕುಮಾರ್ ಸೇರಿದಂತೆ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಐಟಿಐಗೆ ಅರ್ಜಿ ಆಹ್ವಾನ

ಮಂಡ್ಯ, ಮೇ 30– ಚಿನಕುರಳಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಿಂದ ಪ್ರಸಕ್ತ ಸಾಲಿನ ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಪ್ರವೇಶ ಬಯಸುವ ಅಭ್ಯರ್ಥಿಗಳು ಜೂ.7 ರೊಳಗಾಗಿ www.cite.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೊ. 7019629409/9900683214 ಅನ್ನು ಸಂಪರ್ಕಿಸಬಹುದು ಎಂದು ಪಾಂಡವಪುರ ತಾಲೂಕಿನ ಚಿನಕುರಳಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೀಡಿ ಕಾಲೋನಿಗೆ ಶಾಸಕರ ಭೇಟಿ, ಪರಿಶೀಲನೆ



ಮಂಡ್ಯ, ಮೇ 30– ಶಾಸಕ ಗಣಿಗ ರವಿಕುಮಾರ್ ಮಂಗಳವಾರ ಕೆರೆ ಅಂಗಳದ ನಿವಾಸಿಗಳ ಕುಂದುಕೊರತೆ ಆಲಿಸಿ ಮೂಲಭೂತ ಸೌಕರ್ಯ ಹಾಗೂ ಸ್ಥಳೀಯ ಸಮಸ್ಯೆಗಳ ಪರಿಶೀಲನೆ ನಡೆಸಿದರು.

ಮುಂಗಾರು ಮಳೆ ಪ್ರಾರಂಭವಾಗುತ್ತಿರುವ ಹಿನ್ನಲೆ ಮುನ್ನೆಚ್ಚರಿಕೆ ಕ್ರಮವಾಗಿ ಕೈಗೆತ್ತಿ ಕೊಳ್ಳಬೇಕಾದ ಕಾರ್ಯಗಳ ಕುರಿತು ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ನಡೆಸಿದರು.

ನಂತರ ಮಾತನಾಡಿದ ಅವರು, ಕರ್ನಾಟಕ ಗೃಹ ಮಂಡಳಿಯಿಂದ ನಿರ್ಮಿಸಿರುವ ಬಡಾವಣೆಯ ಕಾಲುವೆಗಳಿಗೆ ಮಳೆಗಾಲದಲ್ಲಿ ನೀರು ನುಗ್ಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಇದನ್ನು ಕೂಡಲೇ ಬಗೆಹರಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುತ್ತೇನೆ ಎಂದರು.

ಮಳೆಗಾಲದಲ್ಲಿ ಇಲ್ಲಿನ ನಿವಾಸಿಗಳಿಗೆ ತೊಂದರೆಯಾಗುತ್ತಿದ್ದು, ಸದ್ಯದ ಪರಿಸ್ಥಿತಿಯಲ್ಲಿ ಸಮಸ್ಯೆ ಬರದಂತೆ ನೋಡಿಕೊಂಡು ಮುಂದಿನ ದಿನಗಳಲ್ಲಿ ಶಾಶ್ವತ ಪರಿಹಾರ ನೀಡುವುದಾಗಿ ತಿಳಿಸಿದರು.

ಈ ವೇಳೆ ಮಂಡ್ಯ ಪ್ರಭಾರ ಉಪವಿಭಾಗಾಧಿಕಾರಿ ಕೃಷ್ಣಕುಮಾರ್, ತಹಸೀಲ್ದಾರ್ ವಿಜಯ್ ಕುಮಾರ್, ಕೊಳಗೇರಿ ಅಭಿವೃದ್ಧಿ ಮಂಡಳಿ ಅಭಿಯಂತರ ದರ್ಶನ್, ನಗರಸಭೆ ಅಭಿಯಂತರ ರವಿಕುಮಾರ್, ನಗರಸಭೆ ಆರೋಗ್ಯ ಪರಿವೀಕ್ಷಕ ಚೆಲುವರಾಜು ಸೇರಿದಂತೆ ಇನ್ನಿತರರಿದ್ದರು.

ಪೂರ್ಣಗೊಳ್ಳದ ಕುಡಿಯುವ ನೀರಿನ ಯೋಜನೆ ಪುರಸಭೆಗೆ ಹಸ್ತಾಂತರ

ಅಧಿಕಾರಿಗಳಿಗೆ ಶಾಸಕ ಪಿ.ಎಂ.ನರೇಂದ್ರಸ್ವಾಮಿ ತರಾಟೆ



ಮಳವಳ್ಳಿ, ಮೇ 30– ಪೂರ್ಣಗೊಳ್ಳದ 71 ಕೋಟಿ ರೂ. ವೆಚ್ಚದ ಪಟ್ಟಣದ 24x7 ಕುಡಿಯುವ ನೀರಿನ ಯೋಜನೆಯನ್ನು ಪುರಸಭೆಗೆ ಹಸ್ತಾಂತರ ಮಾಡಿರುವ ಅಧಿಕಾರಿಗಳನ್ನು ಶಾಸಕ ಪಿ.ಎಂ. ನರೇಂದ್ರಸ್ವಾಮಿ ತರಾಟೆಗೆ ತೆಗೆದುಕೊಂಡರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ತಾಲೂಕು ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಪುರಸಭೆ ಮುಖ್ಯಾಧಿಕಾರಿ ಮಹದೇವಯ್ಯ ವರದಿ ಮಂಡಿಸುತ್ತಿದ್ದ ವೇಳೆ ಕುಡಿಯುವ ನೀರಿನ ಯೋಜನೆ ಸ್ಥಿತಿಗತಿಗಳ ಬಗ್ಗೆ ಮಾಹಿತಿ ಪಡೆದು ಕೋಪಗೊಂಡ ಶಾಸಕರು, ನಾನು ಈ ಹಿಂದೆ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದ ವೇಳೆ ಒತ್ತಡ ತಂದು ತಂದಿದ್ದ ಯೋಜನೆಯನ್ನು ಹಾಳು ಮಾಡಿರುವ ನೀವು ಶೇ.50ರಷ್ಟು ಪೂರ್ಣಗೊಳ್ಳದೇ ಪುರಸಭೆಗೆ ಹೇಗೆ ಹಸ್ತಾಂತರ ಮಾಡಿದ್ದೀರಿ. ನೀವು ಎಷ್ಟು ಬಾರಿ ಅದನ್ನು ಪರಿಶೀಲನೆ ಮಾಡಿದ್ದೀರಿ ಎಂದು ನಗರ ನೀರು ಸರಬರಾಜು ಇಲಾಖೆ ಇಂಜಿನಿಯರ್‌ಗೆ ತರಾಟೆಗೆ ತೆಗೆದುಕೊಂಡರು. ಸರ್ಕಾರದ ಸ್ಪಷ್ಟ ಆದೇಶವಿಲ್ಲದಿದ್ದರೂ, ಗ್ರಾಮೀಣ ಭಾಗದಲ್ಲಿ ಜಲಜೀವನ್ ಮಿಷನ್ ಯೋಜನೆಯಡಿ ಜನರ ಮೇಲೆ ಒತ್ತಡ ತಂದು ಮೀಟರ್ ಅಳವಡಿಸುತ್ತಿರುವುದನ್ನು ಕೂಡಲೇ ನಿಲ್ಲಿಸುವಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

592 ಕೋಟಿ ರೂ. ವೆಚ್ಚದ ಪೂರಿಗಾಲಿ ಹನಿ ನೀರಾವರಿ ಯೋಜನೆ ಬಗ್ಗೆ ಅಲ್ಲಿನ ರೈತರಿಗೆ ಪ್ರಚಾರದ ಮೂಲಕ ಅರಿವು ಮೂಡಿಸಿ ಬಹುತೇಕ ಮಂದಿಗೆ ಯೋಜನೆ ಆಳ ಅಗಲವೇ ಗೊತ್ತಿಲ್ಲ. ಅಲ್ಲದೇ ಯೋಜನೆಯಡಿ ಸಹಕಾರ ಸಂಘಗಳ ನಿರ್ಮಾಣ ಕಾರ್ಯವನ್ನು ಅದಷ್ಟು ಬೇಗ ಮಾಡಬೇಕು. ಇನ್ನೂ ಕೆಲವೇ ದಿನಗಳಲ್ಲಿ ಕಾಮಗಾರಿ ಪೂರ್ಣಗೊಳಿಸಿ ರೈತರಿಗೆ ನೀರು ಕೊಡಬೇಕು. ಅಲ್ಲದೇ ಅದನ್ನು ಮಾದರಿಯಾಗಿ ಜಿಲ್ಲೆಗೆ ವಿಸ್ತಾರ ಮಾಡುವ ಗುರಿ ಹೊಂದಿದ್ದೇವೆ. ಅದಕ್ಕೆ ಬೇಕಾದ ಸೌಲಭ್ಯಗಳನ್ನು ನೀಡುವೆ ಎಂದರು.

ಲೋಕೋಪಯೋಗಿ ವ್ಯಾಪ್ತಿಯ ರಸ್ತೆಗಳ ಅಭಿವೃದ್ಧಿಗೆ ಮುಂದಾಗಬೇಕು. ಮತ್ತಿತಾಳೇಶ್ವರಸ್ವಾಮಿ ದೇವಸ್ಥಾನದ ರಸ್ತೆ ಸೇರಿದಂತೆ ಗ್ರಾಮೀಣಾಭಿವೃದ್ಧಿಗೆ ಬೇಕಾದ ಅನುದಾನ ತರಲು ಬದ್ಧನಾಗಿದ್ದೇನೆ. ಮೈಸೂರು ರಸ್ತೆಯ ಕನ್ನಹಳ್ಳಿ, ರಾಗಿಬೊಮ್ಮನಹಳ್ಳಿ, ಕಿರುಗಾವಲು ಬಳಿ ಗುಂಡಿಗಳನ್ನು ತಕ್ಷಣ ಮುಚ್ಚಬೇಕು. ಆರೋಗ್ಯ ಇಲಾಖೆ ವೈದ್ಯರ ಕೊರತೆ ನೀಗಿಸಲಾಗುವುದು. ಹೆಚ್ಚುವರಿ ಸಿಬ್ಬಂದಿ ನೇಮಕದೊಂದಿಗೆ ತುರ್ತು ವಾಹನ ಒದಗಿಸಲಾಗುವುದು ಎಂದರು. ನಂತರ ವಿವಿಧ ಇಲಾಖೆಗಳ ಅಧಿಕಾರಿಗಳಿಂದ ಮಾಹಿತಿ ಪಡೆದು ಅಭಿವೃದ್ಧಿ ಕಾಮಗಾರಿಗಳ ಅವ್ಯವಸ್ಥೆ ಕಂಡು ತೀವ್ರ ಆಕ್ರೋಶ ವ್ಯಕ್ತಪಡಿಸಿದ ಅವರು ಕೂಡಲೇ ಎಲ್ಲವನ್ನೂ ಸರಿಪಡಿಸಿಕೊಳ್ಳಬೇಕು ಎಂದು ಎಚ್ಚರಿಕೆ ನೀಡಿದರು.

ಸಿಎಂ ಸಿದ್ದರಾಮಯ್ಯ ಅವರಂತೆ ನಾನು ಸಹ ಯಾವುದೇ ಹಾರ ತುರಾಯಿಗಳನ್ನು ಸ್ವೀಕರಿಸುವುದಿಲ್ಲ. ಹೀಗಾಗಿ ಅಧಿಕಾರಿಗಳು ಹಾಗೂ ಕಾರ್ಯಕರ್ತರು ಹಾರ ತುರಾಯಿಗಳನ್ನು ತರಬಾರದು. ಅಗತ್ಯಬಿದ್ದರೆ ಪುಸ್ತಕಗಳನ್ನು ನೀಡಬೇಕು ಎಂದು ಸೂಚನೆ ನೀಡಿದರು.

ತಹಸೀಲ್ದಾರ್ ಕೆಎನ್.ಲೋಕೇಶ್, ತಾಪಂ ಇಓ ರಾಮಲಿಂಗಯ್ಯ, ಪುರಸಭೆ ಮುಖ್ಯಾಧಿಕಾರಿ ಮಹದೇವಯ್ಯ, ಡಿವೈಎಸ್‌ಪಿ ಎನ್.ನವೀನ್ ಕುಮಾರ್ ಇದ್ದರು.

ರಾಜ್ಯಾದ್ಯಂತ ಭಾರೀ ಮಳೆ: ಬೆಳಗಾವಿಯಲ್ಲಿ ಸಿಡಿಲು ಬಡಿದು 2 ಸಾವು, ರಾಮನಗರದ ವ್ಯಕ್ತಿ ಆಸ್ಪತ್ರೆಗೆ ದಾಖಲು, ಬೆಂಗಳೂರಿನಲ್ಲಿ ಹಲವು ಪ್ರದೇಶ ಜಲಾವೃತ

ಬೆಂಗಳೂರು, ಮೇ 30– ರಾಜ್ಯಾದ್ಯಂತ ಮಂಗಳವಾರ ಭಾರೀ ಮಳೆಯಾಗಿದ್ದು, ಮಳೆಗೆ ಅಥಣಿಯಲ್ಲಿ ಸಿಡಿಲು ಬಡಿದು ಇಬ್ಬರು ಮೃತಪಟ್ಟಿದ್ದಾರೆ.

ರಾಜ್ಯದಲ್ಲಿ ಮುಂಗಾರು ಮಳೆ ಆಗಮನದ ಮೊದಲೇ ಗುಡುಗು, ಸಿಡಿಲಿನ ಅಬ್ಬರ ಹೆಚ್ಚಾಗಿದೆ. ಬೆಳಗಾವಿ ಜಿಲ್ಲೆ ಅಥಣಿ ತಾಲೂಕಿನಲ್ಲಿ ಪ್ರತ್ಯೇಕ ಪ್ರಕರಣದಲ್ಲಿ ಸಿಡಿಲು ಬಡಿದು ಒಬ್ಬ ಯುವಕ, ಓರ್ವ ಮಹಿಳೆ ಮೃತಪಟ್ಟಿದ್ದಾರೆ.

ಕೋಡಿಹಳ್ಳಿ ಗ್ರಾಮದ ಕೆಸ್ಕರಿ ದಡ್ಡಿ ನಿವಾಸಿಯಾದ ಅಮೂಲ್ ಜಯಸಿಂಗ ಕಾನಡೆ (24 ವರ್ಷ) ಮತ್ತು ವಿಠ್ಠಬಾಯಿ ಮಹದೇವ ಕಾಮಕರ (50 ವರ್ಷ) ಎಂಬುವರು ಸಿಡಿಲು ಬಡಿದು ಸಾವಪ್ಪಿದ್ದಾರೆ. ಇವರು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಅಡಿಯುಡಿ ಗ್ರಾಮದ ನಿವಾಸಿಯಾಗಿದ್ದು, ಅಥಣಿ ತಾಲೂಕಿನ ದೇಸಾರಹಟ್ಟಿ ಗ್ರಾಮದ ಮಗಳ ಮನೆಗೆ ಬಂದಾಗ ಈ ದುರ್ಘಟನೆ ಸಂಭವಿಸಿದೆ ಎಂದು ತಿಳಿದುಬಂದಿದೆ.



ಅಕಾಲಿಕ ಮಳೆ ಬೆಂಗಳೂರು, ಮೈಸೂರು, ಕಿತ್ತೂರು ಕರ್ನಾಟಕ ಭಾಗದಲ್ಲೂ ಬೀಳುತ್ತಿದೆ. ಬೆಳಗಾವಿ ಜಿಲ್ಲೆಯ ಕಾಗವಾಡ ಮತ್ತು ರಾಯಬಾಗ್ ತಾಲೂಕುಗಳಲ್ಲಿ ಬಿರುಗಾಳಿ ಸಮೇತ ಜೋರು ಮಳೆ ಯಾಗಿದೆ. ಎರಡೂ ಕಡೆಗಳಲ್ಲಿ ಆಲಿಕಲ್ಲು ಸುರಿದ ಮಾಹಿತಿ ಲಭ್ಯವಾಗಿದೆ.

ಮುನ್ನೆಚ್ಚರಿಕೆ ಹೀಗಿರಲಿ

- ಮನೆಯ ಕಿಟಕಿ ಬಾಗಿಲು ಮುಚ್ಚಿ
- ಸಾಧ್ಯವಾದರೆ ದೂರ ಪ್ರಯಾಣಗಳನ್ನು ತಪ್ಪಿಸಿ
- ಮರದ ಕೆಳಗೆ ಆಶ್ರಯ ಪಡೆಯಬೇಡಿ
- ಕಾಂಕ್ರೀಟ್ ಗೋಡೆಗಳಿಗೆ ಒರಗಬೇಡಿ
- ವಿದ್ಯುತ್, ಎಲೆಕ್ಟ್ರಾನಿಕ್ ಉಪಕರಣಗಳನ್ನು ಅನ್‌ಪ್ಲಗ್ ಮಾಡಿ..
- ಬೈಕ್, ವಾಹನ ಚಾಲನೆ ವೇಳೆ ಎಚ್ಚರವಹಿಸಿ.

ರಾಮನಗರದಲ್ಲಿ ಸಿಡಿಲು ಬಡಿದು ವ್ಯಕ್ತಿ ಆಸ್ಪತ್ರೆಗೆ ದಾಖಲು: ರಾಮನಗರದಲ್ಲೂ ಭಾರೀ ಮಳೆಯಾಗಿದ್ದು, ಸಿಡಿಲು ಬಡಿದು ಅಸ್ವಸ್ಥರಾಗಿದ್ದ ವ್ಯಕ್ತಿಯೊಬ್ಬರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.



ಬೆಂಗಳೂರಿನಲ್ಲೂ ಭಾರಿ ಮಳೆ: ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಬಿರುಗಾಳಿ ಸಹಿತ ಭಾರೀ ಮಳೆ ಸುರಿಯುತ್ತಿದ್ದು, ಜೆಸಿ ರಸ್ತೆ, ಕಾರ್ಪೊರೇಷನ್ ವೃತ್ತ ಸೇರಿದಂತೆ ನಗರಾದ್ಯಂತ ಹಲವೆಡೆ ಮಳೆ ನೀರಿನ ಪ್ರವಾಹ ಪರಿಸ್ಥಿತಿ ಉಂಟಾಗಿ ಭಾರಿ ಟ್ರಾಫಿಕ್ ಜಾಮ್ ಉಂಟಾಗಿದೆ. ಬೆಂಗಳೂರಿನಲ್ಲಿ ಬಿರುಗಾಳಿ ಸಹಿತ ಭಾರೀ ಮಳೆ ಸುರಿಯುತ್ತಿದ್ದು, ಜೆಸಿ ರಸ್ತೆ, ಕಾರ್ಪೊರೇಷನ್ ವೃತ್ತ, ಶಾಂತಿನಗರ, ಜಯನಗರ, ಕೆಆರ್ ಮಾರುಕಟ್ಟೆ, ಬೆಳ್ಳಂದೂರು, ವಿಜಯನಗರ, ಮೆಜೆಸ್ಟಿಕ್, ಬನಶಂಕರಿ, ಜೆಪಿನಗರ, ರಾಜಾಜಿನಗರ ಸೇರಿದಂತೆ ಹಲವೆಡೆ ಮಳೆ ಸುರಿಯುತ್ತಿದೆ. ನಗರದ ತಗ್ಗು ಪ್ರದೇಶಗಳ ರಸ್ತೆಗಳು ಜಲಾವೃತಗೊಂಡಿದ್ದು, ದ್ವಿಚಕ್ರ ವಾಹನ ಸವಾರರು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ.

ಮಳೆ ಆರಂಭಕ್ಕೆ ದಿನಗಣನೆ: ಕರ್ನಾಟಕದಲ್ಲಿ ಪೂರ್ವ ಮುಂಗಾರು ಗುಡುಗು, ಸಿಡಿಲಿನ ಸಮೇತ ಅಬ್ಬರಿಸುತ್ತಿದೆ. ಜೂನ್ 1ರ ವರೆಗೆ ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಪೂರ್ವ ಮುಂಗಾರಿನ ಪರಿಣಾಮ ಚಿಕ್ಕಮಗಳೂರು, ಕೊಡಗು ಮತ್ತು ಶಿವಮೊಗ್ಗ ಜಿಲ್ಲೆಯಲ್ಲಿ ಭಾರೀ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಣೆ ಮಾಡಲಾಗಿದೆ.

ಪುತ್ರನ ಮದುವೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಹ್ವಾನಿಸಿದ ಸುಮಲತಾ



ಬೆಂಗಳೂರು: ರಾಜಕೀಯ ಕೆಸರೆರೆಚಾಟಗಳನ್ನು ಬದಿಗೊತ್ತಿದ ಸುಮಲತಾ ಅಂಬರೀಷ್ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸೋಮವಾರ ಭೇಟಿ ಮಾಡಿದ್ದು, ಪುತ್ರ ಅಭಿಷೇಕ್ ಅಂಬರೀಷ್ ಮದುವೆಗೆ ಆಹ್ವಾನಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ, ಆಮಂತ್ರಣ ಪತ್ರಿಕೆ ನೀಡಿದ ಫೋಟೋಗಳನ್ನು ಸ್ವತಃ ಸುಮಲತಾ ಅವರೇ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಿದ್ದಾರೆ.

ರೆಬೆಲ್ ಸ್ಟಾರ್ ಅಂಬರೀಶ್ ಪುತ್ರಅಭಿಷೇಕ್ ವಿವಾಹಕ್ಕೆ ದಿನಗಣನೆ ಶುರುವಾಗಿದ್ದು, ಚಂದನವನದಲ್ಲಿ ಮತ್ತೊಂದು ಜೋಡಿ ಹಸೆಮಣೆ ಏರಲು ಸಜ್ಜಾಗಿದೆ. ಅಭಿಷೇಕ್ ಅಂಬರೀಶ್ ಅವರ ವಿವಾಹ ಮಾಡೆಲ್ ಅವಿವಾ ಬಿದ್ದಪ್ ಜೊತೆಗೆ ಫಿಕ್ಸ್ ಆಗಿದ್ದು, ಜೂನ್ 5ರಂದು ಅದ್ದೂರಿಯಾಗಿ ವಿವಾಹ ಕಾರ್ಯಕ್ರಮ ಜರುಗಲಿದೆ.

ಜೂನ್ 7ರಂದು ಭರ್ಜರಿಯಾಗಿ ಆರತಕ್ಷತೆ ಸಮಾರಂಭ ನಡೆಯಲಿದ್ದು, ಅಭಿಷೇಕ್– ಅವಿವಾ ವಿವಾಹದ ಆಮಂತ್ರಣ ಪತ್ರಿಕೆ ಈಗಾಗಲೇ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಮಹಾರಾಷ್ಟ್ರದ ಏಕೈಕ ಕಾಂಗ್ರೆಸ್ ಸಂಸದ ನಿಧನ



ಮುಂಬೈ: ಮಹಾರಾಷ್ಟ್ರ ಕಾಂಗ್ರೆಸ್‌ನ ಏಕೈಕ ಲೋಕಸಭಾ ಸದಸ್ಯ ಬಾಲು ಧನೋರ್ಕರ್ ಮಂಗಳವಾರ ಮುಂಜಾನೆ ದೆಹಲಿಯ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು ಎಂದು ಪಕ್ಷದ ನಾಯಕರೊಬ್ಬರು ತಿಳಿಸಿದ್ದಾರೆ. ಅವರಿಗೆ 48 ವರ್ಷ ವಯಸ್ಸಾಗಿತ್ತು. ಮೃತರು ಪತ್ನಿ ಪ್ರತಿಭಾ ಧನೋರ್ಕರ್ ಮತ್ತು ಇಬ್ಬರು ಪುತ್ರರನ್ನು ಅಗಲಿದ್ದಾರೆ.

ಮೂತ್ರಪಿಂಡದ ಕಲ್ಲು ಸಮಸ್ಯೆಯಿಂದ ಬಳಲುತ್ತಿದ್ದ ಅವರನ್ನು ಚಿಕಿತ್ಸೆಗಾಗಿ ಕಳೆದ ವಾರ ನಾಗ್ಪುರ ಮೂಲದ ಆಸ್ಪತ್ರೆಗೆ ದಾಖಲಿಸಲಾಗಿತ್ತು ನಂತರ ನವದೆಹಲಿಗೆ ಸ್ಥಳಾಂತರಿಸಲಾಗಿತ್ತು ಎಂದು ಕಾಂಗ್ರೆಸ್ ನಾಯಕ ಬಾಳಾಸಾಹೇಬ್ ಥೋರಟ್ ಹೇಳಿದ್ದಾರೆ. ಧನೋರ್ಕರ್ ಅವರ ನಿಧನಕ್ಕೆ ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಸಂತಾಪ ಸೂಚಿಸಿದ್ದಾರೆ.

ಚಂದ್ರಾಪುರ ಜಿಲ್ಲೆಯಲ್ಲಿ ಬಾಳಾ ಸಾಹೇಬ್ ಠಾಕ್ರೆ ನೇತೃತ್ವದ ಶಿವಸೇನೆಯಲ್ಲಿ ತಮ್ಮ ರಾಜಕೀಯ ವೃತ್ತಿಜೀವನ ಪ್ರಾರಂಭಿಸಿದ ಧನೋಕರ್ 2014 ರಲ್ಲಿ ವಿಧಾನಸಭಾ ಚುನಾವಣೆಯಲ್ಲಿ ಗೆದಿದ್ದರು. ನಂತರ ಕಾಂಗ್ರೆಸ್ ಪಕ್ಷ ಸೇರಿ ಅದೇ ಕ್ಷೇತ್ರದಿಂದ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ಗೆಲುವು ಸಾಧಿಸಿದ್ದರು.

ಗ್ರಂಥಾಲಯಗಳಲ್ಲಿ ಬೇಸಿಗೆ ಶಿಬಿರ; ಗ್ರಾಮೀಣ ಮಕ್ಕಳ ಪ್ರತಿಭೆ ಅನಾವರಣ



ಮೈಸೂರು, ಮೇ 30(ಎಸ್‌ಬಿಡಿ)– ಸರ್ಕಾರದ ನಿರ್ದೇಶನದಂತೆ ಗ್ರಂಥಾಲಯಗಳಲ್ಲಿ ಆಯೋಜಿಸಿದ್ದ ಬೇಸಿಗೆ ಶಿಬಿರ, ಗ್ರಾಮೀಣ ಮಕ್ಕಳ ಪ್ರತಿಭೆ ಅನಾವರಣಗೊಳಿಸುವಲ್ಲಿ ಯಶಸ್ವಿಯಾಯಿತು.

ಗ್ರಾಮ ಪಂಚಾಯಿತಿ ನೇತೃತ್ವದಲ್ಲಿ ಜಿಲ್ಲೆಯ 256 ಕೇಂದ್ರಗಳಲ್ಲಿ ಮೇ 19 ರಿಂದ 27ರವರೆಗೆ ಏರ್ಪಡಿಸಲಾಗಿದ್ದ ಅತ್ಯಾಕರ್ಷಕ ಹಾಗೂ ವಿಭಿನ್ನ ಪ್ರಯೋಗಾತ್ಮಕ ಚಿಣ್ಣರ ಬೇಸಿಗೆ ಶಿಬಿರ ಯಶಸ್ವಿಯಾಗಿ ಸಂಪನ್ನಗೊಂಡಿದೆ. ಅತೀವ ಆಸಕ್ತಿಯಿಂದ ಶಿಬಿರದಲ್ಲಿ ಪಾಲ್ಗೊಂಡ ಮಕ್ಕಳು, ತಮ್ಮಲ್ಲಿ ಸುಪ್ತವಾಗಿದ್ದ ನಾನಾ ಕೌಶಲಗಳನ್ನು ಪ್ರದರ್ಶಿಸಿದ್ದಾರೆ. 8 ದಿನಗಳ ವಿಭಿನ್ನ ಕಾರ್ಯಕ್ರಮದಿಂದ ಮಕ್ಕಳಲ್ಲಾದ ಬದಲಾವಣೆ ಕಂಡು ಪೋಷಕರೂ ಸಂತಸಗೊಂಡಿದ್ದಾರೆ.

ಏನಿದು ಕಾರ್ಯಕ್ರಮ?: ಗ್ರಾಮ ಪಂಚಾಯಿತಿ ಕೇಂದ್ರ, ಸರ್ಕಾರಿ ಶಾಲೆ ಹಾಗೂ ಗ್ರಂಥಾಲಯಗಳಲ್ಲಿ ನಿತ್ಯ ಬೆ.10ರಿಂದ 1.30ರವರೆಗೆ 8 ರಿಂದ 13 ವರ್ಷದ 40 ಮಕ್ಕಳಿಗೆ ವಿಶೇಷ ಚಟುವಟಿಕೆ ರೂಪಿಸಲಾಗಿತ್ತು. ಗ್ರಾಪಂ ಅಭಿವೃದ್ಧಿ ಅಧಿಕಾರಿಗಳ ನೇತೃತ್ವದಲ್ಲಿ ನಡೆದ ಕಾರ್ಯಕ್ರಮಕ್ಕೆ ಗ್ರಂಥಪಾಲಕರು, ಸ್ವಯಂ ಸೇವಕರೊಂದಿಗೆ ಆಸಕ್ತ ಶಾಲಾ ಶಿಕ್ಷಕರು, ನಿವೃತ್ತ ಶಿಕ್ಷಕರು, ನಿವೃತ್ತ ಅಂಗನವಾಡಿ ಕಾರ್ಯಕರ್ತೆಯರು, ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ಶಿಕ್ಷಣ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಪ್ರತಿನಿಧಿಗಳು ಸಹಕಾರ ನೀಡಿದರು.



ಓದುವುದು, ಬರೆಯುವುದು, ಸಂಖ್ಯೆ, ವಿಜ್ಞಾನ ವಿಷಯವನ್ನು ಕಲಿಸುವುದರ ಜೊತೆಗೆ ಮಕ್ಕಳಲ್ಲಿ ನಾಯಕತ್ವ ಗುಣ ಮತ್ತು ಸಂವಹನ ಕೌಶಲ್ಯ ಅಭಿವೃದ್ಧಿ, ಪರಿಸರ, ಸಾಮಾಜಿಕ ಕಾಳಜಿ ಬೆಳೆಸುವುದು, ಸ್ಥಳೀಯ ಸಂಸ್ಕೃತಿ, ಜೀವನ ಶೈಲಿ, ಇತಿಹಾಸ ಅಂಶಗಳನ್ನು ತಿಳಿಸಿಕೊಡುವುದು, ಮಕ್ಕಳಲ್ಲಿರುವ ಸೃಜನಾತ್ಮಕ ಸಾಮರ್ಥ್ಯವನ್ನು ಗುರುತಿಸಿ ಪ್ರೋತ್ಸಾಹಿಸುವುದು ಕಾರ್ಯಕ್ರಮದ ಉದ್ದೇಶವಾಗಿತ್ತು. ಈ ಮೂಲಕ ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿರುವ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಲು ಮಕ್ಕಳನ್ನು ಪ್ರೇರೇಪಿಸಲಾಯಿತು.

ಏನೆಲ್ಲಾ ಚಟುವಟಿಕೆ?: ಮಕ್ಕಳಿಂದ ದಿನಪತ್ರಿಕೆ, ನಿಯತಕಾಲಿಕಗಳನ್ನು ಓದಿಸುವುದು, ಚಿತ್ರ ಬಿಡಿಸುವುದು, ಕಥೆ ಕಟ್ಟುವುದು ಹಾಗೂ ನಿಧಿ ಶೋಧ, ಗಟ್ಟಿ ಓದು ಮತ್ತು ಪತ್ರ ಬರವಣಿಗೆ, ಕಾಮನಬಿಲ್ಲು ಮೂಡಿಸುವಿಕೆ, ವಿವಿಧ ಗಣಿತದ ಘನಾಕೃತಿಗಳ ಪರಿಚಯ, ಚಿನ್ನಿ ದಾಂಡು, ಗ್ರಾಮದಲ್ಲಿ ಬಳಸುವ ಅಳತೆ ಮತ್ತು ಮಾಪಕಗಳು, ಪೇಪರ್ ಫ್ಯಾನ್, ಜೆಟ್ ಫೋನ್, ಕಣ್ಣು ಮಿಟುಕಿಸುವ ಗೊಂಬೆ, ಚದುರಂಗ, ಕೇರಂ, ಆಕಾಶ ವೀಕ್ಷಣೆ ಮತ್ತಿತರೆ ಚಟುವಟಿಕೆ ನಡೆಸಲಾಯಿತು. ಜೊತೆಗೆ ಆಯಾ ಊರಿನಲ್ಲಿರುವ ನೀರಿನ ಮೂಲ, ಇತಿಹಾಸ, ಜಾತ್ರೆ, ಜನಪದ ಗೀತೆ ಮತ್ತು ಕಥೆ, ಕ್ರೀಡೆ ಹಾಗೂ ಕಲೆಗಳನ್ನು ಮಕ್ಕಳ ಮೂಲಕವೇ ಪರಿಚಯಿಸಲಾಯಿತು. ಅಂಚೆ ಕಛೇರಿ, ಹಾಲು ಉತ್ಪಾದಕರ ಸಹಕಾರ ಸಂಘ, ಬ್ಯಾಂಕ್, ಪಶು ವೈದ್ಯಕೀಯ ಆಸ್ಪತ್ರೆ, ಅಂಗನವಾಡಿ ಕೇಂದ್ರ, ಗ್ರಾಮ ಪಂಚಾಯ್ತಿ, ಆಸ್ಪತ್ರೆಗೆ ಕರೆದೊಯ್ದು ಅಲ್ಲಿನ ಕಾರ್ಯಚಟುವಟಿಕೆಗಳ ಬಗ್ಗೆಯೂ ಪರಿಚಯಿಸಿಕೊಡಲಾಯಿತು. ಜೊತೆಗೆ ಒಂದು ದಿನದ ಆನ್‌ಲೈನ್ ತರಬೇತಿಯನ್ನು ನೀಡಲಾಯಿತು.

ಮಕ್ಕಳು ಚಿತ್ರ ಬಿಡಿಸಿ, ಮಣ್ಣಿನ ಆಕೃತಿ ರಚಿಸಿದರಲ್ಲದೆ ಸ್ಥಳೀಯ ದೇವಾಲಯ, ಪಾರಂಪರಿಕ ಕಟ್ಟಡಗಳು, ಹಾಲಿನ ಡೇರಿ, ಹೊಲ–ಗದ್ದೆಗಳಿಗೂ ಭೇಟಿ ನೀಡಿದರು. ತಾವು ನೋಡಿದ ಸ್ಥಳಗಳು ಹಾಗೂ ತಾವು ಕಲಿತ ವಿಷಯಗಳ ಬಗ್ಗೆ ಪರಸ್ಪರ ಮಾಹಿತಿ ಹಂಚಿಕೊಂಡಿದ್ದು ಶಿಬಿರದ ಯಶಸ್ಸಿಗೆ ಸಾಕ್ಷಿಯಾಗಿತ್ತು.

ಕ್ಯಾನ್ಸರ್‌ನಿಂದ ಪಾರಾದವರು, ಬೀಡಿ ಕಟ್ಟುವವರ ಬವಣೆ ಚಿತ್ರ ಪ್ರದರ್ಶನ

ಮೈಸೂರು, ಮೇ 30(ಎಂಕೆ)– ಕ್ಯಾನ್ಸರ್‌ನಿಂದ ಬದುಕುಳಿದ ಹಾಗೂ ಬೀಡಿ ಸುತ್ತುವ ಕೆಲಸ ಮಾಡುವ ಮಹಿಳೆಯರು ತಮ್ಮ ಜೀವನದ ಪ್ರಯಾಣವನ್ನು ಹಂಚಿಕೊಂಡಿರುವ ಛಾಯಾಚಿತ್ರಗಳ ಪ್ರದರ್ಶನವನ್ನು ಜೂ.3ರಂದು ನಗರದ ಗ್ರ್ಯಾಂಡ್ ಮರ್ಕ್ಯುರಿ ಹೋಟೇಲ್‌ನಲ್ಲಿ ಆಯೋಜಿಸಲಾಗಿದೆ ಎಂದು ಅರಿಜೋನಾ ವಿಶ್ವ ವಿದ್ಯಾನಿಲಯದ ಪ್ರೊ. ಡಾ. ಪೂರ್ಣಿಮಾ ಮದಿವನ್ನನ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾರ್ವಜನಿಕ ಆರೋಗ್ಯ ಯೋಜನೆ ಅಡಿಯಲ್ಲಿ ಕ್ಯಾನ್ಸರ್‌ನಿಂದ ಬದುಕುಳಿದ ಮಹಿಳೆಯರ ಅನುಭವ ಹಾಗೂ ಬೀಡಿ ಸುತ್ತುವ ಕೆಲಸ ಮಾಡುವ ಮಹಿಳೆಯರು ಎದುರಿಸುತ್ತಿರುವ ಸವಾಲುಗಳನ್ನು ಈ ಛಾಯಾಚಿತ್ರಗಳಿಂದ ತಿಳಿಯಬಹುದಾಗಿದೆ. ಪ್ರದರ್ಶನದಲ್ಲಿ ಬೀಡಿ ಕಾರ್ಮಿಕರ ಬಗ್ಗೆ ಫೋಟೋವಾಯ್ಸ್ ಸಂಶೋಧನೆ ನಡೆಸುತ್ತಿರುವ ಅರಿಜೋನಾ ವಿಶ್ವವಿದ್ಯಾನಿಲಯದ ಡಾ. ಪ್ರಿಯಾಂಕ ರವಿ ಭಾಗವಹಿಸಲಿದ್ದಾರೆ. ಹಾಗೆಯೇ ಸಾರ್ವಜನಿಕ ಆರೋಗ್ಯ ಸಂಸ್ಥೆ ಸಹಯೋಗದಲ್ಲಿ ಮೈಸೂರು ತಾಲೂಕಿನ ಗ್ರಾಮೀಣ ಪ್ರದೇಶದಲ್ಲಿ ಮಹಿಳೆಯರಿಗೆ ಗರ್ಭಕಂಠದ ಕ್ಯಾನ್ಸರ್ ತಪಾಸಣಾ ಶಿಬಿರವನ್ನು ಉಚಿತವಾಗಿ ಆಯೋಜಿಸಿ, ಕ್ಯಾನ್ಸರ್ ಪತ್ತೆಯಾದವರಿಗೆ ಚಿಕಿತ್ಸೆ ಕೊಡಿಸುವ ಕೆಲಸ ಮಾಡಲಾಗುವುದು ಎಂದು ತಿಳಿಸಿದರು. ಪ್ರೊ. ಇಂದಿರಾ, ಡಾ. ರಾಘವಿ ಕರಣಂ ಉಪಸ್ಥಿತರಿದ್ದರು.



ಕೆಆರ್‌ಎಸ್ ರಸ್ತೆಯಲ್ಲಿರುವ ಜೆಎಸ್‌ಎಸ್ ಸಿಂಹಸುಬ್ಬ ಮಹಾಲಕ್ಷ್ಮಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಗೀತಾ ಸಂಹಿತ–2023 ಸಾಂಸ್ಕೃತಿಕ ಕಾರ್ಯಕ್ರಮದ ಪರ್ಯಾಯ ಪಾರಿತೋಷಕವನ್ನು ಅತೀ ಹೆಚ್ಚು ಸ್ಪರ್ಧೆಯಲ್ಲಿ ಭಾಗವಹಿಸಿ ಬಹುಮಾನ ಪಡೆದ ಸೇಫಿಯೆಂಟ್ ಪದವಿ ಕಾಲೇಜಿನ ವಿದ್ಯಾರ್ಥಿಗಳು ಪಡೆದುಕೊಂಡರು. ಈ ವೇಳೆ ಜೆಎಸ್‌ಎಸ್ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲ ಡಾ.ಶಿವಕುಮಾರ್, ಪದವಿ ಕಾಲೇಜಿನ ಪ್ರಾಂಶುಪಾಲ ಡಾ.ರಾಕೇಶ್ ಟಿ.ಎಸ್, ವಾಣಿಜ್ಯ ವಿಭಾಗದ ಮುಖ್ಯಸ್ಥ ಆನಂದ್, ಗಣಕವಿಜ್ಞಾನ ವಿಭಾಗದ ಮುಖ್ಯಸ್ಥರಾದ ಶೃತಿ ಡಿ ಹಾಗೂ ಉಪನ್ಯಾಸಕರು ಹಾಜರಿದ್ದರು.

ಮೈಸೂರು ಮಿತ್ರ
ಬುಧವಾರ 31 ಮೇ 2023

ಮೈಸೂರು ವಿವಿ ತಾತ್ಕಾಲಿಕ ಸಿಬ್ಬಂದಿ ಸೇವೆ ಖಾಯಂ ಪ್ರಯತ್ನಕ್ಕೆ ನನ್ನ ಸಹಕಾರವಿದೆ

● ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಭರವಸೆ ● ಈ ಹಿಂದೆ ತಾವು ಕಾರ್ಯನಿರ್ವಹಿಸಿದ ಸಂಸ್ಥೆಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಧನ್ಯತೆ ● ನಮ್ಮ ಕುಟುಂಬ ಈಗಲೂ ಮೈಸೂರು ವಿವಿ ಅನ್ನ ತಿನ್ನುತ್ತಿದೆ!



ಮೈಸೂರು ವಿಶ್ವವಿದ್ಯಾನಿಲಯ ಆಡಳಿತ ಸಿಬ್ಬಂದಿ ವರ್ಗದವರ ಸಂಘದ ವತಿಯಿಂದ ವಿವಿಯ ಕ್ರಾಫರ್ಡ್ ಭವನದಲ್ಲಿ ಮಂಗಳವಾರ ನಡೆದ ಉದ್ಯೋಗಿಗಳ ದಿನಾಚರಣೆಯಲ್ಲಿ ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಅವರನ್ನು ಅಭಿನಂದಿಸಲಾಯಿತು. ಸುತ್ತೂರು ಶ್ರೀಗಳು, ಶಾಸಕ ಕೆ.ಹರೀಶ್‌ಗೌಡ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು, ಮೇ 30(ಎಸ್‌ಬಿಡಿ)– ಮೈಸೂರು ವಿಶ್ವವಿದ್ಯಾನಿಲಯದ ತಾತ್ಕಾಲಿಕ ಸಿಬ್ಬಂದಿಯ ಸೇವೆಯನ್ನು ಖಾಯಂಗೊಳಿಸುವ ಪ್ರಯತ್ನಕ್ಕೆ ಸಹಕರಿಸುವುದಾಗಿ ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಭರವಸೆ ನೀಡಿದರು.

ಮೈಸೂರು ವಿಶ್ವವಿದ್ಯಾನಿಲಯ ಆಡಳಿತ ಸಿಬ್ಬಂದಿ ವರ್ಗದವರ ಸಂಘದ ವತಿಯಿಂದ ವಿವಿಯ ಕ್ರಾಫರ್ಡ್ ಭವನದಲ್ಲಿ ಸುತ್ತೂರು ಶ್ರೀಗಳ ಸಾನ್ನಿಧ್ಯದಲ್ಲಿ ಮಂಗಳವಾರ ನಡೆದ ಉದ್ಯೋಗಿಗಳ ದಿನಾಚರಣೆ ಹಾಗೂ ವಿವಿ ಕುಲಪತಿ ಪ್ರೊ.ಎನ್.ಕೆ. ಲೋಕನಾಥ್ ಅವರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಹೆಚ್ಚು ಸಂಖ್ಯೆಯ ಖಾಯಂ ನೌಕರರು ನಿವೃತ್ತಿ ಹೊಂದಿರುವುದರಿಂದ ಉಳಿದವರಿಗೆ ಕಾರ್ಯದೊತ್ತಡ ಹೆಚ್ಚಾಗಿದೆ ಎಂದು ಕುಲಪತಿಗಳು ಹೇಳಿದರು. ನಾನೂ ಕೂಡ ವಿವಿಯ ನೌಕರನಾಗಿದ್ದೆ. 2009ರಲ್ಲಿ ಸ್ವಯಂ ನಿವೃತ್ತಿ ಪಡೆದೆ. ಆಗ 800ಕ್ಕೂ ಹೆಚ್ಚು ಖಾಯಂ ಸಿಬ್ಬಂದಿ ಇದ್ದೆವು. ನನ್ನೊಂದಿಗೆ ಸೇವೆಯಲ್ಲಿದ್ದವರಲ್ಲಿ ಶೇ.70ರಷ್ಟು ಮಂದಿ ನಿವೃತ್ತಿಯಾಗಿದ್ದಾರೆ. ತಾತ್ಕಾಲಿಕ ಸಿಬ್ಬಂದಿ ಸೇವೆಯನ್ನು ಖಾಯಂಗೊಳಿಸುವ ನಿಟ್ಟಿನಲ್ಲಿ ಕುಲಪತಿಗಳು ಮುಂದುವರೆದರೆ ನಮ್ಮದೇ ಸರ್ಕಾರವಿರುವುದರಿಂದ ನಾನೂ ಸಹಕಾರ ನೀಡುತ್ತೇನೆ ಎಂದರು.

ಏಷ್ಯಾ ಖಂಡದಲ್ಲೇ 107 ವರ್ಷ ಇತಿಹಾಸವುಳ್ಳ ಮೈಸೂರು ವಿವಿ ಪ್ರಸಿದ್ಧವಾಗಿದೆ. ಹಿಂದೆ ಚಿಕ್ಕಮಗಳೂರು, ರಾಮನಗರ, ಶಿವಮೊಗ್ಗ ಸೇರಿ ಹಲವು ಜಿಲ್ಲೆಗಳು ನಮ್ಮ ವಿವಿ ವ್ಯಾಪ್ತಿಗೆ ಒಳಪಟ್ಟಿದ್ದವು. ವೈದ್ಯಕೀಯ ವಿಜ್ಞಾನ, ತಾಂತ್ರಿಕ ಕೋರ್ಸ್‌ಗಳು ಇದ್ದವು. ಮೈಸೂರು ವಿವಿ ಲಕ್ಷಾಂತರ ಜನರಿಗೆ ಪ್ರಮಾಣ ಪತ್ರ ನೀಡಿರುವ ದೇವಾಲಯ. ಉತ್ತಮ ನಾಗರಿಕರನ್ನು ತಯಾರು ಮಾಡುವ ಕಾರ್ಖಾನೆ. ಇಲ್ಲಿ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಎನ್ನುವ ಭೇದಭಾವ ಇಲ್ಲದೆ ಒಟ್ಟಿಗೆ ನಡೆದು ಬಂದಿದ್ದೇವೆ. ಅಧ್ಯಾಪಕೇತರ ನೌಕರರು ಅತ್ಯಂತ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಿದರೆ ಮಾತ್ರ ವಿವಿ ಅಭಿವೃದ್ಧಿ ಸಾಧ್ಯ. ಹಾಗಾಗಿ ವಿವಿಯೊಂದಿಗೆ 2 ದಶಕಗಳಿಂದ ನಂಟಿರುವ ಕುಲಪತಿ ಲೋಕನಾಥ್ ಅವರು ಉತ್ತಮ ಆಡಳಿತದೊಂದಿಗೆ ನೌಕರರಿಗೂ ಉತ್ತಮ ಸಹಕಾರ ನೀಡುತ್ತಾರೆ ಎಂದು ಅಭಿಪ್ರಾಯಿಸಿದರು.

ಹುಟ್ಟಿದಾಗಿನಿಂದ ವಿವಿ ನಂಟು: ನಾನು ಹುಟ್ಟಿದಾಗಿನಿಂದಲೂ ಮೈಸೂರು ವಿವಿಯೊಂದಿಗೆ ನಂಟಿದೆ. ನಮ್ಮ ತಂದೆ ವಿವಿಯಲ್ಲಿ ಸಹಾಯಕ ಗ್ರಂಥಪಾಲಕರಾಗಿ 1972ರಲ್ಲಿ ನೇಮಕವಾದರು. ಅದೇ ವರ್ಷ ನಾನು ಹುಟ್ಟಿದ್ದು. ಹಾಗಾಗಿ ನಾನು ಹುಟ್ಟಿದಾಗಿನಿಂದ ವಿವಿಯ ಹಣದಿಂದ ಅನ್ನ ತಿಂದಿದ್ದೇನೆ. ನಾನು ಸ್ವಯಂ ನಿವೃತ್ತಿ ಪಡೆದಾಗಿನಿಂದ ಪಿಂಚಣಿ ಪಡೆಯುತ್ತಿದ್ದು, ಈಗ ಶಾಸಕನಾಗಿರುವ ಕಾರಣ ಪಿಂಚಣಿ ಸೇವೆ ಹಿಂಪಡೆಯುವಂತೆ ವಿವಿಗೆ ನಿವೇದಿಸಿಕೊಳ್ಳುತ್ತೇನೆ. ಆದರೆ ನನ್ನ ತಾಯಿಗೆ ಪಿಂಚಣಿ ಬರುತ್ತದೆ. ಮೈಸೂರು ವಿವಿಗೆ ಕೊನೆವರೆಗೂ ನಾನು ಚಿರಋಣಿಯಾಗಿರುತ್ತೇನೆ. ಅಲ್ಲದೆ ನಾನು ಶಾಸಕನಾಗಲು ಮೈಸೂರು ವಿವಿ ನೌಕರ ಸಿಬ್ಬಂದಿಗಳೂ ಕಾರಣ. ಪರಿಚಯವಿಲ್ಲದ ಹಲವರು ಸ್ವಯಂ ಪ್ರೇರಣೆಯಿಂದ ನನ್ನ ಪರವಾಗಿ ಕೆಲಸ ಮಾಡಿದ್ದಾರೆ. ನಾನು ನಿಮ್ಮೆಲ್ಲರಿಗೂ ಆಭಾರಿಯಾಗಿತ್ತೇನೆ ಎಂದು ತಿಳಿಸಿದರು.

ಸಂತೋಷದ ಜೊತೆ ಮುಜುಗರ: ನಾನು ಮೈಸೂರು ವಿವಿಯಲ್ಲಿದ್ದಾಗ ಆಡಳಿತ ವಿಭಾಗದಲ್ಲಿ ಕೆಲಸ ಮಾಡುತ್ತಿದ್ದೆ. ಈ ಸಭಾಂಗಣ ನೋಡುತ್ತಿದ್ದಂತೆ ಎಲ್ಲವೂ ಕಣ್ಮುಂದೆ ಬಂತು. ಪ್ರತಿನಿತ್ಯ ಸರಸ್ವತಿ ಮೂರ್ತಿಗೆ ಕೈಮುಗಿದು ಒಳಗೆ ಬರುತ್ತಿದ್ದೆ. ಈಗಲೂ ಹಾಗೆಯೇ ಮಾಡಿದೆ. ಅಧ್ಯಾಪಕೇತರ ಸಿಬ್ಬಂದಿ ಸಂಘದ ಸದಸ್ಯನಾಗಿ, ಉಪಾಧ್ಯಕ್ಷನಾಗಿ ನಾನೂ ಕೆಲಸ ಮಾಡಿದ್ದೇನೆ. ಹಾಗಾಗಿ ನಮ್ಮೊಂದಿಗಿದ್ದವರ ನಡುವೆ ಮುಖ್ಯ ಅತಿಥಿಯಾಗಿ ಭಾಗವಹಿಸಿರುವುದಕ್ಕೆ ಖುಷಿಯ ಜೊತೆಗೆ ಮುಜುಗರವಾಗುತ್ತಿದೆ ಎಂದರು.

ಕುಲಪತಿಯಾಗಿದ್ದ ಮಾದಯ್ಯನವರೇ ನನಗೆ ಪದವಿ ಪ್ರಮಾಣ ಪತ್ರ, ನಂತರ ಉದ್ಯೋಗ ನೇಮಕಾತಿ ಆದೇಶ ನೀಡಿದ್ದು, ಅವರು ಅತ್ಯುತ್ತಮ ಆಡಳಿತ ನೀಡಿದ್ದರು. ಕ್ರಾಫರ್ಡ್ ಭವನದ ಹಿಂಭಾಗ ಗಂಧದ ಮರ ಕಳವಾಗಿದ್ದನ್ನು ಪತ್ತೆ ಹಚ್ಚಿದ್ದರು. ಬೆಂಗಳೂರಿನ ಡಾಲರ್ಸ್ ಕಾಲೋನಿಯಲ್ಲಿದ್ದ ನಮ್ಮ ವಿವಿಯ ಆಸ್ತಿ ಪತ್ತೆ ಮಾಡಿದರು. ಚಾಮುಂಡಿಬೆಟ್ಟ ತಪ್ಪಲಿನಲ್ಲಿರುವ ಆಸ್ತಿಯನ್ನು ಸಂರಕ್ಷಣೆ ಮಾಡಿದರು ಎಂದು ಇದೇ ವೇಳೆ ಶಾಸಕ ಕೆ.ಹರೀಶ್‌ಗೌಡರು ಸ್ಮರಿಸಿಕೊಂಡರು. ಕಾರ್ಯಕ್ರಮದಲ್ಲಿ ವಿವಿಯ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಅವರೊಂದಿಗೆ 3 ವರ್ಷಗಳಲ್ಲಿ ನಿವೃತ್ತರಾದ ನೂರಕ್ಕೂ ಹೆಚ್ಚು ಸಿಬ್ಬಂದಿಯನ್ನು ಅಭಿನಂದಿಸಲಾಯಿತು. ವಿವಿಯ ಕುಲಸಚಿವರಾದ ವಿ.ಆರ್.ಶೈಲಜಾ, ಪ್ರೊ. ಮಹದೇವನ್, ಪ್ರಭಾರ ಹಣಕಾಸು ಅಧಿಕಾರಿ ಮಹದೇವಪ್ಪ ಸಂಘದ ಅಧ್ಯಕ್ಷ ಪಿ.ಮೆರವಣ್ಣ, ಕಾರ್ಯದರ್ಶಿ ಶಿವಣ್ಣ, ಉಪಾಧ್ಯಕ್ಷ ಚನ್ನಬಸಪ್ಪ ಮತ್ತಿತರರು ಉಪಸ್ಥಿತರಿದ್ದರು.

ವಿವಿ ನೌಕರರು ಒತ್ತಡದ ನಡುವೆ ಕಾರ್ಯನಿರ್ವಹಿಸುತ್ತಿದ್ದಾರೆ


ಸಿಬ್ಬಂದಿ ಕಾರ್ಯ ವೈಖರಿಗೆ ಮೈವಿವಿ ಕುಲಪತಿ ಪ್ರೊ.ಲೋಕನಾಥ್ ಪ್ರಶಂಸೆ

ಮೈಸೂರು: ಮೈಸೂರು ವಿವಿ ನೌಕರರು ಕಾರ್ಯದೊತ್ತಡದ ನಡುವೆಯೂ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಪ್ರಶಂಸಿಸಿದರು.

ಮೈಸೂರು ವಿಶ್ವವಿದ್ಯಾನಿಲಯ ಆಡಳಿತ ಸಿಬ್ಬಂದಿ ವರ್ಗದವರ ಸಂಘದ ವತಿಯಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ವಿವಿಯಲ್ಲಿ ಖಾಯಂ ನೌಕರರು ಹೆಚ್ಚಿನ ಸಂಖ್ಯೆಯಲ್ಲಿಲ್ಲ. ಅಲ್ಲದೆ ಹೆಚ್ಚು ಸಿಬ್ಬಂದಿ ವಯೋ ನಿವೃತ್ತಿ ಹೊಂದುತ್ತಿದ್ದಾರೆ. ಪರಿಣಾಮ ಉಳಿದ ಖಾಯಂ ನೌಕರರ ಮೇಲೆ ಕಾರ್ಯದೊತ್ತಡವಿದೆ. ನಾವೆಲ್ಲರೂ ಒಗ್ಗೂಡಿ ವಿವಿ ಬೆಳವಣಿಗೆಗಾಗಿ ಕರ್ತವ್ಯ ನಿರ್ವಹಿಸಬೇಕು. ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ನಿಮ್ಮೆಲ್ಲರ ಸಹಕಾರವನ್ನು ಮುಂದೆಯೂ ನಿರೀಕ್ಷಿಸುತ್ತೇನೆ ಎಂದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಕೊಡುಗೆಯನ್ನು ಎಂದಿಗೂ ಮರೆಯುವಂತಿಲ್ಲ. ಮೈಸೂರು ವಿವಿ ಅಸ್ತಿತ್ವಕ್ಕೆ ಬಂದು 107 ವರ್ಷವಾಯಿತು. ಈ ಅವಧಿಯಲ್ಲಿ ಆದರ್ಶಪ್ರಾಯ ಆಡಳಿತದ ಜೊತೆಗೆ ಶಿಕ್ಷಣದ ಔಚಿತ್ಯದ ದರ್ಶನವಾಗಿದೆ. ಕಾಲಕಾಲಕ್ಕೆ ಆಡಳಿತ ಚುಕ್ಕಾಣಿ ಹಿಡಿದ ಕುಲಪತಿಗಳು, ಅವರ ದೂರದೃಷ್ಟಿತ್ವದ ಮಾರ್ಗದರ್ಶನವನ್ನು ನಾನು ಕೃತಜ್ಞತೆಯಿಂದ ನೆನೆಯುತ್ತೇನೆ. ಬೆರಳೆಣಿಕೆಯಷ್ಟು ಸಂಖ್ಯೆಯ ವಿಷಯಗಳೊಂದಿಗೆ ಆರಂಭವಾದ ವಿವಿ ಇಂದು ಉನ್ನತ ಶಿಕ್ಷಣದಲ್ಲಿ 80 ವಿಭಾಗಗಳೊಂದಿಗೆ ವಿಸ್ತಾರವಾಗಿ ವ್ಯಾಪಿಸಿರುವುದು ಹೆಮ್ಮೆಯ ಸಂಗತಿ ಎಂದು ತಿಳಿಸಿದರು.

ಪುಸ್ತಕ ಭಾಗ್ಯ ನೀಡಲು ಮುಖ್ಯಮಂತ್ರಿಗೆ ಲೇಖಕರು, ಪ್ರಕಾಶಕರ ಸಂಘ ಮನವಿ



ಮೈಸೂರು, ಮೇ 30–ಕನ್ನಡ ನಾಡು, ನುಡಿ, ಸಾಹಿತ್ಯ ಮತ್ತು ಸಂಸ್ಕೃತಿಯ ಬಗ್ಗೆ ಅಪಾರ ಕಾಳಜಿ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಮರುಕ್ಷಣವೇ ಯಾವುದೇ ಬಗೆಯ ಹಾರ ತುರಾಯಿ ಸನ್ಮಾನ ಬೇಡ. ನೀವು ಪ್ರೀತಿಯಿಂದ ಕೊಡುವುದಾದರೆ ಪುಸ್ತಕಗಳನ್ನು ಕೊಡಿ ಎಂದು ಹೇಳಿದ್ದು ನಿಜಕ್ಕೂ ಪುಸ್ತಕ ಸಂಸ್ಕೃತಿಗೆ ಬಹುದೊಡ್ಡ ಕೊಡುಗೆ ನೀಡಿದಂತಾಗಿದೆ ಎಂದು ಅಖಿಲ ಕರ್ನಾಟಕ ಲೇಖಕರ ಮತ್ತು ಪ್ರಕಾಶಕರ ಸಂಘ ಶ್ಲಾಘಿಸಿದೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಸಂಘ, ಕೆಲವು ಬೇಡಿಕೆಗಳನ್ನು ಈಡೇರಿಸಬೇಕು ಎಂದು ಮನವಿ ಮಾಡಿದೆ.

ಕನ್ನಡ ಪುಸ್ತಕ ಪ್ರಕಾಶೋದ್ಯಮ ಕಳೆದ ಕೆಲವು ವರ್ಷಗಳಿಂದ ಸಾಕಷ್ಟು ಕಷ್ಟಗಳನ್ನು ಅನುಭವಿಸಿದೆ. ಈ ಹಿಂದಿನ ಬಹುತೇಕ ಸರ್ಕಾರಗಳು ಪುಸ್ತಕ ಸಂಸ್ಕೃತಿಯನ್ನು ಪ್ರೋತ್ಸಾಹಿಸುತ್ತಾ ಬಂದಿವೆ. ಸಾರ್ವಜನಿಕ ಗ್ರಂಥಾಲಯಗಳನ್ನು ಕರ್ನಾಟಕದಾದ್ಯಂತ ಸ್ಥಾಪಿಸಿ, 'ಪುಸ್ತಕ ಸಗಟು ಖರೀದಿ' ಯೋಜನೆಯನ್ನು 30 ವರ್ಷಗಳಿಂದಲೂ ನಡೆಸಿಕೊಂಡು ಬರಲಾಗಿದೆ. ಸಾರ್ವಜನಿಕ ಗ್ರಂಥಾಲಯ ಇಲಾಖೆಯು ವರ್ಷದಲ್ಲಿ ಪ್ರಕಟವಾದ ಪುಸ್ತಕಗಳನ್ನು ಆಯ್ಕೆಗಾಗಿ ಆಹ್ವಾನಿಸಿ, ಆಯ್ಕೆಯಾದ ಪುಸ್ತಕಗಳ ತಲಾ 300 ಪ್ರತಿಗಳನ್ನು ಖರೀದಿಸುತ್ತಿತ್ತು. ಆದರೆ ಕಳೆದ 3 ವರ್ಷಗಳಿಂದ ಪುಸ್ತಕ ಖರೀದಿ ಆಗಿಲ್ಲ. ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಸಂಘ ಮನವಿ ಮಾಡಿದೆ.

2020ರಲ್ಲಿ ಪ್ರಕಟವಾದ ಪುಸ್ತಕಗಳನ್ನು ಸಮಿತಿಯು ಆಯ್ಕೆ ಮಾಡಿ ಪಟ್ಟಿ ಸಿದ್ಧಪಡಿಸಲಾಗಿದೆ. ಆದರೆ ಖರೀದಿ ಕಾರ್ಯ ಕಾರ್ಯರೂಪಕ್ಕೆ ಬಂದಿಲ್ಲ. ಈ ಪ್ರಕ್ರಿಯೆ ಪೂರ್ಣಗೊಳಿಸಿ 'ಪುಸ್ತಕ ಭಾಗ್ಯ'ವನ್ನು ದಯಪಾಲಿಸಬೇಕು. ಈ ಪುಸ್ತಕಗಳ ಬಿಡುಗಡೆಗೆ 20 ಕೋಟಿ ರೂಪಾಯಿ ಅನುದಾನ ನೀಡಬೇಕು. ಈ ಕುರಿತು ಮುಖ್ಯಮಂತ್ರಿಗಳು ಕ್ರಮ ಕೈಗೊಳ್ಳಬೇಕೆಂದು ಸಂಘದ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.

ಕಳೆದ 3 ವರ್ಷಗಳಿಂದ ಪುಸ್ತಕಗಳ ಖರೀದಿ ಪ್ರಕ್ರಿಯೆ ನಡೆಯದೆ ಅನೇಕ ಲೇಖಕರು, ಪ್ರಕಾಶಕರು, ಮುದ್ರಕರು, ಕಲಾವಿದರು ತೊಂದರೆಗೊಳಗಾಗಿದ್ದಾರೆ. ಪುಸ್ತಕ ಪ್ರಿಯರು ಹೊಸ ಪುಸ್ತಕಗಳಿಂದ ವಂಚಿತರಾಗಿದ್ದಾರೆ. ಅನೇಕ ಲೇಖಕರು, ಪ್ರಕಾಶಕರು ಮುದ್ರಕರು ಸಗಟು ಖರೀದಿ ಯೋಜನೆಯನ್ನೇ ನಂಬಿ ಪುಸ್ತಕ ಪ್ರಕಟಿಸುತ್ತಿದ್ದಾರೆ. ಆದ್ದರಿಂದ ಈ ಬೇಡಿಕೆಗಳನ್ನು ಶೀಘ್ರದಲ್ಲಿ ಪರಿಶೀಲಿಸಿ ಈಡೇರಿಸಬೇಕೆಂದು ಮುಖ್ಯಮಂತ್ರಿಗಳು ಮತ್ತು ಇಲಾಖೆ ಸಚಿವರಲ್ಲಿ ಕೋರುವುದಾಗಿ ಸಂಘದ ಅಧ್ಯಕ್ಷ ಡಿ.ಎನ್. ಲೋಕಪ್ಪ ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

ಪ್ರಜ್ಞಾವಂತರಾದರೆ ಮಾತ್ರ ಸವಾಲು ಎದುರಿಸಲು ಸಾಧ್ಯ: ಡಾ.ತಿಮ್ಮಯ್ಯ



ಕೆ.ಆರ್.ನಗರ ತಾಲೂಕು ಸಿದ್ದಾಪುರ ಗ್ರಾಮದಲ್ಲಿ ನಡೆದ ಸನ್ಮಾನ ಕಾರ್ಯಕ್ರಮದಲ್ಲಿ ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಮಾತನಾಡಿದರು.


ಕೆ.ಆರ್.ನಗರ, ಮೇ 30– ಪ್ರಜ್ಞಾವಂತರಾದರೆ ಮಾತ್ರ ಜೀವನದಲ್ಲಿ ಸವಾಲುಗಳನ್ನು ಎದುರಿಸಲು ಸಾಧ್ಯ ಎಂದು ವಿಧಾನಪರಿಷತ್ ಸದಸ್ಯ ಡಾ.ಡಿ. ತಿಮ್ಮಯ್ಯ ಅಭಿಪ್ರಾಯಿಸಿದರು.

ಕೆ.ಆರ್.ನಗರ ತಾಲೂಕು, ಹೆಬ್ಬಾಳು ಹೋಬಳಿ, ಸಿದ್ದಾಪುರ ಗ್ರಾಮದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ದಲಿತರು ಶೈಕ್ಷಣಿಕವಾಗಿ ಮುಂದೆ ಬರಬೇಕು. ಇದರೊಂದಿಗೆ ಸಾಮಾಜಿಕ ಮತ್ತು ಸಾಂಸ್ಕೃತಿಕವಾಗಿ ಬದಲಾದರೆ ಮಾತ್ರ ಜೀವನದಲ್ಲಿ ಅಭಿವೃದ್ಧಿ ಹೊಂದಲು ಸಾಧ್ಯ. ನಮ್ಮ ಮುಂದಿರುವ ಹಲವಾರು ಸವಾಲುಗಳನ್ನು ಮೆಟ್ಟಿ ನಿಲ್ಲಬೇಕೆಂದರೆ ಪ್ರಜ್ಞಾವಂತರಾಗಬೇಕು ಎಂದು ಹೇಳಿದರು.

ಮೌಢ್ಯ, ಕಂದಾಚಾರ, ಕುಡಿತ ಇನ್ನಿತರ ದುಶ್ಚಟಗಳಿಂದ ದೂರವಿರಬೇಕು. ನಮ್ಮಲ್ಲಿರುವ ಧಾರ್ಮಿಕ ಮತ್ತು ಜಾತೀಯತೆಯ ಮೌಢ್ಯಗಳಿಂದ ಹೊರಬರಬೇಕು. ಬಸವಾದಿ ಶರಣರು ಹಾಗೂ ಧರೆಗೆ ದೊಡ್ಡವರ ಮಾನವೀಯ ಮೌಲ್ಯಗಳನ್ನು ಅರ್ಥೈಸಿಕೊಂಡು ನಮ್ಮ ಜೀವನದಲ್ಲೂ ಅನುಸರಿಸುವ ಮೂಲಕ ಸಮಾಜದ ಸುಧಾರಣೆಗೆ ಕಾರಣರಾಗಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಕೆಪಿಸಿಸಿ ಸದಸ್ಯ ದೊಡ್ಡಸ್ವಾಮಿಗೌಡ, ಡಿಸಿಸಿ ಮಾಧ್ಯಮ ವಕ್ತಾರ ಹಾಗೂ ಆದಿಜಾಂಬವ ಸಂಘದ ವಿಭಾಗೀಯ ಅಧ್ಯಕ್ಷ ಎಡತೊರೆ ನಿಂಗರಾಜ್, ಕಾರ್ಯದರ್ಶಿ ಎಂ.ಲೋಕೇಶ್, ಬ್ಲಾಕ್ ಅಧ್ಯಕ್ಷ ಮಹದೇವ್, ತಾಪಂ ಮಾಜಿ ಅಧ್ಯಕ್ಷ ಸ್ವಾಮಿ, ನಾಗರಾಜು, ರಮೇಶ್ ಸೇರಿದಂತೆ ಅನೇಕ ಮುಖಂಡರು ಗ್ರಾಮದ ಯಜಮಾನರು ಉಪಸ್ಥಿತರಿದ್ದರು.

ಯಾವುದೇ ತನಿಖೆ ಎದುರಿಸಲು ಸಿದ್ಧ



ಬೆಂಗಳೂರು, ಮೇ 30(ಕೆಎಂಶಿ)– ಹೊಸ ಸರ್ಕಾರ ಯಾವುದೇ ತನಿಖೆ ನಡೆಸಲಿ. ಎದುರಿಸಲು ನಾವು ಸಿದ್ಧ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಇಂದಿಲ್ಲಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಗರಣ ವಿಚಾರಕ್ಕೆ ಸಂಬಂಧಿಸಿದಂತೆ ಯಾವುದೇ ದೂರು ಇರಲಿ. ಯಾವುದೇ ತನಿಖೆ ಮಾಡಬಹುದು. ಸಮಾಜ ಕಲ್ಯಾಣ ಇಲಾಖೆಯಲ್ಲಿ ಸಿಐಡಿ ತನಿಖೆ ಮಾಡಬಹುದು ಅಂತ ನಾನೇ ಹಿಂದೆ ದೂರು ನೀಡಿದ್ದೆ. ಚುನಾವಣಾ ನೀತಿ ಸಂಹಿತೆ ಇದ್ದ ಹಿನ್ನೆಲೆ ಎಫ್‌ಐಆರ್ ಆಗಿರಲಿಲ್ಲ ಎಂದು ಹೇಳಿದರು.

ಹೊಸ ಸರ್ಕಾರ ಬಂದಿದೆ ಯಾವುದೇ ರೀತಿ ತನಿಖೆ ನಡೆಸಲಿ. ಎದುರಿಸಲು ನಾವು ಸಿದ್ಧ. ತನಿಖೆ ಪಾರದರ್ಶಕವಾಗಿರಲಿ. ತನಿಖೆ ಕಾಮಗಾರಿಗೆ ಅಡ್ಡಿ ಆಗಬಾರದು. ಟಾರ್ಗೆಟ್ ಮಾಡಿ ಕಾಮಗಾರಿ ಬದಲಾವಣೆ ಮಾಡುವ ದುರುದ್ದೇಶ ಆಗಬಾರದು ಎಂದು ಅವರು ತಿಳಿಸಿದರು.

ಪಠ್ಯ ಪುಸ್ತಕ ಬದಲಾವಣೆ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯೆ ನೀಡಿದ ಮಾಜಿ ಮುಖ್ಯಮಂತ್ರಿ, ನಮ್ಮ ಭಾರತದ ಸಂಸ್ಕೃತಿ, ಸಾಹಿತ್ಯ ವಿಚಾರಗಳ ಆಧಾರದ ಮೇಲೆ ಕೆಲವು ಹೊಸದಾಗಿ ಪಠ್ಯಗಳನ್ನು ಪರಿಚಯ ಮಾಡಿದ್ದೆವು. ಅವರು ಅದೇ ಜಾಡನ್ನು ಹಿಡಿದು ಹೊಸ ಸಮಿತಿ ಮಾಡಲು ಹೊರಟಿದ್ದಾರೆ. ಇದಕ್ಕೆ ಸಮಾಜವೇ ಪ್ರತಿಕ್ರಿಯೆ ನೀಡಲಿದೆ. ಮಕ್ಕಳಿಗೆ ಶಿಕ್ಷಣ ನೀಡುವ ಬಗ್ಗೆ ಪೋಷಕರು ಗಮನಿಸುತ್ತಿದ್ದಾರೆ. ಪಠ್ಯ ಪದೇ ಪದೆ ಬದಲಾವಣೆಯಿಂದ ಮಕ್ಕಳಿಗೆ ಸಮಸ್ಯೆ ಆಗಬಾರದು. ಜವಾಬ್ದಾರಿಯುತ ಸರ್ಕಾರ ಏನು ಮಾಡಲಿದೆ ನೋಡೋಣ ಎಂದರು.

ಎನ್‌ಇಪಿ ಮೂಲಕ ಈಗ ಮಕ್ಕಳು ಅಧ್ಯಯನ ಶುರು ಮಾಡಿದ್ದಾರೆ. ಎನ್‌ಇಪಿ ಮಾಡುವಾಗಲೇ ಸಮಿತಿ ಮಾಡಿ, ರಾಜ್ಯದ ಅಭಿಪ್ರಾಯ ತೆಗೆದುಕೊಳ್ಳಲಾಗಿದೆ. ಎಲ್ಲಾ ತಜ್ಞರ ಅಭಿಪ್ರಾಯ ಪಡೆದು ಎನ್.ಇ.ಪಿ ಜಾರಿಗೆ ತರಲಾಗಿದೆ ಎಂದರು.



ಮೈಸೂರಿನ ಆರಾಧ್ಯ ಮಹಾಸಭಾದಲ್ಲಿ ಎಸ್.ಪ್ರಕಾಶ್ ಪ್ರಿಯದರ್ಶನ ಸ್ನೇಹ ಬಳಗದಿಂದ ಕುರುಬರಿಂದ ಕುರುಬರಿಗಾಗಿ ಕಾರ್ಯಕ್ರಮದಡಿ ಉಚಿತವಾಗಿ ಕುರಿ ಮರಿ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಬಳಗದ ಅಧ್ಯಕ್ಷ ಎಸ್.ಪ್ರಕಾಶ್ ಪ್ರಿಯದರ್ಶನ್, ತಿಸ್ಸಾ ಬಂತೇಜಿ, ಕನ್ನಡ ವೇದಿಕೆ ಅಧ್ಯಕ್ಷ ಬಾಲಕೃಷ್ಣ, ದಿ ಸಿಟಿ ಕೋ ಆಪರೇಟಿವ್ ಬ್ಯಾಂಕ್‌ನ ನಿರ್ದೇಶಕ ಎಸ್.ಆರ್.ರವಿಕುಮಾರ್, ಸಮಾಜ ಸೇವಕ ವಿಕ್ರಮ ಅಯ್ಯಂಗಾರ್, ಬಿಜೆಪಿ ಮುಖಂಡರಾದ ಭೈರತಿ ಲಿಂಗರಾಜು, ಪ್ರೊ. ಬಿ.ಎಸ್.ಪ್ರೇಮಕುಮಾರಿ, ಎಂ.ಮಾಧವಿ, ಜಾಕಿರ್, ಶ್ರೀನಿವಾಸ್, ರವಿಚಂದ್ರ, ಇನ್ನಿತರರು ಉಪಸ್ಥಿತರಿದ್ದರು.

ಎಸ್‌ಕೆಸಿಎ ಆಶ್ರಮದ ವಿದ್ಯಾರ್ಥಿನಿಲಯಕ್ಕೆ ಅರ್ಜಿ ಆಹ್ವಾನ

ಮೈಸೂರು, ಮೇ 30– ಮೈಸೂರಿನ ಎಸ್‌ಕೆಸಿಎ ಆಶ್ರಮದ ವಿದ್ಯಾರ್ಥಿನಿಲಯಕ್ಕೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.60 ಅಂಕ ಗಳಿಸಿ ತೇರ್ಗಡೆ ಹೊಂದಿರುವ ಗುಂಡ್ಲುಪೇಟೆ ತಾಲೂಕಿನ ಬಡತನ ರೇಖೆಯಲ್ಲಿರುವ (ಬಿಪಿಎಲ್ ಕಾರ್ಡ್) ಹಾಗೂ ಪಿಯುಸಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿಭಾವಂತ–ವೀರಶೈವ ಲಿಂಗಾಯತ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಿದ್ದು, ಜೂ.1ರಿಂದ 10ರವರೆಗೆ ಕಚೇರಿಯಲ್ಲಿ ಬೆಳಗ್ಗೆ 10.30ರಿಂದ ಮಧ್ಯಾಹ್ನ 2ರವರೆಗೆ ಅರ್ಜಿ ವಿತರಿಸಲಾಗುವುದು. ಮಾಹಿತಿಗೆ ಮೊ. 9538769767.

ಡಾ.ಅಶ್ವಥ್‌ನಾರಾಯಣರ ವಿರುದ್ಧ ತ್ವರಿತ ಕ್ರಮ ಕೈಗೊಳ್ಳದ್ದಕ್ಕೆ ಕಾಂಗ್ರೆಸ್ ನಿಯೋಗ ಐಜಿಪಿ ಬಳಿ ಆಕ್ಷೇಪ



ಮೈಸೂರು, ಮೇ 30(ಎಂಕೆ)– ಉರಿಗೌಡ–ನಂಜೇಗೌಡರು ಟಿಪ್ಪುವನ್ನು ಮುಗಿಸಿದಂತೆ ಸಿದ್ದರಾಮಯ್ಯ ಅವರನ್ನೂ ಮುಗಿಸಬೇಕು ಎಂಬ ಹೇಳಿಕೆ ಸಂಬಂಧ ಮಾಜಿ ಸಚಿವ ಡಾ.ಸಿ.ಎನ್.ಅಶ್ವಥ್ ನಾರಾಯಣ ವಿರುದ್ಧ ಎಫ್‌ಐಆರ್ ದಾಖಲಾಗಿ ವಾರ ಕಳೆದರು ಪೊಲೀಸರು ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸದೇ ನಿರ್ಲಕ್ಷ್ಯ ವಹಿಸಿದ್ದೇಕೆ ಎಂದು ಮೈಸೂರು ಜಿಲ್ಲಾ ಕಾಂಗ್ರೆಸ್ ನಿಯೋಗ ಪ್ರಶ್ನಿಸಿದೆ.

ಮಂಗಳವಾರ ದಕ್ಷಿಣ ವಲಯ ಐಜಿಪಿ ಕಚೇರಿಗೆ ಭೇಟಿ ನೀಡಿದ ಕಾಂಗ್ರೆಸ್ ನಿಯೋಗ, ಎಫ್‌ಆರ್‌ಐ ದಾಖಲಾದ ಬಳಿಕ ಪ್ರಕರಣವನ್ನು ಮಂಡ್ಯ ಗ್ರಾಮಾಂತರ ಠಾಣೆಗೆ ವರ್ಗಾಯಿಸಲಾಗಿದೆ. ಆದರೆ ಪ್ರಕರಣ ದಾಖಲಾಗಿ ವಾರ ಕಳೆದರು ಅಶ್ವಥ್ ನಾರಾಯಣ ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸದೆ, ಜಾಮೀನು ತೆಗೆದುಕೊಳ್ಳಲು ಅವಕಾಶ ಮಾಡಿಕೊಟ್ಟಿದ್ದೀರಿ? ಯಾರೇ ತಪ್ಪು ಮಾಡಿದರೂ ಕಾನೂನಾತ್ಮಕವಾಗಿ ಕ್ರಮಕೈಗೊಳ್ಳಬೇಕಾದ ಪೊಲೀಸರು, ಹಿಂದಿನ ಬಿಜೆಪಿ ಸರ್ಕಾರದ ಪರವಾಗಿಯೇ ಕೆಲಸ ಮಾಡುತ್ತಿರುವುದೇಕೆ ಎಂದು ಪ್ರಶ್ನಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ದಕ್ಷಿಣ ವಲಯ ಐಜಿಪಿ ಪ್ರವೀಣ್ ಮಧುಕರ್ ಪವಾರ್, ಈ ಕುರಿತು ಮಂಡ್ಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯೊಂದಿಗೆ ಮಾತನಾಡಲಾಗುವುದು. ಯಾವ ಕಾರಣಕ್ಕೆ ವಶಕ್ಕೆ ಪಡೆಯಲಿಲ್ಲ ಎಂಬ ಮಾಹಿತಿ ಪಡೆದು ತಿಳಿಸಲಾಗುವುದು ಎಂದರು.

ಶಾಂತಿ–ಸುವ್ಯವಸ್ಥೆ ಕಾಪಾಡಲು ಮನವಿ: 'ಟಿಪ್ಪು ನಿಜಕನಸುಗಳು' ನಾಟಕದ ಮೂಲಕ ಸಮಾಜದಲ್ಲಿ ಕೋಮು ಗಲಭೆಗೆ ಕಾರಣವಾಗಿದ್ದ ರಂಗಾಯಣ ಮಾಜಿ ನಿರ್ದೇಶಕ ಅಡ್ಡಂಡ ಸಿ.ಕಾರ್ಯಪ್ಪ, ಮತ್ತೆ 'ವೀರ ಸಾವರ್ಕರ್' ನಾಟಕ ನಿರ್ಮಾಣದ ಮೂಲಕ ಕೋಮು ಗಲಭೆ ಸೃಷ್ಟಿಸಲು ಮುಂದಾಗಿದ್ದಾರೆ. ಮೈಸೂರಿನಲ್ಲಿ ಯಾವುದೇ ಕಾರಣಕ್ಕೂ 'ವೀರ ಸಾವರ್ಕರ್' ನಾಟಕ ಪ್ರದರ್ಶನಕ್ಕೆ ಅವಕಾಶ ಮಾಡಿಕೊಡಬಾರದು ಎಂದು ಮನವಿ ಮಾಡಿದರು. ಮನವಿ ಆಲಿಸಿದ ದಕ್ಷಿಣ ವಲಯ ಐಜಿಪಿ, ಮೈಸೂರು ನಗರ ಹೊರತು ಬೇರೆ ಕಡೆಗಳಲ್ಲಿ ನಾಟಕ ಪ್ರದರ್ಶನಗೊಂಡರೆ ವಿಚಾರಣೆ ನಡೆಸಲಾಗುವುದು. ನಗರ ವ್ಯಾಪ್ತಿಯಲ್ಲಿ ಪ್ರದರ್ಶನವಿದ್ದರೆ ನಗರ ಪೊಲೀಸ್ ಆಯುಕ್ತರೊಂದಿಗೆ ಮಾತನಾಡಿ ಎಂದು ತಿಳಿಸಿದರು. ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ ಕುಮಾರ್, ಕೆಪಿಸಿಸಿ ವಕ್ತಾರ ಎಂ ಲಕ್ಷ್ಮಣ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎ.ಆರ್.ಕಾಂತರಾಜು, ವಕೀಲರಾದ ಚಂದ್ರಶೇಖರ್, ತಿಮ್ಮಯ್ಯ, ಶಿವಣ್ಣ, ಡಿ.ಸುರೇಶ್, ಚರಣ್, ಗಂಗಾಧರ್, ಮಂಜುನಾಥ್ ಮತ್ತಿತರಿದ್ದರು.



ಮೈಸೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್.ರಂಗಪ್ಪ ನೇತೃತ್ವದಲ್ಲಿ ನಿವೃತ್ತ ಕುಲಪತಿಗಳ ನಿಯೋಗ ಮಂಗಳವಾರ ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ, ಅವರಿಗೆ ಪುಸ್ತಕ ನೀಡಿ, ಆತ್ಮೀಯವಾಗಿ ಅಭಿನಂದಿಸಿತು. ಈ ವೇಳೆ ಮುಖ್ಯಮಂತ್ರಿಗಳೊಂದಿಗೆ ಅನೇಕ ವಿಚಾರ ಕುರಿತು ಚರ್ಚೆ ನಡೆಸಿದೆ.


ಸಿದ್ದರಾಮಯ್ಯಗೆ ಜೀವ ಬೆದರಿಕೆ ಆರೋಪ

ಅಶ್ವತ್ಥ್‌ನಾರಾಯಣಗೆ ಬಿಗ್ ರಿಲೀಫ್

ಎಫ್‌ಐಆರ್‌ಗೆ ತಡೆ ನೀಡಿ ಆದೇಶ







ಬೆಂಗಳೂರು: ಉರಿಗೌಡ–ನಂಜೇಗೌಡರು ಟಿಪ್ಪುವನ್ನು ಮುಗಿಸಿದಂತೆ ಸಿದ್ದರಾಮಯ್ಯ ಅವರನ್ನೂ ಮುಗಿಸಬೇಕು ಎಂಬ ಹೇಳಿಕೆಗೆ ಸಂಬಂಧಿಸಿದಂತೆ ತಮ್ಮ ವಿರುದ್ಧ ದಾಖಲಾಗಿರುವ ಎಫ್‌ಐಆರ್ ರದ್ದುಪಡಿಸುವಂತೆ ಕೋರಿ ಬಿಜೆಪಿ ಶಾಸಕ ಡಾ.ಸಿ.ಎನ್.ಅಶ್ವತ್ಥ ನಾರಾಯಣ ಹೈಕೋರ್ಟ್ ಮೆಟ್ಟಿಲೇರಿದ್ದು, ಕರ್ನಾಟಕ ಹೈಕೋರ್ಟ್ ಬಿಗ್ ರಿಲೀಫ್ ನೀಡಿದೆ. ಮೈಸೂರಿನ ದೇವರಾಜ ಪೊಲೀಸ್ ಠಾಣೆಯಲ್ಲಿ ಅಶ್ವತ್ಥ್ ನಾರಾಯಣ ವಿರುದ್ಧ ಎಫ್‌ಐಆರ್‌ಗೆ ತಡೆ ನೀಡಿ ಹೈಕೋರ್ಟ್ ಆದೇಶ ಹೊರಡಿಸಿದೆ.

ಎಫ್‌ಐಆರ್ ರದ್ದು ಕೋರಿ ಬಿಜೆಪಿ ಶಾಸಕ ಅಶ್ವತ್ಥ್‌ನಾರಾಯಣ ಹೈಕೋರ್ಟ್ ಅರ್ಜಿ ಸಲ್ಲಿಸಿದ್ದರು. ಇಂದು (ಮೇ 30) ಈ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್, ಅಶ್ವತ್ಥ್ ನಾರಾಯಣ ವಿರುದ್ಧ ಎಫ್‌ಐಆರ್‌ಗೆ ತಡೆಯಾಜ್ಞೆ ನೀಡಿ ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಪೀಠ ಆದೇಶ ಹೊರಡಿಸಿದೆ.

ಚುನಾವಣೆಯಲ್ಲಿ ಸೋಲಿಸಬೇಕೆಂಬ ರೀತಿಯಲ್ಲಿ ನೀಡಿದ ಹೇಳಿಕೆ ನೀಡಲಾಗಿತ್ತು. ಫೆಬ್ರವರಿ ತಿಂಗಳ ದೂರು ಸಂಬಂಧ ಎನ್‌ಸಿಆರ್ ದಾಖಲಾಗಿತ್ತು. ಸರ್ಕಾರ ಬದಲಾದ ನಂತರ ಹೊಸ ದೂರು ನೀಡಲಾಗಿದೆ. ದುರುದ್ದೇಶಪೂರ್ವಕವಾಗಿ ಎಫ್‌ಐಆರ್ ದಾಖಲಿಸಲಾಗಿದೆ. ಮೇಲ್ನೋಟಕ್ಕೆ ಐಪಿಸಿ ಸೆಕ್ಷನ್ 153ರಂತೆ ಅಪರಾಧವಾಗುವ ಅಂಶಗಳಿಲ್ಲ ಹೀಗಾಗಿ ಎಫ್‌ಐಆರ್‌ಗೆ ತಡೆ ನೀಡುವಂತೆ ಅಶ್ವತ್ಥ್ ನರಾಯಣ ಪರ ಹಿರಿಯ ವಕೀಲ ಪ್ರಭುಲಿಂಗ್ ನಾವಡಗಿ ವಾದ ಮಂಡಿಸಿದರು.

ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಸರ್ಕಾರದ ಪರ ವಕೀಲ, ಜಾಮೀನು ನೀಡಬಹುದಾದ ಪ್ರಕರಣವಾದ್ದರಿಂದ ತಡೆ ಬೇಡ ಎಂದು ವಾದಿಸಿದರು. ಈ ವಾದ ವಿವಾದ ಆಲಿಸಿದ ನ್ಯಾ.ಎಂ.ನಾಗಪ್ರಸನ್ನ ಅವರ ಪೀಠ ಎಫ್‌ಐಆರ್‌ಗೆ ತಡೆಯಾಜ್ಞೆ ನೀಡಿ ಆದೇಶಿಸಿದೆ. 2023ರ ಫೆ15ರಂದು ಮಂಡ್ಯದ ಸಾತನೂರಿನ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಅಂದು ಸಚಿವರಾಗಿದ್ದ ಅಶ್ವತ್ಥ ನಾರಾಯಣ ಅವರು, ಟಿಪ್ಪುವನ್ನು ಉರಿಗೌಡ–ನಂಜೇಗೌಡರು ಮುಗಿಸಿದಂತೆ ಸಿದ್ದರಾಮಯ್ಯ ಅವರನ್ನು ಹೊಡೆದುಹಾಕಿ ಎಂದು ಹೇಳಿಕೆ ನೀಡಿದ್ದರು. ಈ ಸಂಬಂಧ ಮೈಸೂರಿನ ಕೆಪಿಸಿಸಿ ವಕ್ತಾರ ಲಕ್ಷ್ಮಣ್ ಅವರು ಫೆ.17ರಂದು ದೂರು ನೀಡಿದ್ದರು.

ಕಂದಕಕ್ಕೆ ಬಿದ್ದ ಬಸ್: 10 ಮಂದಿ ದುರ್ಮರಣ

ಜಮ್ಮು: ಸೇತುವೆ ಮೇಲಿಂದ ಆಳವಾದ ಕಂದರಕ್ಕೆ ಖಾಸಗಿ ಬಸ್ ಬಿದ್ದ ಪರಿಣಾಮ 10 ಪ್ರಯಾಣಿಕರು ದುರ್ಮರಣ ಹೊಂದಿರುವ ಘಟನೆ ಕೇಂದ್ರಾಡಳಿತ ಪ್ರದೇಶ ಜಮ್ಮುವಿನ ಬಳಿ ಇಂದು ಮುಂಜಾನೆ ನಡೆದಿದೆ. ಅಮೃತಸರದಿಂದ ಕತ್ರಾಕ್ಕೆ ತೆರಳುತ್ತಿದ್ದ ಬಸ್ ಆಳವಾದ ಕಂದರಕ್ಕೆ ಬಿದ್ದು, ಈ ದುರಂತ ಸಂಭವಿಸಿದೆ. ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸಲಾಗಿದೆ ಎಂದು ಜಮ್ಮು ಜಿಲ್ಲಾಧಿಕಾರಿ ತಿಳಿಸಿದ್ದಾರೆ. ಬಸ್ ಅಮೃತಸರದಿಂದ ಕತ್ರಾದಲ್ಲಿರುವ ವೈಷ್ಣೋದೇವಿ ದೇಗುಲಕ್ಕೆ ತೆರಳುತ್ತಿದ್ದಾಗ ದುರಂತ ಸಂಭವಿಸಿದೆ. ಕತ್ರಾದಿಂದ ಸುಮಾರು 15 ಕಿಮೀ ದೂರದಲ್ಲಿರುವ ಜಜ್ಜರ್ ಕೋಟ್ಲಿ ಬಳಿ ಆಳವಾದ ಕಂದರಕ್ಕೆ ಬಸ್ ಉರುಳಿ ಬಿದ್ದಿರುವುದಾಗಿ ಜಮ್ಮು ಡೆಪ್ಯುಟಿ ಕಮಿಷನರ್ ಅವ್ನಿ ಲವಾಸಾ ತಿಳಿಸಿದ್ದಾರೆ. ಘಟನೆಯಲ್ಲಿ 10 ಮಂದಿ ಸಾವನ್ನಪ್ಪಿದ್ದು, 55 ಮಂದಿ ಪ್ರಯಾಣಿಕರು ಗಾಯಗೊಂಡಿದ್ದಾರೆ. ಎಲ್ಲರನ್ನೂ ತೆರವುಗೊಳಿಸಲಾಗಿದೆ.

ಮುಕ್ತ ವಿವಿಯು ಗ್ರಾಮೀಣ ವಿದ್ಯಾರ್ಥಿಗಳ ಪಾಲಿನ ಆಶಾಕಿರಣ

ಪ್ರಾದೇಶಿಕ ಆಯುಕ್ತರ ಕಚೇರಿ ಹೆಚ್ಚುವರಿ ಆಯುಕ್ತ ಡಾ.ಪಿ.ಶಿವರಾಜು ಅಭಿಮತ



ಮೈಸೂರು, ಮೇ 30– ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಗ್ರಾಮೀಣ ವಿದ್ಯಾರ್ಥಿಗಳ ಪಾಲಿಗೆ ಆಶಾಕಿರಣವಾಗಿದ್ದು, ಇಲ್ಲಿ ವ್ಯಾಸಂಗ ಮಾಡಿದವರು ಉನ್ನತ ಅಧಿಕಾರಿಗಳಾಗಿ ಆಯ್ಕೆಯಾಗುತ್ತಿರುವುದು ಶ್ಲಾಘನೀಯ ಸಂಗತಿ. ಪ್ರಸ್ತುತ ಎ+ ಶ್ರೇಣಿ ಪಡೆದಿರುವ ಕರಾಮುವಿ ರಾಜ್ಯದ ಅತ್ಯುತ್ತಮ ವಿವಿಗಳಲ್ಲಿ ಒಂದಾಗಿದೆ ಎಂದು ಪ್ರಾದೇಶಿಕ ಆಯುಕ್ತರ ಕಚೇರಿಯ ಹೆಚ್ಚುವರಿ ಆಯುಕ್ತ ಡಾ.ಪಿ. ಶಿವರಾಜು ಅಭಿಪ್ರಾಯಪಟ್ಟಿದ್ದಾರೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ನೌಕರರಿಗೆ ಏರ್ಪಡಿಸಿದ್ದ 4 ದಿನಗಳ ಆಡಳಿತಾತ್ಮಕ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ನಾನು ಸಹ ಇದೇ ವಿಶ್ವವಿದ್ಯಾನಿಲಯದಿಂದ ಪದವಿ, ಸ್ನಾತಕೋತ್ತರ ಪದವಿ ಗಳಿಸಿದ್ದು, ಕೆಎಎಸ್ ಪರೀಕ್ಷೆ ಪಾಸು ಮಾಡುವಲ್ಲಿ ಈ ವಿಶ್ವವಿದ್ಯಾನಿಲಯದ ಕೊಡುಗೆ ಅಪಾರವಾಗಿದೆ. ಲಕ್ಷಾಂತರ ಜನರ ಔದ್ಯೋಗಿಕ ಮತ್ತು ವೈಯಕ್ತಿಕ ಏಳಿಗೆಗೆ ಕರ್ನಾಟಕ ರಾಜ್ಯ ಮುಕ್ತ ವಿವಿ ಪಾತ್ರ ಅನನ್ಯವಾಗಿದೆ ಎಂದರು.

ಈ ವಿಶ್ವವಿದ್ಯಾನಿಲಯದ ಉದ್ಯೋಗಿಗಳು ಕಚೇರಿ ಕಡತಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ಸಹಾಯವಾಗುವ ತರಬೇತಿ ಪಡೆದುಕೊಳ್ಳಬೇಕು ಹಾಗೂ ಸಿಬ್ಬಂದಿ ವರ್ಗದವರಿಗೆ ಅಗತ್ಯ ಜ್ಞಾನ ಕೌಶಲ್ಯ ಲಭಿಸುವಂತಾಗಲಿ ಎಂದು ಆಶಿಸಿದರು.

ಅಧ್ಯಕ್ಷತೆ ವಹಿಸಿದ್ದ ಕರಾಮುವಿ ಕುಲಪತಿ ಪ್ರೊ. ಶರಣಪ್ಪ ವಿ. ಹಲಸೆ ಮಾತನಾಡಿ, ಹೊಸತನಕ್ಕೆ ಹೊಂದಿಕೊಳ್ಳುವ ಮನೋಭಾವನೆಯನ್ನು ಎಲ್ಲರೂ ಬೆಳೆಸಿಕೊಳ್ಳಬೇಕು. ಇದು ಸ್ಪರ್ಧಾತ್ಮಕ ಯುಗ. ಕಾನೂನು ಚೌಕಟ್ಟು ಬೇರೆ, ಕಾಲ ಕಾಲಕ್ಕೆ ಆಡಳಿತದಲ್ಲಿ ಬದಲಾವಣೆ ಇರುತ್ತದೆ. ಕೆಲಸಕ್ಕೆಂದು ಬರುವ ಯಾವುದೇ ಸಾರ್ವಜನಿಕರನ್ನು ಕಾಯಿಸದೆ ತ್ವರಿತವಾಗಿ ಕಡತ ವಿಲೇವಾರಿ ಮಾಡಲು ಈ ತರಬೇತಿ ಸಹಕಾರಿಯಾಗಲಿ ಎಂದರು.

ತರಬೇತಿ ಕಾರ್ಯಕ್ರಮದಲ್ಲಿ ಕುಲಸಚಿವ ಪ್ರೊ.ಕೆ.ಎಲ್.ಎನ್.ಮೂರ್ತಿ, ಹಣಕಾಸು ಅಧಿಕಾರಿ ಡಾ.ಎ.ಖಾದರ್ ಪಾಷ ತರಬೇತಿ ಕುರಿತು ವಿವರಣೆ ನೀಡಿದರು. ಸಂಪನ್ಮೂಲ ವ್ಯಕ್ತಿಗಳಾದ ಡಾ.ವಿ. ರಂಗನಾಥ್, ಕೆ.ಎಲ್.ಪ್ರಕಾಶ್, ಮಧುಸೂದನ್, ಡೀನ್‌ಗಳಾದ ಪ್ರೊ ಎನ್.ಲಕ್ಷ್ಮಿ, ಪ್ರೊ.ರಮಾನಾಥಂ ನಾಯ್ಡು, ಪರೀಕ್ಷಾಂಗ ಕುಲಸಚಿವ ಪ್ರೊ.ಕೆ.ಬಿ.ಪ್ರವೀಣ, ಇ–ಗವರ್ನೆನ್ಸ್ ಪ್ರೊ.ಮಹದೇವ ಮೂರ್ತಿ, ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಜೈನಹಳ್ಳಿ ಸತ್ಯನಾರಾಯಣಗೌಡ ಇದ್ದರು.

ಮೈಸೂರು ಮಿತ್ರ

ಬುಧವಾರ 31 ಮೇ 2023

ವಿರಾಜಪೇಟೆ ಸುತ್ತ-ಮುತ್ತ ಗುಡುಗು, ಮಿಂಚು ಸಹಿತ ಭಾರೀ ಬಿರುಗಾಳಿ ಮಳೆ

- ನೆಲಕ್ಕುರುಳಿದ ಮರಗಳು, ವಿದ್ಯುತ್ ಕಂಬಗಳು, ಆಟೋ ಜಖಂ, ಮಕ್ಕಳು ಪಾರು
- ಶಾಸಕ ಎ.ಎಸ್. ಪೊನ್ನಣ್ಣ ಸ್ಥಳಕ್ಕೆ ಭೇಟಿ, ಪರಿಶೀಲನೆ, ತುರ್ತು ಕ್ರಮಕ್ಕೆ ಸೂಚನೆ





ವಿರಾಜಪೇಟೆ, ಮೇ 30– ಮುಂಗಾರು ಮಳೆ ಪ್ರತಿವರ್ಷ ಜೂನ್ ತಿಂಗಳಲ್ಲಿ ಆರಂಭವಾಗುವುದು ವಾಡಿಕೆ. ಆದರೆ, ಈ ವರ್ಷ ಮೇ ತಿಂಗಳ ಕೊನೆಯಲ್ಲಿ ತನ್ನ ಆರ್ಭಟ ತೋರಿಸಿದೆ.

ವಿರಾಜಪೇಟೆ ಸುತ್ತ-ಮುತ್ತ ಮಂಗಳವಾರ ಬೆಳಗ್ಗೆಯಿಂದಲೇ ಮೋಡ ಕವಿದ ವಾತಾವರಣವಿದ್ದು, ಸುಮಾರು 11.30ರ ಸುಮಾರಿಗೆ ಗುಡುಗು, ಮಿಂಚು ಸಹಿತ ಭಾರೀ ಗಾಳಿಯೊಂದಿಗೆ ಮಳೆ ಸುರಿಯಿತು. ಎಡಬಿಡದೆ ಸುರಿದ ಮುಂಗಾರು ಪೂರ್ವ ಮಳೆಯಿಂದ ವಿರಾಜಪೇಟೆ-ಸಿದ್ದಾಪುರ ರಸ್ತೆಯ ಸುಂಕದಕಟ್ಟೆ ಬಳಿಯಿರುವ ಬೃಹತ್ ಮರದ ಕೊಂಬೆಯೊಂದು ಹೈಟೆನ್ಷನ್ ವಿದ್ಯುತ್ ತಂತಿಗಳ ಮೇಲೆ ಮುರಿದು ಬಿತ್ತು. ಇದರಿಂದ ವಿದ್ಯುತ್ ಕಂಬ ಧರೆಗುರುಳಿತು. ಇದಾದ ಕೆಲವೇ ನಿಮಿಷಗಳಲ್ಲಿ ಅನತಿ ದೂರದಲ್ಲಿದ್ದ ಹೈಟೆನ್ಷನ್ ತಂತಿಗಳಿದ್ದ ವಿದ್ಯುತ್ ಕಂಬಗಳು ಧರೆಗುರುಳಿದವು. ಇದರಿಂದ ವಿರಾಜಪೇಟೆ-ಸಿದ್ದಾಪುರ ರಸ್ತೆಯಲ್ಲಿ ಸಂಚಾರ ಸಂಪೂರ್ಣ ಬಂದ್ ಆಯಿತು. ಘಟನೆಗೆ ಸಂಬಂಧಿಸಿದಂತೆ ವಿರಾಜಪೇಟೆ ಶಾಸಕ ಎ.ಎಸ್. ಪೊನ್ನಣ್ಣ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶಿಲನೆ ನಡೆಸಿ, ಕೂಡಲೇ ಕಾರ್ಯಪ್ರವರ್ತರಾಗಿ ಸೆಸ್ಕಾಂನ ಈ ಭಾಗದ ಸಿಬ್ಬಂದಿಗಳನ್ನು ಸೇರಿಸಿ ಮುಖ್ಯರಸ್ತೆಯಲ್ಲಿ ಬಿದ್ದಿದ್ದ ಮರಗಳು, ವಿದ್ಯುತ್ ಕಂಬಗಳನ್ನು ತೆರವುಗೊಳಿಸಿ ಸಾರ್ವಜನಿಕರಿಗೆ ವಾಹನ ಸಂಚಾರಕ್ಕೆ ಅವಕಾಶ ಮಾಡಿಕೊಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಇದೇ ವೇಳೆ ಆಟೋ ರಿಕ್ಷಾವೊಂದರ ಮೇಲೆ ವಿದ್ಯುತ್ ಕಂಬವೊಂದು ಬಿದ್ದಿದ್ದು, ಆಟೋದಲ್ಲಿದ್ದ ಮಕ್ಕಳು ಸೇರಿದಂತೆ ಪ್ರಯಾಣಿಕರು ಪಾರಾಗಿದ್ದಾರೆ. ಆಟೋಗೆ ಹಾನಿಯಾಗಿದೆ. ಜಖಂಗೊಂಡಿರುವ ಆಟೋರಿಕ್ಷಾ ಮಾಲೀಕರಿಗೆ ತುರ್ತು ಸಹಾಯಧನ ನೀಡುವಂತೆ ಶಾಸಕರು ತಿಳಿಸಿದರು. ಈ ಸಂದರ್ಭ ಸೆಸ್ಕಾಂ ಸಹಾಯಕ ಕಾರ್ಯಪಾಲಕ ಅಭಿಯಂತರ ಸುರೇಶ್ ಅವರು ಸ್ಥಳದಲ್ಲಿಯೇ 5 ಸಾವಿರ ರೂ.ನೀಡಿದರು. ಇದರ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿ ಹೆಚ್ಚಿನ ಸಹಕಾರ ನೀಡುವುದಾಗಿ ತಿಳಿಸಿದರು.

ರಸ್ತೆ ಸಂಚಾರ ಸಂಪೂರ್ಣ ಬಂದ್ ಆಗಿದ್ದರಿಂದ ಕೆಲಕಾಲ ರಸ್ತೆಯಲ್ಲಿ ವಾಹನಗಳು ಸಾಲುಗಟ್ಟಿ ನಿಂತಿದ್ದವು. ಪಟ್ಟಣಕ್ಕೆ ವಿದ್ಯುತ್ ಸರಬರಾಜು ಮಾಡುವ ಮಗ್ಗುಲದ ಉಪ ಕೇಂದ್ರವಿದೆ. ಇಲ್ಲಿಂದಲೇ ಬಹುತೇಕ ವಿದ್ಯುತ್ ಸರಬರಾಜಾಗುತ್ತಿತ್ತು. ಕಂಬಗಳು ಬಿದ್ದಿದ್ದರಿಂದ ಪಟ್ಟಣದಲ್ಲಿ ವಿದ್ಯುತ್ ಸರಬರಾಜು ಇಲ್ಲದೆ ಜನತೆ ಕಗ್ಗತ್ತಲಲ್ಲಿ ಇರುವಂತಾಯಿತು.

ಸ್ಥಳದಲ್ಲಿದ್ದ ಸೆಸ್ಕ್ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಸುರೇಶ್ ಮಾತನಾಡಿ, ರಸ್ತೆಗೆ ಅಡ್ಡಲಾಗಿ ಬಿದ್ದಿರುವ ಹಾಗೂ ಹಾನಿಗೊಳಗಾದ ಕಂಬಗಳನ್ನು ಮೊದಲು ತೆರವುಗೊಳಿಸಬೇಕಿದೆ. ಬಳಿಕ ಹೊಸ ಕಂಬಗಳನ್ನು ಹಾಕಿ ತಂತಿಗಳನ್ನು ಅಳವಡಿಸಿದ ನಂತರ ವಿದ್ಯುತ್ ಸರಬರಾಜಿಗೆ ಅವಕಾಶ ನೀಡಲಾಗುವುದು. ಶೀಘ್ರವಾಗಿ ವಿದ್ಯುತ್ ಸಂಪರ್ಕ ಕಲ್ಪಿಸುವುದಾಗಿ ಭರವಸೆ ನೀಡಿದ್ದರು. ರಾತ್ರಿ 9.30ರ ನಂತರ ವಿರಾಜಪೇಟೆಯಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲಾಯಿತು.

ಪೊಲೀಸ್ ವೃತ್ತನಿರೀಕ್ಷಕ ಬಿ.ಎಸ್. ಶಿವರುದ್ರ, ಪೊಲೀಸ್ ಠಾಣಾಧಿಕಾರಿಗಳಾದ ಮದನ್ ಕುಮಾರ್, ರವಿಕುಮಾರ್ ಸೇರಿದಂತೆ ಪೊಲೀಸ್ ಅಧಿಕಾರಿಗಳು, ಕಿರಿಯ ಇಂಜಿನಿಯರ್ ಹಾಗೂ ಸಿಬ್ಬಂದಿ, ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ರಂಜಿ ಪೂಣಚ್ಚ, ಮುಖಂಡರಾದ ವಿ.ಕೆ.ಸತೀಶ್, ಕೆ.ರಫೀಕ್, ಹನೀಫ್, ಕೆ.ಸಿ.ಶಭರಿಷ್, ಶಫೀಕ್, ಜೋಕಿಂ ರಾಡ್ರಿಗಾಸ್ ಮತ್ತಿತರು ಹಾಜರಿದ್ದರು.

ಪ್ರವಾಸಿಗರ ಜೊತೆ ಅನುಚಿತವಾಗಿ ವರ್ತಿಸಿದರೆ ಕಠಿಣ ಕ್ರಮ

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಎಚ್ಚರಿಕೆ



ಮಡಿಕೇರಿ, ಮೇ 30– ಜಿಲ್ಲೆಯ ಪ್ರವಾಸಿ ತಾಣದಲ್ಲಿ ಪ್ರವಾಸಿಗರ ಜೊತೆಗೆ ಸೌಜನ್ಯ, ವಿನಯದಿಂದ ನಡೆದುಕೊಳ್ಳಬೇಕು, ಪ್ರವಾಸಿಗರ ಜೊತೆ ಅನುಚಿತವಾಗಿ ವರ್ತಿಸಿದರೆ ಕಾನೂನು ರೀತಿಯ ಕ್ರಮ ಜರುಗಿಸಬೇಕಾಗುತ್ತದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಅವರು ಎಚ್ಚರಿಸಿದ್ದಾರೆ.

ಜಿಲ್ಲೆಗೆ ಆಗಮಿಸುವ ಪ್ರವಾಸಿಗರ ಸುರಕ್ಷತೆ ಸಂಬಂಧಿಸಿದಂತೆ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ 'ಜಿಲ್ಲಾ ಪ್ರವಾಸೋದ್ಯಮ ಸಮಿತಿ ಸಭೆ'ಯಲ್ಲಿ ಅವರು ಮಾತನಾಡಿದರು. ಪೊಲೀಸ್ ಇಲಾಖೆಯಿಂದ ಮುಂದಿನ 10 ದಿನದೊಳಗೆ ಜಿಲ್ಲೆಯ ಪ್ರತಿಯೊಂದು ಪ್ರವಾಸಿ ತಾಣದಲ್ಲಿ 'ಪ್ರವಾಸಿ ಫಲಕ' ಅಳವಡಿಸಲಾಗುವುದು. ಹಾಗೆಯೇ ಮುಖ್ಯ ಹೆದ್ದಾರಿಗಳಲ್ಲಿಯೂ ಸಹ ಸೂಚನಾ ಫಲಕ ಅಳವಡಿಸಲಾಗುವುದು ಎಂದು ಅವರು ತಿಳಿಸಿದರು.

ಕೊಡಗು ಜಿಲ್ಲೆಗೆ ವಿವಿಧ ಭಾಗಗಳಿಂದ ಪ್ರವಾಸಿಗರು ಆಗಮಿಸುತ್ತಾರೆ. ಅಂತವರನ್ನು ಯಾವ ರೀತಿ ಕಾಣಬೇಕು ಎಂಬುದು ತಿಳಿದಿರಬೇಕು. ಅದನ್ನು ಬಿಟ್ಟು ಪ್ರವಾಸಿಗರ ಜೊತೆ ಕೆಟ್ಟದಾಗಿ ವರ್ತಿಸಿದರೆ ಪೊಲೀಸ್ ಇಲಾಖೆ ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಲಿದೆ ಎಂದು ಖಡಕ್ ಆಗಿ ನುಡಿದರು.

'ಪ್ರವಾಸಿ ತಾಣಗಳಲ್ಲಿ ಯಾವುದೇ ರೀತಿಯ ತೊಂದರೆ ಉಂಟಾದಲ್ಲಿ ಪೊಲೀಸ್ ತುರ್ತು ಸೇವೆ 112 ಸಂಖ್ಯೆಗೆ ಕರೆ ಮಾಡಿ ಮಾಹಿತಿ ನೀಡುವಂತಾಗಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೋರಿದರು. ಹಳದಿ ಮತ್ತು ಬಿಳಿ ಬಣ್ಣ ಫಲಕದ ವಾಹನಗಳ ನಡುವಿನ ಕಿತ್ತಾಟ ನಿಲ್ಲಬೇಕು. ಕೊಡಗು ಜಿಲ್ಲೆಗೆ ಕೆಟ್ಟ ಹೆಸರು ಬರದಂತೆ ನಡೆದುಕೊಳ್ಳಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅವರು ತಾಕೀತು ಮಾಡಿದರು.

ಡೀನ್ ಬೋಪಣ್ಣ ಅವರು ಮಾತನಾಡಿ, ಸ್ಥಳೀಯ ಗ್ರಾಪಂ ವತಿಯಿಂದ ಕುಡಿ ಯುವ ನೀರು, ಶೌಚಾಲಯ ಹಾಗೂ ರಸ್ತೆ ಅಭಿವೃದ್ಧಿಪಡಿಸಲಾಗಿದೆ ಎಂದರು. ನವೀನ್ ಅಂಬೆಕಲ್ಲು ಮಾತನಾಡಿ, ಅಬ್ಬಿ ಜಲಪಾತಕ್ಕೆ ತೆರಳುವ ಮಾರ್ಗದ ರಸ್ತೆಯನ್ನು ವಿಸ್ತರಿಸಬೇಕು ಎಂದು ಸಲಹೆ ಮಾಡಿದರು. ಪ್ರಮುಖರಾದ ಎಂ.ಬಿ. ದೇವಯ್ಯ ಅವರು ಅಬ್ಬಿಜಲ ಪಾತಕ್ಕೆ ಏಕ ಮುಖ ಸಂಚಾರ ವ್ಯವಸ್ಥೆ ಮಾಡಬೇಕು ಎಂದು ಸಲಹೆ ಮಾಡಿದರು.

ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕ ಯತೀಶ್ ಉಲ್ಲಾಳ್, ಪ್ರಮುಖರಾದ ಭಾಸ್ಕರ್, ರೋಹಿತ್, ಜಗದೀಶ್, ಪ್ರಾದೇಶಿಕ ಸಾರಿಗೆ ಮಧುರ ಇತರರು ಇದ್ದರು.

ಕೊಡಗು ಜಿಲ್ಲೆಯಲ್ಲಿ ಕಚೇರಿ ತೆರೆದು ಜನರ ಸಮಸ್ಯೆಗಳಿಗೆ ಸ್ಪಂದಿಸುವೆ

ಸಂಸದ ಪ್ರತಾಪ್‌ಸಿಂಹ ಘೋಷಣೆ



ಮಡಿಕೇರಿ, ಮೇ 30– ಜಿಲ್ಲೆಯಲ್ಲಿದ್ದ ಅನುಭವಿ ಶಾಸಕರೊಬ್ಬರು ಕಡಿಮೆ ಅಂತರದಲ್ಲಿ ಸೋಲನ್ನಪ್ಪಿದ್ದಾರೆ. ಈ ಹಿನ್ನೆಲೆಯಲ್ಲಿ ಸಂಸದನಾಗಿ ಪಕ್ಷದ ಕಾರ್ಯಕರ್ತರು ಮತ್ತು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಜಿಲ್ಲೆಯ ಮಡಿಕೇರಿ, ವಿರಾಜಪೇಟೆ ಮತ್ತು ಸೋಮವಾರಪೇಟೆಯಲ್ಲಿ ಕಚೇರಿಯನ್ನು ತೆರೆದು ತಿಂಗಳಲ್ಲಿ ನಾಲ್ಕೈದು ಬಾರಿ ಭೇಟಿ ನೀಡುವ ಮೂಲಕ ಜನರ ಸಮಸ್ಯೆಗಳಿಗೆ ಸ್ಪಂದಿಸುವುದಾಗಿ ಸಂಸದ ಪ್ರತಾಪ್ ಸಿಂಹ ಹೇಳಿದ್ದಾರೆ.

ಮಡಿಕೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಜಿ ಶಾಸಕರು, ಎಂಎಲ್‌ಸಿ ಸುಜಾ ಕುಶಾಲಪ್ಪ ಹಾಗೂ ತಾವು, ಪ್ರತಿಮನೆಗೂ ಕುಡಿಯುವ ನೀರು ಪೂರೈಕೆ ಮಾಡುವ ಜಲಜೀವನ್ ಯೋಜನೆಯಡಿ 350 ಕೋಟಿ ಅನುದಾನ ತಂದಿದ್ದೇವೆ. ಕೊಡಗು ಬೆಟ್ಟಗುಡ್ಡಗಳ ಪ್ರದೇಶವಾದ್ದರಿಂದ ನೀರಿನ ಮೂಲಗಳು ಕಡಿಮೆ ಇರುವುದರಿಂದ ನೀರು ಸರಬರಾಜಿಗೆ ತೊಂದರೆಯಾಗುತ್ತಿದೆ. ಬೇಸಿಗೆಯಲ್ಲಿ ಕೆಲವು ಕಡೆಗಳಲ್ಲಿ ಬೋರ್‌ವೆಲ್ ಕೊರೆಸಿದ ಪರಿಣಾಮ ನೀರು ಬತ್ತಿಹೋಗಿದೆ. ಇದರಿಂದಾಗಿ ಸಮಸ್ಯೆಯಾಗಿದೆ ಎಂದರು.

ಕಾಂಗ್ರೆಸ್ ಪಕ್ಷದ ಗ್ಯಾರಂಟಿಗಳನ್ನು ನೋಡಿ ಜನ ಮತ ನೀಡಿದ್ದು, ಮೋದಿ ಅವರ ಬಗ್ಗೆ ಮಾತನಾಡದೇ ಗ್ಯಾರಂಟಿಗಳನ್ನು ಅನುಷ್ಠಾನಕ್ಕೆ ತನ್ನಿ ಎಂದು ಕಾಂಗ್ರೆಸ್ ಪಕ್ಷದ ವಿರುದ್ಧ ಪ್ರತಾಪ್ ಸಿಂಹ ವಾಗ್ದಾಳಿ ನಡೆಸಿದರು. ಮುಂಬರುವ ಲೋಕಸಭಾ ಚುನಾವಣೆಯಲ್ಲಿ ತಾವು ಮಾಡಿರುವ ಜನಪರ ಕಾರ್ಯಕ್ರಮಗಳನ್ನು ಜನರ ಮುಂದಿಟ್ಟು ಮತಯಾಚಿಸುತ್ತೇನೆ. ಪ್ರತಿಸ್ಪರ್ಧಿಯ ಕುರಿತು ತಲೆಕೆಡಿಸಿಕೊಳ್ಳಲ್ಲವೆಂದು ಪ್ರತಾಪ್ ಸಿಂಹ ಹೇಳಿದರು.

ಶಾಶ್ವತ ಸೂರು, ನಿವೇಶನಕ್ಕೆ ಆಗ್ರಹಿಸಿ ಸಿಪಿಐಎಂ ಪ್ರತಿಭಟನೆ



ಸಿದ್ದಾಪುರ, ಮೇ 30– ಪ್ರವಾಹ ಸಂದರ್ಭದಲ್ಲಿ ಮನೆ ಆಸ್ತಿ-ಪಾಸ್ತಿ ಕಳೆದುಕೊಂಡು ಸಂಕಷ್ಟದ ಜೀವನ ನಡೆಸುತ್ತಿರುವ ಸಂತ್ರಸ್ತರಿಗೆ ನಾಲ್ಕು ವರ್ಷ ಕಳೆದರೂ ಇಂದಿಗೂ ಶಾಶ್ವತ ಸೂರು, ನಿವೇಶನ ಸಿಕ್ಕಿಲ್ಲ ಹಾಗೂ ಗ್ರಾಮದಲ್ಲಿ ಹಲವಾರು ಸಮಸ್ಯೆಗಳಿದ್ದರೂ ಅಭಿವೃದ್ಧಿ ಕಾರ್ಯಗಳಿಗೆ ಮುಂದಾಗುತ್ತಿಲ್ಲ ಎಂದು ಆರೋಪಿಸಿ ಸಿಪಿಐಎಂ ಪಕ್ಷದ ಕಾರ್ಯಕರ್ತರು ನೆಲ್ಯಹುದಿಕೇರಿ ಗ್ರಾಮ ಪಂಚಾಯಿತಿ ಮುಂದೆ ಪ್ರತಿಭಟನೆ ನಡೆಸಿ ಅಕ್ರೋಶ ವ್ಯಕ್ತಪಡಿಸಿದರು.

ಸಿಪಿಐಎಂ ಪಕ್ಷದ ಶಾಖಾ ಕಾರ್ಯದರ್ಶಿ ಪಿ. ಆರ್ ಭರತ್ ಮಾತನಾಡಿ ನೆಲ್ಯಹುದಿಕೇರಿ ಸುತ್ತಮುತ್ತಲಿನಲ್ಲಿ ನೆಲೆಸಿರುವ ನೂರಕ್ಕೂ ಹೆಚ್ಚು ಸಂತ್ರಸ್ತ ಕುಟುಂಬಗಳಿಗೆ ಇಂದಿಗೂ ಶಾಶ್ವತ ಸೂರು ನಿವೇಶನ ಸಿಗದೇ ಮತ್ತೆ ನದಿ ದಡದಲ್ಲಿ ಪ್ಲಾಸ್ಟಿಕ್ ಗುಡಿಸಲುಗಳನ್ನ ಕಟ್ಟಿ ಅತಂತ್ರ ಸ್ಥಿತಿಯಲ್ಲಿ ಜೀವನ ನಡೆಸುತ್ತಿದ್ದಾರೆ. ಇದೀಗ ಮತ್ತೆ ಮಳೆ ಪ್ರಾರಂಭವಾಗುತ್ತಿದ್ದಂತೆ ಜಿಲ್ಲಾಡಳಿತ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಸೂಚಿಸಿ ಸಂತ್ರಸ್ತರಿಗೆ ನೋಟಿಸ್ ಜಾರಿ ಮಾಡಿದೆ ಎಂದರು.

ಸಂತ್ರಸ್ತರು ಯಾವ ಸುರಕ್ಷಿತ ಸ್ಥಳಗಳಿಗೆ ತೆರಳಬೇಕೆಂದು ಜಿಲ್ಲಾಡಳಿತವೇ ಉತ್ತರ ನೀಡಬೇಕಾಗಿದೆ. ಕಳೆದ ನಾಲ್ಕು ವರ್ಷಗಳಿಂದ ಹಲವು ಬಾರಿ ಮನವಿ, ಪ್ರತಿಭಟನೆ, ಹೋರಾಟಗಳು ಮಾಡಿದೆಯಾದರೂ ಇದುವರೆಗೂ ಬೇಡಿಕೆ ಈಡೇರಲಿಲ್ಲ. ಅತ್ತಿಮಂಗಲ ಬಳಿ ಸಂತ್ರಸ್ತರಿಗೆ ಈಹಿಂದೆ ಗುರುತಿಸಲಾದ ಜಾಗದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆದಿಲ್ಲ ಎಂದು ದೂರಿದರು.

ಇದುವರೆಗೂ ಜನಪ್ರತಿನಿಧಿಗಳು ಭರವಸೆಯ ಮಾತುಗಳನ್ನಾಡಿದರೆ ಹೊರತು ಶಾಶ್ವತ ಪರಿಹಾರಕ್ಕೆ ಮುಂದಾಗಲಿಲ್ಲ. ಕೂಡಲೇ ಸಂತ್ರಸ್ತರ ಬೇಡಿಕೆ ಈಡೇರದಿದ್ದಲ್ಲಿ ಬೃಹತ್ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದ ಅವರು ನೆಲ್ಯಹುದಿಕೇರಿಯಲ್ಲಿ ಸಾರ್ವಜನಿಕ ಶೌಚಾಲಯ, ರಸ್ತೆ, ವಿದ್ಯುತ್, ಪಡಿತರ ಸಮಸ್ಯೆ ಇದ್ದರೂ ಬಗೆಹರಿಸುವಲ್ಲಿ ಗ್ರಾಮ ಆಡಳಿತ ವಿಫಲವಾಗಿದೆ ಎಂದು ಆರೋಪಿಸಿದರು

ಕೂಡಲೇ ಬೇಡಿಕೆ ಈಡೇರಿಸಬೇಕೆಂದು ಒತ್ತಾಯಿಸಿ. ತಹಸಿಲ್ದಾರ್ ಪ್ರಕಾಶ್ ಅವರಿಗೆ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಎ.ಕೆ ಹಕೀಂ, ಅಭಿವೃದ್ಧಿ ಅಧಿಕಾರಿ ಅನಿಲ್ ಕುಮಾರ್, ಅಹಾರ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಹಾಜರಿದ್ದರು. ಪ್ರತಿಭಟನೆಯಲ್ಲಿ ಮೋನಪ್ಪ, ಉದಯ, ಅಜೀಜ್, ಚಂದ್ರನ್, ರಮೇಶ್, ಶಿವರಾಮನ್, ಶಿವಪ್ಪ ಸೇರಿದಂತೆ ಮತ್ತಿತರರು ಹಾಜರಿದ್ದರು.



ಅರಿಶಿಣ ಖರೀದಿ ವಿಳಂಬ ವಿರೋಧಿಸಿ ರೈತರ ಪ್ರತಿಭಟನೆ

ಮೆರವಣಿಗೆ ಮೂಲಕ ಜಿಲ್ಲಾಡಳಿತ ಭವನಕ್ಕೆ ತೆರಳಿ, ಅರಿಶಿಣ ಸುರಿದು ಅಧಿಕಾರಿಗಳ ವಿರುದ್ಧ ಆಕ್ರೋಶ



ಚಾಮರಾಜನಗರ, ಮೇ 30– ಅರಿಶಿಣ ಖರೀದಿ ಪ್ರಕ್ರಿಯೆ ಪ್ರಾರಂಭ ಮಾಡದೆ ವಿಳಂಬ ಮಾಡಲಾಗುತ್ತಿದೆ ಎಂದು ಆರೋಪಿಸಿ ನಗರದಲ್ಲಿ ಮಂಗಳವಾರ ರಾಜ್ಯ ಅರಿಶಿಣ ಬೆಳೆಗಾರರ ಒಕ್ಕೂಟದ ಜಿಲ್ಲಾ ಘಟಕದ ವತಿಯಿಂದ ಪ್ರತಿಭಟನೆ ನಡೆಯಿತು.

ನಗರದ ಶ್ರೀ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನ ಮುಂಭಾಗ ಸಮಾವೇಶಗೊಂಡ ಪ್ರತಿಭಟನಾಕಾರರು, ಅಲ್ಲಿಂದ ಭುವನೇಶ್ವರಿ ವೃತ್ತಕ್ಕೆ ತೆರಳಿ ಪ್ರತಿಭಟನೆ ನಡೆಸಿ, ಬಳಿಕ ಬಿ. ರಾಚಯ್ಯ ಜೋಡಿ ರಸ್ತೆಯ ಮೂಲಕ ಜಿಲ್ಲಾಡಳಿತ ಭವನಕ್ಕೆ ತೆರಳಿ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರ ಅರಿಶಿಣ ಖರೀದಿ ಮಾಡಬೇಕೆಂದು ಆದೇಶಿಸಿದ್ದರೂ ಇದಾವುದನ್ನು ಗಮನಕ್ಕೆ ತೆಗೆದುಕೊಳ್ಳದೆ. ಅಧಿಕಾರಿಗಳು ಕಾಲಾಹರಣ ಮಾಡುತ್ತಿದ್ದಾರೆ. ಇಂದು ಕೇಂದ್ರ ಸರ್ಕಾರ ನೀಡಿದ್ದ ಗಡುವು ಮುಕ್ತಾಯವಾಗಿದೆ. ಅಂದರೆ ಮೇ 21ರೊಳಗಾಗಿ 22 ಸಾವಿರ ಮೆಟ್ರಿಕ್ ಟನ್ ಅರಿಶಿಣ ಖರೀದಿಸಲು ಆದೇಶಿಸಿರುತ್ತದೆ ಎಂದರು.

ಜಿಲ್ಲೆಯಲ್ಲಿ ಇಲ್ಲಿಯವರೆಗೆ ಯಾವೊಬ್ಬ ರೈತನ ಅರಿಶಿಣವನ್ನು ಖರೀದಿ ಕೇಂದ್ರದ ಮೂಲಕ ಖರೀದಿಸಿಲ್ಲ. ಈ ಮೂಲಕ ರೈತರಿಗೆ ಅನ್ಯಾಯ ಮಾಡಲಾಗಿದೆ. ಆದ್ದರಿಂದ ಇನ್ನೆರಡು ದಿನಗಳಲ್ಲಿ ಇದನ್ನು ಅತ್ಯಂತ ತುರ್ತು ಅಥವಾ ಜರೂರು ಎಂದು ಭಾವಿಸಿ ಇದನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ಗಮನಕ್ಕೆ ತಂದು ಖರೀದಿ ದಿನಾಂಕ ವಿಸ್ತರಣೆ ಮಾಡಿಸಿ ರೈತರಿಂದ ಅರಿಶಿಣ ಖರೀದಿ ಮಾಡಿಸಬೇಕು ಎಂದು ಒತ್ತಾಯಿಸಿದರು.

ಇನ್ನೆರಡು ದಿನದಲ್ಲಿ ಅರಿಶಿಣ ಖರೀದಿ ಪ್ರಕ್ರಿಯೆ ಪ್ರಾರಂಭವಾಗದಿದ್ದರೆ. ರೈತರಿಗೆ ಆಗುವ ಆರ್ಥಿಕ ನಷ್ಟಕ್ಕೆ ಜಿಲ್ಲಾಧಿಕಾರಿಗಳೇ ನೇರ ಹೊಣೆಗಾರರಾಗಿರುತ್ತೀರಿ ಎಂಬುದನ್ನು ತಮ್ಮ ಗಮನಕ್ಕೆ ತರಬಯಸುತ್ತೇವೆ. ಯಾಕೆಂದರೆ ನೀವೇ ಜಿಲ್ಲಾ ಟಾಸ್ಕ್‌ಫೋರ್ಸ್‌ನ ಅಧ್ಯಕ್ಷರಾಗಿರುವುದರಿಂದ ನಿಮ್ಮ ನೇತೃತ್ವದಲ್ಲಿ ಖರೀದಿ ನಡೆಯಬೇಕಿರುತ್ತದೆ. ಆಗಾಗಿ ಆದಷ್ಟು ಶೀಘ್ರವಾಗಿ ತಲೆದೋರಿ ರುವ ಸಮಸ್ಯೆಯನ್ನು ಇತ್ಯರ್ಥಪಡಿಸಿ ಜಿಲ್ಲೆಯ ಅರಿಶಿಣ ಬೆಳೆಗಾರರಿಂದ ಅರಿಶಿಣ ಖರೀದಿಸಿ ರೈತರನ್ನು ಆರ್ಥಿಕ ನಷ್ಟದಿಂದ ಪಾರು ಮಾಡಬೇಕು ಎಂದು ಒತ್ತಾಯಿಸಿದರು.

ಇದರ ಜೊತೆಗೆ ಖರೀದಿ ಪ್ರಕ್ರಿಯೆ ಮಾಡಲು ವಿಳಂಬ ಮಾಡಿದ ಸಂಬಂಧಪಟ್ಟ ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿ ಮಾಡಿ ಅವರ ಮೇಲೆ ಸೂಕ್ತ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಇದೇ ವೇಳೆ ಆಹಾರ ಮತ್ತು ನಾಗರಿಕ ಇಲಾಖೆ ಉಪನಿರ್ದೇಶಕ ಯೋಗಾನಂದ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಶಿವಪ್ರಸಾದ್ ಅವರಿಗೆ ರೈತರು ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ರೈತ ಸಂಘದ ಜಿಲ್ಲಾಧ್ಯಕ್ಷ ಹೊನ್ನೂರು ಪ್ರಕಾಶ್, ಮುಖಂಡರಾದ ಕುಂದಕೆರೆ ಚಂದ್ರು, ನಾಗಾರ್ಜುನ ಕುಮಾರ್, ಸಂಪತ್ತು, ಚಂಗಡಿ ಕರಿಯಪ್ಪ, ಮಹೇಶ್, ಮಾದಾಪುರ ಕುಮಾರ್, ಮಹೇಶ್, ಮಹದೇವಸ್ವಾಮಿ, ಶಾಂತಮೂರ್ತಿ, ಗುರುಪ್ರಸಾದ್ ಸೇರಿದಂತೆ ಇತರರಿದ್ದರು.

ಪ್ರತಿಭಟನೆಗೆ ಮಣಿದ ಅಧಿಕಾರಿಗಳು; ಸ್ಥಳದಲ್ಲೇ 51 ಕೆಜಿ ಅರಿಶಿಣ ಖರೀದಿ

ಅರಿಶಿಣ ಖರೀದಿ ವಿಳಂಬವನ್ನು ಖಂಡಿಸಿ ಅರಿಶಿಣ ಬೆಳೆಗಾರರ ಪ್ರತಿಭಟನೆ ಮಣಿದ ಅಧಿಕಾರಿಗಳು 51 ಕೆಜಿ ಅರಿಶಿಣವನ್ನು ಖರೀದಿಸಿದರು. ಈಗಾಗಲೇ ಸಾಕಷ್ಟು ವಿಳಂಬವಾಗಿದೆ. ಅರಿಶಿಣವನ್ನು ಈ ತಕ್ಷಣದಿಂದಲೇ ಖರೀದಿಸಬೇಕು ಎಂದು ಅರಿಶಿಣ ಬೆಳೆಗಾರರು ಅಧಿಕಾರಿಗಳನ್ನು ಒತ್ತಾಯಿಸಿ ಅರಿಶಿಣ ಸುರಿದು, ಲಂಚದ ಹಣವನ್ನೂ ಕೊಡುವುದಾಗಿ ಹೇಳುವ ಮೂಲಕ ಪ್ರತಿಭಟನೆ ನಡೆಸಲಾರಂಭಿಸಿದರು.

ಇದಕ್ಕೆ ಮಣಿದ ಅಧಿಕಾರಿಗಳು ತಕ್ಷಣವೇ ಸ್ಥಳದಲ್ಲೇ 51 ಕೆಜಿ ಅರಿಶಿಣವನ್ನು ಖರೀದಿಸುವ ಮೂಲಕ ಅರಿಶಿಣ ಖರೀದಿ ಪ್ರಕ್ರಿಯೆಗೆ ಚಾಲನೆ ನೀಡಿದರು.

ಬಹಿರಂಗವಾಗಿ ಲಂಚ ನೀಡಲು ಮುಂದಾದ ಪ್ರತಿಭಟನಾಕಾರರು

ನಗರದ ಜಿಲ್ಲಾಡಳಿತದ ಭವನದ ಮುಂಭಾಗ ಪ್ರತಿಭಟನೆ ನಡೆಸುತ್ತಿದ್ದ ರೈತರ ಬಳಿ ಬಂದ ಅಧಿಕಾರಿಗಳನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡ ರೈತರು ಹಾಗೂ ಪ್ರತಿಭಟನಾಕಾರರು ಹಣ ಸಂಗ್ರಹಣೆ ಮಾಡಿ ಅಧಿಕಾರಿಗಳಿಗೆ ಬಹಿರಂಗವಾಗಿ ಲಂಚ ನೀಡಲು ಮುಂದಾದರು. ಲಂಚವಿಲ್ಲದೇ ಯಾವುದೇ ಕೆಲಸ ನಡೆಯುವುದಿಲ್ಲ ಎಂದು ಲಂಚ ತೆಗೆದುಕೊಳ್ಳುತ್ತಿರುವ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ, ಜಿಲ್ಲಾಡಳಿತ ಭವನದ ಮುಂಭಾಗ ರೈತರಿಂದ ಸಂಗ್ರಹಿಸಿದ್ದ ಹಣ ಹಾಗೂ ಅರಿಶಿಣವನ್ನು ಸುರಿದು ಆಕ್ರೋಶ ವ್ಯಕ್ತಪಡಿಸಿದರು. ಹುಳು ಬೀಳುತ್ತಿದ್ದರೂ ಸಹ ತೆಗೆದುಕೊಳ್ಳಲು ಮುಂದಾಗುತ್ತಿಲ್ಲ. ಚುನಾವಣೆ ವೇಳೆ ಹಣ ಹಂಚುವಾಗ ಇಲ್ಲದ ನೀತಿ ಸಂಹಿತೆ, ಅರಿಶಿಣವನ್ನು ಕೊಳ್ಳಲು ಇತ್ತೇ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಶೀಘ್ರವಾಗಿ ಅರಿಶಿಣವನ್ನು ಖರೀದಿಸದಿದ್ದರೆ ಯಾವ ಗ್ರಾಮಗಳಿಗೂ ಜನಪ್ರತಿನಿಧಿಗಳು, ಅಧಿಕಾರಿಗಳು ಬಾರದಂತೆ ಘೇರಾವ್ ಹಾಕಲಾಗುವುದು. ತೆರಿಗೆ ಕಟ್ಟುವುದನ್ನು ನಿಲ್ಲಿಸುತ್ತೇವೆ ಎಂದು ಎಚ್ಚರಿಸಿದ್ದರು.





ಚಾಮರಾಜನಗರದಲ್ಲಿ ಮಂಗಳವಾರ ಸುರಿದ ಧಾರಾಕಾರ ಮಳೆಯಿಂದ ಜಿಲ್ಲಾಡಳಿತ ಭವನದ ಮುಂಭಾಗದ ಜೋಡಿ ರಸ್ತೆಯಲ್ಲಿ ನೀರು ನಿಂತು ಸಾರ್ವಜನಿಕರು, ವಾಹನ ಸವಾರರು ಪರದಾಡುವಂತಾಗಿತ್ತು. ಇದು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ. ಸಾರ್ವಜನಿಕರು, ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳಿಗೆ ಶಾಪ ಹಾಕಿದರು.


ಜಿ.ಪಿ. ದೊರೆಸ್ವಾಮಿ ನಿಧನ



ಚಾಮರಾಜನಗರ, ಮೇ 30– ತಾಲೂಕಿನ ಬದನಗುಪ್ಪೆ ಗ್ರಾಮ ಪಂಚಾಯತ್ ಮಾಜಿ ಉಪಾಧ್ಯಕ್ಷ ಜಿ.ಪಿ. ದೊರೆಸ್ವಾಮಿ (62) ಮಂಗಳವಾರ ಉಮ್ಮತ್ತೂರು ಗ್ರಾಮದಲ್ಲಿ ನಿಧನರಾದರು.

ಮೃತರು ತಾಯಿ, ಪತ್ನಿ, ಇಬ್ಬರು ಪುತ್ರಿಯರು ಹಾಗೂ ಮೂವರು ಸಹೋದರರನ್ನು ಅಗಲಿದ್ದು, ಉಮ್ಮತ್ತೂರಿನಲ್ಲಿ ಸಂಜೆ ಅಂತ್ಯಕ್ರಿಯೆ ನೆರವೇರಿತು.

ಶಿವಕುಮಾರಸ್ವಾಮಿ



ಚಾಮರಾಜನಗರ: ತಾಲೂಕು ಹೆಗ್ಗವಾಡಿಪುರ ಗ್ರಾಮದ ಶಿವಕುಮಾರಸ್ವಾಮಿ ಉರುಫ್ ದೊಡ್ಡಸ್ವಾಮಿ (72) ಮಂಗಳವಾರ ಮಧ್ಯಾಹ್ನ ನಿಧನರಾಗಿದ್ದಾರೆ.

ಮೃತರು ಪತ್ನಿ, ನಾಗಮ್ಮಣಿ, ಪುತ್ರರಾದ ಸಮಾಜಸೇವಕ ಹಾಗೂ ಜಿಲ್ಲಾ ಬಸವ ಕೇಂದ್ರದ ಅಧ್ಯಕ್ಷ ಎನ್.ರಿಚ್ ಮಹದೇವಸ್ವಾಮಿ, ಮಹೇಶ್ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಬುಧವಾರ ಬೆಳಗ್ಗೆ 10 ಗಂಟೆಗೆ ಸ್ವಗ್ರಾಮ ಹೆಗ್ಗವಾಡಿಪುರದಲ್ಲಿ ನಡೆಯಲಿದೆ.

ಕಾಡುಪ್ರಾಣಿ ಹಾವಳಿ ತಡೆಯಲು ಅರಣ್ಯ ಇಲಾಖೆ ವಿಫಲ ಆರೋಪ

ಮಳೆಯಲ್ಲಿಯೇ ಅನಿರ್ದಿಷ್ಟಾವಧಿ ಪ್ರತಿಭಟನೆ ಆರಂಭಿಸಿದ ಗ್ರಾಮಸ್ಥರು

ಗುಂಡ್ಲುಪೇಟೆ, ಮೇ 30– ನಿರಂತರ ವನ್ಯಜೀವಿ ದಾಳಿಯಿಂದ ರೊಚ್ಚಿಗೆದ್ದ ತಾಲೂಕಿನ ಹುಂಡೀಪುರ ಗ್ರಾಮಸ್ಥರು ವನ್ಯಜೀವಿಗಳ ದಾಳಿ ತಡೆಗಟ್ಟಲು ವಿಫಲರಾದ ಅರಣ್ಯಾಧಿಕಾರಿಗಳ ವರ್ಗಾವಣೆಗೆ ಒತ್ತಾಯಿಸಿ ಸುರಿಯುತ್ತಿದ್ದ ಮಳೆಯನ್ನೂ ಲೆಕ್ಕಿಸದೇ ಅನಿರ್ದಿಷ್ಟಾವಧಿ ಪ್ರತಿಭಟನೆ ಆರಂಭಿಸಿದ್ದಾರೆ.

ಈ ಭಾಗದಲ್ಲಿ ಒಂಟಿ ಸಲಗವೊಂದು ಗ್ರಾಮದ ಹಲವಾರು ಜಮೀನುಗಳಿಗೆ ದಾಳಿ ಮಾಡಿ ಬೆಳೆಹಾನಿ ಮಾಡಿದ್ದರಿಂದ ರೊಚ್ಚಿಗೆದ್ದ ರೈತರು ಹುಂಡೀಪುರ ಗ್ರಾಮದ ಬಸ್ ನಿಲ್ದಾಣದ ಬಳಿ ಬೆಳ್ಳಂಬೆಳಗ್ಗೆ ದಿಡೀರ್ ಪ್ರತಿಭಟನೆ ಆರಂಭಿಸಿದರು.

ಬಂಡೀಪುರ ಹುಲಿಯೋಜನೆಯ ಕುಂದಕೆರೆ ವಲಯದ ಕಾಡಂಚಿನ ಗ್ರಾಮಗಳಲ್ಲಿ ಆನೆ ಹಾಗೂ ಹುಲಿಗಳ ಹಾವಳಿ ಹೆಚ್ಚಾಗಿದೆ. ಕಳೆದ ನಾಲ್ಕಾರು ವರ್ಷಗಳಿಂದ ಈ ಭಾಗದಲ್ಲಿ ವನ್ಯಜೀವಿಗಳ ದಾಳಿ ಪ್ರಕರಣಗಳು ಹೆಚ್ಚಾಗಿವೆ. ಕಾಡಂಚಿನಲ್ಲಿ ಕಳಪೆ ಗುಣಮಟ್ಟದ ಕಂದಕ ಹಾಗೂ ಸೋಲಾರ್ ಬೇಲಿ ಅಳವಡಿಸಿದ್ದರಿಂದ ಪ್ರತಿ ದಿನವೂ ಅರಣ್ಯದಿಂದ ವನ್ಯಜೀವಿಗಳು ಹೊರಬಂದು ರೈತರ ಜಮೀನುಗಳಲ್ಲಿ ಬೆಳೆದಿರುವ ಬೆಳೆಗಳು ನಾಶಪಡಿಸುತ್ತಿವೆ. ಹಾಡಹಗಲೇ ಹುಲಿ ಚಿರತೆಗಳು ಓಡಾಡುತ್ತಾ ಸಾಕುಪ್ರಾಣಿಗಳನ್ನು ಕೊಂದು ತಿನ್ನುತ್ತಿದ್ದರೂ ಅರಣ್ಯ ಇಲಾಖೆ ಇವುಗಳನ್ನು ಕಾಡಿಗಟ್ಟಲು ಕ್ರಮಕೈಗೊಳ್ಳುತ್ತಿಲ್ಲ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

ಸ್ಥಳಕ್ಕೆ ಬಂದ ಅಧಿಕಾರಿಗಳಿಗೆ ತರಾಟೆ, ಹಿರಿಯ ಅಧಿಕಾರಿ ಆಗಮಿಸುವಂತೆ ಪಟ್ಟು



2019ರಲ್ಲಿ ಚೌಡಹಳ್ಳಿ ಗ್ರಾಮದ ಶಿವಲಿಂಗಪ್ಪ ಹಾಗೂ ಶಿವಮಾದಯ್ಯ ಎಂಬ ಇಬ್ಬರು ದನಗಾಹಿಗಳು ಹುಲಿ ದಾಳಿಯಿಂದ ಸಾವಿಗೀಡಾಗಿದ್ದರೂ ಅರಣ್ಯ ಇಲಾಖೆ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿಲ್ಲ. ಇದರಿಂದ ಈ ಭಾಗದ ರೈತರು ತಮ್ಮ ಜಮೀನುಗಳಿಗೆ ಹೋಗಲು ಸಾಧ್ಯವಾಗುತ್ತಿಲ್ಲ. ಬೆಳೆ ನಷ್ಟಕ್ಕೂ ಪರಿಹಾರ ನೀಡುತ್ತಿಲ್ಲ ಎಂದು ರೈತರು ದೂರಿದರು.

ಈ ಬಗ್ಗೆ ಕುಂದಕೆರೆ ವಲಯದ ಆರ್‌ಎಫ್‌ಒ ಶ್ರೀನಿವಾಸನಾಯ್ಕ ಹಾಗೂ ಗುಂಡ್ಲುಪೇಟೆ ಉಪವಿಭಾಗದ ಎಸಿಎಫ್ ಸಿ.ರವೀಂದ್ರ ಅವರಿಗೆ ರೈತರು ಕರೆ ಮಾಡಿ ತಿಳಿಸಿದರೆ ಬೇಜವಾಬ್ದಾರಿಯಿಂದ ಉತ್ತರ ನೀಡುತ್ತಿದ್ದಾರೆ. ಅಲ್ಲದೆ ರೈತರು ತಮ್ಮ ಜಮೀನುಗಳಲ್ಲಿ ಬೆಳೆದ ಮರಗಳನ್ನು ಕತ್ತರಿಸಲು ಅನುಮತಿ ನೀಡದೆ ಕಿರುಕುಳ ನೀಡುತ್ತಿದ್ದಾರೆ. ಬಂಡೀಪುರ ಹುಲಿ ಯೋಜನೆಯ ನಿರ್ದೇಶಕ ಡಾ.ರಮೇಶ್ ಕುಮಾರ್ ಅವರಿಗೆ ಕರೆ ಮಾಡಿ ತಿಳಿಸಿದರೂ ಯಾವುದೇ ಉಪಯೋಗವಾಗುತ್ತಿಲ್ಲ ಎಂದು ರೈತರು ಆಕ್ರೋಶದಿಂದ ನುಡಿದರು.

ಆದ್ದರಿಂದ ರೈತರ ಸಮಸ್ಯೆಗಳಿಗೆ ಪರಿಹಾರ ಕೊಡಿಸಲು ಸ್ಥಳಕ್ಕೆ ಹಿರಿಯ ಅಧಿಕಾರಿಗಳು ಆಗಮಿಸಬೇಕು, ರೈತರ ಬಗ್ಗೆ ನಿರ್ಲಕ್ಷ್ಯ ವಹಿಸಿರುವ ಶ್ರೀನಿವಾಸ ನಾಯ್ಕ ಹಾಗೂ ಗುಂಡ್ಲುಪೇಟೆ ಉಪವಿಭಾಗದ ಎಸಿಎಫ್ ಸಿ.ರವೀಂದ್ರ ಅವರನ್ನು ಕೂಡಲೇ ವರ್ಗಾವಣೆ ಮಾಡಬೇಕು ಎಂದು ಪಟ್ಟುಹಿಡಿದರು.

ವಿಷಯ ತಿಳಿದ ಬಂಡೀಪುರ ಉಪವಿಭಾಗದ ಎಸಿಎಫ್ ನವೀನ್ ಆಗಮಿಸಿ ಹುಲಿ ಯೋಜನೆಯ ನಿರ್ದೇಶಕ ರಮೇಶ್ ಕುಮಾರ್ ದೆಹಲಿಗೆ ಹೋಗಿದ್ದು ಬಂದ ಕೂಡಲೇ ವಿಷಯ ತಿಳಿಸಿ ಸಮಸ್ಯೆಗಳಿಗೆ ಪರಿಹಾರ ಒದಗಿಸಲಾಗುವುದು ಎಂದು ಭರವಸೆ ನೀಡಿದರೂ ಸಹ ಇದಕ್ಕೆ ಒಪ್ಪದೆ ರೈತರು ಮಳೆಯಲ್ಲಿಯೂ ಧರಣಿ ಮುಂದುವರೆಸಿದರು.

ಪರಿಸ್ಥಿತಿ ಗಂಭೀರವಾಗುತ್ತಿದ್ದಂತೆ ಸ್ಥಳಕ್ಕೆ ಆರ್‌ಎಫ್‌ಒ ಶ್ರೀನಿವಾಸನಾಯ್ಕ ಹಾಗೂ ಎಸಿಎಫ್ ಸಿ.ರವೀಂದ್ರ ಆಗಮಿಸಿ ಗ್ರಾಮಸ್ಥರ ಆಕ್ರೋಶಕ್ಕೆ ತುತ್ತಾದರು. ಸಣ್ಣಪುಟ್ಟ ಪ್ರಕರಣಗಳಲ್ಲಿ ರೈತರ ಮೇಲೆ ಪ್ರಕರಣ ದಾಖಲಿಸಿ ಮಹಾನ್ ಅಪರಾಧಿಗಳನ್ನು ಬಂಧಿಸಿದಂತೆ ಫೋಟೋ ತೆಗೆಸಿಕೊಳ್ಳುತ್ತಿದ್ದೀರಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಮಧ್ಯಾಹ್ನ ಸ್ಥಳಕ್ಕೆ ತಹಸೀಲ್ದಾರ್ ಶ್ರೀಶೈಲ ಯಮನಪ್ಪ ತಳವಾರ್ ಆಗಮಿಸಿ ರೈತರ ಅಹವಾಲು ಆಲಿಸಿದರು. ವನ್ಯಜೀವಿ ದಾಳಿ ತಡೆಗಟ್ಟಲು ಕ್ರಮಕೈಗೊಳ್ಳಬೇಕು. ಸ್ಥಳಕ್ಕೆ ಹಿರಿಯ ಅರಣ್ಯಾಧಿಕಾರಿಗಳು ಬಂದು ಸಮಸ್ಯೆಗೆ ಶಾಶ್ವತ ಪರಿಹಾರ ಕೊಡಿಸಬೇಕು. ಕೂಡಲೇ ಬೆಳೆ ನಷ್ಟಕ್ಕೆ ಪರಿಹಾರ ನೀಡಬೇಕು, ನಿರ್ಲಕ್ಷ್ಯ ವಹಿಸಿರುವ ಅರಣ್ಯಾಧಿಕಾರಿಗಳನ್ನು ವರ್ಗಾವಣೆ ಮಾಡಬೇಕು ಎಂದು ಪಟ್ಟುಹಿಡಿದಿದ್ದಾರೆ. ಧರಣಿಯು ಅಹೋರಾತ್ರಿ ನಡೆಯಲಿದೆ.

ಮೂರನೇ ಪುಟದಿಂದ

ಗ್ಯಾರಂಟಿಗಳ ಜಾರಿ ಗ್ಯಾರಂಟಿ

ಸರ್ಕಾರ ತುಂಬಿಕೊಡಬೇಕು ಎಂಬ ವರದಿಯನ್ನು ಮುಖ್ಯಮಂತ್ರಿ ಸಚಿವಾಲಯಕ್ಕೆ ತಲುಪಿಸಿದ್ದಾರೆ. ಗೃಹಜ್ಯೋತಿ, ಗೃಹಲಕ್ಷ್ಮಿ, ಅನ್ನಭಾಗ್ಯ, ಯುವ ನಿಧಿ ಹಾಗೂ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಸೌಲಭ್ಯ ನೀಡುವ ಯೋಜನೆಗಳನ್ನು ಚುನಾವಣೆಗೆ ಮುನ್ನ ಕಾಂಗ್ರೆಸ್ ಘೋಷಿಸಿತ್ತು. ಈ ಗ್ಯಾರಂಟಿಗಳನ್ನು ಘೋಷಿಸುವಾಗ ಮೊದಲ ಸಚಿವ ಸಂಪುಟದಲ್ಲೇ ಜಾರಿ ಮಾಡಲಾಗುವುದು ಎಂದು ಭರವಸೆ ನೀಡಲಾಗಿತ್ತು.

ಸದ್ಯದ ಮಾಹಿತಿ ಪ್ರಕಾರ ಅನ್ನಭಾಗ್ಯ ಯೋಜನೆಯನ್ನು 1.3 ಕೋಟಿ ಕುಟುಂಬಗಳು ಪ್ರಯೋಜನ ಪಡೆಯುತ್ತಿವೆ. ಈ ಕುಟುಂಬಗಳ 4.30 ಕೋಟಿ ಜನರಿಗೆ ತಲಾ ಹತ್ತು ಕೆ.ಜಿ ಅಕ್ಕಿ ವಿತರಿಸಬೇಕು. ಇದಕ್ಕೆ ವಾರ್ಷಿಕವಾಗಿ ತಗಲುವ ವೆಚ್ಚ 10 ಸಾವಿರ ಕೋಟಿ ರೂ. ಬೇಕು. ಗೃಹಲಕ್ಷ್ಮಿ ಯೋಜನೆಯಡಿ ಬಿಪಿಎಲ್ ಕುಟುಂಬ ಮನೆ ಒಡತಿಗೆ ಮಾಸಿಕ 2000 ರೂ ನೀಡುವುದರಿಂದ ವಾರ್ಷಿಕ 24 ಸಾವಿರ ಕೋಟಿ ಬೇಕಾಗುತ್ತದೆ ಎಂದು ಇಲಾಖೆ ವರದಿ ನೀಡಿದೆ. ಯುವನಿಧಿ ಯೋಜನೆಗೆ ಈ ವರ್ಷ ಪದವಿ ಮುಗಿಸಿಕೊಂಡು ಹೊರಬಂದವರಿಗೆ ಸೀಮಿತವಾಗಿ ಯುವನಿಧಿ ಜಾರಿಗೆ ತಂದರೂ ವಾರ್ಷಿಕವಾಗಿ 1,200 ಕೋಟಿ ಬೇಕಾಗುತ್ತದೆ. ಮಹಿಳೆಯರಿಗೆ ಉಚಿತ ಪ್ರಯಾಣದ ಯೋಜನೆ ಅನುಷ್ಠಾನಕ್ಕೆ 600 ಕೋಟಿ ರೂ. ಅಗತ್ಯವಿದೆ. ಗೃಹಜ್ಯೋತಿ ಯೋಜನೆಗೆ ಪ್ರತಿ ಮನೆಗೆ ತಿಂಗಳಿಗೆ 200 ಯೂನಿಟ್ ವಿದ್ಯುತ್ ಉಚಿತ ಕೊಡುವುದರಿಂದ ವಾರ್ಷಿಕ 12,038 ಕೋಟಿ ರೂ.ಬೇಕಾಗಬಹುದು ಎಂದು ಅಂದಾಜಿಸಲಾಗಿದೆ.

ಗ್ಯಾರಂಟಿ ಜಾರಿ ನಿಮ್ಮ ಜವಾಬ್ದಾರಿ, ನೆಪ ಹೇಳದೇ ಜಾರಿ ಮಾಡಿ

ಬೆಂಗಳೂರು, ಮೇ 30(ಕೆಎಂಶಿ)–ಭರವಸೆ ನೀಡಿದ್ದೀರಿ, ಗೆದ್ದು ಅಧಿಕಾರ ಹಿಡಿದಿದ್ದೀರಿ. ಐದು ಗ್ಯಾರಂಟಿ ಜಾರಿ ಮಾಡುವುದು ನಿಮ್ಮ ಜವಾಬ್ದಾರಿ ಎಂದು ರಾಜ್ಯ ಕಾಂಗ್ರೆಸ್ ಸರಕಾರಕ್ಕೆ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಚಾಟಿ ಬೀಸಿದ್ದಾರೆ. ಈ ಬಗ್ಗೆ ಟ್ವೀಟ್ ಮಾಡಿರುವ ಅವರು, ನೆಪ ಹೇಳದೆ ಗ್ಯಾರಂಟಿಗಳನ್ನು ಜಾರಿ ಮಾಡಿ ಎಂದು ಒತ್ತಾಯ ಮಾಡಿದ್ದಾರೆ.



ಕಾಂಗ್ರೆಸ್‌ಗೆ 135 ಸೀಟು ಕೊಟ್ಟ ಜನತೆಯ 'ಗ್ಯಾರಂಟಿ ಬೇಡಿಕೆ'ಯಲ್ಲಿ ನ್ಯಾಯವಿದೆ. ಐದು ಗ್ಯಾರಂಟಿ ಜಾರಿ ರಾಜ್ಯ ಕಾಂಗ್ರೆಸ್ ಸರ್ಕಾರದ ಜವಾಬ್ದಾರಿ. ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಆಗುವುದಕ್ಕೆ ಮುನ್ನ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಅವರೇ ಸಹಿ ಮಾಡಿಕೊಟ್ಟ ಕಾರ್ಡುಗಳು ಜನರ ಬಳಿ ಇವೆ. ಆ ಗ್ಯಾರಂಟಿಗಳಿಗೆ ಗ್ಯಾರಂಟಿಯೇ ಇಲ್ಲವೇ ಎಂದು ಅವರು ಪ್ರಶ್ನಿಸಿದ್ದಾರೆ.

ದಿನನಿತ್ಯವೂ ಗ್ಯಾರಂಟಿಗಳ ಬಗ್ಗೆ ಜನರಲ್ಲಿ ನಿರೀಕ್ಷೆಯ ಮೇರೆ ಮೀರುತ್ತಿದೆ, ಆತಂಕವೂ ಹೆಚ್ಚುತ್ತಿದೆ. ಜನಾಕ್ರೋಶಕ್ಕೆ ಸೂಜಿಲು ಸರಿಯಲ್ಲ. ವಿಕಿರದೆ ನಿರೀಕ್ಷೆ ಮಾಡಿಸಿದ್ದು ಇವರೇ. ಈಗ ಜನರು ನೆನಪಿಸಿದ್ದಲ್ಲಿ ಜನರನ್ನು ಸತಾಯಿಸುವುದು ನ್ಯಾಯವಲ್ಲ. ಗ್ಯಾರಂಟಿಗಳ ಬಗ್ಗೆ ಮಾಧ್ಯಮಗಳನ್ನು ಅಬ್ಬರಿಸಿದ ಇವರೇ, ಈಗ ಮೀನಾಮೇಷ ಎಣಿಸಿದರೆ ಜನ ಒಪ್ಪುವರೇ ಎಂದು ಮಾಜಿ ಮುಖ್ಯಮಂತ್ರಿ ಕೇಳಿದ್ದಾರೆ. ನನಗೂ ಫ್ರೀ, ನಿನಗೂ ಫ್ರೀ, ಸರ್ವರಿಗೂ ಫ್ರೀ ಎಂದ ಮುಖ್ಯ ಮಂತ್ರಿಗಳೇ ಈಗ ಗ್ಯಾರಂಟಿಗಳ ಬಗ್ಗೆ ದಿವ್ಯಮೌನವೇಕೆ. ಅವರ ಅಕ್ಕಪಕ್ಕದವರ ಹೇಳಿಕೆಗಳನ್ನು ಜನರು ನಂಬುತ್ತಿಲ್ಲ. ಮುಖ್ಯಮಂತ್ರಿಗಳೇ ಜನರಿಗೆ ನೇರವಾಗಿ ಹೇಳಲಿ, ಜನರಲ್ಲಿ ವಿಶ್ವಾಸ ಮೂಡಿಸಲಿ. ಮಾಧ್ಯಮಗಳಲ್ಲಿ ಕಾಂಗ್ರೆಸ್ ಕೊಟ್ಟ ಗ್ಯಾರಂಟಿ ಜಾಹೀರಾತುಗಳು ಇನ್ನೂ ಜನಮಾನಸದಿಂದ ಮಾಸಿಲ್ಲ. ಅದೇ ರೀತಿ ಸ್ವತಃ ಮುಖ್ಯಮಂತ್ರಿಗಳೇ ಜೂನ್ 1ಕ್ಕೆ ಜಾರಿ ಮಾಡುವ ಬಗ್ಗೆ ಜಾಹೀರಾತು ನೀಡಿ ಜನರಿಗೆ ಖಾತರಿ ಕೊಡಲಿ ಎಂದಿದ್ದಾರೆ.

ಇಂದು ಪ್ರವೇಶ ನಿರ್ಬಂಧ

ತೆರವಿಗೆ ಎಸ್ಟಿಮೇಟ್ ತಯಾರಿಸಿ ಹರಾಜು ಪ್ರಕ್ರಿಯೆ ನಡೆಸಿದರು. ನಾಳೆ (ಬುಧವಾರ) ಬೆಳಗ್ಗೆಯಿಂದ ಮರಗಳ ತೆರವು ಕಾರ್ಯ ಆರಂಭವಾಗಲಿದ್ದು, ಸಂಜೆ ವೇಳೆಗೆ ಪೂರ್ಣಗೊಳಿಸಲುದ್ದೇಶಿಸಲಾಗಿದೆ. ಒಂದು ವೇಳೆ ಬುಧವಾರ ತೆರವು ಕಾರ್ಯ ಪೂರ್ಣಗೊಳ್ಳದಿದ್ದಲ್ಲಿ ಹಾಗೂ ಎಲೆಕ್ಟ್ರಿಕ್ ಕೆಲಸ ಬಾಕಿ ಉಳಿದರೆ ಮಾತ್ರ ಗುರುವಾರವೂ ಬೃಂದಾವನ ಗಾರ್ಡನ್‌ಗೆ ಪ್ರವೇಶ ನಿರ್ಬಂಧಿಸ ಬೇಕಾಗುತ್ತದೆ. ಈ ಬಗ್ಗೆ ಬುಧವಾರ ಸಂಜೆ ಪ್ರಕಟಣೆ ಹೊರಡಿಸಲಾಗುವುದು ಎಂದು ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ತಿಳಿಸಿದ್ದಾರೆ.

ಎಲ್ಲಾ ಮಹಿಳೆಯರಿಗೆ ಉಚಿತ ಪ್ರಯಾಣ

ಬಗ್ಗೆ ಸರ್ಕಾರ ಹೇಳಲಿ ಆದರೆ ಎಲ್ಲಾ ಮಹಿಳೆಯರಿಗೂ ಉಚಿತ ಅನ್ನೋದು ನಮ್ಮ ಪ್ರಣಾಳಿಕೆಯಾಗಿತ್ತು. ನಾಳೆ ಉಚಿತ ಬಸ್ ಪ್ರಯಾಣ ಗ್ಯಾರಂಟಿ ಜಾರಿಗೆ ಬರುವುದರಲ್ಲಿ ಅನುಮಾನವೇ ಇಲ್ಲ ಎಂದರು. ಯೋಜನೆ ಜಾರಿಗೆ ಪ್ರತಿವರ್ಷ ಅಂದಾಜು 3,200 ಕೋಟಿ ಹಣ ಬೇಕಾಗುತ್ತದೆ. ಸಾರಿಗೆ ಇಲಾಖೆಯ ನಾಲ್ಕು ನಿಗಮಗಳು ನಷ್ಟದಲ್ಲಿರುವ ಹಿನ್ನೆಲೆಯಲ್ಲಿ ಸರ್ಕಾರ ಸಹಾಯಧನ ನೀಡಿದರೆ ಯೋಜನೆ ಜಾರಿ ಮಾಡಲು ಅನುಕೂಲವಾಗುತ್ತದೆ ಎಂದು ಸಭೆಯಲ್ಲಿ ಅಧಿಕಾರಿಗಳು ಮನವಿ ಮಾಡಿದ್ದಾರೆ.

ಇಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಗ್ಯಾರಂಟಿಯನ್ನು ಜಾರಿಗೊಳಿಸುವ ಬಗ್ಗೆ ರೂಪುರೇಷೆಗಳನ್ನು ಚರ್ಚಿಸಿದರು. ಸಭೆಯಲ್ಲಿ ಚರ್ಚೆಗೆ ಬಂದ ವಿಷಯಗಳನ್ನು ವರದಿ ರೂಪದಲ್ಲಿ ಮುಖ್ಯಮಂತ್ರಿಗಳ ಮುಂದೆ ಮಂಡಿಸಲಾಗುವುದು. ಅವರು ಈಗಾಗಲೇ ಸಾರಿಗೆ ಇಲಾಖೆ ಪ್ರಧಾನ ಕಾರ್ಯದರ್ಶಿಗಳ ಜೊತೆ ನಿನ್ನೆ ಮಾತನಾಡಿದ್ದಾರೆ. ಸಾರಿಗೆ ಇಲಾಖೆ ಪ್ರಧಾನ ಕಾರ್ಯದರ್ಶಿಗಳು ಸಿಎಂಗೆ ವರದಿ ಸಲ್ಲಿಸುತ್ತಾರೆ. ಮುಖ್ಯಮಂತ್ರಿಗಳು ಅಧಿಕಾರಿಗಳೊಂದಿಗೆ ಚರ್ಚಿಸಿ ಯೋಜನೆ ಜಾರಿ ನಿರ್ಧಾರ ಮಾಡುತ್ತಾರೆ ಎಂದರು.

ಅತ್ತೆ ಒಪ್ಪಿದ್ರಷ್ಟೇ ಸೊಸೆಗೆ 2000

ಹೇಳಿದರು. ಈ ವೇಳೆ ಗೃಹಲಕ್ಷ್ಮಿ ಯೋಜನೆಯನ್ನು ಅತ್ತೆಗೆ ಕೊಡಬೇಕೋ, ಸೊಸೆಗೆ ಕೊಡಬೇಕೋ ಎಂಬ ಪ್ರಶ್ನೆಗೆ ದನಿಗೂಡಿಸಿದ ಸಚಿವ ಸತೀಶ್ ಜಾರಕಿಹೊಳಿ, ಯಾರಿಗೆ ಕೊಡಬೇಕು ಎಂಬುದಕ್ಕೆ ಹಲವು ಅನ್ವಯವಾಗುತ್ತದೆ. ಅತ್ತೆ ಸ್ವಯಂಪ್ರೇರಿತವಾಗಿ ಸೊಸೆಗೆ ಕೊಡುತ್ತೇನೆ ಅಂದರೆ ಆ ಕಂಡಿಷನ್ ಇಲ್ಲಿ ಅನ್ವಯಿಸುತ್ತೆ. ಗೃಹಲಕ್ಷ್ಮಿ ಯೋಜನೆ ಯಾರಿಗೆ ಬೇಕೆಂದು ಮೊದಲು ಅತ್ತೆಯನ್ನು ಕೇಳುತ್ತೇವೆ. ನನ್ನ ಬದಲು ಸೊಸೆಗೆ ಯೋಜನೆ ನೀಡಿ ಅಂದರೆ ಗೃಹಲಕ್ಷ್ಮಿ ಯೋಜನೆ ಸೊಸೆಗೆ ಕೊಡುತ್ತೇವೆ. ಮೊದಲ ಆದ್ಯತೆಯನ್ನು ಮನೆಯಲ್ಲಿ ಅತ್ತೆಗೆ ಕೊಡುತ್ತೇವೆ. ಅತ್ತೆ ಪ್ರೀತಿಯಿಂದ ಸೊಸೆಗೆ ಕೊಡುವುದಾದರೆ ಕೊಡಲಿ. ಹಾಗೆ ಕೊಡುವುದಾದರೆ ಅತ್ತೆ ಲಿಖಿತ ರೂಪದಲ್ಲಿ ಬರೆದುಕೊಡಬೇಕು ಎಂದಿದ್ದಾರೆ. ಇದಕ್ಕೆ ದನಿಗೂಡಿಸಿದ ಲಕ್ಷ್ಮಿ ಹೆಬ್ಬಾಳ್ಕರ್, ಮನೆಗೆ ಅತ್ತೆಯೇ ಸೀನಿಯರ್, ಹೀಗಾಗಿ ಅತ್ತೆಗೆ ಯೋಜನೆ ಕೊಡುವುದು ನಮ್ಮ ಆದ್ಯತೆ. ನಮ್ಮ ಸಂಸ್ಕೃತಿ ಪ್ರಕಾರ ಮನೆಗೆ ಅತ್ತೆಯೇ ಯಜಮಾನಿ. ಅತ್ತೆಯೇ ಪ್ರೀತಿಯಿಂದ ಸೊಸೆಗೆ ಹಣ ಕೊಡಬೇಕು ಎಂಬುದು ನಮ್ಮ ಆಶಯ ಎಂದು ಹೇಳಿದ್ದಾರೆ.

ಸರ್ಕಾರಿ ನೌಕರರ ವರ್ಗಾವರ್ಗಿ

ಗ್ರೂಪ್–ಎ, ಗ್ರೂಪ್–ಬಿ, ಗ್ರೂಪ್–ಸಿ ಮತ್ತು ಗ್ರೂಪ್–ಡಿ ವರ್ಗದ ಅಧಿಕಾರಿ ಅಥವಾ ನೌಕರರಿಗೆ ಅನ್ವಯವಾಗುವಂತೆ ಒಂದು ಜೇಷ್ಠತಾ ಘಟಕದಲ್ಲಿ ಕಾರ್ಯನಿರತ ವೃಂದ ಬಲದ ಶೇಕಡಾ 6ರಷ್ಟನ್ನು ಮೀರದಂತೆ ವರ್ಗಾವಣೆ ಮಾಡಬಹುದಾಗಿದೆ. ಅಲ್ಲದೆ, ಜೂನ್ 10ರಿಂದ ಜೂನ್ 15ರವರೆಗೆ ಸಾರ್ವತ್ರಿಕ ವರ್ಗಾವಣೆ ಕೈಗೊಳ್ಳಲು ಆಯಾ ಇಲಾಖಾ ಸಚಿವರಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದೆ ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಸರ್ಕಾರದ ಅಧೀನ ಕಾರ್ಯದರ್ಶಿ ಹೇಮಲತ ಜಿ ಆದೇಶ ಹೊರಡಿಸಿದ್ದಾರೆ.

ಶೇ.4 ತುಟ್ಟಿಭತ್ಯೆ ಹೆಚ್ಚಳ

ಸರ್ಕಾರಿ ನೌಕರರ ಬಹುದಿನಗಳ ವೇತನ ಹೆಚ್ಚಳದ ಬೇಡಿಕೆಯನ್ನು ಬಿಜೆಪಿ ಸರ್ಕಾರ ಹೆಚ್ಚಳ ಮಾಡಿತ್ತು ಆದರೆ, ಇತ್ತೀಚೆಗೆ ಹೊಸದಾಗಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರವೂ ಕೂಡ ತುಟ್ಟಿ ಭತ್ಯೆಯನ್ನು ಹೆಚ್ಚಳ ಮಾಡುವ ಮೂಲಕ ಸರ್ಕಾರಿ ನೌಕರರಿಗೆ ಮತ್ತೊಂದು ಸಿಹಿಯನ್ನು ನೀಡಿದೆ. ಜನವರಿಯಿಂದಲೇ ಪೂರ್ವಾನ್ವಯ: ರಾಜ್ಯ ಸರ್ಕಾರಿ ನೌಕರರಿಗೆ ಈ ಹಿಂದೆ ಶೇ. 31 ತುಟ್ಟಿ ಭತ್ಯೆಯನ್ನು ನೀಡಲಾಗುತ್ತಿತ್ತು. ಈಗ ರಾಜ್ಯ ಸರ್ಕಾರ ಹೊರಡಿಸಿರುವ ಹೊಸ ಆದೇಶದಲ್ಲಿ ಶೇ.31ರಿಂದ ಶೇ.35 ಗೆ ಹೆಚ್ಚಿಸಿದೆ.

ಐಪಿಎಸ್ ಅಧಿಕಾರಿ ದಯಾನಂದ ನೇಮಕ


ದಕ್ಷತೆಯನ್ನು ಸುಧಾರಿಸುವ ಸಲುವಾಗಿ ಎಡಿಜಿಪಿ ಮಟ್ಟದ ಅಧಿಕಾರಿಯಾದ ಡಾ. ಎಂ.ಎ. ಸಲೀಂ ಅವರಿಗೆ ಪದೋನ್ನತಿ ನೀಡಿ ವರ್ಗಾವಣೆ ಮಾಡಲಾಗಿದೆ. ಸಂಚಾರ ವಿಭಾಗ ಎಡಿಜಿಪಿ ಆಗಿದ್ದ ಎಂ.ಎ. ಸಲೀಂ ಅವರನ್ನು ಡಿಜಿಪಿಯಾಗಿ ಪದೋನ್ನತಿ ನೀಡಲಾಗಿದೆ. ಹಾಗೂ ಅವರನ್ನು ಅಪರಾಧ ತನಿಖಾ ಘಟಕ, ವಿಶೇಷ ಘಟಕಗಳು ಹಾಗೂ ಆರ್ಥಿಕ ಅಪರಾಧ ವಿಭಾಗದ ಡಿಜಿಪಿಯಾಗಿ ನೇಮಿಸಲಾಗಿದೆ. ಈ ಸ್ಥಾನದಲ್ಲಿದ್ದ ಕೆ.ವಿ.ಶರತ್ ಚಂದ್ರ ಅವರನ್ನು ಬಿ.ದಯಾನಂದ ಅವರು ನಿರ್ವಹಣೆ ಮಾಡುತ್ತಿದ್ದ ಗುಪ್ತಚರ ಇಲಾಖೆ ಎಡಿಜಿಪಿಯಾಗಿ ನೇಮಕ ಮಾಡಲಾಗಿದೆ. ಬಿ. ದಯಾನಂದ ಅವರು ಈ ಹಿಂದೆ ಅನೇಕ ಪ್ರಮುಖ ಹುದ್ದೆಗಳನ್ನು ನಿಭಾಯಿಸಿದ್ದು, ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಮೂರೂ ಪಕ್ಷದ ಆಡಳಿತದಲ್ಲೂ ಉತ್ತಮ ಸ್ಥಾನಗಳನ್ನು ನಿಭಾಯಿಸಿದ್ದಾರೆ. ಎಲ್ಲರಿಗೂ ನಂಬಿಕಾರ್ಹ, ದಕ್ಷ ಅಧಿಕಾರಿ ಎನ್ನಿಸಿಕೊಂಡಿದ್ದಾರೆ. ಗೃಹ ಇಲಾಖೆಗೆ ಸೇರಿದ್ದರೂ ಗುಪ್ತಚರ ಇಲಾಖೆಯನ್ನು ಮುಖ್ಯಮಂತ್ರಿ ತಾವೇ ಇಟ್ಟುಕೊಳ್ಳುತ್ತಾರೆ. ಈ ಇಲಾಖೆಗೆ ತಮ್ಮ ಆತ್ಮೀಯ ನಂಬಿಕಾರ್ಹ ಅಧಿಕಾರಿಯನ್ನಷ್ಟೆ ನೇಮಿಸಿಕೊಳ್ಳಲಾಗುತ್ತದೆ. ಸಿದ್ದರಾಮಯ್ಯ, ಬಿ.ಎಸ್. ಯಡಿಯೂರಪ್ಪ ಹಾಗೂ ಎಚ್.ಡಿ. ಕುಮಾರಸ್ವಾಮಿಯವರ ಅವಧಿಯಲ್ಲಿ ಮೂವರು ಸಿಎಂಗಳಿಗೂ ಗುಪ್ತಚರ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ ಹೆಗ್ಗಳಿಕೆಯನ್ನು ದಯಾನಂದ ಹೊಂದಿದ್ದಾರೆ.

ಬಿಜೆಪಿ, ಜೆಡಿಎಸ್‌ನಿಂದ ಅಪಪ್ರಚಾರ: ಹೆಚ್.ಸಿ. ಮಹದೇವಪ್ಪ

ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಹೆಚ್‌ಸಿಎಂಗೆ ಜಿಲ್ಲಾ ಕಾಂಗ್ರೆಸ್ ವತಿಯಿಂದ ಸನ್ಮಾನ

ಮೈಸೂರು,ಮೇ 30(ಎಂಟಿವೈ)– ಈ ಹಿಂದೆ ಮಿತಿ ಮೀರಿದ ಭ್ರಷ್ಟಾಚಾರ ನಡೆಸಿ ಚುನಾವಣೆಯಲ್ಲಿ ಹೀನಾಯ ಸೋಲುಂಡಿರುವ ಬಿಜೆಪಿ ನಾಯಕರು ತಮ್ಮ ಮುಖಕ್ಕೆ ಅಂಟಿರುವ ಮಸಿಯನ್ನು ಒರೆಸಿಕೊಳ್ಳುವುದಕ್ಕಾಗಿ ಜನರ ಬಳಿ ಹೋಗಿ ಗ್ಯಾರಂಟಿ ಯೋಜನೆಗಳ ಬಗ್ಗೆ ಅಪಪ್ರಚಾರ ಮಾಡುತ್ತಾ, ತಮಗಿರುವ ರಾಜಕೀಯ ಅಜ್ಞಾನವನ್ನು ತೋರ್ಪಡಿಸುತ್ತಿದ್ದಾರೆ ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಕಿಡಿಕಾರಿದ್ದಾರೆ.

ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಬಳಿಕ ಮೊದಲ ಬಾರಿಗೆ ಕಾಂಗ್ರೆಸ್ ಕಚೇರಿಗೆ ಮಂಗಳವಾರ ಆಗಮಿಸಿದ ಅವರು ಮೈಸೂರು ನಗರ ಮತ್ತು ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಹಾಗೂ ಹಿತೈಷಿಗಳಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದರು.



ರಾಜ್ಯದಲ್ಲಿ ಕಳೆದ ಕೆಲವು ವರ್ಷಗಳಿಂದ ರಾಜಕೀಯ ಕ್ಷೇತ್ರದಲ್ಲಿರುವ ಕೆಲವು ಬಿಜೆಪಿ ನಾಯಕರು ಕಾಂಗ್ರೆಸ್ ಪಕ್ಷ ಘೋಷಿಸಿರುವ ಗ್ಯಾರಂಟಿ ಯೋಜನೆಗಳ ಬಗ್ಗೆ ದಡ್ಡರಂತೆ ಮಾತನಾಡುತ್ತಿದ್ದಾರೆ. ಬಿಜೆಪಿ ನಾಯಕರಿಗೆ ರಾಜಕೀಯ ಪ್ರಜ್ಞೆ ಇಲ್ಲ. ಬಿಜೆಪಿ ಸರ್ಕಾರದಲ್ಲಿ ಮುಖ್ಯಮಂತ್ರಿಯಾಗಿದ್ದ ಬಸವರಾಜ ಬೊಮ್ಮಾಯಿ ಎರಡು ತಿಂಗಳ ಹಿಂದೆ ಮಂಡಿಸಿದ ಬಜೆಟ್ ಕೇವಲ 3 ತಿಂಗಳಿಗೆ ಮಾತ್ರ ಸೀಮಿತವಾಗಿರುತ್ತದೆ. ಹೊಸ ಸರ್ಕಾರ ಬಂದ ಮೇಲೆ ಹೊಸ ಬಜೆಟ್ ಮಂಡಿಸಬೇಕಾಗಿದೆ. ಬಜೆಟ್ ಮಂಡಿಸದೇ ಕಾರ್ಯಕ್ರಮಗಳಿಗೆ ಹಣ ಕೊಡಲು ಸಾಧ್ಯವಿಲ್ಲ. ಸರ್ಕಾರ ಹಣ ಕೊಡಲು ಏನು ಮಾಡಬೇಕೆಂದು ತಿಳಿಯದೇ ಪೆದ್ದರಂತೆ ಮಾತಾಡುತ್ತಿದ್ದಾರೆ ಎಂದು ತಿರುಗೇಟು ನೀಡಿದರು.

ಬಿಜೆಪಿ ನಾಯಕರು 2014ರ ಲೋಕಸಭಾ ಚುನಾವಣೆ ವೇಳೆ ದೇಶದ ಪ್ರತಿಯೊಬ್ಬರ ಖಾತೆಗೆ 15 ಲಕ್ಷ ರೂ. ಹಣ ಹಾಕುವುದಾಗಿ ಹೇಳಿದ್ದರು. ರೈತರ ಆದಾಯ ದ್ವಿಗುಣ ಮಾಡುವುದಾಗಿ ಭರವಸೆ ನೀಡಿದ್ದರು. ಆದರೆ ಬಿಜೆಪಿ ನಾಯಕರು ನೀಡಿದ ಭರವಸೆಗಳನ್ನು ಈಡೇರಿಸದೇ ತಮ್ಮ ಸರ್ಕಾರದ ವೈಫಲ್ಯಗಳನ್ನು ಮುಚ್ಚಿ ಹಾಕಲು ಕಾಂಗ್ರೆಸ್ ವಿರುದ್ಧ ಜನರನ್ನು ಎತ್ತಿಕಟ್ಟಲು ಸಂಚು ನಡೆಸುತ್ತಿದ್ದಾರೆ ಎಂದು ತಿಳಿಸಿದರು.

ಮೈಸೂರು ಜಿಲ್ಲೆ ಪ್ರಪಂಚದಲ್ಲಿಯೇ ದೊಡ್ಡ ಇತಿಹಾಸವನ್ನು ಹೊಂದಿದೆ. ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಪ್ರಜಾಪ್ರಭುತ್ವ ವ್ಯವಸ್ಥೆ ಮತ್ತು ಸಂವಿಧಾನ ಇಲ್ಲದಿದ್ದಾಗ ಎಲ್ಲರಿಗೂ ಸಮಾನ ಅವಕಾಶ ನೀಡಿದರು. ಮೀಸಲಾತಿ ಜಾರಿಗೆ ತಂದರು. ಪ್ರಜಾಪ್ರಭುತ್ವದ ಆಡಳಿತಕ್ಕೆ ಮುನ್ನುಡಿ ಬರೆದರು. ಸ್ವತಂತ್ರ ಭಾರತದಲ್ಲಿ ದೇವರಾಜ ಅರಸು, ತುಳಸಿದಾಸಪ್ಪ, ಬಿ.ರಾಚಯ್ಯ, ಸಾಹುಕಾರ್ ಚೆನ್ನಯ್ಯ ಉತ್ತಮ ಮಾರ್ಗ ತೋರಿದರು. ಈಗ ಸಿದ್ದರಾಮಯ್ಯ ಅವರ ಹಿಂದೆ ನಾವೆಲ್ಲ ಹೆಜ್ಜೆ ಹಾಕುತ್ತಿದ್ದೇವೆ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷ ಯಾರೋ ಒಬ್ಬರ ಆಸ್ತಿಯಲ್ಲ. ಕಾಂಗ್ರೆಸ್ ಅಂದರೆ ಚಳವಳಿ. ಕಾಂಗ್ರೆಸ್‌ಗೆ ಜನರೇ ಆಸ್ತಿ ಈ ಚುನಾವಣೆಯಲ್ಲಿ ಕಾಂಗ್ರೆಸ್ ಮೂಲ ಮತಗಳು ಕ್ರೋಢೀಕರಣಗೊಂಡಿದ್ದು ದೊಡ್ಡ ಸಾಧನೆ. ಲಕ್ಷಾಂತರ ಕಾರ್ಯಕರ್ತರ ಪರಿಶ್ರಮ ಮತ್ತು ಹೋರಾಟದಿಂದ ಕಾಂಗ್ರೆಸ್‌ಗೆ ಅಭೂತಪೂರ್ವ ಜಯ ದೊರೆಯಿತು. ಅವರೆಲ್ಲರಿಗೂ ಅಭಿನಂದನೆ ಸಲ್ಲಿಸುತ್ತೇನೆ ಎಂದು ಹೇಳಿದರು.

ಮೈಸೂರು ಜಿಲ್ಲಾ ಕಾಂಗ್ರೆಸ್ ಸಿಎಎ ವಿರುದ್ಧ ರಾಷ್ಟ್ರಮಟ್ಟದ ಸೆಮಿನಾರ್ ಏರ್ಪಡಿಸಿತ್ತು. ಕೋವಿಡ್ ಸಂದರ್ಭದಲ್ಲಿ ಆಡಳಿತದಲ್ಲಿದ್ದ ಬಿಜೆಪಿ ನಾಯಕರು ದುಡ್ಡು ಮಾಡುವುದರಲ್ಲಿ ನಿರತರಾಗಿದ್ದರು. ಕಾಂಗ್ರೆಸ್ ಕಾರ್ಯಕರ್ತರು ಜಿಲ್ಲಾವಾರು ಪ್ರತಿಭಟನೆ ನಡೆಸಿ ಸರ್ಕಾರವನ್ನು ಎಚ್ಚರಿಸಿದರು. ಮೇಕೆದಾಟು ಹೋರಾಟ, ರಾಹುಲ್ ಗಾಂಧಿ ನೇತೃತ್ವದಲ್ಲಿ ನಡೆದ ದೇಶವನ್ನು ಒಗ್ಗೂಡಿಸುವ ಭಾರತ್ ಜೋಡೋ, ಬಿಜೆಪಿ ಸರ್ಕಾರದ ಭ್ರಷ್ಟಾಚಾರ, ಆಡಳಿತ ವಿರೋಧಿ ಅಲೆಯಿಂದ ಕಾಂಗ್ರೆಸ್ ಅಧಿಕಾರಕ್ಕೆ ಬಂದಿತು ಎಂದು ಹೇಳಿದರು.

ಕಾಂಗ್ರೆಸ್ ಯಾವತ್ತೂ ನುಡಿದಂತೆ ನಡೆವ ಪಕ್ಷವಾಗಿದೆ. ಹಿಂದಿನ ಕಾಂಗ್ರೆಸ್ ಸರ್ಕಾರದಲ್ಲಿ ಸಿದ್ದರಾಮಯ್ಯ ಅವರು ಹಲವು ಜನಪರ ಕಾರ್ಯಕ್ರಮಗಳನ್ನು ಜಾರಿಗೊಳಿಸಿದರು. 2023ರ ಚುನಾವಣೆಯಲ್ಲಿ ದಲಿತ ಸಂಘಟನೆಗಳು, ಮಹಿಳೆಯರು, ಅಲ್ಪಸಂಖ್ಯಾತರು, ಪ್ರಗತಿಪರರು, ಚಿಂತಕರು, ಸಾಹಿತಿಗಳು ಸಂವಿಧಾನ ಬಲಪಡಿಸುವಂತೆ ಅಧಿಕಾರ ಕೊಟ್ಟರು. ಒಕ್ಕಲಿಗ, ಲಿಂಗಾಯತ ಬೆಂಬಲದಿಂದ ಕಾಂಗ್ರೆಸ್‌ಗೆ 135 ಸ್ಥಾನಗಳು ದೊರೆತವು ಎಂದು ಹೇಳಿದರು.

ಅಧಿಕಾರ ಇರಲಿ, ಇಲ್ಲದಿರಲಿ ಕಾರ್ಯಕರ್ತರು ಬಂದಾಗ ಎಂದೂ ಮುಖಗಂಟು ಹಾಕೊಂಡಿಲ್ಲ. ತಮ್ಮ ಸಮಸ್ಯೆ ಹೇಳಿಕೊಳ್ಳಲು ಮುಕ್ತ ಅವಕಾಶ ನೀಡಿದ್ದೇವೆ. ಕಾರ್ಯಕರ್ತರು ಮನಸ್ಸು ಕೆಡಿಸಿಕೊಳ್ಳಬಾರದು. ಸುಳ್ಳನ್ನು ಸತ್ಯ ಮಾಡಲು ಹೊರಟವರಿಗೆ ಛೀಮಾರಿ ಹಾಕುವ ಕೆಲಸ ಮಾಡಬೇಕು. ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆ ಮತ್ತು ಲೋಕಸಭಾ ಚುನಾವಣೆಗೆ ಸಿದ್ಧರಾಗಬೇಕು. ಸ್ವಲ್ಪ ಶ್ರಮವಹಿಸಿದ್ದರೆ ಮೈಸೂರು ಜಿಲ್ಲೆಯ 11 ಸ್ಥಾನಗಳನ್ನು ಗೆಲ್ಲುವ ಸಾಧ್ಯತೆ ಇತ್ತು. ಆ ಅವಕಾಶ ತಪ್ಪಿತು ಎಂದು ವಿಷಾದಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯ್ ಕುಮಾರ್, ಶಾಸಕ ಕೆ.ಹರೀಶ್ ಗೌಡ, ಮಾಜಿ ಸಂಸದ ಕಾಗಲವಾಡಿ ಶಿವಣ್ಣ, ಜಿಪಂ ಮಾಜಿ ಅಧ್ಯಕ್ಷ ಕೆ.ಮರಿಗೌಡ, ಮುಡಾ ಮಾಜಿ ಅಧ್ಯಕ್ಷ ಕೆ.ಆರ್.ಮೋಹನ್ ಕುಮಾರ್, ಕೆಪಿಸಿಸಿ ಕಾರ್ಯದರ್ಶಿ ನರೇಂದ್ರ, ವಕ್ತಾರ ಹೆಚ್.ಎ.ವೆಂಕಟೇಶ್, ಮಾಜಿ ಮೇಯರ್ ಪುಷ್ಪಲತಾ ಚಿಕ್ಕಣ್ಣ, ಮುಖಂಡರಾದ ಎಂ.ಶಿವಣ್ಣ, ಮಂಜುನಾಥ್, ಶಿವಮಲ್ಲು, ಶಾರದಾ ಸಂಪತ್, ರಾಜೇಶ್ವರಿ, ಈಶ್ವರ್ ಚಕ್ಕಡಿ, ರಾಜೇಶ್, ಪಿ.ರಾಜು, ಮೈಸೂರು ಬಸವಣ್ಣ, ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

"ಮೈಸೂರಿನಲ್ಲಿ ಕಾಂಗ್ರೆಸ್ ಭವನ

ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಮೈಸೂರು ನಗರದಲ್ಲಿ ಮುಂದಿನ 2 ವರ್ಷಗಳಲ್ಲಿ ಸುಸಜ್ಜಿತ ಕಾಂಗ್ರೆಸ್ ಕಚೇರಿ ನಿರ್ಮಾಣ ಮಾಡಬೇಕೆಂದು ಗುರಿ ಕೊಟ್ಟಿದ್ದಾರೆ. ಇದನ್ನು ಈಡೇರಿಸಲು ಜಿಲ್ಲಾಮಂತ್ರಿಗಳಾದ ಡಾ.ಹೆಚ್.ಸಿ.ಮಹದೇವಪ್ಪ ಮತ್ತು ಕೆ.ವೆಂಕಟೇಶ್ ಸಹಕಾರ ನೀಡಬೇಕು.

- ಆರ್.ಮೂರ್ತಿ, ನಗರ ಕಾಂಗ್ರೆಸ್ ಅಧ್ಯಕ್ಷ

"ಗ್ಯಾರಂಟಿ ಯೋಜನೆಗಳ ಬಗ್ಗೆ ಚಿಂತಿತರಾಗಿರುವ ಬಿಜೆಪಿ ಮತ್ತು ಜೆಡಿಎಸ್ ನಾಯಕರಿಗೆ ನಿದ್ರೆ ಬರುತ್ತಿಲ್ಲ. ದುರಾಡಳಿತ, ಆಡಳಿತ ವಿರೋಧಿ ಧೋರಣೆಯಿಂದ ಜನರು ಮುಖಕ್ಕೆ ಮಸಿ ಬಳಿದಿದ್ದಾರೆ. ಆದರೆ, ನಮ್ಮ ಘೋಷಣೆ ಯಾವಾಗ ಜಾರಿ ಮಾಡುತ್ತೀರಿ ಎಂದು ಕೇಳುತ್ತಿದ್ದಾರೆ. ಭರವಸೆಯನ್ನು ಅನುಷ್ಠಾನಕ್ಕೆ ತರದವರಿಂದ ಹೇಳಿಸಿಕೊಳ್ಳುವ ಅಗತ್ಯವಿಲ್ಲ. ಸೋತು ಸುಣ್ಣವಾಗಿ ಕಾಂಗ್ರೆಸ್ ಮೇಲೆ ಆರೋಪ ಮಾಡುತ್ತಿದ್ದಾರೆ. 5 ಗ್ಯಾರಂಟಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬುಧವಾರ ಔಪಚಾರಿಕ ಸಚಿವ ಸಂಪುಟ ಸಭೆ ಕರೆದಿದ್ದಾರೆ. ಗುರುವಾರ ಅಜೆಂಡಾದ ಮೇಲೆ ಸಂಪುಟ ಸಭೆ ಕರೆದಿದ್ದಾರೆ. ಸಭೆಯ ಬಳಿಕ ಎಲ್ಲವೂ ತೀರ್ಮಾನವಾಗಲಿದೆ ಎಂದರು.

–ಡಾ.ಹೆಚ್.ಸಿ.ಮಹದೇವಪ್ಪ
ಸಮಾಜ ಕಲ್ಯಾಣ ಇಲಾಖೆ ಸಚಿವ

ಬೆಂಗಳೂರಿಂದ ಪ್ರವಾಸಿಗರ ಕರೆತಂದಿದ್ದ

ಕ್ಯಾಬ್ ಡ್ರೈವರ್ ಹೃದಯಾಘಾತದಿಂದ ಸಾವು

ಮೈಸೂರು, ಮೇ 30(ಆರ್‌ಕೆ)– ಬೆಂಗಳೂರಿನಿಂದ ಪ್ರವಾಸಿಗರನ್ನು ಕರೆತಂದಿದ್ದ ಕ್ಯಾಬ್ ಡ್ರೈವರ್, ತೀವ್ರ ಹೃದಯಾಘಾತದಿಂದ ಸಾವನ್ನಪ್ಪಿರುವ ಘಟನೆ ಮೈಸೂರಿನ ಚಾಮುಂಡಿ ಬೆಟ್ಟದ ಮಲ್ಟಿ ಲೆವೆಲ್ ಪಾರ್ಕಿಂಗ್ ಲಾಟ್‌ನಲ್ಲಿ ಸಂಭವಿಸಿದೆ.



ಬೆಂಗಳೂರಿನ ತೇಜಸ್ ಕುಮಾರ್(27) ಸಾವನ್ನಪ್ಪಿದವರು. ಇಂದು ಬೆಳಗ್ಗೆ ಕೆಎ 02–ಎಡಿ 8299 ನಂಬರಿನ ಕ್ಯಾಬ್‌ನಲ್ಲಿ ಇಬ್ಬರು ಪ್ರವಾಸಿಗರನ್ನು ಕರೆತಂದಿದ್ದ ಈ ಯುವಕ, ಮೊದಲು ನಂಜನಗೂಡಿಗೆ ಹೋಗಿ ಶ್ರೀ ಶ್ರೀಕಂಠೇಶ್ವರನ ದರ್ಶನ ಮಾಡಿಸಿ, ಅಲ್ಲಿಂದ ಮೈಸೂರಿಗೆ ಬಂದು ಚಾಮುಂಡಿಬೆಟ್ಟಕ್ಕೆ ಕರೆದೊಯ್ದು ಶ್ರೀ ಚಾಮುಂಡೇಶ್ವರಿ ದೇವಸ್ಥಾನದ ಬಳಿ ಪ್ರವಾಸಿಗರ ಬಿಟ್ಟು ಮಲ್ಟಿಲೆವೆಲ್ ಪಾರ್ಕಿಂಗ್‌ನಲ್ಲಿ ವಾಹನ ನಿಲ್ಲಿಸಿಕೊಂಡಿದ್ದರು.

ದೇವರ ದರ್ಶನ ಮಾಡಿದ ಬಳಿಕ ಮಧ್ಯಾಹ್ನ 2.30 ಗಂಟೆ ವೇಳೆಗೆ ಪ್ರವಾಸಿಗರು ತೇಜಸ್ ಕುಮಾರ್ ಫೋನ್‌ಗೆ ಕರೆ ಮಾಡಿದಾಗ ಅಲ್ಲಿದ್ದ ಬೇರೆ ಟ್ಯಾಕ್ಸಿ ಡ್ರೈವರ್‌ಗಳು ಫೋನ್ ತೆಗೆದು ತೇಜಸ್ ಎಂಬುವರು ತೀವ್ರ ಹೃದಯಾಘಾತದಿಂದ ಪಾರ್ಕಿಂಗ್ ಲಾಟ್‌ನಲ್ಲಿ ಸಾವನ್ನಪ್ಪಿದ್ದಾರೆಂದು ತಿಳಿಸಿದರು.

ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಕೆಆರ್ ಠಾಣೆ ಪೊಲೀಸರು ಧಾವಿಸಿದಾಗ ಆತ ಕಾರಿನ ಪಕ್ಕದಲ್ಲಿ ಸಾವನ್ನಪ್ಪಿದುದು ಕಂಡು ಬಂತು. ಪಾರ್ಕಿಂಗ್ ಲಾಟ್‌ನಲ್ಲಿ ಕಾರು ನಿಲ್ಲಿಸಿ ಪಕ್ಕದಲ್ಲಿ ಕುಳಿತಿದ್ದಾಗ ತೇಜಸ್‌ಕುಮಾರ್‌ಗೆ ತೀವ್ರ ಹೃದಯಾಘಾತವಾಗಿ ಕೊನೆಯುಸಿರೆಳೆದಿರಬಹುದೆಂದು ಶಂಕಿಸಲಾಗಿದೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಮೃತದೇಹವನ್ನು ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಶವಾಗಾರಕ್ಕೆ ಸ್ಥಳಾಂತರಿಸಿದ್ದಾರೆ.

ಜೂ. 4ರಂದು ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಆಚರಣೆ

ಪೂರ್ವಭಾವಿ ಸಭೆಯಲ್ಲಿ ಡಿಸಿ ಡಾ. ಕೆ.ವಿ.ರಾಜೇಂದ್ರ ಮಾಹಿತಿ

ಮೈಸೂರು, ಮೇ 30(ಆರ್‌ಕೆ)– ಮೈಸೂರು ನಿರ್ಮಾಣದಲ್ಲಿ ವಿಶೇಷ ಕೊಡುಗೆ ನೀಡಿರುವ ಅರಸರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಬೇಕೆಂದು ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ ತಿಳಿಸಿದ್ದಾರೆ.



ಡಿಸಿ ಕಚೇರಿ ಸಭಾಂಗಣದಲ್ಲಿ ಈ ಸಂಬಂಧ ಪೂರ್ವಭಾವಿ ಸಭೆ ನಡೆಸಿದ ಅವರು, ಜೂನ್ 4ರಂದು ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿಯನ್ನು ಆಚರಿಸಲಾಗುವುದು. ಈ ಹಿಂದೆ ಮೈಸೂರಲ್ಲಿ ಜಯಂತಿಯನ್ನು ರಾಜ್ಯ ಮಟ್ಟದ ಕಾರ್ಯಕ್ರಮವಾಗಿ ಆಚರಿಸಲಾಗುತ್ತಿತ್ತು. ಆದರೆ ಈ ವರ್ಷ ಮಂಡ್ಯದಲ್ಲಿ ಆಚರಣೆ ಮಾಡಲಾಗುತ್ತಿದ್ದು, ಮೈಸೂರಲ್ಲಿ ಜಿಲ್ಲಾ ಮಟ್ಟದಲ್ಲಿ ಆಚರಣೆ ಮಾಡಲಾಗುವುದು ಎಂದರು.

ಅಂದು ಮೈಸೂರಿನ ಅರಮನೆ ಉತ್ತರ ದ್ವಾರದಿಂದ ಮೆರವಣಿಗೆ ಮೂಲಕ ಬಂದು ಕಲಾಮಂದಿರದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. ನಾಲ್ವಡಿ ಕೃಷ್ಣರಾಜ ಒಡೆಯರ್ ಮತ್ತು ಮಹಾರಾಣಿ ಕೆಂಪರಾಜಮ್ಮಣಿ ಅವರ ಕುರಿತ ವಿಚಾರ ಸಂಕಿರಣ ಏರ್ಪಡಿಸಿ ಅರ್ಥಪೂರ್ಣವಾಗಿ ಕಾರ್ಯಕ್ರಮ ನಡೆಸಬೇಕೆಂದು ಅವರು ತಿಳಿಸಿದರು.

ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ. ಗಾಯತ್ರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ರಾಮಚಂದ್ರರಾಜ ಅರಸ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೆ.ಎಂ. ಸುದರ್ಶನ, ಪಾರ್ಕ್, ವಾರ್ತಾ ಇಲಾಖೆ ಸಹಾಯಕ ನಿರ್ದೇಶಕ ಟಿ.ಕೆ ಹರೀಶ್ ಹಾಗೂ ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.

ವಾರ್ಷಿಕ ಮಹಾಸಭೆ

ಮೈಸೂರು, ಮೇ 30– ಮೈಸೂರಿನ ರೈಲ್ವೆ ಪಿಂಚಣಿದಾರರ ಕಲ್ಯಾಣ ಒಕ್ಕೂಟದ ವತಿಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ.80ಕ್ಕಿಂತ ಹೆಚ್ಚು ಅಂಕ ಗಳಿಸಿದ ಒಕ್ಕೂಟದ ಮಕ್ಕಳಿಗೆ ಜೂ.25ರಂದು ಒಂಟಿಕೊಪ್ಪಲಿನ ಶ್ರೀರಾಮ ಕಲ್ಯಾಣ ಮಂಟಪದಲ್ಲಿ ನಡೆಯುವ ವಾರ್ಷಿಕ ಮಹಾಸಭೆಯಲ್ಲಿ ಸನ್ಮಾನಿಸಲಾಗುವುದು.

ಈ ಸಂಬಂಧ ಅರ್ಜಿ ಹಾಗೂ ಅಂಕಪಟ್ಟಿಯನ್ನು ಜೂ.18 ರೊಳಗೆ ಕಚೇರಿಗೆ ತಲುಪಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 0821–2420444 ಸಂಪರ್ಕಿಸಬಹುದು.

ಮೈಸೂರು ಮೃಗಾಲಯ ಸೇರಿದ ಹೊಸ ಅತಿಥಿಗಳು



ಮೈಸೂರು, ಮೇ 30(ಎಂಟಿವೈ)– ಮೈಸೂರಿನ ಮೃಗಾಲಯಕ್ಕೆ ನೂತನವಾಗಿ ತಂದಿರುವ 'ರಿಂಗ್ ಟೈಲ್ಡ್ ಲೆಮೂರು' ಪ್ರಾಣಿಗಳಿಗಾಗಿ ನಿರ್ಮಿಸಿರುವ ಪ್ರಾಣಿ ಮನೆಯನ್ನು ಮಂಗಳವಾರ ಉದ್ಘಾಟಿಸಿ, ಪ್ರವಾಸಿಗರ ವೀಕ್ಷಣೆಗೆ ಹೊಸ ಅತಿಥಿಗಳನ್ನು ಬಿಡಲಾಯಿತು.



ಭಾರತೀಯ ರಿಸರ್ವ್ ಬ್ಯಾಂಕ್ ನೋಟು ಮುದ್ರಣ ಲಿ., (ಬಿಆರ್‌ಬಿಎನ್‌ಪಿಎಲ್) ಸಂಸ್ಥೆಯು ಸಿಎಸ್‌ಆರ್ ನಿಧಿಯಲ್ಲಿ ಮೃಗಾಲಯದಲ್ಲಿ 75 ಲಕ್ಷ ರೂ. ವೆಚ್ಚ ಮಾಡಿ, 'ರಿಂಗ್ ಟೈಲ್ಡ್ ಲೆಮೂರ್' ಪ್ರಾಣಿಗಳಿಗಾಗಿ ಮನೆಯೊಂದನ್ನು ನಿರ್ಮಿಸಿಕೊಟ್ಟಿದೆ. ಹೊಸ ಮನೆ ನಿರ್ಮಾಣದ ಹಿನ್ನೆಲೆಯಲ್ಲಿ ಮೈಸೂರು ಮೃಗಾಲಯಕ್ಕೆ ಜೆಕ್ ಗಣರಾಜ್ಯದ ಪ್ರಾಣಿ ಸಂಗ್ರಹಾಲಯದಿಂದ ಇತ್ತೀಚೆಗೆ ತರಲಾಗಿದ್ದ ಎರಡು ಗಂಡು, ಮೂರು ಹೆಣ್ಣು 'ರಿಂಗ್ ಟೈಲ್ಡ್ ಲೆಮೂರು' ಪ್ರಾಣಿಗಳನ್ನು ಪ್ರವಾಸಿಗರ ವೀಕ್ಷಣೆಗೆ ಬಿಡುಗಡೆ ಮಾಡಲಾಯಿತು. ಇದಕ್ಕೂ ಮುನ್ನ ಭಾರತೀಯ ರಿಸರ್ವ್ ಬ್ಯಾಂಕ್ ನೋಟು ಮುದ್ರಣ ಲಿ., (ಬಿಆರ್‌ಬಿಎನ್‌ಪಿಎಲ್) ಹಿರಿಯ ಪ್ರಧಾನ ವ್ಯವಸ್ಥಾಪಕ ಹರ್ಷಕುಮಾರ್ ಮನ್ರಾಲ್ ನೂತನ ಮನೆಯನ್ನು ಉದ್ಘಾಟಿಸಿ, ಬೋನ್‌ನಿಂದ ಪ್ರಾಣಿಗಳನ್ನು ವೀಕ್ಷಣಾ ಆವರಣಕ್ಕೆ ಬಿಡುಗಡೆ ಮಾಡಲು ಹಸಿರು ನಿಶಾನೆ ತೋರಿದರು. ಈ ವೇಳೆ ಕರ್ನಾಟಕ ಮೃಗಾಲಯ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬಿ.ಪಿ.ರವಿ, ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕ ಅಜಿತ್ ಎಂ.ಕುಲಕರ್ಣಿ, ಬಿಆರ್‌ಬಿಎನ್‌ಎಂಪಿಎಲ್ ಉಪ ವ್ಯವಸ್ಥಾಪಕ ಪ್ರಮೋದ್ ಕುಮಾರ್, ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

ತಿ. ನರಸೀಪುರ ಬಳಿ ಭೀಕರ ದುರಂತ ಪ್ರಕರಣ

ಬಳ್ಳಾರಿಯ ಸಂಗನಕಲ್ ಗ್ರಾಮದಲ್ಲಿ 9 ಮಂದಿಯ ಸಾಮೂಹಿಕ ಅಂತ್ಯಕ್ರಿಯೆ

ಶ್ರೀರಂಗಪಟ್ಟಣದಲ್ಲಿ ಇನ್ನೋವಾ ಚಾಲಕ ಆದಿತ್ಯನ ಅಂತ್ಯಸಂಸ್ಕಾರ, ಸ್ವಗ್ರಾಮದಲ್ಲಿ ನೀರವ ಮೌನ, ಮುಗಿಲು ಮುಟ್ಟಿದ ಸಂಬಂಧಿಕರು, ಗ್ರಾಮಸ್ಥರ ಆಕ್ರಂದನ, ಸಾವಿರಾರು ಮಂದಿ ಅಂತ್ಯಕ್ರಿಯೆಯಲ್ಲಿ ಭಾಗಿ

ಮೈಸೂರು, ಮೇ 30 (ಆರ್‌ಕೆ)– ತಿ.ನರಸೀಪುರ ಸಮೀಪ ಖಾಸಗಿ ಬಸ್–ಇನ್ನೋವಾ ಕಾರು ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಸಾವಿಗೀಡಾದ 9 ಮಂದಿ ಪ್ರವಾಸಿಗರ ಸಾಮೂಹಿಕ ಅಂತ್ಯಕ್ರಿಯೆ ಬಳ್ಳಾರಿ ಜಿಲ್ಲೆಯ ಸ್ವಗ್ರಾಮ ಸಂಗನಕಲ್ ರುದ್ರಭೂಮಿಯಲ್ಲಿ ನೆರವೇರಿತು.



ಮೈಸೂರು–ಕೊಳ್ಳೇಗಾಲ ಹೆದ್ದಾರಿಯಲ್ಲಿ ಕುರುಬೂರು ಬಳಿ ಸೋಮವಾರ ಮಧ್ಯಾಹ್ನ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಟೊಯೋಟಾ ಇನ್ನೋವಾ ಕಾರಿನಲ್ಲಿದ್ದ 13 ಮಂದಿ ಪೈಕಿ ಚಾಲಕ ಸೇರಿದಂತೆ 10 ಮಂದಿ ಸಾವನ್ನಪ್ಪಿದ್ದರು. ಸೋಮವಾರ ರಾತ್ರಿ 11 ಗಂಟೆಯಿಂದ ಮುಂಜಾನೆ 2.30 ಗಂಟೆಯವರೆಗೆ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ (ಎಂಎಂಸಿ ಮತ್ತು ಆರ್‌ಐ) ಶವಾಗಾರದಲ್ಲಿ ಮರಣೋತ್ತರ ಪರೀಕ್ಷೆ ನಡೆಸಲಾಯಿತು.

ಕಾರು ಚಾಲಕ ಆದಿತ್ಯ ಮೃತದೇಹವನ್ನು ವಾರಸುದಾರರು ಮುಂಜಾನೆ ಶ್ರೀರಂಗಪಟ್ಟಣಕ್ಕೆ ಕೊಂಡೊಯ್ದು ಇಂದು ಬೆಳಗ್ಗೆ ಅಂತ್ಯಕ್ರಿಯೆ ನೆರವೇರಿಸಿದರು. ಉಳಿದಂತೆ ಮಂಜುನಾಥ, ಪತ್ನಿ ಪೂರ್ಣಿಮಾ, ಮಕ್ಕಳಾದ ಪವನ್, ಕಾರ್ತಿಕ, ಮತ್ತೊಂದು ಕುಟುಂಬದ ಕೊಟ್ರೇಶಿ, ಪತ್ನಿ ಸುಜಾತ, ಮಗ ಸಂದೀಪ್, ಜನಾರ್ಧನ ಎಂಬುವರ ಪತ್ನಿ ಗಾಯತ್ರಿ ಹಾಗೂ ಪುತ್ರಿ ಶ್ರಾವ್ಯ ಅವರ ಮೃತದೇಹಗಳನ್ನು ಮುಂಜಾನೆ 3 ಗಂಟೆಗೆ ನಾಲ್ಕು ಆಂಬುಲೆನ್ಸ್‌ಗಳಲ್ಲಿ ಅವರ ಸ್ವಗ್ರಾಮ ಬಳ್ಳಾರಿ ಜಿಲ್ಲೆಯ ಸಂಗನಕಲ್‌ಗೆ ಕೊಂಡೊಯ್ಯಲಾಯಿತು.


ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್, ಅಡಿಷನಲ್ ಎಸ್ಪಿ ಎಸ್. ನಂದಿನಿ, ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಡೀನ್ ಮತ್ತು ನಿರ್ದೇಶಕರಾದ ಡಾ. ದಾಕ್ಷಾಯಿಣಿ, ಕೆ.ಆರ್. ಆಸ್ಪತ್ರೆ ಸ್ಥಾನಿಕ ವೈದ್ಯಾಧಿಕಾರಿ ಡಾ. ರಾಜೇಶ್ ಅವರು ಖುದ್ದು ಹಾಜರಿದ್ದು ಮರಣೋತ್ತರ ಪರೀಕ್ಷೆ ನಡೆಸಿದ ನಂತರ 9 ಮೃತದೇಹಗಳನ್ನು ಬಳ್ಳಾರಿ ಜಿಲ್ಲೆ ಸಂಗನಕಲ್ ಗ್ರಾಮಕ್ಕೆ ಸಾಗಿಸಲಾಯಿತು.

ಮಧ್ಯಾಹ್ನ 12 ಗಂಟೆ ವೇಳೆಗೆ ಮೃತದೇಹಗಳು ತಲುಪುತ್ತಿದ್ದಂತೆಯೇ ಸಂಗನಕಲ್ ಗ್ರಾಮದಲ್ಲಿ ಸಾವಿರಾರು ಮಂದಿ ಜಮಾಯಿಸಿದ್ದರು. ಸಂಬಂಧಿಕರ ಆಕ್ರಂದನ ಕರುಳು ಹಿಂಡುವಂತಿತ್ತು. ಬಳ್ಳಾರಿ ಗ್ರಾಮಾಂತರ ಕ್ಷೇತ್ರದವರಾದ ಕ್ರೀಡಾ ಸಚಿವ ಬಿ. ನಾಗೇಂದ್ರ ಸೇರಿದಂತೆ ಇತರ ಮುಖಂಡರು ಹಾಗೂ ಗ್ರಾಮಸ್ಥರ ಸಮ್ಮುಖದಲ್ಲಿ ಮಧ್ಯಾಹ್ನ ಗ್ರಾಮದ ರುದ್ರಭೂಮಿಯಲ್ಲಿ 9 ದೇಹಗಳ ಸಾಮೂಹಿಕ ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ಮೂಲಗಳು ತಿಳಿಸಿವೆ.



ಐಪಿಎಲ್ "ಕಿಂಗ್ಸ್" } 16ನೇ ಐಪಿಎಲ್ ಆವೃತ್ತಿ ಯಶಸ್ವಿಯಾಗಿ ಸೋಮವಾರ ಮಧ್ಯರಾತ್ರಿ ಮುಕ್ತಾಯಗೊಂಡಿತು. ಅಹಮದಾಬಾದ್‌ನಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ವಿರುದ್ಧ ಜಯ ಗಳಿಸಿ, ಚೆನ್ನೈ ಸೂಪರ್ ಕಿಂಗ್ಸ್ ಐದನೇ ಬಾರಿಗೆ ಚಾಂಪಿಯನ್ ಆಗಿ ಹೊರಹೊಮ್ಮಿದೆ. ನಾಯಕ ಮಹೇಂದ್ರ ಸಿಂಗ್ ಧೋನಿ ಹಾಗೂ ತಂಡದ ಆಟಗಾರರು ಟ್ರೋಫಿಯೊಂದಿಗೆ ಸಂಭ್ರಮಿಸಿದ ಕ್ಷಣ.

ನೂತನ ಸಂಸತ್ ಭವನ 'ಅನುಭವ ಮಂಟಪ' ನಾಮಕರಣಕ್ಕೆ ಮನವಿ



ಮೈಸೂರು, ಮೇ 30(ಎಂಕೆ)– ನೂತನ ಸಂಸತ್ ಭವನಕ್ಕೆ 'ಅನುಭವ ಮಂಟಪ'ವೆಂದು ನಾಮಕರಣ ಮಾಡುವಂತೆ ಕಾಂಗ್ರೆಸ್ ಮುಖಂಡ ಎಂ.ಪ್ರದೀಪ್ ಕುಮಾರ್ ಮನವಿ ಮಾಡಿದ್ದಾರೆ.



12ನೇ ಶತಮಾನದಲ್ಲಿ ಮಹಿಳಾ ಸಬಲೀಕರಣ, ಸಮಾನತೆ ಸಾರಿದ ಮಹಾನ್ ಮಾನವತಾವಾದಿ ಜಗಜ್ಯೋತಿ ಬಸವಣ್ಣನವರು ಸರ್ವಧರ್ಮದ ಪ್ರಜಾತಂತ್ರ ಮತ್ತು ಪ್ರಜಾಪ್ರಭುತ್ವದ ಮಾದರಿಯಾದಂತಹ ಅನುಭವ ಮಂಟಪ ಸ್ಥಾಪಿಸಿದ್ದರು. ವಿಶ್ವಕ್ಕೆ ಮಾದರಿಯಾಗುವಂತಹ ರೀತಿಯಲ್ಲಿ ಸಂಸತ್ ರೀತಿಯ ಸಭೆಗಳು ಅನುಭವ ಮಂಟಪದಲ್ಲಿ ನಡೆಸಲಾಗುತ್ತಿತ್ತು. ಸರ್ವಧರ್ಮದ ಮುಖಂಡರುಗಳಿಗೆ, ಪ್ರತಿನಿಧಿಗಳಿಗೆ ಸಮನಾದ ಭಾಗವಹಿಸುವಿಕೆ ಮತ್ತು ತಮ್ಮ ಕಷ್ಟಗಳನ್ನು ವ್ಯಕ್ತಪಡಿಸಲು ಮುಕ್ತ ಅವಕಾಶವನ್ನು ನೀಡಲಾಗಿತ್ತು. ಇಡೀ ವಿಶ್ವವೇ ಮೆಚ್ಚುವಂತಹ ಚಿಂತನೆಯನ್ನು 12ನೇ ಶತಮಾನದಲ್ಲಿ ಬಸವಣ್ಣನವರು ಸಂಸತ್ ಸಭಾ ಹೇಗಿರಬೇಕು ಎಂಬುದನ್ನು ತೋರಿಸಿಕೊಟ್ಟಿದ್ದರು. ಆದ್ದರಿಂದ ಹೊಸ ಸಂಸತ್ ಭವನಕ್ಕೆ 'ಅನುಭವ ಮಂಟಪ' ಎಂದು ಹೆಸರಿಡಬೇಕು. ಇದರ ಬಗ್ಗೆ ಸಂಸದರಾದ ವಿ.ಶ್ರೀನಿವಾಸ್ ಪ್ರಸಾದ್ ಹಾಗೂ ಪ್ರತಾಪ್‌ಸಿಂಹ ಅವರು ಪ್ರಧಾನಿ ನರೇಂದ್ರ ಮೋದಿಯವರಿಗೆ ಮನವಿ ಮಾಡಬೇಕು ಎಂದು ಪತ್ರಿಕಾ ಪ್ರಕಟಣೆಯಲ್ಲಿ ಕೋರಿದ್ದಾರೆ.



ಚಾಮರಾಜ ಕ್ಷೇತ್ರದ ನೂತನ ಶಾಸಕ ಕೆ.ಹರೀಶ್‌ಗೌಡ ಅವರನ್ನು ಕರ್ನಾಟಕ ಪ್ರದೇಶ ಕುರುಬರ ಸಂಘದ ನಿರ್ದೇಶಕ ಯು.ಅಭಿಲಾಷ್, ಜಾಕೀರ್, ಕುಮಾರ್, ವಿನು, ವಿಷ್ಣು, ಪವನ್ ಮತ್ತಿತರರು ಆತ್ಮೀಯವಾಗಿ ಅಭಿನಂದಿಸಿದರು.

ಅನಾರೋಗ್ಯ ಪೀಡಿತ ಅಪರಿಚಿತ ವೃದ್ಧನ ನೆರವಿಗೆ ಧಾವಿಸಿದ ಫುಡ್ ಡೆಲಿವರಿ ಸಿಬ್ಬಂದಿ

ಹಾದಿಯಲ್ಲಿ ಅಸ್ವಸ್ಥರ ಕಂಡರೆ 112ಕ್ಕೆ ಕರೆ ಮಾಡಿ; ಇಂತಹವರ ರಕ್ಷಣೆಗೆ ನೆರವಾಗಿ

ಮೈಸೂರು, ಮೇ 30(ಎಸ್‌ಬಿಡಿ)– ಅನಾರೋಗ್ಯದಿಂದ ತೀವ್ರ ಅಸ್ವಸ್ಥರಾಗಿ ಮಲಗಿದ್ದ ಅಪರಿಚಿತ ವೃದ್ಧನನ್ನು ಫುಡ್ ಡೆಲಿವರಿ ಸಿಬ್ಬಂದಿಯೊಬ್ಬರು ಪೊಲೀಸರ ಸಹಕಾರದೊಂದಿಗೆ ಆಸ್ಪತ್ರೆಗೆ ಸೇರಿಸಿ ಮಾನವೀಯತೆ ಮೆರೆದಿರುವ ಘಟನೆ ಮೈಸೂರಿನಲ್ಲಿ ನಡೆದಿದೆ.

ಫುಡ್ ಡೆಲಿವರಿ ಕೆಲಸ ಮಾಡಿಕೊಂಡಿರುವ ಯೋಗಪಟು ಬದರಿ ನಾರಾಯಣ್, ನಗರದ ಆಯುರ್ವೇದ ಆಸ್ಪತ್ರೆ ವೃತ್ತದ ಸಮೀಪ ಫುಟ್‌ಪಾತ್‌ನಲ್ಲಿ ಮಲಗಿದ್ದ ಅಪರಿಚಿತ ವೃದ್ಧನನ್ನು ನರಸಿಂಹರಾಜ ಠಾಣೆ ಪೊಲೀಸರ ಸಹಕಾರದೊಂದಿಗೆ ಕೆ.ಆರ್.ಆಸ್ಪತ್ರೆಗೆ ದಾಖಲಿಸಿದ್ದಾರೆ. ಕೃಶವಾಗಿರುವ ವೃದ್ಧನ ಒಂದು ಕಾಲು ಆನೆಕಾಲು ರೋಗಿಯಂತೆ ತುಂಬಾ ಊದಿಕೊಂಡಿದೆ. ತಲೆ ಭಾಗದಲ್ಲಿ ಗಾಯವಾಗಿದೆ. ಜ್ಞಾಪಕ ಶಕ್ತಿಯೂ ಇಲ್ಲದ ಕಾರಣ ಅವರ ಬಗ್ಗೆ ಹೆಚ್ಚಿನ ವಿವರ ತಿಳಿದುಬಂದಿಲ್ಲ. ಸದ್ಯ ಅವರಿಗೆ ವೈದ್ಯರು ಚಿಕಿತ್ಸೆ ನೀಡುತ್ತಿದ್ದಾರೆ. ಘಟನೆ ಬಗ್ಗೆ 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದ ಬದರಿ ನಾರಾಯಣ್, ಫುಡ್ ಡೆಲಿವರಿ ಬಳಿಕ ಆಯುರ್ವೇದ ವೃತ್ತದ ಬಳಿ ಬರುವಾಗ ಫುಟ್‌ಪಾತ್‌ನಲ್ಲಿ ವೃದ್ಧರೊಬ್ಬರು ಅಸ್ವಸ್ಥರಾಗಿ ಮಲಗಿದ್ದನ್ನು ಗಮನಿಸಿ ಹತ್ತಿರ ಹೋಗಿ ಮಾತನಾಡಿಸಿದೆ. ಆದರೆ ಅವರು ಜ್ಞಾಪಕ ಶಕ್ತಿ ಕಳೆದುಕೊಂಡಿರುವುದರಿಂದ ಅವರ ಬಗ್ಗೆ ಯಾವುದೇ ಮಾಹಿತಿ ತಿಳಿಯಲಿಲ್ಲ. ತಲೆಯಲ್ಲಿ ಗಾಯವಾಗಿದ್ದಲ್ಲದೆ, ಒಂದು ಕಾಲು ತುಂಬಾ ಊದಿತ್ತು. ಅಲ್ಲಿದ್ದವರನ್ನು ವಿಚಾರಿಸಿದಾಗ ತುಂಬಾ ದಿನಗಳಿಂದ ಅದೇ ಸ್ಥಳದಲ್ಲಿ ಮಲಗಿದ್ದಾರೆ. ಯಾರಾದರೂ ಬನ್ನು, ಬಿಸ್ಕೆಟ್ ಕೊಡುತ್ತಾರೆ. ಅದನ್ನು ತಿಂದು ದಿನದೂಡುತ್ತಿದ್ದಾರೆ ಎಂದು ತಿಳಿಯಿತು ಎಂದರು.



ಪೊಲೀಸರ ನೆರವಿನೊಂದಿಗೆ ಬದರಿ ನಾರಾಯಣ್(ಎಡದಿಂದ 2ನೆಯವರು) ಅಸ್ವಸ್ಥ ಅಪರಿಚಿತ ವೃದ್ಧನನ್ನು ಕೆ.ಆರ್.ಆಸ್ಪತ್ರೆಗೆ ದಾಖಲಿಸಿದರು.

ಕೂಡಲೇ ನಾನು 112 ಸಂಖ್ಯೆಗೆ ಕರೆ ಮಾಡಿ ವಿಷಯ ತಿಳಿಸಿದೆ. ಅವರು ನಾನು ನೀಡಿದ ವಿಳಾಸದ ಆಧಾರದಲ್ಲಿ ಸಂಬಂಧಪಟ್ಟ ಪೊಲೀಸ್ ಠಾಣೆಗೆ ಸಮನ್ವಯ ಮಾಡಿದರು. ಕೆಲ ನಿಮಿಷಗಳಲ್ಲೇ ಪಿಸಿಆರ್ ವಾಹನದಲ್ಲಿ ಪೊಲೀಸರು ಆಗಮಿಸಿದರು. ಬಳಿಕ 108ಕ್ಕೆ ಕರೆ ಮಾಡಿ ಆಂಬುಲೆನ್ಸ್ ಕರೆಸಿಕೊಂಡು ಎಎಸ್‌ಐ ಸುಬ್ರಮಣಿ ಹಾಗೂ ಸಿಬ್ಬಂದಿ ಸಮ್ಮುಖದಲ್ಲಿ ಸಮೀಪದ ಕೆ.ಆರ್.ಆಸ್ಪತ್ರೆಗೆ ವೃದ್ಧನನ್ನು ಕರೆದೊಯ್ದು ದಾಖಲಿಸಲಾಯಿತು. ಫುಟ್‌ಪಾತ್‌ನಲ್ಲಿದ್ದ ಅಸ್ವಸ್ಥ ವೃದ್ಧನನ್ನು ಪೊಲೀಸರ ಸಮ್ಮುಖದಲ್ಲಿ ಆಸ್ಪತ್ರೆಗೆ ದಾಖಲಿಸಿದ್ದಾಗಿ ನಿಯಮಾನುಸಾರ ಲಿಖಿತ ಹೇಳಿಕೆ ಪಡೆದು ವೈದ್ಯರು ಚಿಕಿತ್ಸೆ ನೀಡುತ್ತಿದ್ದಾರೆ ಎಂದು ತಿಳಿಸಿದರು. ಬದರಿ ನಾರಾಯಣ್, ಯೋಗ ಶೀರ್ಷಾಸನ ಮತ್ತು ಸೂರ್ಯನ ವೀಕ್ಷಣೆಯಲ್ಲಿ ದಾಖಲೆ ಮಾಡಿದ್ದು, ಫುಡ್ ಡೆಲಿವರಿ ವೃತ್ತಿ ಮಾಡುತ್ತಿದ್ದಾರೆ. ಈ ವೇಳೆ ಸಾರ್ವಜನಿಕ ಸಮಸ್ಯೆಗಳು ಕಂಡರೆ ಸಂಬಂಧಪಟ್ಟವರಿಗೆ ಮಾಹಿತಿ ನೀಡುವುದು, ಸಾಧ್ಯವಾದರೆ ತಾವೇ ಪರಿಹರಿಸುವುದನ್ನು ರೂಢಿಸಿಕೊಂಡಿರುವುದು ವಿಶೇಷ.

ಜೀವ ಉಳಿಸಲು ಇಷ್ಟು ಮಾಡಿದರೆ ಸಾಕು

ಸಂಬಂಧಗಳು ಮೌಲ್ಯ ಕಳೆದುಕೊಂಡಿರುವುದರಿಂದ ವಯಸ್ಸಾದ ಅದೆಷ್ಟೋ ಮಂದಿ ಬೀದಿ ಪಾಲಾಗಿದ್ದಾರೆ. ಆಘಾತದಿಂದ ಜ್ಞಾಪಕ ಶಕ್ತಿಯನ್ನೇ ಕಳೆದುಕೊಂಡು ನಿರ್ಗತಿಕರಾಗಿ ಬದುಕುತ್ತಿದ್ದಾರೆ. ಕೆಲವರು ತೀವ್ರ ಅನಾರೋಗ್ಯದಿಂದ ಅಸ್ವಸ್ಥರಾಗಿ ಒಂದೇ ಜಾಗದಲ್ಲಿ ಮಲಗಿರುತ್ತಾರೆ. ಅಂತಹವರನ್ನು ನೋಡಿದಾಗ ಕುಡಿದು ಬಿದ್ದಿರಬಹುದು ಎಂದು ಕೆಲವರು ಭಾವಿಸಿ ಮುಂದೆ ನಡೆಯುತ್ತಾರೆ. ಬಹುತೇಕ ಜನರಿಗೆ ಸಹಾಯ ಮಾಡಬೇಕೆಂಬ ಮನಸ್ಸಿದ್ದರೂ ಏನು ಮಾಡಬೇಕೆಂದು ತಿಳಿಯದೆ ಅಲ್ಲಿಂದ ಹೋಗಿಬಿಡುತ್ತಾರೆ. ದಯಮಾಡಿ ಹೀಗೆ ಮಾಡದೆ 112 ಸಹಾಯವಾಣಿಗೆ ಕರೆ ಮಾಡಿ, ವಿಷಯ ತಿಳಿಸಿ. ಕೂಡಲೇ ಆ ವ್ಯಾಪ್ತಿಯ ಪೊಲೀಸರು ಸ್ಥಳಕ್ಕಾಗಮಿಸುತ್ತಾರೆ. ಅವರ ಸಮ್ಮುಖದಲ್ಲೇ 108 ಆಂಬುಲೆನ್ಸ್ ಮೂಲಕ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ. ಅಪರಿಚಿತ ವ್ಯಕ್ತಿಯಾಗಿದ್ದರಿಂದ ಲಿಖಿತ ಮಾಹಿತಿ ನೀಡಿದರೆ ಸಾಕು ಆಸ್ಪತ್ರೆಗೆ ದಾಖಲಿಸಿಕೊಂಡು ಚಿಕಿತ್ಸೆ ನೀಡುತ್ತಾರೆ. ಆ ವ್ಯಕ್ತಿಯ ಪ್ರಾಣ ಉಳಿಯುತ್ತದೆ. ಸಾಧ್ಯವಾದರೆ ಹುಷಾರಾದ ಬಳಿಕ ನಿರಾಶ್ರಿತರ ಕೇಂದ್ರಕ್ಕೆ ಸೇರಿಸಿ. ಇಷ್ಟು ಮಾಡಿದರೆ ಸಾಕು ಜೀವ ಉಳಿಸಿದ ಪುಣ್ಯ ಪಡೆಯುತ್ತೀರಿ ಎಂದು ಬದರಿ ನಾರಾಯಣ್ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಇಂದು ತಂಬಾಕು ರಹಿತ ದಿನಾಚರಣೆ

ಮೈಸೂರು, ಮೇ 30– ಮೈಸೂರು ರಾಮಕೃಷ್ಣನಗರದ ಸುಯೋಗ್ ಆಸ್ಪತ್ರೆ ಹಾಗೂ ಸುಯೋಗ್ ನರ್ಸಿಂಗ್ ಕಾಲೇಜಿನ ಸಹಯೋಗದಲ್ಲಿ ಬುಧವಾರ ಸಂಜೆ 4.30ಕ್ಕೆ ವಿಶ್ವ ತಂಬಾಕು ರಹಿತ ದಿನಾಚರಣೆ ಆಯೋಜಿಸಲಾಗಿದೆ. ಆಸ್ಪತ್ರೆ ಸಭಾಂಗಣದಲ್ಲಿ ನಡೆಯಲಿರುವ ಕಾರ್ಯಕ್ರಮವನ್ನು ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡರು ಉದ್ಘಾಟಿಸಲಿದ್ದು, ಆಸ್ಪತ್ರೆ ಅಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ ಅಧ್ಯಕ್ಷತೆ ವಹಿಸಲಿದ್ದಾರೆ. ಕೆ.ಆರ್.ಆಸ್ಪತ್ರೆ ಪ್ರಾಧ್ಯಾಪಕ ಹಾಗೂ ಕ್ಯಾನ್ಸರ್ ತಜ್ಞ ಡಾ.ಮಂಜುನಾಥ್ ತಂಬಾಕಿನ ದುಷ್ಪರಿಣಾಮ ಕುರಿತು ಮಾತನಾಡಲಿದ್ದಾರೆ. ಆಸ್ಪತ್ರೆ ವ್ಯವಸ್ಥಾಪಕ ನಿರ್ದೇಶಕ ಡಾ.ಸುಯೋಗ್ ಯೋಗಣ್ಣ, ವೈದ್ಯಕೀಯ ನಿರ್ದೇಶಕ ಡಾ.ಆರ್.ರಾಜೇಂದರ ಪ್ರಸಾದ್, ನಿರ್ದೇಶಕರಾದ ಡಾ.ಸೀಮಾ ಯೋಗಣ್ಣ, ಡಾ.ಯಶಿತಾ ರಾಜ್, ಸಿಇಓ ಡಾ.ಎಂ.ವಿ.ಮಂಜುನಾಥ ಉಪಸ್ಥಿತರಿರಲಿದ್ದಾರೆ.

ಹೂವಿನ ಹಾರ, ಹೂಗುಚ್ಛ, ಉಡುಗೊರೆ ತರಬೇಡಿ

ಮನೆ ಮುಂದೆ ಫಲಕ ಹಾಕಿದ ಗುಂಡ್ಲುಪೇಟೆ ಶಾಸಕ ಗಣೇಶ್‌ಪ್ರಸಾದ್



ಮೈಸೂರು, ಮೇ 30(ಎಂಟಿವೈ)–ನನ್ನನ್ನು ಭೇಟಿ ಮಾಡಲು ಬರುವವರು ಹೂವಿನ ಹಾರ, ಹೂಗುಚ್ಛ ಹಾಗೂ ಯಾವುದೇ ತರದ ಉಡುಗೊರೆ ತರಬೇಡಿ ಎಂದು ಗುಂಡ್ಲುಪೇಟೆ ಶಾಸಕ ಗಣೇಶ್‌ಪ್ರಸಾದ್ ಮನೆ ಮುಂದೆ ಬೋರ್ಡ್ ಹಾಕಿಸಿದ್ದಾರೆ.

ಮಾಜಿ ಸಚಿವ ಡಾ.ಹೆಚ್.ಎಸ್.ಮಹಾದೇವಪ್ರಸಾದ್ ಪುತ್ರರಾಗಿರುವ ಗಣೇಶ್ ಪ್ರಸಾದ್ ಈ ಬಾರಿ ಗುಂಡ್ಲುಪೇಟೆ ಕ್ಷೇತ್ರದಿಂದ ಹಾಲಿ ಶಾಸಕ ನಿರಂಜನ್‌ಕುಮಾರ್ ವಿರುದ್ಧ ಭರ್ಜರಿ ಗೆಲುವು ಸಾಧಿಸಿ ಮೊದಲ ಬಾರಿಗೆ ವಿಧಾನಸಭೆ ಪ್ರವೇಶಿಸಿದ್ದಾರೆ. ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕೃತ ಆದೇಶ ಹೊರಡಿಸಿ, ಪುಸ್ತಕ ಹೊರತುಪಡಿಸಿ ಬೇರೆ ಯಾವುದೇ ಉಡುಗೊರೆ ಸ್ವೀಕರಿಸುವುದಿಲ್ಲ. ಹಾರ, ಹೂಗುಚ್ಛ, ತುರಾಯಿಗಳಿಂದ ಸನ್ಮಾನ ಸ್ವೀಕರಿಸುವುದಿಲ್ಲ ಎಂದು ತಿಳಿಸಿರುವ ಬೆನ್ನಲ್ಲೇ ಶಾಸಕ ಗಣೇಶ್ ಪ್ರಸಾದ್ ಮನೆ ಮುಂದೆ ಫಲಕ ಹಾಕುವ ಮೂಲಕ ಜಾಗೃತಿ ಮೂಡಿಸುವ ಪ್ರಯತ್ನ ಮಾಡಿದ್ದಾರೆ. ಮೈಸೂರಿನ ಕುವೆಂಪುನಗರದ ಅನಿಕೇತನ ರಸ್ತೆ, 4ನೇ ಕ್ರಾಸ್‌ನಲ್ಲಿರುವ ತಮ್ಮ ನಿವಾಸದ ಗೇಟ್‌ಗೆ ಮಂಗಳವಾರ ಶಾಸಕ ಗಣೇಶ್ ಪ್ರಸಾದ್ ಹಾಗೂ ನಿತ್ಯ ಗಣೇಶ್ ಪ್ರಸಾದ್ ದಂಪತಿ ಫಲಕ ಹಾಕಿಸಿದರು.

ಸರ್ಕಾರಿ ಶಾಲೆಗಳಿಗೆ ಹಣ ನೀಡಿ: ಇದೇ ವೇಳೆ ಶಾಸಕ ಗಣೇಶ್ ಪ್ರಸಾದ್ ಮಾತನಾಡಿ, ಶಾಸಕನಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಪ್ರತಿದಿನ ಹಲವು ಮಂದಿ ನನಗೆ ಶುಭ ಕೋರಲು ಬರುತ್ತಿದ್ದಾರೆ. ಆದರೆ, ಬರುವಾಗ ಹಾರ, ಶಾಲು, ಪೇಟ, ಹೂಗುಚ್ಛ, ಹಣ್ಣುಹಂಪಲು ಸೇರಿದಂತೆ ಇನ್ನಿತರ ವಸ್ತುಗಳನ್ನು ತರುತ್ತಿದ್ದಾರೆ. ಇದರಿಂದ ಹಾರ ಹಾಗೂ ಹೂಗುಚ್ಛಗಳು ಕೆಲವೇ ಸಮಯದಲ್ಲಿ ಬಾಡಿ, ಪೋಲಾಗುತ್ತದೆ. ಆದ್ದರಿಂದ ಶುಭ ಕೋರಲು ಬರುವವರು ಬರಿಗೈಯ್ಯಲ್ಲೇ ಬನ್ನಿ, ಸನ್ಮಾನಕ್ಕಾಗಿ ತರಲು ಉದ್ದೇಶಿಸಿದ್ದ ಹಣವನ್ನು ಆಯಾ ಊರಿನ ಸರ್ಕಾರಿ ಶಾಲೆಗಳಿಗೆ ನೀಡಿದರೆ, ಶಾಲಾ ಮಕ್ಕಳಿಗೆ ಸಣ್ಣಪುಟ್ಟ ಸಹಾಯಕ್ಕೆ ಬರುತ್ತದೆ. ಅದಕ್ಕಾಗಿ ಜನರಲ್ಲಿ ಮನವಿ ಮಾಡಿಕೊಳ್ಳಲು ಫಲಕ ಅಳವಡಿಸಲಾಗಿದೆ ಎಂದು ಗಣೇಶ್ ಪ್ರಸಾದ್ ಸ್ಪಷ್ಟನೆ ನೀಡಿದರು.


ಹಿಂದಿನ ಬಿಜೆಪಿ ಸರ್ಕಾರದ ಭ್ರಷ್ಟಾಚಾರ ಆರೋಪಗಳ ಕುರಿತು ತನಿಖೆ

ಬೆಂಗಳೂರು: ಹಿಂದಿನ ಬಿಜೆಪಿ ಸರ್ಕಾರದ ಭ್ರಷ್ಟಾಚಾರ ಆರೋಪಗಳ ಕುರಿತು ತನಿಖೆ ನಡೆಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಇತ್ತೀಚೆಗೆ ಮಳೆಯಿಂದ ಹಾನಿಯಾದ ಪ್ರದೇಶಗಳಲ್ಲಿ ಪರಿಶೀಲನೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ದಿನೇಶ್ ಗುಂಡೂರಾವ್, ಎಲ್ಲಾ ಇಲಾಖೆಗಳಲ್ಲಿ ಪರಿಶೀಲನೆ ನಡೆಸಲಾಗುವುದು, ಒಂದು ವೇಳೆ ಭ್ರಷ್ಟಾಚಾರದಿಂದ ಏನಾದರೂ ನಷ್ಟವಾಗಿದ್ದರೆ ಮತ್ತು ಖಜಾನೆ ಮತ್ತು ಸಂಪನ್ಮೂಲಗಳ ವ್ಯರ್ಥವಾಗಿರುವುದು ಕಂಡುಬಂದರೆ ಖಂಡಿತವಾಗಿ ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು.

ಪಠ್ಯ ಪುಸ್ತಕ ಪರಿಷ್ಕರಣೆ ಕುರಿತು ಮಾತನಾಡಿದ ಅವರು, ಇತಿ ಹಾಸವನ್ನು ವಿರೂಪಗೊಳಿಸಿರುವುದರಿಂದ, ಒಂದು ಸಿದ್ಧಾಂತವನ್ನು ಮನಸ್ಸಿನಲ್ಲಿಟ್ಟುಕೊಂಡು ಪಠ್ಯ ಪುಸ್ತಕ ಬರೆದಿರುವುದರಿಂದ ಅವುಗಳನ್ನು ತೆಗೆದುಹಾಕಬೇಕಾಗಿದೆ. ಇತಿಹಾಸ ನೈಜ ಅಂಶಗಳಿಂದ ನಾವು ನೋಡಬೇಕಾಗಿದೆ, ಕಾಲ್ಪನಿಕವಲ್ಲ ಎಂದು ದಿನೇಶ್ ಗುಂಡೂರಾವ್ ತಿಳಿಸಿದರು.

ವಿಶೇಷಚೇತನರಿಗೆ ವಿಭಿನ್ನ ಕೌಶಲ್ಯ, ಜ್ಞಾನ ಇದೆ, ಇದನ್ನು ಸದ್ಬಳಕೆ ಮಾಡಿಕೊಳ್ಳಿ: ರಘು



ಮೈಸೂರು, ಮೇ 30(ಸಿಎನ್)– ವಿಶೇಷ ಚೇತನರು ಸಾಮಾನ್ಯ ಜನರಿಗಿಂತ ವಿಭಿನ್ನ ರೀತಿಯ ಕೌಶಲ್ಯ, ಜ್ಞಾನ, ಗ್ರಹಿಕಾಶಕ್ತಿ ಹೊಂದಿರುತ್ತಾರೆ. ಕ್ರೀಡೆ, ವೈಜ್ಞಾನಿಕ, ಪ್ಯಾರಾ ಒಲಂಪಿಕ್, ಕ್ರಿಕೆಟ್, ಸಾಂಸ್ಕೃತಿಕ ಕಾರ್ಯಕ್ರಮ, ವಿವಿಧ ರೀತಿಯ ಒಲಂಪಿಕ್ ಕ್ರೀಡಾಕೂಟಗಳಲ್ಲಿ ಸಾಧನೆ ಮಾಡಿ ರಾಜ್ಯ ಹಾಗೂ ದೇಶದ ಕೀರ್ತಿ ಹೆಚ್ಚಿಸಿದ್ದಾರೆ. ಶಿಕ್ಷಣದ ಜೊತೆ ಜೊತೆಗೆ ವಿವಿಧ ಆಸಕ್ತಿಗಳನ್ನು ರೂಢಿಸಿಕೊಂಡು, ದೇಶದ ಕೀರ್ತಿಪತಾಕೆ ಎತ್ತಿ ಹಿಡಿಯುವ ಮೂಲಕ ವಿಶೇಷ ಚೇತನರ ಸಾಮರ್ಥ್ಯ ಪ್ರದರ್ಶಿಸಬೇಕಿದೆ ಎಂದು ವಿಶೇಷ ಭೂಸ್ವಾದೀನ ಉಪ ಆಯುಕ್ತ ಎ.ಇ.ರಘು ಕಿವಿಮಾತು ಹೇಳಿದರು.

ನಗರದ ಜೆಎಸ್‌ಎಸ್ ತಾಂತ್ರಿಕ ಸಂಸ್ಥೆ ಆವರಣದಲ್ಲಿ ವಿಶೇಷ ಚೇತನರ ಪಾಲಿಟೆಕ್ನಿಕ್ ವತಿಯಿಂದ ಮಂಗಳವಾರ ಆಯೋಜಿಸಲಾಗಿದ್ದ 2023ನೇ ಸಾಲಿನ ವಾರ್ಷಿಕೋತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಜೆಎಸ್‌ಎಸ್ ಸಂಸ್ಥೆ ಸಾಗರವಿದ್ದಂತೆ, ರಾಜ್ಯ, ದೇಶ, ವಿದೇಶದಲ್ಲಿ ಶೈಕ್ಷಣಿಕ, ಸಾಮಾಜಿಕವಾಗಿ ತನ್ನದೇ ಆದ ಕೊಡುಗೆ ನೀಡುತ್ತಾ ಬರುತ್ತಿದೆ. ವೈಯಕ್ತಿಕವಾಗಿ ಯಾರು ಬೇಕಾದರೂ ಹೆಸರು ಮಾಡಬಹುದು ಆದರೆ ಸಮಾಜಕ್ಕೆ ನೀಡಿದ ಕೊಡುಗೆ ಮುಖ್ಯವಾಗುತ್ತೆ ಆ ನಿಟ್ಟಿನಲ್ಲಿ ಜೆಎಸ್‌ಎಸ್ ಸಂಸ್ಥೆ ಮೂಲಭೂತವಾಗಿ ಶಿಕ್ಷಣ, ಆರೋಗ್ಯ, ಜೀವನ ನಿರ್ವಹಣೆ ಎಂಬ ಧ್ಯೇಯದೊಂದಿಗೆ ಜನಮಾನಸದಲ್ಲಿ ಹೆಸರುವಾಸಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ನೀವು ಯಾರಿಗೂ ಕಮ್ಮಿಯಿಲ್ಲ, ಸಾಮಾನ್ಯರಿಗಿಂತ ಉತ್ತಮ ಕೌಶಲ್ಯ, ಜ್ಞಾನ ಹೊಂದಿದ್ದೀರಿ ಹಾಗಾಗಿ ನಿಮ್ಮಲ್ಲಿರುವ ಪ್ರತಿಭೆಯನ್ನು ಹೊರತಂದು, ನೀವು ಕೂಡ ಸಮಾಜದಲ್ಲಿ ಸಮಾನರಾಗಿದ್ದೀರಿ ಎಂಬ ಸಂದೇಶ ಸಾರುವ ಉದ್ದೇಶ ಸಂಸ್ಥೆಯದ್ದಾಗಿದೆ. ನಮಗೆ ಭಾಷೆಯ ಅಂಕುಶವಿದೆ, ನಿಮಗೆ ಆ ರೀತಿ ಯಿಲ್ಲ, ನಿಮ್ಮ ಸಿಗ್ನೇಚರ್ ಭಾಷೆಯಿಂದ ಪ್ರಪಂಚದ ಯಾವ ಮೂಲೆಯಲ್ಲಾದರೂ ಕೆಲಸ ಮಾಡುವ ಸಾಮರ್ಥ್ಯ ಹೊಂದಿದ್ದೀರಿ ಎಂದು ತಿಳಿಸಿದರು.

ಬಳಿಕ ಜೆಎಸ್‌ಎಸ್ ಸಿಎಂಸಿ ಪ್ರಾಧ್ಯಾಪಕ ಪ್ರೊ.ಎಂ.ರಂಗಸ್ವಾಮಿ ಮಾತನಾಡಿ, ನಿಮ್ಮಲ್ಲಿರುವ ಗ್ರಹಿಕಾಶಕ್ತಿ, ಪ್ರತಿಭೆಗೆ ಸರಿಸಾಟಿಯಿಲ್ಲ. ನೀವು ವಿದ್ಯಾವಂತರಾಗಿ ಬ್ಯಾಂಕಿಂಗ್ ಕ್ಷೇತ್ರದತ್ತ ಹೆಚ್ಚು ಮುಖ ಮಾಡಬೇಕು. ಏಕೆಂದರೆ ಬ್ಯಾಂಕಿಂಗ್‌ನಲ್ಲಿ ನಿಮಗೆ ವಿಶೇಷವಾದ ಮೀಸಲಾತಿ ಇದೆ, ಜೊತೆಗೆ ಉತ್ತಮ ವೇತನವಿದೆ. ಹಾಗಾಗಿ ಸರ್ಕಾರಿ ಸ್ವಾಮ್ಯದ ಬ್ಯಾಂಕ್‌ಗಳಲ್ಲಿರುವ ಸೌಲಭ್ಯ ಉಪಯೋಗಿಸಿಕೊಂಡು ನಿಮ್ಮ ಜೀವನ ರೂಪಿಸಿಕೊಳ್ಳಿ ಎಂದು ಸಲಹೆ ನೀಡಿದರು. ಈ ಸಂದರ್ಭ ವಾಕ್ ಮತ್ತು ಶ್ರವಣ ಸಂಸ್ಥೆ ವಿಭಾಗದ ಪ್ರಾಧ್ಯಾಪಕಿ ಮತ್ತು ಪ್ರಾಂಶುಪಾಲೆ ಡಾ.ಆರ್.ಸುಮಾ, ಪಿಡಿಎ ಪ್ರಾಂಶುಪಾಲ ಬಿ.ಇಳಂಗೊವನ್, ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ ಎಂಜಿನಿಯರಿಂಗ್ ಮುಖ್ಯಸ್ಥೆ ಕೋಮಲ, ನಿರೂಪಕ ಡಾ.ಪಳನಿಸ್ವಾಮಿ, ಪಿಡಿಎ ಮೇಲ್ವಿಚಾರಕ ಶಿವಕುಮಾರ್ ಸ್ವಾಮಿ, ವಾಸ್ತುಶಿಲ್ಪ ವಿಭಾಗದ ಮುಖ್ಯಸ್ಥೆ ಆರ್.ಉಮಾ, ವಾಸ್ತುಶಿಲ್ಪ ವಿಭಾಗದ ಉಪನ್ಯಾಸಕ ಜಿಆರ್ ನಿಡವಾಣಿ, ವಾಸ್ತುಶಿಲ್ಪ ವಿಭಾಗದ ಉಪನ್ಯಾಸಕಿ ಅಮೂಲ್ಯ, ಮುರುಗಮ್ಮ, ಬಸವರಾಜು ಮತ್ತಿತರರಿದ್ದರು.

ವಿದ್ಯಾರ್ಥಿಗಳಿಗೆ ನಗದು ಬಹುಮಾನ: ಡಿಪ್ಲೊಮಾ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿಶೇಷ ಚೇತನ ವಿದ್ಯಾರ್ಥಿಗಳಿಗೆ ವಿವಿಧ ದತ್ತಿಯಿಂದ ನಗದು ಬಹುಮಾನ ವಿತರಿಸಲಾಯಿತು. ವಿದ್ಯಾರ್ಥಿಗಳಾದ ದುರ್ಗರಾಜು ನಾಗೇಂದ್ರ, ಮಿನುಗುಲಾ ಗೌರಿಶಂಕರ್, ಭಾಸ್ಕರ್ ಡಿ.ಕೆ, ಸೂರ್ಯ ಪ್ರಕಾಶ್, ಅರ್ಷಿಯಾ.ಬಿ, ವಿನೋದ್ ಕುಮಾರ್, ಸಾರ್ಥಕ್ ಯೆಸಡೇಕರ್, ಮಾದಪ್ಪ ರಂಗಸ್ವಾಮಿ ನಗದು ಬಹುಮಾನ ಪಡೆದು ಖುಷಿಪಟ್ಟರು.

ವಾರ್ಷಿಕ ಕ್ರೀಡಾಕೂಟ ವಿಜೇತರಿಗೆ ಬಹುಮಾನ: ವಿವಿಧ ಕ್ರೀಡೆಗಳಲ್ಲಿ ತೊಡಗಿ ವಿಜೇತರಾದ ವಿಶೇಷ ಚೇತನ ವಿದ್ಯಾರ್ಥಿಗಳಿಗೆ, ಕ್ರಮವಾಗಿ ಪ್ರಥಮ ಹಾಗೂ ದ್ವಿತೀಯ ಸ್ಥಾನದ ಬಹುಮಾನ ನೀಡಿ ಗೌರವಿಸಲಾಯಿತು. ನರಸಾಪುರ ಮಾನಸ, ಚಾಮುಂಡೇಶ್ವರಿ. ಎಂ.ಮಾಧವಿ, ರಮ್ಯಾ.ಬಿ.ಜೆ, ಆದಿತ್ಯಾ ಕೆ.ಆರ್, ಗೋಕುಲ್.ಕೆ, ಸಂಗಮೇಶ್ ಸಲಬನ್ನ ಕೊರಿ, ಗಂಗಿರೆಡ್ಡಿ ಅಂಕಿತ, ಸೈಯದ್ ಜಬೀವುಲ್ಲ ಪ್ರಶಸ್ತಿ ಪಡೆದರು.

ನಾಳೆ ಪದವಿ ಪ್ರದಾನ

ಮೈಸೂರು, ಮೇ 30(ಎಂಕೆ)– ಮೈಸೂರು ಆಡಳಿತ ನಿರ್ವಹಣೆ ಮತ್ತು ಇಂಜಿನಿಯರಿಂಗ್ ಕಾಲೇಜಿ(ಮೈಸೂರ್ ಕಾಲೇಜ್ ಆಫ್ ಇಂಜಿನಿಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್)ನಲ್ಲಿ ಜೂ.1ರಂದು ಪದವಿ ಪ್ರದಾನ ಸಮಾರಂಭವನ್ನು ಆಯೋಜಿಸಲಾಗುತ್ತಿದೆ ಎಂದು ಕಾಲೇಜು ಪ್ರಾಂಶುಪಾಲ ಡಾ.ಎಂ.ಎಸ್. ಪ್ರಭುಸ್ವಾಮಿ ತಿಳಿಸಿದರು. ಜಿಲ್ಲಾ ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪದವಿ ಪ್ರದಾನ ಕಾರ್ಯಕ್ರಮದಲ್ಲಿ ಸುಮಾರು 122 ಕ್ಕೂ ಹೆಚ್ಚು ವಿವಿಧ ವಿಭಾಗಗಳ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಗುವುದು. ಅಲ್ಲದೆ, ಜೂ. 2ರಂದು ಕಾಲೇಜಿನ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಕಾಲೇಜಿನ ತೇಜಸ್, ಅಮರ್ ಹಾಗೂ ಐಶ್ವರ್ಯ ಮತ್ತಿತರರಿದ್ದರು.

ಸಿಇಟಿ ಮಾಹಿತಿ, ಮಾರ್ಗದರ್ಶನ ಕೇಂದ್ರ

ಮೈಸೂರು, ಮೇ 30(ಎಂಕೆ)– ಮೈಸೂರಿನ ಸರಸ್ವತಿಪುರಂನಲ್ಲಿರುವ ಅಗ್ನಿಶಾಮಕ ಠಾಣೆ ಬಳಿ ಜೂ.1 ರಿಂದ 30ರವರೆಗೆ ಎಟಿಎಂಇ ಇಂಜಿನಿಯರಿಂಗ್ ಕಾಲೇಜು ವತಿಯಿಂದ 'ಸಿಇಟಿ(ಕೆಇಎ) ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ' ಆರಂಭಿಸಲಾಗುವುದು ಎಂದು ಕಾಲೇಜು ಆಡಳಿತಾಧಿಕಾರಿ ಡಾ. ಸಚ್ಚಿದಾನಂದಮೂರ್ತಿ ತಿಳಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರದಲ್ಲಿ ನೂತನ ಸಾಲಿನಲ್ಲಿ ಇಂಜಿನಿಯರಿಂಗ್ ಮತ್ತು ಇತರೆ ಕೋರ್ಸ್‌ಗಳಿಗೆ ಸಾಮಾನ್ಯ ಪ್ರವೇಶ ಪರೀಕ್ಷೆ ಬರೆದಿರುವ ವಿದ್ಯಾರ್ಥಿಗಳಿಗೆ ಲಭ್ಯವಿರುವ ಮತ್ತು ಬೇಡಿಕೆಯ ಕೋರ್ಸ್‌ಗಳ ಬಗ್ಗೆ ಮಾಹಿತಿ ನೀಡಲಾಗುವುದು. ಇಂಜಿನಿಯರಿಂಗ್ ಕೋರ್ಸ್‌ಗಳ ಆಯ್ಕೆ ಮತ್ತು ಪ್ರವೇಶ ಪ್ರಕ್ರಿಯೆಯ ವಿವರ, ಪ್ರವೇಶ ಪಡೆಯಲು ಯಾವ ದಾಖಲೆಗಳು ಅವಶ್ಯಕ ಹಾಗೂ ಕೆಇಎ (ಸಿ.ಇ.ಟಿ) ಪೋರ್ಟಲ್‌ನಲ್ಲಿ ವಿವಿಧ ಕೋರ್ಸ್‌ಗಳನ್ನು ಆಯ್ಕೆ ಮಾಡುವ ವಿಧಾನ, ಕಾಲೇಜುಗಳ ಆಯ್ಕೆ ಪ್ರಕ್ರಿಯೆ, ದಾಖಲಾತಿಗಳನ್ನು ಅಪ್‌ಲೋಡ್ ಮಾಡುವ ವಿಧಾನ ಸೇರಿದಂತೆ ಹಲವು ವಿಚಾರಗಳ ಮಾಹಿತಿಯನ್ನು ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಒದಗಿಸಲಾಗುವುದು. ಹೆಚ್ಚಿನ ಮಾಹಿತಿಗೆ ಡಾ.ಎಲ್.ಯತೀಶ್, ದೂ.ಸಂ.9902238768 ಅಥವಾ ಎಸ್.ರವಿಕುಮಾರ್, ದೂ.ಸಂ. 9880543740 ನ್ನು ಸಂಪರ್ಕಿಸುವಂತೆ ಕೋರಿದರು. ಪ್ರಾಂಶುಪಾಲ ಡಾ.ಅನಂತ ಕೇಶವಮೂರ್ತಿ, ಡಾ.ಎಲ್.ಯತೀಶ್ ಉಪಸ್ಥಿತರಿದ್ದರು.

ಬಡ ಕುಟುಂಬಗಳ ಏಳಿಗೆಗೆ ಕಾಂಗ್ರೆಸ್ ಸದಾ ಸಿದ್ಧ

ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ

ತಿ.ನರಸೀಪುರ, ಮೇ 30– ಬಡ ಕುಟುಂಬಗಳ ಏಳಿಗೆಗೆ ಕಾಂಗ್ರೆಸ್ ಸದಾ ಸಿದ್ಧ ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ತಿಳಿಸಿದರು.

ಪಟ್ಟಣದ ಕಾಂಗ್ರೆಸ್ ಮುಖಂಡರಿಂದ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಅವರು, ಕಾಂಗ್ರೆಸ್ ಹೊರತುಪಡಿಸಿ ಯಾವುದೇ ಪಕ್ಷ ನಿಮಗೆ ಸಹಾಯ ಮಾಡಲ್ಲ. ಬೇರೆ ಯಾರೂ ಮಾಡಲು ಸಾಧ್ಯವಿಲ್ಲ. ಕಾಂಗ್ರೆಸ್‌ನಿಂದ ಮಾತ್ರ ಕ್ಷೇತ್ರದ ಸಮಗ್ರ ಅಭಿವೃದ್ಧಿ ಸಾಧ್ಯ ಎಂದರು.



ಡಾ.ಬಿ.ಆರ್.ಅಂಬೇಡ್ಕರ್ ಹೇಳಿದ ರೀತಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ನಾನು ಹೋರಾಟ ಮಾಡುತ್ತಿದ್ದೇವೆ. ಕಾಂಗ್ರೆಸ್ ಬಡ ಜನರನ್ನು ರಕ್ಷಿಸುತ್ತಿದೆ. ಈ ಮಾತು ಕೆಲವರಿಗೆ ಇಷ್ಟ ಆಗಬಹುದು. ಆಗದಿರಬಹುದು. ಆದರೆ ಇಂದು ರಾಜ್ಯದ ಜನತೆಗೆ ಕಾಂಗ್ರೆಸ್ ಅನಿವಾರ್ಯವಾಗಿದೆ ಎಂದರು.

ಕ್ಷೇತ್ರದ ಗ್ರಾಮದ ಯುವಕರು ಒಬ್ಬರ ಮೇಲೊಬ್ಬರು ಅನುಮಾನ ಪಡಬೇಡಿ. ಸಾಮೂಹಿಕ ನಾಯಕತ್ವದಲ್ಲಿ ಊರನ್ನು ಕಟ್ಟೋಣ. ಅಭಿವೃದ್ಧಿ ಮಾಡೋಣ. ಮನೆ ಇಲ್ಲ ಎನ್ನುವ ಸಂಕಷ್ಟದಿಂದ ಹೊರತರುವ ಕೆಲಸ ಮಾಡೋಣ. ಈ ಹಿಂದೆ 5 ಸಾವಿರ ಮನೆ ಕೊಟ್ಟಿದ್ದೇನೆ. ಯುವಕರು ಸ್ವತಂತ್ರವಾಗಿ ಸ್ವಾಭಿಮಾನದಿಂದ ಬದುಕಬೇಕೆಂಬ ಆಶಯ ಹೊಂದಿದ್ದೇನೆ ಎಲ್ಲರೂ ಅಭಿವೃದ್ಧಿ ಕುರಿತು ಚರ್ಚಿಸೋಣ. ಮುಂದಿನ 5 ವರ್ಷಗಳಲ್ಲಿ ಆಗಬಹುದಾದ ಕೆಲಸಗಳನ್ನು ಮಾಡುತ್ತೇನೆ ಎಂದು ಭರವಸೆ ನೀಡಿದರು.

ಕೆಪಿಸಿಸಿ ಕಾರ್ಯದರ್ಶಿ ವರುಣ ಮಹೇಶ್ ಮಾತನಾಡಿ, ಸಿದ್ದರಾಮಯ್ಯ ರಾಜ್ಯ ಕಂಡ ಧೀಮಂತ ನಾಯಕ ರಾಜ್ಯಕ್ಕೆ ಅವರ ಕೊಡುಗೆ ಅಪಾರ. ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ವೇಳೆ ಅವರು ಅನ್ನಭಾಗ್ಯ, ಕ್ಷೀರಭಾಗ್ಯ ಇಂದಿರಾ, ಕ್ಯಾಂಟೀನ್ ಸೇರಿದಂತೆ ಅನೇಕ ಜನಪರ ಯೋಜನೆಗಳನ್ನು ಜಾರಿಗೆ ತಂದು ಜನತೆ ಕಷ್ಟ ಸುಖಗಳಿಗೆ ಸ್ಪಂದಿಸಿದ್ದಾರೆ. ಇದೀಗ ಮತ್ತೊಮ್ಮೆ ಮುಖ್ಯಮಂತ್ರಿಯಾಗಿರುವ ಅವರು ಮತ್ತಷ್ಟು ಜನಪರ ಯೋಜನೆಗಳನ್ನು ಜಾರಿಗೊಳಿಸಲಿದ್ದಾರೆ. ಈ ಹಿಂದೆ ಸಾವಿರಾರು ಕೋಟಿ ಅನುದಾನ ತಂದು ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿರುವ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ಸಹಕರಿಸುವ ಮೂಲಕ ಕ್ಷೇತ್ರದ ಮತ್ತಷ್ಟು ಅಭಿವೃದ್ಧಿಗೆ ಶ್ರಮಿಸೋಣ ಎಂದರು.

ಮಾಜಿ ವಸತಿ ಯೋಜನೆ ಜಾಗೃತ ಸಮಿತಿಯ ಮಾಜಿ ಅಧ್ಯಕ್ಷ ಸುನಿಲ್ ಬೋಸ್, ಹಳ್ಳಿಕೆರೆ ಹುಂಡಿ ಶಿವಕುಮಾರ್ ಹನುಮನಪುರ ಮಧುಕುಮಾರ್. ಪೃಥ್ವಿ ಕೊತ್ತೆಗಾಲ ಬಸವರಾಜು ಇನ್ನಿತರರಿದ್ದರು.

ಕ್ಷೇತ್ರ ಅಭಿವೃದ್ಧಿಪಡಿಸಿ ಮತದಾರರ ಋಣ ತೀರಿಸುವೆ

ಶಾಸಕ ದರ್ಶನ್ ಧ್ರುವನಾರಾಯಣ್



ನಂಜನಗೂಡು, ಮೇ 30– ನನ್ನ ತಂದೆ ಮೇಲಿನ ಪ್ರೀತಿ ಮತ್ತು ನನ್ನ ಮೇಲೆ ನಂಬಿಕೆ ಇಟ್ಟು ಅತೀ ಹೆಚ್ಚು ಮತ ನೀಡಿ ಗೆಲ್ಲಿಸಿದ ಕ್ಷೇತ್ರದ ಮತದಾರರಿಗೆ ನಾನು ಆಭಾರಿಯಾಗಿದ್ದು, ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಿ ಮತದಾರರ ಋಣ ತೀರಿಸುತ್ತೇನೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ್ ತಿಳಿಸಿದರು.

ತಾಲೂಕಿನ ಕೂಡ್ಲಾಪುರ ಗ್ರಾಪಂ ವ್ಯಾಪ್ತಿಯ ಹುಣಸನಾಳು, ಕೂಡ್ಲಾಪುರ, ಬಾಗೂರು, ತರದಲೆ ಗ್ರಾಮಗಳಲ್ಲಿ ಜನಸ್ಪಂದನಾ ಯಾತ್ರೆ ಮತ್ತು ಕೃತಜ್ಞತಾ ಸಭೆ ನಡೆಸಿ ಮಾತನಾಡಿದ ಅವರು, ಕೂಡ್ಲಾಪುರ ಗ್ರಾಪಂ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಜನರು ಅಹವಾಲು ಸಲ್ಲಿಸಿದ್ದಾರೆ. ಕ್ಷೇತ್ರದ ಎಲ್ಲಾ ಗ್ರಾಮಗಳಲ್ಲೂ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಿ ಚರಂಡಿ, ರಸ್ತೆಗಳನ್ನು ಅಭಿವೃದ್ಧಿಪಡಿಸಿ ಮೂಲ ಸೌಕರ್ಯ ಒದಗಿಸಲು ಕ್ರಮ ವಹಿಸುತ್ತೇನೆ. ಸಾರ್ವಜನಿಕರು ಯಾವುದೇ ಸಮಸ್ಯೆಗಳಿದ್ದರೂ, ನನ್ನನ್ನು ಖುದ್ದಾಗಿ ಅಥವಾ ದೂರವಾಣಿ ಮೂಲಕ ಸಂಪರ್ಕಿಸಬಹುದು ಎಂದರು.

ಮುಂದಿನ ದಿನಗಳಲ್ಲಿ ಕ್ಷೇತ್ರದ ಪ್ರತಿ ಗ್ರಾಮಗಳಿಗೆ ಭೇಟಿ ನೀಡಿ, ಆಗಬೇಕಿರುವ ಅಭಿವೃದ್ಧಿ ಕಾರ್ಯಗಳನ್ನು ಪಟ್ಟಿ ಮಾಡಲಾಗುವುದು. ರಾಜ್ಯದಲ್ಲಿ ನಮ್ಮದೇ ಸರ್ಕಾರವಿರುವ ಕಾರಣ ಸರ್ಕಾರದ ಗಮನ ಸೆಳೆದು ಅಭಿವೃದ್ಧಿ ಕೆಲಸಗಳನ್ನು ನಿರ್ವಹಿಸುತ್ತೇನೆ ಎಂದರು.

ಶೀಘ್ರದಲ್ಲೇ ಗ್ಯಾರಂಟಿಗಳ ಅನುಷ್ಠಾನ: ಸಿದ್ದರಾಮಯ್ಯ ನೇತೃತ್ವದ ಸರ್ಕಾರ ನುಡಿದಂತೆ ನಡೆಯುವ ಸರ್ಕಾರ. 2013ರಲ್ಲೂ ಸಹ ಕೊಟ್ಟ ಎಲ್ಲಾ ಭರವಸೆಗಳನ್ನು ಈಡೇರಿಸುವ ಮೂಲಕ ಜನರ ನಂಬಿಕೆಗೆ ಪಾತ್ರವಾಗಿತ್ತು. ಈ ಬಾರಿಯೂ ಸಹ ಸಿದ್ದರಾಮಯ್ಯ ಅವರು ಕಾಂಗ್ರೆಸ್ ಪಕ್ಷದ ಗ್ಯಾರಂಟಿಗಳನ್ನು ಅನುಷ್ಠಾನ ಮಾಡುವ ಮೂಲಕ ಕೊಟ್ಟ ಮಾತನ್ನು ಉಳಿಸಿಕೊಳ್ಳಲಿದ್ದಾರೆ ಎಂದರು.

ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಮಾತನಾಡಿ, ಕಾಂಗ್ರೆಸ್ ಮೇಲೆ ನಂಬಿಕೆಯಿಟ್ಟು ಪಕ್ಷದ ಅಭ್ಯರ್ಥಿ ದರ್ಶನ್ ಬೆಂಬಲಿಸಿ 49 ಸಾವಿರ ಮತಗಳನ್ನು ನೀಡುವ ಮೂಲಕ ಧ್ರುವನಾರಾಯಣ್ ಸಾವಿಗೆ ನ್ಯಾಯ ಒದಗಿಸಿದ್ದೀರಿ. ನಿಮ್ಮ ಪ್ರೀತಿ, ನಂಬಿಕೆ ಉಳಿಸಿಕೊಳ್ಳುವಂತಹ ಕೆಲಸವನ್ನು ಶಾಸಕರು ಮಾಡಲಿದ್ದಾರೆ ಎಂದರು.

ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಗರಾಜು, ಕಾರ್ಯದರ್ಶಿ ಬಸವರಾಜು, ಎಸ್ಟಿ ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿ ದೊರೆಸ್ವಾಮಿ ನಾಯಕ, ಮುಖಂಡರಾದ ಪ್ರದೀಪ್‌ಕುಮಾರ್, ಕುಳ್ಳಯ್ಯ, ಸಿದ್ದರಾಜು, ಶಿವಕುಮಾರ್, ಸೇರಿದಂತೆ ಇತರರಿದ್ದರು.

ರಾಜಕೀಯದಿಂದ ದೂರವಾಗುವ ಪ್ರಶ್ನೆಯೇ ಇಲ್ಲ

ಆತ್ಮಾವಲೋಕನ ಸಭೆಯಲ್ಲಿ ಜೆಡಿಎಸ್ ಪರಾಜಿತ ಅಭ್ಯರ್ಥಿ ಜಯಪ್ರಕಾಶ್



ಹೆಚ್.ಡಿ.ಕೋಟೆ, ಮೇ 30– ರಾಜಕೀಯದಿಂದ ದೂರವಾಗುವ ಪ್ರಶ್ನೆಯೇ ಇಲ್ಲ ಎಂದು ಜೆಡಿಎಸ್ ಪರಾಜಿತ ಅಭ್ಯರ್ಥಿ ಜಯಪ್ರಕಾಶ್ ಚಿಕ್ಕಣ್ಣ ಸ್ಪಷ್ಟಪಡಿಸಿದರು.

ಪಟ್ಟಣದ ಅಂಬೇಡ್ಕರ್ ಸಮುದಾಯ ಭವನದಲ್ಲಿ ಆಯೋಜಿಸಿದ್ದ ಆತ್ಮಾವಲೋಕನ ಸಭೆಯಲ್ಲಿ ಮಾತನಾಡಿದ ಅವರು, ಕ್ಷೇತ್ರದ ಜನತೆ ನನ್ನ ಹಾಗೂ ಪಕ್ಷವನ್ನು ಏಕೆ ತಿರಸ್ಕರಿಸಿದ್ದಾರೆ. ಯಾವ ತಪ್ಪುಗಳಾಗಿವೆ ಎಂಬುದನ್ನು ಜನರ ಬಳಿಗೆ ಹೋಗಿ ತಿಳಿಯೋಣ. ಆಗಿರುವ ತಪ್ಪುಗಳನ್ನು ಸರಿಪಡಿಸಿಕೊಂಡು ಮುಂದಿನ ದಿನಗಳಲ್ಲಿ ಪಕ್ಷ ಸಂಘಟಿಸುವ ಮೂಲಕ ಕ್ಷೇತ್ರದ ಜನತೆಯ ಕಷ್ಟ ಸುಖಗಳಲ್ಲಿ ಭಾಗಿಯಾಗುತ್ತೇನೆ. ಯಾವುದೇ ಕಾರಣಕ್ಕೂ ರಾಜಕೀಯದಿಂದ ದೂರವಾಗುವ ಪ್ರಶ್ನೆಯೇ ಇಲ್ಲ ಎಂದರು.

ಮುಂಬರುವ ಜಿಪಂ, ತಾಪಂ ಹಾಗೂ ಲೋಕಸಭಾ ಚುನಾವಣೆಗೆ ಕಾರ್ಯಕರ್ತರು ಪಕ್ಷವನ್ನು ತಳಮಟ್ಟದಿಂದ ಸಂಘಟಿಸಲು ಮುಂದಾಗಬೇಕು. ಆ ಮೂಲಕ ಜೆಡಿಎಸ್ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸೋಣ ಎಂದ ಅವರು, ಮುಂದಿನ ಚುನಾವಣೆಯಲ್ಲಿ ಕ್ಷೇತ್ರದ ಜನತೆ ನನಗೆ ಆಶೀರ್ವಾದ ಮಾಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನನ್ನ ಸೋಲಿಗೆ ಅನೇಕ ಕಾರಣಗಳಿರಬಹುದು. ಆದರೆ ನಾನು ಈ ಬಗ್ಗೆ ಯಾರನ್ನು ದೂಷಿಸುವುದಿಲ್ಲ. ಚುನಾವಣೆಯಲ್ಲಿ ನನ್ನ ಪರ ಕೆಲಸ ಮಾಡಿದ ಕಾರ್ಯಕರ್ತರು, ಮುಖಂಡರು ಹಾಗೂ ನನಗೆ ಮತ ನೀಡಿದ ಮತದಾರರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ಮಾಜಿ ಶಾಸಕ ಬೀಚನಹಳ್ಳಿ ಚಿಕ್ಕಣ್ಣ ಮಾತನಾಡಿ, ಚುನಾವಣಾ ಫಲಿತಾಂಶ ಹೊರ ಬೀಳುತ್ತಿದ್ದಂತೆ ನಾನು ಇನ್ಮುಂದೆ ಏಕೆ ರಾಜಕೀಯ ಮಾಡಬೇಕು. ಜನರ ಬಳಿ ಏಕೆ ಹೋಗಬೇಕು. ಈ ಆತ್ಮಾವಲೋಕನ ಸಭೆಗೆ ಬರುವುದೇ ಬೇಡ ಎಂದು ತೀರ್ಮಾನಿಸಿದ್ದೆ. ಆದರೆ ಈ ಸಭೆಯಲ್ಲಿ ಸೇರಿರುವ ಜನರನ್ನು ಕಂಡು ನನಗೆ ಬಹಳ ಸಂತೋಷವಾಯಿತು. ಹೀಗಾಗಿ ನಾನು ಸದಾ ನಿಮ್ಮೊಂದಿಗೆ ಇರುತ್ತೇನೆ ಎಂದರು.

ಮುಂಬರುವ ಜಿಪಂ, ತಾಪಂ ಚುನಾವಣೆಯಲ್ಲಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಜೆಡಿಎಸ್‌ನಿಂದ ಸ್ಪರ್ಧಿಸುವ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ತಾಲೂಕು ನಾಯಕರ ಸಂಘದ ಅಧ್ಯಕ್ಷ ಎಂ.ಸಿ.ದೊಡ್ಡ ನಾಯಕ, ಜಿಟಿಡಿ ಅಭಿಮಾನಿ ಬಳಗದ ತಾಲೂಕು ಅಧ್ಯಕ್ಷ ಸಿದ್ದೇಗೌಡ, ಚಿಕ್ಕಣ್ಣ ಅಭಿಮಾನಿ ಬಳಗದ ಅಧ್ಯಕ್ಷ ಪ್ರಕಾಶ್, ಮಹೇಶ್, ತಾಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಸುರೇಂದ್ರ ಡಿ.ಗೌಡ, ಕೋಟೆ–ಸರಗೂರು ಜೆಡಿಎಸ್ ಅಧ್ಯಕ್ಷರಾದ ರಾಜೇಂದ್ರ ಗೋಪಾಲಸ್ವಾಮಿ, ಮುಖಂಡರಾದ ಎಂ.ಪಿ.ನಾಗರಾಜು, ಹೆಚ್.ಸಿ.ಶಿವಣ್ಣ, ಚಾ. ನಂಜುಂಡ ಮೂರ್ತಿ, ಚಾ.ಸೋಮಣ್ಣ, ಮಂಚಯ್ಯ, ಮಾರುತಿ, ನಜೀರ್ ಅಹ್ಮದ್, ಶ್ಯಾಂ ಸುಂದರ್, ಮಹೇಂದ್ರ, ರಾಜಪ್ಪ, ರವಿಕುಮಾರ್, ರಾಜೇಶ್, ಮಹದೇವು, ಪ್ರಕಾಶ್, ನಿಂಗರಾಜು ಸೇರಿದಂತೆ ನೂರಾರು ಕಾರ್ಯಕರ್ತರು, ಮುಖಂಡರು ಹಾಜರಿದ್ದರು.

ಹುಣಸೂರು: ಟ್ರಾಕ್ಟರ್ ಕಳವು ಆರೋಪಿ ಬಂಧನ



ಹುಣಸೂರು, ಮೇ 30– ತಾಲೂಕಿನ ತಿಪ್ಪಲಾಪುರದಲ್ಲಿ ಟ್ರಾಕ್ಟರ್ ಕಳವು ಮಾಡಿ ಮಾರಾಟ ಮಾಡಿದ್ದ ಪ್ರಕರಣ ಭೇದಿಸಿರುವ ಹುಣಸೂರು ಗ್ರಾಮಾಂತರ ಠಾಣಾ ಪೊಲೀಸರು ಟ್ರಾಕ್ಟರ್ ವಶಕ್ಕೆ ಪಡೆದು, ಆರೋಪಿಯೋರ್ವನನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೊಪ್ಪಿಸಿದ್ದಾರೆ.

ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲೂಕಿನ ಮಾಳೆಕೊಪ್ಪಲಿನ ಅಭಿಷೇಕ್ ಬಂಧಿತ ಆರೋಪಿ. ಮತ್ತೋರ್ವ ಆರೋಪಿ ಕಾರ್ತಿಕ್ ತಲೆಮರೆಸಿಕೊಂಡಿದ್ದಾನೆ.

ವಿವರ: ಚನ್ನರಾಯಪಟ್ಟಣ ತಾಲೂಕಿನ ಆಡಿಗನಹಳ್ಳಿ ಜಗದೀಶ್ ಎಂಬುವರು ಹುಣಸೂರು ತಾಲೂಕಿನ ತಿಪ್ಪಲಾಪುರದ ಜಮೀನಿನಲ್ಲಿ ಮಣ್ಣು ಸಮತಟ್ಟು ಮಾಡುವ ಕೆಲಸಕ್ಕೆ ತಮ್ಮ ಸ್ವರಾಜ್ ಟ್ರಾಕ್ಟರ್ ಮತ್ತು ಟ್ರೇಲರ್ ಅನ್ನು ಬಾಡಿಗೆಗೆ ನೀಡಿದ್ದರು. ಕೆಲಸ ಮಾಡುತ್ತಿದ್ದ ಜಮೀನಿನಲ್ಲೇ ಚಾಲಕ ಟ್ರಾಕ್ಟರ್ ನಿಲ್ಲಿಸಿದ್ದರು. ಮಾ.3ರಂದು ಟ್ರಾಕ್ಟರ್ ಹಾಗೂ ಟ್ರೇಲರ್ ಅನ್ನು ಆರೋಪಿಗಳು ಕಳ್ಳತನ ಮಾಡಿ ಮದ್ದೂರು ತಾಲೂಕಿನ ಕೆ.ಎಂ.ದೊಡ್ಡಿಯಲ್ಲಿ ಮಾರಾಟ ಮಾಡಿದ್ದರು.

ಈ ಸಂಬಂಧ ಟ್ರಾಕ್ಟರ್ ಮಾಲೀಕ ಜಗದೀಶ್ ನೀಡಿದ ದೂರಿನನ್ವಯ ಎಸ್‌ಪಿ ಸೀಮಾ ಲಾಟ್ಕರ್, ಅಡಿಷನಲ್ ಎಸ್‌ಪಿ ಡಾ.ನಂದಿನಿ, ಡಿವೈಎಸ್‌ಪಿ ಎಂ.ಕೆ.ಮಹೇಶ್ ಮಾರ್ಗದರ್ಶನದಲ್ಲಿ ಇನ್ಸ್‌ಪೆಕ್ಟರ್ ಸೋಮಶೇಖರ್ ನೇತೃತ್ವದ ತಂಡ ತನಿಖೆ ಕೈಗೊಂಡು ಮೊಬೈಲ್ ಟವರ್ ಲೊಕೇಷನ್ ಆಧರಿಸಿ ಆರೋಪಿಗಳ ಚಲನವಲನದ ಬಗ್ಗೆ ನಿಗಾ ಇರಿಸಿದ್ದರು. ಆರೋಪಿಗಳು ಸ್ವಗ್ರಾಮದಲ್ಲಿರುವ ಬಗ್ಗೆ ಬಂದ ಖಚಿತ ಮಾಹಿತಿ ಮೇರೆಗೆ ಆರೋಪಿ ಅಭೀಷೇಕ್‌ನನ್ನು ಮಾಳೆಕೊಪ್ಪಲಿನಲ್ಲಿ ಬಂಧಿಸಿ, ನಂತರ ಠಾಣೆಗೆ ಕರೆತಂದು ವಿಚಾರಣೆಗೊಳಪಡಿಸಿದಾಗ ಕಳ್ಳತನ ಮಾಡಿದ್ದ ಟ್ರಾಕ್ಟರ್ ಅನ್ನು ಕೆ.ಎಂ.ದೊಡ್ಡಿಯ ವ್ಯಕ್ತಿಯೊಬ್ಬರಿಗೆ ಮಾರಾಟ ಮಾಡಿರುವ ಬಗ್ಗೆ ಒಪ್ಪಿಕೊಂಡ ಮೇರೆಗೆ ವಶಕ್ಕೆ ಪಡೆದು ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೊಪ್ಪಿಸಿದ್ದಾರೆ. ಮತ್ತೊರ್ವ ಆರೋಪಿ ತಲೆಮರೆಸಿಕೊಂಡಿದ್ದು, ಪತ್ತೆಗೆ ಕ್ರಮವಹಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕಾರ್ಯಾಚರಣೆಯಲ್ಲಿ ಎಸ್‌ಐಗಳಾದ ಎಚ್.ಎಸ್.ರವಿ, ಕೃಷ್ಣನಾಯಕ್, ಎಎಸ್‌ಐ ಅಂತೋಣಿ ಕ್ರೂಸ್, ಸಿಬ್ಬಂದಿ ವಿಜಯರಘು, ಪ್ರಸನ್ನಕುಮಾರ್, ಇಮ್ರಾನ್ ಷರೀಫ್, ಲಿಖಿತ್, ಮಹದೇವಮ್ಮ ಭಾಗವಹಿಸಿದ್ದರು.

ಎಲ್ಲೆಂದರಲ್ಲಿ ಕಟ್ಟಡ ತ್ಯಾಜ್ಯ ಸುರಿದರೆ ಕ್ರಿಮಿನಲ್ ಕೇಸ್

ಮೈಸೂರು, ಮೇ 30(ಆರ್‌ಕೆ)– ಎಲ್ಲೆಂದರಲ್ಲಿ ಕಟ್ಟಡ ತ್ಯಾಜ್ಯ ಸುರಿಯುವವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವ ಜೊತೆಗೆ ಭಾರೀ ಮೊತ್ತದ ದಂಡ ವಿಧಿಸಲಾಗುವುದು ಎಂದು ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಜಿ. ಲಕ್ಷ್ಮೀಕಾಂತ ರೆಡ್ಡಿ ಎಚ್ಚರಿಕೆ ನೀಡಿದ್ದಾರೆ. ಮೈಸೂರು ನಗರದಾದ್ಯಂತ ಸಾರ್ವಜನಿಕರು ಕಂಡ ಕಂಡ ಸ್ಥಳಗಳಲ್ಲಿ ಕಟ್ಟಡ ತ್ಯಾಜ್ಯ ಸುರಿಯುತ್ತಿರುವುದು ಕರ್ನಾಟಕ ಪೌರ ನಿಗಮಗಳ ಕಾಯ್ದೆ ಸೆಕ್ಷನ್ 256ಕ್ಕೆ ವಿರುದ್ಧವಾಗಿದೆ. ಕಟ್ಟಡ ನಿರ್ಮಾಣ ತ್ಯಾಜ್ಯ ವಿಲೇವಾರಿ ಮಾಡಲು ಹಂಚ್ಯಾ–ಸಾತಗಳ್ಳಿ 'ಎ' ವಲಯದ ಖಾಲಿ ಜಾಗವನ್ನು ಗುರುತಿಸಲಾಗಿದ್ದು, ಅಲ್ಲಿಯೇ ಸುರಿಯಬೇಕೆಂದು ಅವರು ತಿಳಿಸಿದ್ದಾರೆ.

ವಿಜೃಂಭಣೆಯ ಲಕ್ಷ್ಮಿನರಸಿಂಹಸ್ವಾಮಿ ರಥೋತ್ಸವ

ಸರಗೂರು, ಮೇ 30– ಪಟ್ಟಣದಲ್ಲಿ ಲಕ್ಷ್ಮಿನರಸಿಂಹಸ್ವಾಮಿ ರಥೋತ್ಸವ ವಿಜೃಂಭಣೆಯಿಂದ ನಡೆಯಿತು. ಪಟ್ಟಣದ 7ನೇ ವಾರ್ಡ್‌ನಲ್ಲಿರುವ ದೇವಾಲಯದಲ್ಲಿ ಮುಂಜಾನೆಯಿಂದಲೇ ವಿವಿಧ ಪೂಜಾ ಕೈಂಕರ್ಯ ಹಮ್ಮಿಕೊಳ್ಳಲಾಗಿತ್ತು. ರಥೋತ್ಸವ ಅಂಗವಾಗಿ ದೇವಾಲಯವನ್ನು ತಳಿರು ತೋರಣ ಹಾಗೂ ರಂಗೋಲಿ, ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು. ಪೂಜೆ ಬಳಿಕ ದೇವರ ಉತ್ಸವ ಮೂರ್ತಿಯನ್ನು ಕಪಿಲಾ ನದಿಗೆ ಮೆರವಣಿಗೆಯಲ್ಲಿ ಕರೆದೊಯ್ದು ಗಂಗೆ ಪೂಜೆ ನೆರವೇರಿಸಿದ ಬಳಿಕ ಮತ್ತೆ ಉತ್ಸವ ಮೂರ್ತಿಯನ್ನು ಮೆರವಣಿಗೆಯಲ್ಲಿ ದೇವಾಲಯಕ್ಕೆ ತಂದು ಬಗೆ ಬಗೆಯ ಹೂಗಳಿಂದ ಅಲಂಕೃತಗೊಂಡ ರಥದಲ್ಲಿ ಪ್ರತಿಷ್ಠಾಪಿಸಲಾಯಿತು.



ಬಳಿಕ ರಥೋತ್ಸವಕ್ಕೆ ಚಾಲನೆ ನೀಡಲಾಯಿತು. ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಾಗಿದ ರಥ ಸ್ವಸ್ಥಾನ ಸೇರಿತು. ಈ ವೇಳೆ ಭಕ್ತರು ಈಡುಗಾಯಿ ಒಡೆದು ಹರಕೆ ತೀರಿಸಿದರು. ಬಳಿಕ ಭಕ್ತರಿಗೆ ಪ್ರಸಾದ ವಿತರಿಸಲಾಯಿತು. ಈ ವೇಳೆ ದೇವಸ್ಥಾನದ ಅರ್ಚಕರಾದ ಕಸ್ತೂರಿ, ಕೇಶವ, ದೇವರಾಜ್, ಪಪಂ ಸದಸ್ಯ ವೀರೇಶ್, ಎಲ್ಲಾ ಸಮಾಜದ ಬಂಧುಗಳು ಹಾಜರಿದ್ದರು.



ಪ್ರಸಕ್ತ ಸಾಲಿನ ಶೈಕ್ಷಣಿಕ ವರ್ಷ ಪ್ರಾರಂಭವಾದ ಹಿನ್ನೆಲೆಯಲ್ಲಿ ಬೆಟ್ಟದಪುರ ಸಮೀಪದ ಹಾರನಹಳ್ಳಿ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಗುಲಾಬಿ ಹೂ, ಸಿಹಿ, ಶಾಲಾ ಸಮವಸ್ತ್ರ ಹಾಗೂ ಪಠ್ಯ ಪುಸ್ತಕ ವಿತರಿಸಿ ಸ್ವಾಗತ ಕೋರಲಾಯಿತು. ಈ ವೇಳೆ ಗ್ರಾಮದ ಮುಖಂಡ ಹೆಚ್.ಟಿ.ಗೋವಿಂದೇಗೌಡ, ಎಸ್‌ಡಿಎಂಸಿ ಸದಸ್ಯರಾದ ಜಯರಾಮೇಗೌಡ, ಸುರೇಶ, ಜನಾರ್ಧನ್, ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿ ಮಲ್ಲಿಕಾರ್ಜುನ, ಹಿರಿಯ ಶಿಕ್ಷಕ ಕೆ.ಸಿ.ಸತೀಶ್, ಶಿಕ್ಷಕರಾದ ದಿವ್ಯ, ದಿನೇಶ್ ಆರಾಧ್ಯ, ವಿದ್ಯಾಶ್ರೀ, ಜಬೀನಾ, ಯಶೋಧಮ್ಮ ಸೇರಿದಂತೆ ಶಾಲೆ ಸಿಬ್ಬಂದಿ ಹಾಗೂ ಪೋಷಕರಿದ್ದರು.

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ದಿ ಕೇರಳ ಸ್ಟೋರಿ (ಹಿಂ): ಬೆ.10.25ಕ್ಕೆ, ಮ.1.20ಕ್ಕೆ, ಸಂ.4.05ಕ್ಕೆ, ರಾ.7ಕ್ಕೆ ರಾ.9.50ಕ್ಕೆ.
ಸ್ಕ್ರೀನ್ 2	ಡೇರ್‌ಡೆವಿಲ್ ಮುಸ್ತಫಾ (ಕ): ಬೆ.10.05ಕ್ಕೆ, ಸಂ.6.50ಕ್ಕೆ, ಗಾರ್ಡಿಯನ್ಸ್ ಆಫ್ ಗ್ಯಾಲಕ್ಸಿ ವಾಲ್ಯೂಂ 3 (3ಡಿ)(ಇಂ): ಮ.1.10ಕ್ಕೆ, ಜೆರ್ಸಿ ನಂಬರ್ 10 (ಕ): ಸಂ.4.05ಕ್ಕೆ, ರಾಘವೇಂದ್ರ ಸ್ಟೋರ್ಸ್ (ಕ): ರಾ.10ಕ್ಕೆ.
ಸ್ಕ್ರೀನ್ 3	ಇವಿಲ್ ಡೆಡ್ ರೈಸ್ (ಇಂ): ಬೆ.11ಕ್ಕೆ, ಪಿಚ್ಚೈಕಾರನ್2 (ತ): ಮ.1.20ಕ್ಕೆ, ಸಂ.4.25ಕ್ಕೆ, ರಾಘವೇಂದ್ರ ಸ್ಟೋರ್ಸ್ (ಕ): ರಾ.7.30ಕ್ಕೆ, ಚಾರ್ಲ್ಸ್ ಎಂಟರ್‌ಪ್ರೈಸಸ್ (ಮ): ಸಂ.9.55ಕ್ಕೆ.
ಸ್ಕ್ರೀನ್ 4	ಫಾಸ್ಟ್ X (3ಡಿ)(ಇಂ): ಬೆ.10.45ಕ್ಕೆ, ಮ.1.35ಕ್ಕೆ, ಸಂ.4.25ಕ್ಕೆ, ರಾ.7.15ಕ್ಕೆ, ರಾ.10ಕ್ಕೆ

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಫಾಸ್ಟ್ X (3ಡಿ)(ಇಂ): ಬೆ.10.30, ಮ.1.30ಕ್ಕೆ, ಸಂ.4.30ಕ್ಕೆ, ರಾ.7.30ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ದಿ ಕೇರಳ ಸ್ಟೋರಿ (ಹಿಂ): ಬೆ.10ಕ್ಕೆ, ಮ.12.55ಕ್ಕೆ, ಮ.3.50ಕ್ಕೆ, ಸಂ.6.45ಕ್ಕೆ, ರಾ.9.40ಕ್ಕೆ.
ಸ್ಕ್ರೀನ್ 3	ದಿ ಕೇರಳ ಸ್ಟೋರಿ (ಹಿಂ): ಬೆ.11ಕ್ಕೆ, ಮ.1.55ಕ್ಕೆ, ಸಂ.4.50ಕ್ಕೆ, ರಾ.10.30ಕ್ಕೆ, ಅನುರಾಗಂ (ಮ): ರಾ.7.45ಕ್ಕೆ.
ಸ್ಕ್ರೀನ್ 4	ಫಾಸ್ಟ್ X (3ಡಿ)(ಇಂ): ಬೆ.9.30ಕ್ಕೆ, ಪಿಚ್ಚೈಕಾರನ್ 2(ತ): ಮ.12.20ಕ್ಕೆ, ರಾ.10.05ಕ್ಕೆ, ಡೇರ್‌ಡೆವಿಲ್ ಮುಸ್ತಫಾ (ಕ): ಸಂ.6.50ಕ್ಕೆ.

ಪಿವಿಆರ್ ಸಿನಿಮಾಸ್

PVR CINEMAS

ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಮಂಡಲ (ಕ): ಮ.2.15ಕ್ಕೆ, **1 ರಾಬರಿ ಕಥೆ** (ಕ): ಸಂ.4.50ಕ್ಕೆ, **ಚೌಕಾಬಾರ** (ಕ): ರಾ.7.50ಕ್ಕೆ, **ಕ್ರಿಡ್ 3** (ಇಂ): ಬೆ.11.35ಕ್ಕೆ, **ತು ಜೂಥಿ ಮೇನ್ ಮಕ್ಕರ್** (ಹಿಂ): ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, **ತು ಜೂಥಿ ಮೇನ್ ಮಕ್ಕರ್** (ಹಿಂ): ಬೆ.9.30ಕ್ಕೆ, ಬೆ.11ಕ್ಕೆ, ಮ.1ಕ್ಕೆ, ಮ.2.30ಕ್ಕೆ, ಸಂ.4.30ಕ್ಕೆ, ಸಂ.6ಕ್ಕೆ, ರಾ.8ಕ್ಕೆ, ರಾ.9.30ಕ್ಕೆ, **ತುರಮುಖಂ** (ಮ): ರಾ.10.30ಕ್ಕೆ, **ಅಜಿಲನ್ ಕಿಂಗ್ ಆಫ್ ದಿ ಓಷನ್** (ತ): ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ, **ಸ್ಕ್ರೀಮ್ 6** (ಇಂ): ಮ.2.45ಕ್ಕೆ, ರಾ.7.45ಕ್ಕೆ, **65** (ಇಂ): ಮ.12.30ಕ್ಕೆ, ಸಂ.5.30ಕ್ಕೆ, ರಾ.10.30ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪದ್ಮ ಚಿತ್ರಮಂದಿರ	(ದೂ: 2521923)
ರಾಘವೇಂದ್ರ ಸ್ಟೋರ್ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಸೈರನ್ (ಕ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	(ದೂ: 2520009)
ಡೇ ಅಂಡ್ ಸಮ್‌ಓನ್ (ತೆ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಏಲಿಯನ್ಸ್ –2042 (ಹಿ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಅಂತ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಸ್ಟಡಿ (ತೆ)	4 ಪ್ರದರ್ಶನಗಳು
ರಾಜ್‌ಕಮಲ್	
ಕೇರಳ ಸ್ಟೋರಿ (ಹಿಂ)	4 ಪ್ರದರ್ಶನಗಳು
ಸಂಗಂ	
ಅಂತ (ಕ)	2 ಪ್ರದರ್ಶನಗಳು
ಲಿಡೋ	
ಪಿಎಸ್–2 (ತ)	4 ಪ್ರದರ್ಶನಗಳು
ತಿಬ್ಬಾದೇವಿ	
ಕಸ್ಟಡಿ (ತೆ)	4 ಪ್ರದರ್ಶನಗಳು
ಪ್ರಭಾ	
ಸುಮನ್ (ಕ)	4 ಪ್ರದರ್ಶನಗಳು


ಶ್ರೀಕಂಠೇಶ್ವರನ ಹುಂಡಿಯಲ್ಲಿ 1.55 ಕೋಟಿ ಸಂಗ್ರಹ

ನಂಜನಗೂಡು, ಮೇ 30– ಇಲ್ಲಿನ ಶ್ರೀಕಂಠೇಶ್ವರ ದೇವಾಲಯದಲ್ಲಿ ಮಂಗಳವಾರ ನಡೆದ ಹುಂಡಿ ಪರ್ಕಾವಣೆಯಲ್ಲಿ 1.55 ಕೋಟಿ ರೂ. ಸಂಗ್ರಹವಾಗಿದೆ.



ದೇವಾಲಯದ 32 ಹುಂಡಿಗಳಲ್ಲಿ 1,55,00,103 ರೂ., 132.5 ಗ್ರಾಂ ಚಿನ್ನ, 3 ಕೆಜಿ 750 ಗ್ರಾಂ ಬೆಳ್ಳಿ, 25 ವಿದೇಶಿ ಕರೆನ್ಸಿ ದೊರೆತಿದೆ. ಹುಂಡಿ ಎಣಿಕೆ ಕಾರ್ಯದಲ್ಲಿ ಮಹಿಳಾ ಸ್ವಸಹಾಯ ಸಂಘದ ಸದಸ್ಯರು ಭಾಗವಹಿಸಿದ್ದರು. ಏ.26ರಂದು ದೇವಾಲಯದ ಹುಂಡಿ ಎಣಿಕೆ ಕಾರ್ಯ ನಡೆಸಲಾಗಿತ್ತು ಇದೀಗ ಒಂದು ತಿಂಗಳ ಅವಧಿಯಲ್ಲಿ ಮತ್ತೆ ಪರ್ಕಾವಣೆ ನಡೆಸಲಾಗಿದ್ದು, 1.55 ಕೋಟಿ ರೂ. ಸಂಗ್ರಹವಾಗಿದೆ ಎಂದು ದೇವಾಲಯದ ಕಾರ್ಯ ನಿರ್ವಹಣಾಧಿಕಾರಿ ಜಗದೀಶ್ ಕುಮಾರ್ ತಿಳಿಸಿದ್ದಾರೆ.

ಈ ವೇಳೆ ದೇವಾಲಯದ ಎಇಓ ವೆಂಕಟೇಶಪ್ರಸಾದ್, ಅಕೌಂಟ್ ಸೂಪರಿಂಟೆಂಡೆಂಟ್ ಗುರುಮಲ್ಲಯ್ಯ, ಕೆನರಾ ಬ್ಯಾಂಕ್ ವ್ಯವಸ್ಥಾಪಕರಾದ ಲಕ್ಷ್ಮಿ ಮತ್ತು ದೇವಾಲಯದ ಸಿಬ್ಬಂದಿ ಇದ್ದರು.



ಮೂಗೂರು ಸಮೀಪದ ಕನ್ನಹಳ್ಳಿ ಮೋಳೆ ಗ್ರಾಮದಲ್ಲಿ ಉಪ್ಪಾರ ಸಮುದಾಯದಿಂದ ಭಗೀರಥ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲಾಯಿತು. ಈ ವೇಳೆ ಮಾಜಿ ಗ್ರಾಪಂ ಉಪಾಧ್ಯಕ್ಷ ಮಹೇಶ್, ಮುಖಂಡರಾದ ನಟರಾಜ್, ಸಿದ್ದಪ್ಪಸ್ವಾಮಿ, ಕುಮಾರ್, ಕೃಷ್ಣ, ಸೋಮಣ್ಣ, ಮರಿಸ್ವಾಮಿ, ಸುನೀಲ್, ಮಣಿ, ಜಯಪ್ಪ ಚಂದ್ರಶೇಖರ್, ಸಿದ್ದು ಸೇರಿದಂತೆ ಇನ್ನಿತರರಿದ್ದರು.

ಕುಸ್ತಿಪಟುಗಳ ಮೇಲಿನ ದೌರ್ಜನ್ಯ ಖಂಡಿಸಿ ಪ್ರತಿಭಟನೆ

ಸಂಸದ ಬ್ರಿಜ್‌ಭೂಷಣ್ ಶರಣ್ ಸಿಂಗ್ ಬಂಧನಕ್ಕೆ ಆಗ್ರಹ

ಹುಣಸೂರು, ಮೇ 30– ಮಹಿಳಾ ಕುಸ್ತಿಪಟುಗಳಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಎದುರಿಸುತ್ತಿರುವ ಬಿಜೆಪಿ ಸಂಸದ ಹಾಗೂ ಕುಸ್ತಿ ಫೆಡರೇಷನ್ ಅಧ್ಯಕ್ಷ ಬ್ರಿಜ್‌ಭೂಷಣ್ ಶರಣ್ ಸಿಂಗ್ ವಿರುದ್ಧ ಕಾನೂನು ಕ್ರಮಕ್ಕೆ ಒತ್ತಾಯಿಸಿ ಹಾಗೂ ದೆಹಲಿಯಲ್ಲಿ ಕುಸ್ತಿಪಟುಗಳ ಮೇಲೆ ಪೊಲೀಸರ ದೌರ್ಜನ್ಯ ಖಂಡಿಸಿ ನಗರದಲ್ಲಿ ವಿವಿಧ ಪ್ರಗತಿಪರ ಸಂಘಟನೆಗಳ ಕಾರ್ಯಕರ್ತರು ಮಂಗಳವಾರ ಪ್ರತಿಭಟನೆ ನಡೆಸಿದರು.



ನಗರದ ಸಂವಿಧಾನ ಸರ್ಕಲ್‌ನಲ್ಲಿ ಜಮಾಯಿಸಿದ ರಾಜ್ಯ ರೈತ ಸಂಘ, ಸಿಪಿಐಎಂ, ದಸಂಸ, ಡಿಹೆಚ್‌ಎಸ್ ಕಾರ್ಯಕರ್ತರು ಕೇಂದ್ರ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಸಿಪಿಎಂ ಮುಖಂಡ ಬಸವರಾಜು ಮಾತನಾಡಿ, ಒಲಂಪಿಕ್ ಪದಕ ವಿಜೇತರು, ವಿಶ್ವಚಾಂಪಿಯನ್ ಕುಸ್ತಿಪಟುಗಳು ದೇಶದ ಹೆಮ್ಮೆ. ತಮ್ಮ ಮೇಲಿನ ಲೈಂಗಿಕ ಕಿರುಕುಳ ಖಂಡಿಸಿ ನವದೆಹಲಿಯ ಜಂತರ್ ಮಂಥರ್‌ನಲ್ಲಿ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸುತ್ತಿದ್ದಾರೆ. ಆದರೂ ಕೇಂದ್ರದ ಬಿಜೆಪಿ ಸರ್ಕಾರ ಅವರ ನ್ಯಾಯಯುತ ಬೇಡಿಕೆಗಳ ಬಗ್ಗೆ ಗಮನ ಹರಿಸುತ್ತಿಲ್ಲ. ಪ್ರಕರಣ ಸಂಬಂಧ ಪೊಲೀಸರಿಗೆ ದೂರು ನೀಡಿದರೂ ಎಫ್‌ಐಆರ್ ದಾಖಲಾಗಿರಲಿಲ್ಲ. ಸುಪ್ರೀಂ ಕೋರ್ಟ್ ಮಧ್ಯ ಪ್ರವೇಶದ ಬಳಿಕ ಎಫ್‌ಐಆರ್ ದಾಖಲಾಗಿದೆ. ಹೀಗಿದ್ದರೂ ಆರೋಪಿ ಬಂಧಿಸಿಲ್ಲ. ಕುಸ್ತಿಪಟುಗಳ ಮೇಲೆ ಪೊಲೀಸರು ಹಲ್ಲೆ ನಡೆಸಿರುವುದು ನಾಚಿಕೆಗೇಡಿನ ಸಂಗತಿ ಎಂದರು.

ಕುಸ್ತಿ ಪಟುಗಳು ತಮ್ಮ ಮೇಲಿನ ಲೈಂಗಿಕ ಕಿರುಕುಳ, ಹಿಂಸೆ ಸಂಬಂಧ ನಿಷ್ಪಕ್ಷಪಾತ ತನಿಖೆ ನಡೆಯಬೇಕು. ಕುಸ್ತಿಪಟುಗಳ ಆರೋಪದ ಹಿನ್ನೆಲೆಯಲ್ಲಿ ರಚಿಸಲಾದ ವಿಚಾರಣಾ ಸಮಿತಿ ವರದಿಯನ್ನು ಸಾರ್ವಜನಿಕರ ಅವಗಾಹನೆಗೆ ತರಬೇಕು ಎಂದು ಆಗ್ರಹಿಸುತ್ತಿದ್ದಾರೆ. ಆದರೆ ಈವರೆಗೂ ಈ ಕುರಿತು ಕೇಂದ್ರ ಸರ್ಕಾರ ಜಾಣ ಮೌನವಹಿಸಿದೆ ಎಂದರು.

ಹಿರಿಯ ದಲಿತ ಮುಖಂಡ ಹರಿಹರ ಆನಂದಸ್ವಾಮಿ ಮಾತನಾಡಿ, ಭಾರತ ಕುಸ್ತಿ ಫೆಡರೇಶನ್ ಮುಖ್ಯಸ್ಥರು, ಮತ್ತವರ ಸಿಬ್ಬಂದಿಗಳು ಅಪ್ರಾಪ್ತ ಹೆಣ್ಣು ಮಕ್ಕಳು ಸೇರಿದಂತೆ ಮಹಿಳಾ ಕುಸ್ತಿ ಪಟುಗಳಿಗೆ ಲೈಂಗಿಕ ಕಿರುಕುಳ ನೀಡಿರುವುದು ಅತ್ಯಂತ ಆಘಾತಕಾರಿ ಮತ್ತು ದೇಶವೇ ತಲೆ ತಗ್ಗಿಸುವಂತಹ ಘಟನೆ ಎಂದರು.

ಆರೋಪಿ ಸಂಸದನನ್ನು ಬಿಜೆಪಿ ರಕ್ಷಿಸುತ್ತಿರುವುದು ನಾಚಿಕೆಗೇಡಿನ ಸಂಗತಿ. ದೂರಿನ ಆಧಾರದ ಮೇಲೆ ಕಾನೂನು ಕ್ರಮ ಜರುಗಿಸಿ ನೊಂದ ಮಹಿಳಾ ಕ್ರೀಡಾಪಟುಗಳಿಗೆ ರಕ್ಷಣೆ ಒದಗಿಸಬೇಕಾಗಿದ್ದ ಬಿಜೆಪಿ ಸರ್ಕಾರ ಪೊಲೀಸರ ಮೂಲಕ ದೌರ್ಜನ್ಯ ನಡೆಸಿರುವುದು ಸರಿಯಲ್ಲ. ತಪ್ಪಿತಸ್ಥರ ವಿರುದ್ಧ ಕ್ರಮವಾಗದಿದ್ದಲ್ಲಿ ಉಗ್ರ ಹೋರಾಟ ರೂಪಿಸಲಾಗುವುದೆಂದು ಎಚ್ಚರಿಸಿದರು.

ಇದೇ ವೇಳೆ ರೈತ ಸಂಘದ ತಾಲೂಕು ಅಧ್ಯಕ್ಷ ಚಿಕ್ಕಣ್ಣ, ಸಿಪಿಐಎಂ ಕಾರ್ಯದರ್ಶಿ ವೆಂಕಟೇಶ್, ದಸಂಸ ಮುಖಂಡ ರಾಮು ಕೃಷ್ಣ ಮಾತನಾಡಿದರು. ಪ್ರತಿಭಟನೆಯಲ್ಲಿ ರೈತ ಸಂಘದ ಮುಖಂಡರಾದ ಧನಂಜಯ, ಮಣಿ, ಬಸವರಾಜು, ಆಲಿ, ಖಾಲಿದ್, ರಾಮೇಗೌಡ, ಸತೀಶ್, ವಿಜಯ್, ದಸಂಸ ಮುಖಂಡರಾದ ಶಿವರಾಜು, ಪ್ರಕಾಶ್, ರಾಜು, ಕಾಂತರಾಜು, ವೆಂಕಟೇಶ್, ಚೆಲುವರಾಜು, ಡಿಎಚ್‌ಎಸ್ ಮುಖಂಡರಾದ ಮಲ್ಲೇಶ್, ಮಹದೇವು, ಶಿವರಾಮು, ಜಗದೀಶ್, ದರ್ಶನ್ ಇನ್ನಿತರರಿದ್ದರು.

ಲಿಂಗಮ್ಮ ನಿಧನ



ಭೇರ್ಯ, ಮೇ 30– ಇಲ್ಲಿಗೆ ಸಮೀಪದ ಮುಂಜನಹಳ್ಳಿ ಗ್ರಾಮದ ನಿವೃತ್ತ ಶಿಕ್ಷಕ ದಿ.ಎಂ.ಟಿ.ದೇವೇಗೌಡರ ಪತ್ನಿ ಲಿಂಗಮ್ಮ(82) ಮಂಗಳವಾರ ನಿಧನರಾದರು. ಮೃತರು ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸಂಜೆ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ನಾಗಮ್ಮ



ಬೆಟ್ಟದಪುರ, ಮೇ 30– ಗ್ರಾಮದ ನಿವಾಸಿ ನಾಗಮ್ಮ (85) ಮಂಗಳವಾರ ನಿಧನರಾದರು. ಮೃತರು ಇಬ್ಬರು ಪುತ್ರರು, ನಾಲ್ವರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಬುಧವಾರ ಬೆಳಗ್ಗೆ 12 ಗಂಟೆಗೆ ಪಿರಿಯಾಪಟ್ಟಣದ ವೀರಶೈವ ರುದ್ರ ಭೂಮಿಯಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಎನ್.ಸುವರ್ಣಮ್ಮ



ಹುಣಸೂರು, ಮೇ 30– ನಗರದ ಸುವರ್ಣಶ್ರೀ ಆಯಿಲ್ ಅಂಗಡಿ ಮಾಲೀಕ ಎ.ಟಿ.ಸಿದ್ದೇಶ್, ಮಾಜಿ ಜಿಲ್ಲಾ ಪರಿಷತ್ ಸದಸ್ಯ ದಿ.ಎ.ಟಿ.ತೋಂಟದಾರ್ಯ ಅವರ ತಾಯಿ ಎನ್.ಸುವರ್ಣಮ್ಮ(86) ನಿಧನರಾದರು. ಮೃತರು ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ತಾಲೂಕಿನ ಸಿದ್ದಲಿಂಗಪುರದ ಮೃತರ ತೋಟದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಹಸಿರು ನಮ್ಮ ಉಸಿರು

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ತಿಳಿಯ ಪಡಿಸುವುದೇನೆಂದರೆ ನನ್ನ ಕಕ್ಷಿದಾರ ರಾದ ಮೈಸೂರು ಸಿಟಿ, ವಿಜಯಶ್ರೀಪುರ, ಕಾವೇರಿ ಹಾಸ್ಟೆಲ್ ಹತ್ತಿರ ಮನೆ ನಂ. 525ರಲ್ಲಿ ವಾಸವಾಗಿರುವ ಶ್ರೀ ತಿಮ್ಮೇಗೌಡ ಅವರ ಧರ್ಮಪತ್ನಿ ಶ್ರೀಮತಿ ಜಯಮ್ಮ ಅವರಿಗೆ ಸೇರಿದ ಸ್ವತ್ತಿನ ಸಂಖ್ಯೆ: 1124/2 ಗಣಕೀಕೃತ ಸ್ವತ್ತಿನ ಸಂಖ್ಯೆ : 152200407129001621 ನಿವೇಶನ ಸಂಖ್ಯೆ 6 ನೋಂದಣಿ ಸಂಖ್ಯೆ MYW-1-08291-2016-17 ಸಿ.ಡಿ.ನಂ MYWD78 ನೋಂದಣಿ ದಿನಾಂಕ: 04-01-2017 ಮತ್ತು ಸ್ವತ್ತಿನ ಸಂಖ್ಯೆ 1370/2 ಗಣಕೀಕೃತ ಸ್ವತ್ತಿನ ಸಂಖ್ಯೆ: 1522 00407129001968 ನಿವೇಶನ ಸಂಖ್ಯೆ 7 ನೋಂದಣಿ ಸಂಖ್ಯೆ MYW-1-08290-2016-17 ಸಿ.ಡಿ.ನಂ MYWD78 ನೋಂದಣಿ ದಿನಾಂಕ: 04-01-2017 ದಾನಪತ್ರಗಳು ದಿನಾಂಕ: 26-06-2020 ರಂದು ಕಳೆದು ಹೋಗಿರುತ್ತವೆ. ಇದರ ಸಂಬಂಧ ದಿನಾಂಕ: 29-05-2023 ರಂದು ಪೊಲೀಸ್ ಇಲಾಖೆಗೆ ದೂರನ್ನು 1646523230000491ರಂತೆ ದೂರು ದಾಖಲಿಸಿರುತ್ತಾರೆ. ಸದರಿ ಕ್ರಯ ಪತ್ರವು ಯಾರಿಗಾದರೂ ದೊರಕಿದ್ದಲ್ಲಿ ಈ ಕೆಳಗೆ ನಮೂದಿಸಿರುವ ವಿಳಾಸಕ್ಕೆ ಸಾರ್ವಜನಿಕ ಪ್ರಕಟಣೆ ದಿನಾಂಕ ದಿಂದ 7 (ಏಳು) ದಿನಗಳ ಒಳಗಾಗಿ ತಲುಪಿಸತಕ್ಕದ್ದು. ಒಂದೊಮ್ಮೆ ಯಾವುದೇ ವ್ಯಕ್ತಿ/ವ್ಯಕ್ತಿಗಳು ಸದರಿ ಕ್ರಯ ಪತ್ರವನ್ನು ದುರುಪಯೋಗ ಪಡಿಸಿಕೊಂಡಲ್ಲಿ ಸದರಿ ವ್ಯಕ್ತಿಗಳೆ ಹೊಣೆಗಾರರಾಗುತ್ತಾರೆ. ಹಾಗೂ ನಮ್ಮ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂದು ಈ ಮೂಲಕ ತಿಳಿಯಪಡಿಸಲಾಗಿದೆ.

ಸಹಿ/– **ಲೋಹಿತ್ ಎನ್.**
ವಕೀಲರು, ಶ್ರೀ ಸಾಯಿ ಲಾ–ಅಸೋಸಿಯೇಟ್ಸ್,
ನಂ. 2967/2, 14ನೇ ಮೇನ್, 2ನೇ ಕ್ರಾಸ್,
ಸರಸ್ವತಿಪುರಂ, ಮೈಸೂರು–570009
ಮೊ: 9611113323

ದಿ: 29-05-2023
ಸ್ಥಳ: ಮೈಸೂರು